ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಜುಲೈ 23 ಮಂಗಳವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 98 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

‘ಗಂಗಾರತಿ’ ಮಾದರಿ ಕಾವೇರಿ ಆರತಿ



ಭರ್ತಿಯಾಗಿರುವ ಕೆಆರ್‌ಎಸ್ ಜಲಾಶಯದ ನೀರನ್ನು ವೀಕ್ಷಿಸುತ್ತಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್. ಕೃಷಿ ಸಚಿವ ಚಲುವರಾಯಸ್ವಾಮಿ ಉಪಸ್ಥಿತರಿದ್ದಾರೆ.

- ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಚಿಂತನೆ
- ಕೆಆರ್‌ಎಸ್‌ಗೆ ಭೇಟಿ, ಪರಿಶೀಲನೆ ನಂತರ ಮಾಹಿತಿ

ಮಂಡ್ಯ,ಜು.22(ಮೋಹನ್‌ರಾಜ್)– ರೈತರ ಜೀವನಾಡಿಯಾಗಿರುವ ಕಾವೇರಿ ಮಾತೆಗೆ ವಾರಣಾಸಿಯಲ್ಲಿ ಗಂಗಾ ಮಾತೆಗೆ ನಡೆಯುವ ಗಂಗಾರತಿ ಮಾದರಿಯಲ್ಲಿ ‘ಕಾವೇರಿ ಆರತಿ’ ಮಾಡಲು ಚಿಂತನೆ ನಡೆಸಲಾಗುತ್ತಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

ಮೈದುಂಬಿ ಹರಿಯುತ್ತಿರುವ ಕೃಷ್ಣರಾಜ ಸಾಗರ ಅಣೆಕಟ್ಟೆಯ ಪರಿಶೀಲನೆ ನಡೆಸಿದ ನಂತರ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಕಾವೇರಿ ಆರತಿಯನ್ನು ಪ್ರಾರಂಭಿಸಲು ಮಂಡ್ಯ ಹಾಗೂ ಕೊಡಗು ಜಿಲ್ಲೆಯ ಸ್ಥಳೀಯ ಶಾಸಕರು ಹಾಗೂ ಧಾರ್ಮಿಕ ದತ್ತಿ ಇಲಾಖೆಯ ಅಧಿಕಾರಿಗಳ ತಂಡ ರಚಿಸಿ, ತಿಂಗಳೊಳಗೆ ವರದಿ ನೀಡುವಂತೆ ತಿಳಿಸಲಾಗುವುದು ಎಂದರು.

ರೈತರ ಹಿತಕಾಯಲು ಸದಾ ಬದ್ಧ: ನಮ್ಮದು ರೈತಪರವಾದ ಸರ್ಕಾರವಾಗಿದ್ದು, ಯಾವುದೇ ತೊಂದರೆ ಬಂದರೂ ರೈತರ ಹಿತ ಕಾಯಲು ಸದಾ ಬದ್ಧವಾಗಿರುತ್ತೇವೆ. ಕೃಷಿ ಸಚಿವರು ರೈತರಿಗೆ ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ತೊಂದರೆಯಾಗದಂತೆ ಮುಂಜಾಗ್ರತೆ ವಹಿಸಿ, ಎರಡು ಲಕ್ಷ ಹೆಕ್ಟೇರ್ ಬಿತ್ತನೆಯ ಕಾರ್ಯಕ್ರಮ ರೂಪಿಸಿದ್ದು, 5,90,000 ಕ್ವಿಂಟಾಲ್ ಬಿತ್ತನೆ ಬೀಜ ಹಾಗೂ 27 ಲಕ್ಷ ಟನ್ ರಸಗೊಬ್ಬರವನ್ನು ದಾಸ್ತಾನು ಮಾಡಲಾಗಿದೆ. ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ಕೊರತೆ ಉಂಟಾಗದಂತೆ ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ. 30 ಲಕ್ಷ ರೈತರಿಗೆ 25 ಸಾವಿರ ಕೋಟಿ ಶೂನ್ಯ ಬಡ್ಡಿದರದಲ್ಲಿ ಸಾಲ ವಿತರಣೆ ಮಾಡಲಾಗಿದೆ ಎಂದರು.

ರೈತರನ್ನು ಕಾಪಾಡುವ ಕೆಲಸ ಮಾಡುತ್ತಿದ್ದೇವೆ: ವರುಣನ ಕೃಪೆ, ತಾಯಿ ಚಾಮುಂಡೇಶ್ವರಿ ಅನುಗ್ರಹದಿಂದ ಕಾವೇರಿ ನದಿಗೆ ನಾವೆಲ್ಲ ಬಾಗಿನ ಅರ್ಪಣೆ ಮಾಡುವ ಸೌಭಾಗ್ಯ ಸಿಕ್ಕಿದೆ. ಕಳೆದ ವರ್ಷ ನಾವು ಕಷ್ಟದಲ್ಲಿದ್ದೆವು. ಆದರೂ ಶಕ್ತಿ ಮೀರಿ ರೈತರನ್ನು ಕಾಪಾಡುವ ಕೆಲಸ ಮಾಡಿದ್ದೇವೆ. ಕಳೆದ ಬಾರಿ ಬರಗಾಲ ಇತ್ತು. ■ 9ನೇ ಪುಟಕ್ಕೆ

ಕೆಆರ್‌ಎಸ್ ಬಳಿ ಪ್ರವಾಸೋದ್ಯಮ ಅಭಿವೃದ್ಧಿ

ಕೆಆರ್‌ಎಸ್ ಡ್ಯಾಂ ಬಳಿ ಪ್ರವಾಸೋದ್ಯಮ ಅಭಿವೃದ್ಧಿ ಮಾಡುವುದು ನಮ್ಮ ಗುರಿಯಾಗಿದೆ. ನಿತ್ಯವೂ ಕನಿಷ್ಠ 10 ಸಾವಿರ ಜನ ಡ್ಯಾಂ ವೀಕ್ಷಣೆಗೆ ಬರುವ ನಿರೀಕ್ಷೆ ಇದೆ. ಫುಡ್ ಪಾರ್ಕ್, ಪಾರ್ಕಿಂಗ್, ವಾಸ್ತವ್ಯ ವ್ಯವಸ್ಥೆ ಮಾಡಿ ಅಭಿವೃದ್ಧಿಪಡಿಸಲಾಗುವುದು. ಬೆಂಗಳೂರಿಗೆ ಹತ್ತಿರ ಇರುವುದರಿಂದ ಹೆಚ್ಚು ಪ್ರವಾಸಿಗರನ್ನು ಆಕರ್ಷಿಸಬಹುದು. ಟೀಕೆ–ಟಿಪ್ಪಣಿ ಮಾಡುವವರು, ವಿರೋಧ ಮಾಡುವವರು, ಕಲ್ಲು ಹೊಡೆಯುವವರು ಇದ್ದೇ ಇರುತ್ತಾರೆ. ಅದಕ್ಕೆಲ್ಲ ತಲೆಕೆಡಿಸಿಕೊಳ್ಳಬಾರದು. ಬೇರೆ ಬೇರೆ ದೇಶಗಳ ರೀತಿ ಪ್ರವಾಸೋದ್ಯಮ ಅಭಿವೃದ್ಧಿ ಆಗಬೇಕು. ಪ್ರವಾಸೋದ್ಯಮ ಅಭಿವೃದ್ಧಿಯಿಂದ ಯಾರನ್ನೂ ಒಕ್ಕಲೆಬ್ಬಿಸೋದು, ಇಲ್ಲಿಂದ ಕಳಿಸುವ ಉದ್ದೇಶ ಇಲ್ಲ. ಪಬ್ಲಿಕ್ ಪ್ರೈವೇಟ್ ಪಾರ್ಟ್ನರ್‌ಶಿಪ್‌ನಲ್ಲಿ ಅಭಿವೃದ್ಧಿ ಆಗಬೇಕು ಎಂಬುದು ನಮ್ಮ ಗುರಿ ಎಂದರು.




ಬಿಚ್ಚು ನುಡಿ
ವಿಕ್ರಂ ಮುತ್ತಣ್ಣ

ನೀವು ಮೊದಲು ಉದ್ಯೋಗ ಸೃಷ್ಟಿಸಿ; ಬಳಿಕ ಮೀಸಲಿರಿಸಿ

■ ಪುಟ–4

ಇಂದು ಕೇಂದ್ರ ಬಜೆಟ್
ನಿರ್ಮಲಾ ಸೀತಾರಾಮನ್ ಸತತ 7ನೇ ಬಾರಿ ಮಂಡನೆ



ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ಸರ್ಕಾರದ ಮೂರನೇ ಅವಧಿಯ ಮೊದಲ ಬಜೆಟ್ ನಾಳೆ (ಮಂಗಳವಾರ) ಮಂಡನೆಯಾಗಲಿದೆ. ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಸತತ 7ನೇ ಬಾರಿ ಬಜೆಟ್ ಮಂಡಿಸಲಿದ್ದಾರೆ. ಈ ಮೂಲಕ ಅವರು ಹೊಸ ಇತಿಹಾಸ ಸೃಷ್ಟಿಸಲಿದ್ದಾರೆ. ಇದರೊಂದಿಗೆ ಮಾಜಿ ಪ್ರಧಾನಿ ಮೊರಾರ್ಜಿ ■ 9ನೇ ಪುಟಕ್ಕೆ

ಶಾಸಕ ನಾಗೇಂದ್ರ ಜೈಲು ಪಾಲು

ಬೆಂಗಳೂರು, ಜು.22(ಕೆಎಂಶಿ)– ಮಹರ್ಷಿ ವಾಲ್ಮೀಕಿ ನಿಗಮದ ಅಕ್ರಮ ಹಣ ವರ್ಗಾವಣೆ ಹಗರಣದಲ್ಲಿ ಇಡಿ ವಶದಲ್ಲಿದ್ದ ಮಾಜಿ ಸಚಿವ ಹಾಗೂ ಕಾಂಗ್ರೆಸ್ ಶಾಸಕ ಬಿ.ನಾಗೇಂದ್ರ ಜೈಲು ಪಾಲಾಗಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ನಾಗೇಂದ್ರ ಅವರನ್ನು ಪೊಲೀಸ್ ಭದ್ರತೆಯಲ್ಲಿ 82ನೇ ಜನಪ್ರತಿನಿಧಿಗಳ ನ್ಯಾಯಾಲಯಕ್ಕೆ ಇಂದು ಇಡಿ ಹಾಜರು ಪಡಿಸಿತು. ■ 9ನೇ ಪುಟಕ್ಕೆ



ಸತತ ಮಳೆಗೆ ಒಲಂಪಿಯಾ ಚಿತ್ರಮಂದಿರದ ಗೋಡೆ ಕುಸಿತ

ಅವಶೇಷಗಳಡಿ ಸಿಲುಕಿದ್ದ ನಾಲ್ವರ ರಕ್ಷಣೆ; ಪ್ರಾಣಾಪಾಯದಿಂದ ಪಾರು




ಮೈಸೂರಿನ ಮಕ್ಕಾಜಿ ಚೌಕದ ಒಲಂಪಿಯಾ ಚಿತ್ರಮಂದಿರದ ಹಿಂಬದಿ ಗೋಡೆ ಕುಸಿದಿರುವುದು. ಮತ್ತೊಂದು ಚಿತ್ರದಲ್ಲಿ ಅವಶೇಷದಡಿ ಸಿಲುಕಿದ್ದ ರಸ್ತೆ ಬದಿ ವ್ಯಾಪಾರಿಯನ್ನು ಸ್ಥಳೀಯರು ರಕ್ಷಣೆ ಮಾಡುತ್ತಿರುವುದು.

ಮೈಸೂರು, ಜು.22(ಎಂಟಿವೈ)– ನಿರಂತರ ಮಳೆ ಸುರಿದ ಪರಿಣಾಮ ಮೈಸೂರಿನ ಒಲಂಪಿಯಾ ಚಿತ್ರಮಂದಿರದ ಹಿಂಬದಿ ಗೋಡೆ ಸೋಮವಾರ ಮಧ್ಯಾಹ್ನ ಕುಸಿದಿದ್ದು, ಅದರ ಅವಶೇಷದಡಿ ಸಿಲುಕಿದ್ದ ನಾಲ್ವರನ್ನು ರಕ್ಷಿಸಲಾಗಿದೆ. ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ.

ಚಿಕ್ಕಗಡಿಯಾರದ ಎದುರು ಸಯ್ಯಾಜಿ ರಾವ್ ರಸ್ತೆಯಿಂದ ಮಹಾತ್ಮಗಾಂಧಿ ವೃತ್ತಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯಲ್ಲಿ ಚಿತ್ರಮಂದಿರದ ಹಿಂಬದಿ ಗೋಡೆ ಸೋಮವಾರ ಮಧ್ಯಾಹ್ನ 1.50ರ ಸುಮಾರಿಗೆ ದಿಢೀರ್ ಕುಸಿದಿದೆ. ಈ ವೇಳೆ ಗೋಡೆ ಪಕ್ಕದಲ್ಲೇ ಇದ್ದ ನಾಲ್ವರು ಬೀದಿಬದಿ ವ್ಯಾಪಾರಿಗಳು ಕಟ್ಟಡದ ಅವಶೇಷದಡಿ ಸಿಲುಕಿ, ಸಣ್ಣ–ಪುಟ್ಟ ಗಾಯಗಳೊಂದಿಗೆ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಘಟನೆ ವಿವರ: ಮೈಸೂರಲ್ಲಿ ಮಳೆ ಬಿಡುವು ನೀಡಿದ್ದರಿಂದ ಇಂದು ಜನಜಂಗುಳಿ ಹೆಚ್ಚಾಗಿತ್ತು. ಸಯ್ಯಾಜಿರಾವ್ ರಸ್ತೆ, ಮಕ್ಕಾಜಿ ಚೌಕ, ಒಂದೂವರಾಣೆ ಗಲ್ಲಿ ಹಾಗೂ ಸುತ್ತಮುತ್ತಲಿನ ಅಡ್ಡ ರಸ್ತೆಗಳಲ್ಲಿ ವ್ಯಾಪಾರ ಜೋರಾಗಿತ್ತು. ಬಟ್ಟೆ, ಬ್ಯಾಗು, ಪಾದರಕ್ಷೆ, ಆಟಿಕೆ ಇನ್ನಿತರ ವಸ್ತುಗಳ ವ್ಯಾಪಾರಿಗಳು ರಸ್ತೆ ಬದಿ ವ್ಯಾಪಾರ ಮಾಡುತ್ತಿದ್ದರು. ಮಧ್ಯಾಹ್ನ 1.50ರ ಸುಮಾರಿಗೆ ಇದ್ದಕ್ಕಿದ್ದಂತೆ ಒಲಂಪಿಯಾ ಚಿತ್ರಮಂದಿರದ ಹಿಂಬದಿಯ ಸುಮಾರು 35 ಅಡಿ ಎತ್ತರದ ಗೋಡೆ ಕುಸಿದು ಬಿತ್ತು. ರಸ್ತೆ ಬೀದಿ ವ್ಯಾಪಾರಿಗಳಾದ ಹರ್ಮಾನ್ ಪಾಷಾ, ತಬ್ರೇಸ್ ಪಾಷಾ, ಅಬ್ದುಲ್ ಶಕೀಬ್ ಹಾಗೂ ಹೆಚ್. ಸತೀಶ್ ಕಟ್ಟಡದ ಅವಶೇಷದಡಿ ಸಿಲುಕಿದರು. ಕೂಡಲೇ ಸ್ಥಳೀಯ ವ್ಯಾಪಾರಿಗಳು ಇಬ್ಬರನ್ನು ರಕ್ಷಿಸಿದರು. ವಿಷಯ ತಿಳಿದು ಕೂಡಲೇ ಸ್ಥಳಕ್ಕೆ ದೌಡಾಯಿಸಿದ ■ 9ನೇ ಪುಟಕ್ಕೆ

ಮೈಸೂರು ಜಿಲ್ಲೆಯಲ್ಲಿ ಸದ್ಯ 19 ಸಕ್ರಿಯ ಡೆಂಗ್ಯೂ ಪ್ರಕರಣ

ಮೈಸೂರು, ಜು.22(ಪಿಎಂ)– ಜಿಲ್ಲೆಯಲ್ಲಿ ಡೆಂಗ್ಯೂ ನಿಯಂತ್ರಣದಲ್ಲಿದ್ದು, ಇಂದಿಗೆ (ಸೋಮವಾರ) 19 ಸಕ್ರಿಯ ಪ್ರಕರಣಗಳಿವೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಪಿ.ಸಿ.ಕುಮಾರಸ್ವಾಮಿ ತಿಳಿಸಿದರು.



‘ಮೈಸೂರು ಮಿತ್ರ’ನೊಂದಿಗೆ ಮಾತನಾಡಿದ ಅವರು, ಈ ವರ್ಷದ ಜನವರಿಯಿಂದ ಈವರೆಗೆ 4,726 ಮಂದಿಯ ರಕ್ತ ಮಾದರಿ ಪರೀಕ್ಷೆ ನಡೆಸಲಾಗಿದೆ. ಈ ಪೈಕಿ ಈವರೆಗೆ ಒಟ್ಟು 599 ಡೆಂಗ್ಯೂ ಪ್ರಕರಣಗಳು ಜಿಲ್ಲೆಯಲ್ಲಿ ಕಂಡುಬಂದಿದ್ದು, ಇದರಲ್ಲಿ ಇಂದಿಗೆ 19 ಸಕ್ರಿಯ ಪ್ರಕರಣಗಳಿವೆ. ಜಿಲ್ಲೆಯಲ್ಲಿ ಪಾಸಿಟಿವಿಟಿ ರೇಟ್ ಇಳಿಕೆಯಾಗುತ್ತಿದ್ದು, ಕಳೆದ ವರ್ಷಕ್ಕೆ ಹೋಲಿಸಿದರೆ ಈ ಬಾರಿ ಶೇ.34ರಷ್ಟು ಪರೀಕ್ಷೆ ಪ್ರಮಾಣ ಹೆಚ್ಚು ಮಾಡಲಾಗಿದೆ ಎಂದರು.

ಜಿಲ್ಲೆಯಲ್ಲಿ ಸೋಂಕು ನಿಯಂತ್ರಣದಲ್ಲಿದೆ, ಡಿಹೆಚ್‌ಓ ಡಾ.ಪಿ.ಸಿ.ಕುಮಾರಸ್ವಾಮಿ

ಪರೀಕ್ಷೆ ಪ್ರಮಾಣ ಹೆಚ್ಚಿಸಿದಾಗ ಪಾಸಿಟಿವ್ ಸಂಖ್ಯೆ ಹೆಚ್ಚಾಗುವುದು ಸಹಜ. ಅಲ್ಲದೆ, ಬೇರೆ ಜಿಲ್ಲೆಗಳಿಗೆ ಹೋಲಿಸಿದರೆ ನಮ್ಮಲ್ಲಿ ರಕ್ತ ಮಾದರಿ ಪರೀಕ್ಷೆ ಪ್ರಮಾಣವನ್ನು ಶೇ.30ರಷ್ಟು ಹೆಚ್ಚುವರಿಯಾಗಿ ಮಾಡಲಾಗಿದೆ. ಪರೀಕ್ಷೆ ಮೂಲಕ ಸೋಂಕನ್ನು ಆದಷ್ಟು ತ್ವರಿತಗತಿಯಲ್ಲಿ ಪತ್ತೆ ಮಾಡುವುದರಿಂದ ಅದು ■ 9ನೇ ಪುಟಕ್ಕೆ

ಪರಿಷತ್ ವಿಪಕ್ಷ ನಾಯಕರಾಗಿ ಛಲವಾದಿ ನಾರಾಯಣಸ್ವಾಮಿ

ಬೆಂಗಳೂರು: ವಿಧಾನಸಭೆಯಲ್ಲಿ ಪ್ರಮುಖ ವಿರೋಧ ಪಕ್ಷವಾಗಿರುವ ಬಿಜೆಪಿಯು ಪರಿಷತ್ತಿನಲ್ಲಿ ವಿರೋಧ ಪಕ್ಷದ ನಾಯಕರನ್ನಾಗಿ ಎಸ್‌ಸಿ ಸಮುದಾಯದ ಛಲವಾದಿ ನಾರಾಯಣಸ್ವಾಮಿ ಅವರನ್ನು ನೇಮಕ ಮಾಡಿದೆ. ಈ ಬಗ್ಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಟ್ವೀಟ್ ಮಾಡಿ ಛಲವಾದಿ ನಾರಾಯಣಸ್ವಾಮಿಗೆ ಅಭಿನಂದನೆ ತಿಳಿಸಿದ್ದಾರೆ. ಪರಿಶಿಷ್ಟ ಸಮುದಾಯಗಳ ಹಾಗೂ ಸಾಂವಿಧಾನಿಕ ಹಕ್ಕುಗಳ ಪರ ನಿರಂತರ ದನಿಯಾಗಿ ನಿಂತು ಹೋರಾಟ ನಡೆಸಿಕೊಂಡು ಬಂದ ಹಿನ್ನೆಲೆಯ ಛಲವಾದಿ ನಾರಾಯಣ ಸ್ವಾಮಿಯವರ ನಾಯಕತ್ವ ಹಾಗೂ ಪಕ್ಷ ಬದ್ಧತೆಯನ್ನು ಗುರುತಿಸಿ ವಿಧಾನ ಪರಿಷತ್ ಪ್ರವೇಶಕ್ಕೆ ಅವಕಾಶ ಕಲ್ಪಿಸಿಕೊಡಲಾಗಿತ್ತು ಎಂದಿದ್ದಾರೆ.



ವಿಧಾನಮಂಡಲ ಅಧಿವೇಶನ ನಂತರ ಬಸ್ ದರ ಏರಿಕೆಗೆ ಸರ್ಕಾರ ನಿರ್ಧಾರ



ಪೆಟ್ರೋಲ್, ಡೀಸೆಲ್, ಹಾಲು, ನೀರಾಯ್ತು ಈಗ ಪ್ರಯಾಣದ ದರ ಏರಿಕೆ ಬಿಸಿ

ಬೆಂಗಳೂರು, ಜು.22(ಕೆಎಂಶಿ)– ವಿಧಾನಮಂಡಲದ ಅಧಿವೇಶನ ಮುಗಿಯುತ್ತಿದ್ದಂತೆ ರಾಜ್ಯ ರಸ್ತೆ ಸಾರಿಗೆ ಬಸ್ ಪ್ರಯಾಣ ದರವನ್ನು ಶೇಕಡ 12ರಷ್ಟು ಹೆಚ್ಚಿಸಲು ಸರ್ಕಾರ ತೀರ್ಮಾನಿಸಿದೆ.


ಪೆಟ್ರೋಲ್, ಡೀಸೆಲ್, ಹಾಲು, ನೀರು ದರ ಏರಿಕೆ ಮಾಡಿದ ಬೆನ್ನಲ್ಲೇ ಬಸ್ ಪ್ರಯಾಣ ದರ ಹೆಚ್ಚಳ ಮಾಡಲು ಸರ್ಕಾರ ಮುಂದಾಗಿದೆ. ಡೀಸೆಲ್, ವಾಹನ ಬಿಡಿಭಾಗಗಳ ಬೆಲೆ ಏರಿಕೆ ಆಗಿರುವುದು, ನೌಕರರ ವೇತನ ಹೆಚ್ಚಳ ಮಾಡಿರುವುದು ಮತ್ತು ಶಕ್ತಿ ಯೋಜನೆಯಿಂದ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಕಲ್ಪಿಸಿರುವ ಹಿನ್ನೆಲೆಯಲ್ಲಿ ಸಾರಿಗೆ ಸಂಸ್ಥೆಯ ನಾಲ್ಕು ನಿಗಮಗಳಿಗೆ ಆಗುತ್ತಿರುವ ನಷ್ಟ ಭರಿಸಲು ಶೇಕಡ 25 ರಷ್ಟು ದರ ಹೆಚ್ಚಳ ಮಾಡುವಂತೆ ಸರ್ಕಾರವನ್ನು ಸಾರಿಗೆ ಸಂಸ್ಥೆ ಕೋರಿದೆ.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಕಳೆದ ನಾಲ್ಕು ವರ್ಷಗಳಿಂದ ಬಸ್ ಪ್ರಯಾಣ ದರ ಹೆಚ್ಚಳ ಮಾಡಿಲ್ಲ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಕಳೆದ 10 ವರ್ಷಗಳಿಂದ ಪ್ರಯಾಣ ದರ ಹೆಚ್ಚಳ ಮಾಡದಿರುವುದರಿಂದ ನಿಗಮಗಳ ಮೇಲೆ ಭಾರಿ ಹೊರೆ ಬಿದ್ದಿದೆ. ಈ ಅವಧಿಯಲ್ಲಿ ಡೀಸೆಲ್ ದರ ಹಲವು ಬಾರಿ ಹೆಚ್ಚಳಗೊಂಡಿದೆ, ನೌಕರರ ವೇತನದಲ್ಲೂ ಹೆಚ್ಚಳವಾಗಿದೆ, ಅಲ್ಲದೆ, ವಾಹನಗಳ ಬಿಡಿಭಾಗಗಳ ಬೆಲೆಯೂ ಏರಿಕೆಯಾಗಿದೆ.

ನಾಲ್ಕೂ ನಿಗಮಗಳ ಅಡಿಯಲ್ಲೂ ಕನಿಷ್ಠ ಶೇಕಡ 25ರಷ್ಟು ದರ ಹೆಚ್ಚಳ ಮಾಡಲು ಅವಕಾಶ ಕಲ್ಪಿಸಲೇಬೇಕು. ಇಲ್ಲದಿದ್ದರೆ ನಿಗಮಗಳ ಪರಿಸ್ಥಿತಿ ಚಿಂತಾಜನಕವಾಗಲಿದೆ ಎಂದು ಪೂರ್ಣ ವರದಿ ನೀಡಿದೆ. ಶಕ್ತಿ ಯೋಜನೆಗೆ ಸರ್ಕಾರದಿಂದ ಒಂದಷ್ಟು ಅನುದಾನ ಬರುತ್ತಿದೆ, ಆದರೂ, ಅದು ಯಾವುದಕ್ಕೂ ಸಾಲದಾಗಿದೆ ಎಂದು ತನ್ನ ವರದಿಯಲ್ಲಿ ತಿಳಿಸಿದೆ. ರಾಜ್ಯ ಸರ್ಕಾರ ತನ್ನ ಸರ್ಕಾರಿ ನೌಕರರಿಗೆ ಏಳನೇ ವೇತನ ಆಯೋಗ ವರದಿ ಶಿಫಾರಸು ಜಾರಿಗೊಳಿಸಿರುವುದರಿಂದ ನಮ್ಮ ನೌಕರರ ವೇತನವನ್ನೂ ಮತ್ತೆ ಹೆಚ್ಚಳ ಮಾಡಬೇಕು, ಈ ಎಲ್ಲಾ ಕಾರಣಕ್ಕೆ ಬಸ್ ಪ್ರಯಾಣ ದರ ಹೆಚ್ಚಳಕ್ಕೆ ಅನುಮತಿ ಕೊಡಿ ಎಂದಿದೆ.

ಪರಿವರ್ತನೆ ಆಗದಿದ್ದರೂ ಕೃಷಿ ಭೂಮಿಯ ನಿವೇಶನಗಳಾಗಿ ನೋಂದಣಿಗೆ ಕಡಿವಾಣ


- ಕಂದಾಯ ಸಚಿವ ಕೃಷ್ಣ ಭೈರೇಗೌಡ ವಿಶ್ವಾಸ
- ಅಕ್ರಮವಾಗಿ ನಡೆಯುತ್ತಿರುವ ಈ ಪ್ರಕ್ರಿಯೆಗೆ ತಡೆ



ಬೆಂಗಳೂರು, ಜು.22(ಕೆಎಂಶಿ)–ಕೃಷಿ ಭೂಮಿ ಪರಿವರ್ತನೆ ಆಗದಿದ್ದರೂ ನಿವೇಶನಗಳಾಗಿ ನೋಂದಣಿಯಾಗುತ್ತಿದ್ದು, ಇಂತಹ ಅನಧಿಕೃತ ಬಡಾವಣೆಗಳ ನೋಂದಣಿಗೆ ಕಡಿವಾಣ ಹಾಕುವಲ್ಲಿ ಸರ್ಕಾರ ಹಿಂದೆ ಸರಿಯುವುದಿಲ್ಲ ಎಂದು ಸಚಿವ ಕೃಷ್ಣ ಬೈರೇಗೌಡ ವಿಧಾನಸಭೆಯಲ್ಲಿಂದು ಸ್ಪಷ್ಟಪಡಿಸಿದ್ದಾರೆ.

ಸಬ್ ರಿಜಿಸ್ಟ್ರಾರ್‌ಗಳ ವರ್ಗಾವಣೆ ಹಾಗೂ ಅನಧಿಕೃತ ಬಡಾವಣೆಗಳ ನೋಂದಣಿಗೆ ಸಂಬಂಧಿಸಿದಂತೆ ಎಸ್.ಆರ್.ವಿಶ್ವನಾಥ್ ಪ್ರಸ್ತಾವಕ್ಕೆ ಉತ್ತರಿಸಿದ ಅವರು, ಕಾನೂನುಬದ್ಧವಾಗಿ ಪರಿವರ್ತನೆ ಆಗದಿದ್ದರೂ ಕೃಷಿಭೂಮಿಗಳನ್ನು ನಿವೇಶನಗಳನ್ನಾಗಿ ಅನಧಿಕೃತ ನೋಂದಣಿ ಮಾಡಲಾಗುತ್ತಿದೆ ಎಂಬುದು ನಿಜ. ಕೆಲವರು ಅಕ್ರಮವನ್ನು ಕ್ರಮಬದ್ಧವಾಗಿ ಮಾಡುತ್ತಿದ್ದಾರೆ. ಇಂತಹದ್ದನ್ನು ತಡೆಯಲು ಸರ್ಕಾರ ಬದ್ಧವಾಗಿದೆ ಎಂದರು.

ಈ ಬಗ್ಗೆ ಅಧಿಕಾರಿಗಳ ಜೊತೆ ಚರ್ಚಿಸಿ ಕಾನೂನುಬದ್ಧವಾಗಿಯೇ ಎಲ್ಲಕ್ಕೂ ಕಡಿವಾಣ ಹಾಕಲಾಗುವುದು. ಮುಂದುವರೆದು, ನೋಂದಣಿ ಮಾಡುವಾಗ ಇತರೆ ಎಂಬ ಕ್ಯಾಟಗರಿ ಇದೆ. ಕೃಷಿ ಭೂಮಿಯಲ್ಲಿ ನಿವೇಶನ ನೋಂದಣಿ ಮಾಡುವಾಗ ಇತರೆ ಎಂಬ ಆಯ್ಕೆ ನೀಡಲಾಗಿರುತ್ತದೆ. ಗ್ರಾಮ ಠಾಣಾ, ಆಶ್ರಯ ನಿವೇಶನಕ್ಕಾಗಿ ಇತರೆ ಕ್ಯಾಟಗರಿ ನೀಡಿದರೆ, ಅದರಲ್ಲಿ ಕೃಷಿಭೂಮಿ ನೋಂದಣಿ ಮಾಡಲಾಗುತ್ತಿದೆ. ಇದನ್ನು ನಿಲ್ಲಿಸಲು ಆನ್‌ಲೈನ್ ಖಾತಾ ಇಂಟಗ್ರೇಷನ್ ಮಾಡಬೇಕು ಎಂದರು.



ಲೋಕಸಭಾ ಚುನಾವಣೆ ಕಾರಣಕ್ಕೆ ಈ ಕಾಯ್ದೆ ಜಾರಿಗೊಳಿಸುವುದು ಸಾಧ್ಯವಾಗಿಲ್ಲ, ವಿಳಂಬವಾಗಿದೆ. ಆದರೂ, ಮಾತಿಗೆ ಬದ್ಧರಾಗಿದ್ದು ಗ್ರಾಮ ಪಂಚಾಯಿತಿ ಅಥವಾ ಮುನ್ಸಿಪಾಲಿಟಿ, ಬಿಬಿಎಂಪಿಯಲ್ಲಿ ಖಾತೆ ಮಾಡಿಕೊಂಡು ಬಂದರೆ, ನಿಜವಾದ ಖಾತೆ ಇದ್ದರೆ ಮಾತ್ರ ಇನ್ನು ಮುಂದೆ ನೋಂದಣಿ ಮಾಡಿಕೊಡಲಾಗುವುದು.

ಖಾತೆ ಅಸಲಿಯೇ–ನಕಲಿಯೇ ಎಂಬ ನಿರ್ಧಾರ ಮುನ್ಸಿಪಾಲಿಟಿಯೇ ತೆಗೆದುಕೊಳ್ಳಬೇಕು, ಆನ್‌ಲೈನ್ ಖಾತೆಯಲ್ಲಿ ಇತರೆ ಎಂಬ ಕ್ಯಾಟಗರಿ ತೆಗೆಯಲೇಬೇಕು ಎಂಬುದು ನಮ್ಮ ತೀರ್ಮಾನ. ಇದರಿಂದ ಸರ್ಕಾರಕ್ಕೆ ಆದಾಯ ನಷ್ಟವಾದರೂ ಮಾತಿನಿಂದ ಹಿಂದೆ ಸರಿಯುವುದಿಲ್ಲ.

ಈ ಬಾರಿ ಬಿಎಂಆರ್‌ಡಿಎ ವ್ಯಾಪ್ತಿಯಲ್ಲಿ ಸಬ್ ರಿಜಿಸ್ಟ್ರಾರ್ ವರ್ಗಾವಣೆಯನ್ನು ಕೌನ್ಸೆಲಿಂಗ್ ಮೂಲಕ ನಡೆಸಬೇಕು ಎಂದು ಸಂಪುಟ ಸಭೆಯಲ್ಲಿ ತೀರ್ಮಾನ ತೆಗೆದುಕೊಳ್ಳಲಾಗಿದೆ. ಕಳೆದ 8 ವರ್ಷದಲ್ಲಿ 5 ವರ್ಷ ಬೆಂಗಳೂರಲ್ಲಿ ಕೆಲಸ ಮಾಡಿದ್ದರೆ ಅಂತಹವರನ್ನೂ ಹೊರಗೆ ಕಳುಹಿಸಲು ಕ್ಯಾಬಿನೆಟ್‌ನಲ್ಲಿ ನಿರ್ಧಾರ ತೆಗೆದುಕೊಳ್ಳಲಾಗಿದೆ, ಕೆಲವರು ಒಂದೇ ಸ್ಥಾನದಲ್ಲಿ ಬಹಳ ಕಾಲದಿಂದ ಇದ್ದು, ಇವರನ್ನು ಹೊರಹಾಕಲು ಸ್ವತಃ ಸಿದ್ದರಾಮಯ್ಯ ಸೂಚಿಸಿದ್ದಾರೆ ಎಂದರು.

ಅಖಿಲ ಭಾರತ ಲಿಂಗಾಯತ ವೀರಶೈವ ಜಿಲ್ಲಾ ಘಟಕದ ಮತ ಎಣಿಕೆಯಲ್ಲಿ ಅಕ್ರಮ ಆರೋಪ

ಮತಗಳ ಮರು ಎಣಿಕೆಗೆ ಪರಾಜಿತ ಅಭ್ಯರ್ಥಿಗಳ ಆಗ್ರಹ

ಮೈಸೂರು, ಜು.22(ಜಿಎ)-ಅಖಿಲ ಭಾರತ ಲಿಂಗಾಯತ ವೀರಶೈವ ಜಿಲ್ಲಾ ಘಟಕಕ್ಕೆ ನಗರದ ನಟರಾಜ ಸಭಾಂಗಣದಲ್ಲಿ ನಡೆದ ಚುನಾವಣೆಯ ಮತ ಎಣಿಕೆ ವೇಳೆ ಅವ್ಯವಹಾರ ನಡೆದಿದೆ. ಹೀಗಾಗಿ ಮರು ಎಣಿಕೆ ನಡೆಸಬೇಕೆಂದು ಕೋರಿ ಸಂಬಂಧಿತ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಗುವುದು ಎಂದು ಕೆಲ ಪರಾಜಿತ ಅಭ್ಯರ್ಥಿಗಳು ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಅಭ್ಯರ್ಥಿಗಳು ಮಾತನಾಡಿ, ಮತದಾನ ಕುರಿತಂತೆ ಪೂರ್ವಭಾವಿ ಸಭೆ ಕರೆದಿರಲಿಲ್ಲ. ಸೂಕ್ತ ಸಿದ್ಧತೆ ಮಾಡಿಕೊಂಡಿರಲಿಲ್ಲ. ಜಿಲ್ಲೆಯಲ್ಲಿ ಸುಮಾರು 3700 ಮತದಾರರು ಇದ್ದು, ಇವರಲ್ಲಿ 2200 ಮಂದಿ ಮತ ಚಲಾವಣೆ ಮಾಡಿದ್ದಾರೆ. ಬಳಿಕ ನಡೆದ ಮತ ಎಣಿಕೆ ವೇಳೆ ಅಕ್ರಮ ನಡೆದಿದ್ದು, ಪೂರ್ವಗ್ರಹ ಪೀಡಿತರಾಗಿ ಚುನಾವಣಾಧಿಕಾರಿಗಳು ಕರ್ತವ್ಯ ನಿರ್ವಹಿಸಿದ್ದಾರೆ ಎಂದರು.

ಈ ವೇಳೆ ತಮ್ಮ ಗುಂಪಿನ ಹಲವರು ಹೆಚ್ಚು ಮತ ಗಳಿಸಿದ್ದರೂ ಅಕ್ರಮದಿಂದ ಇಡೀ ಗುಂಪು ಪರಾಜಿತ ಎಂದು ಘೋಷಿಸಲಾಗಿದೆ. ಆದ್ದರಿಂದ ಮರು ಎಣಿಕೆ ನಡೆಯಬೇಕೆಂದು ಕೋರಿ ಸಂಬಂಧಿತ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಗುವುದು. ಅವರು ಕ್ರಮ ಕೈಗೊಳ್ಳದಿದ್ದಲ್ಲಿ ನ್ಯಾಯಾಲಯದ ಮೊರೆ ಹೋಗಲಾಗುತ್ತದೆ ಎಂದರು. ವಿವಿಧ ಸ್ಥಾನಗಳಿಗೆ ಸ್ಪರ್ಧಿಸಿದ್ದವರು ಹಾಗೂ ಸಮುದಾಯದ ಮುಖಂಡರಾದ ಲಿಖಿತಾ, ಕೆ.ಎಂ. ನಾಗರತ್ನ, ಚೌಕಿಮಠ ಮಂಜುನಾಥ್, ಮಹೇಶ್, ಚಿಕ್ಕಳ್ಳಿ ಸ್ವಾಮಿ, ಜಗದೀಶ್ ಮಾದಾಪುರ ಮತ್ತಿತರರು ಉಪಸ್ಥಿತರಿದ್ದರು.

ಕೆವಿಎಸ್ ಕ್ರೀಡಾಕೂಟ: ಜಿಎಸ್‌ಎ ತಂಡಕ್ಕೆ 9 ಪದಕ



53ನೇ ಕೆವಿಎಸ್ ಪ್ರಾದೇಶಿಕ ಕ್ರೀಡಾಕೂಟದಲ್ಲಿ ಮೈಸೂರಿನ ಜೆಪಿನಗರದ ಜಿಎಸ್‌ಎ ತಂಡ ಈಜು ಸ್ಪರ್ಧೆಯಲ್ಲಿ 9 ಪದಕ ಪಡೆದಿದೆ.

ಮೈಸೂರು,ಜು.22-ಬೆಂಗಳೂರಿನಲ್ಲಿ ಕೇಂದ್ರೀಯ ವಿದ್ಯಾಲಯ ಸಂಘಟನೆ ಆಯೋಜಿಸಿದ್ದ 53ನೇ ಕೆವಿಎಸ್ ಪ್ರಾದೇಶಿಕ ಕ್ರೀಡಾಕೂಟದಲ್ಲಿ ಮೈಸೂರಿನ ಜೆ.ಪಿ.ನಗರದ ಜಿಎಸ್‌ಎ ತಂಡ ಈಜು ಸ್ಪರ್ಧೆಯಲ್ಲಿ 9 ಪದಕಗಳನ್ನು ತಮ್ಮದಾಗಿಸಿಕೊಂಡಿದೆ.

ಜೆ.ಪಿ.ನಗರದ ಪುಟ್ಟರಾಜ ಗವಾಯಿ ಕ್ರೀಡಾಂಗಣದಲ್ಲಿರುವ ಜಿಎಸ್‌ಎ ಸಂಸ್ಥೆಯ 3 ಈಜುಪಟುಗಳು 7 ಚಿನ್ನದ ಪದಕ, 2 ಬೆಳ್ಳಿ ಪದಕವನ್ನು ಪಡೆದಿದ್ದಾರೆ. ಇವರಲ್ಲಿ ಹಾರಿಕಾ ಹಾಗೂ ರಾಹುಲ್ ಕೇಂದ್ರೀಯ ವಿದ್ಯಾಲಯದ ರಾಷ್ಟ್ರೀಯ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ. ಜಿಎಸ್‌ಎ ಸಂಸ್ಥೆಯಲ್ಲಿ ತರಬೇತಿ ಪಡೆಯುತ್ತಿರುವ ಹಾರಿಕಾ, (14 ವರ್ಷದ ಒಳಗಿನ) ಈಜು ಸ್ಪರ್ಧೆಯಲ್ಲಿ 50 ಮೀ., 100 ಮೀ. ಹಾಗೂ 200 ಮೀ.ಬ್ರೆಸ್ಟ್ ಸ್ಟ್ರೋಕ್‌ನಲ್ಲಿ ಕ್ರಮವಾಗಿ 3 ಚಿನ್ನದ ಪದಕ, ರಾಹುಲ್ (17 ವರ್ಷದ ಒಳಗಿನ) 50 ಮೀ. ಫ್ರೀ ಸ್ಟ್ರೋಕ್, 50 ಮೀ. ಹಾಗೂ 100 ಮೀ. ಬ್ಯಾಕ್ ಸ್ಟ್ರೋಕ್‌ನಲ್ಲಿ 3 ಚಿನ್ನದ ಪದಕ ಪಡೆದಿದ್ದಾರೆ. ಆವೀಶ್ ಫ್ರೀ ಸ್ಟೈಲ್‌ನಲ್ಲಿ 1 ಚಿನ್ನ, ಬ್ಯಾಕ್ ಸ್ಟ್ರೋಕ್ ಹಾಗೂ ಬ್ರೆಸ್ಟ್ ಸ್ಟ್ರೋಕ್‌ನಲ್ಲಿ 2 ಬೆಳ್ಳಿ ಪದಕ ಪಡೆದಿದ್ದಾರೆ.

ಹೆಲ್ಪಿಂಗ್ ಹ್ಯಾಂಡ್ಸ್‌ನಿಂದ ಸ್ಮಾರ್ಟ್ ಟೆಲಿವಿಷನ್, ವಾಟರ್ ಪ್ಯೂರಿಫೈಯರ್ ಕೊಡುಗೆ



ಹೆಲ್ಪಿಂಗ್ ಹ್ಯಾಂಡ್ಸ್ ಜೈನ್ ಯುವ ಸಂಘಟನೆಯಿಂದ ಸರ್ಕಾರಿ ಶಾಲೆಗೆ ಸ್ಮಾರ್ಟ್ ಟೆಲಿವಿಷನ್ ಮತ್ತು ವಾಟರ್ ಪ್ಯೂರಿಫೈಯರ್ ಕೊಡುಗೆಯಾಗಿ ನೀಡಲಾಯಿತು.

ಮೈಸೂರು, ಜು. 22- ಮೈಸೂರಿನ ಹೆಲ್ಪಿಂಗ್ ಹ್ಯಾಂಡ್ಸ್ ಜೈನ್ ಯುವ ಸಂಘಟನೆಯು ಇಟ್ಟಿಗೆಗೂಡಿನಲ್ಲಿರುವ ಸರ್ಕಾರಿ ಶಾಲೆಗೆ ಸ್ಮಾರ್ಟ್ ಟೆಲಿವಿಷನ್ ಮತ್ತು ವಾಟರ್ ಪ್ಯೂರಿಫೈಯರ್ ಅನ್ನು ಕೊಡುಗೆಯಾಗಿ ನೀಡಿದೆ. ಈ ಸಂದರ್ಭದಲ್ಲಿ ಹೆಲ್ಪಿಂಗ್ ಹ್ಯಾಂಡ್ಸ್‌ನ ಕಾರ್ಯದರ್ಶಿ ಆನಂದ್ ಪಟ್ವಾ, ಬಿಇಓ ದಕ್ಷಿಣ ವಿಭಾಗದ ರಾಜು, ಶಾಲಾ ಮುಖ್ಯೋಪಾಧ್ಯಾಯಿನಿ ಅನ್ನಪೂರ್ಣ, ಖಜಾಂಚಿ ರಾಜನ್ ಬಾಗ್‌ಮಾರ್, ಯೋಜನಾ ನಿರ್ದೇಶಕ ಪ್ರಕಾಶ್ ಗಾಂಧಿ, ಸದಸ್ಯರಾದ ಸಂಪತ್ ಬಾಗ್‌ಮಾರ್, ಗೌತಮ್ ಪಟ್ವಾ, ಜಂಬು ಲೋಧಾ, ಮಹಿಳಾ ವಿಭಾಗದ ಸದಸ್ಯರಾದ ಸೀಮಾ ಬೋಹರಾ, ಇಂದ್ರಾಬಾಯಿ ಖಾಬಿಯಾ, ಆಶಾ ಬಾಗ್‌ಮಾರ್, ಬಿಇಓ ರಾಜು, ಬಿಆರ್‌ಸಿ ಶ್ರೀಕಾಂತ್‌ಸ್ವಾಮಿ, ಸಿಆರ್‌ಪಿ ವೀಣಾಶ್ರೀ, ಮುಖ್ಯೋಪಾಧ್ಯಾಯಿನಿ ಅನ್ನಪೂರ್ಣ, ಗ್ಲೇಡ್ಸ್, ಅಂಕಿತ್ ಶಿಕ್ಷಕರು, ಪಾಲಕರು, ಸಿಬ್ಬಂದಿ ಮತ್ತಿತರರಿದ್ದರು.

ಎಂಎಂಕೆ-ಎಸ್‌ಡಿಎಂ ಕಾಲೇಜಿಗೆ ರಾಷ್ಟ್ರೀಯ ಮಟ್ಟದ ಉತ್ತಮ ಕಾಲೇಜು ಸ್ಥಾನಮಾನ

ಮೈಸೂರು,ಜು.22-ಮೈಸೂರಿನ ಎಂಎಂಕೆ ಮತ್ತು ಶ್ರೀಧರ್ಮಸ್ಥಳ ಮಂಜುನಾಥೇಶ್ವರ ಮಹಿಳಾ ಕಾಲೇಜಿಗೆ ಔಟ್‌ಲುಕ್, ಇಂಡಿಯಾ ಟುಡೆ ಪತ್ರಿಕೆಗಳು ನಡೆಸುವ 2024ನೇ ಸಾಲಿನ ರಾಷ್ಟ್ರೀಯ ಮಟ್ಟದ ಉತ್ತಮ ಕಾಲೇಜು ಸ್ಥಾನಮಾನದ ಸರ್ವೇಕ್ಷಣೆಯಲ್ಲಿ ಸ್ಥಾನ ಪಡೆದಿದೆ. ಕಾಲೇಜಿನ ಶೈಕ್ಷಣಿಕ ಮತ್ತು ಸಮಗ್ರ ಗುಣಮಟ್ಟವನ್ನು ಆಧರಿಸಿ ಈ ಸ್ಥಾನಮಾನವನ್ನು ಕಾಲೇಜು ಕಳೆದ 3 ವರ್ಷಗಳಿಂದ ನಿರಂತರವಾಗಿ ಭಾಗವಹಿಸಿ ಪಡೆಯುತ್ತಿದೆ. ಔಟ್‌ಲುಕ್ ಪತ್ರಿಕೆ ಸರ್ವೇಕ್ಷಣೆಯಲ್ಲಿ ಬಿಸಿಎ ವಿಭಾಗ 74ನೇ ಸ್ಥಾನ, ಬಿ.ಕಾಂ ವಿಭಾಗವು 85ನೇ ಸ್ಥಾನ, ಬಿಬಿಎ ವಿಭಾಗವು 100ನೇ ಸ್ಥಾನ, ವಿಜ್ಞಾನ ವಿಭಾಗವು 98ನೇ ಸ್ಥಾನ ಪಡೆದಿದೆ ಹಾಗೂ ಇಂಡಿಯಾ ಟುಡೆ ನಡೆಸಿದ ಸರ್ವೇಕ್ಷಣೆಯಲ್ಲಿ ಬಿಸಿಎ ವಿಭಾಗ 88ನೇ ಸ್ಥಾನ, ಬಿ.ಕಾಂ ವಿಭಾಗವು 138ನೇ ಸ್ಥಾನ, ಬಿಬಿಎ ವಿಭಾಗವು 118ನೇ ಸ್ಥಾನ, ವಿಜ್ಞಾನ ವಿಭಾಗವು 166ನೇ ಸ್ಥಾನ ಪಡೆದಿದೆ ಎಂದು ಪ್ರಾಂಶುಪಾಲರಾದ ಪ್ರೊ.ಎನ್.ಭಾರತಿ ತಿಳಿಸಿದ್ದಾರೆ.

ರಾಜೇಶ್, ಶಾಂತ ಅವರಿಗೆ ಕರ್ನಾಟಕ ಸೇವಾ ರತ್ನ ಪ್ರಶಸ್ತಿ




ರಾಜೇಶ್



ಶಾಂತ

ಮೈಸೂರು,ಜು.22-ಶ್ರೀ ದುರ್ಗಾ ಫೌಂಡೇಶನ್ ಐದನೇ ವರ್ಷದ ವಾರ್ಷಿಕೋತ್ಸವ ಅಂಗವಾಗಿ ನೀಡುತ್ತಿರುವ ಕರ್ನಾಟಕ ಸೇವಾ ರತ್ನ ಪ್ರಶಸ್ತಿಗೆ ಲಕ್ಷ್ಮಿಪುರಂ ನಿವಾಸಿ, ಉದ್ಯಮಿ ಹಾಗೂ ಸಮಾಜ ಸೇವಕ ಎಂ.ಪಿ.ರಾಜೇಶ್, ಕುವೆಂಪುನಗರದ ನಿವಾಸಿ ಬಸವೇಶ್ವರ ನವಚೇತನ ಅಂಧ ಮಕ್ಕಳ ಶಾಲೆಯ ಗೌರವ ಕಾರ್ಯಾಧ್ಯಕ್ಷರು ಹಾಗೂ ಸಮಾಜ ಸೇವಕರಾದ ಎಂ.ಶಾಂತ ಆಯ್ಕೆಯಾಗಿದ್ದಾರೆ. ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರ ನಯನ ಸಭಾಂಗಣದಲ್ಲಿ ಜುಲೈ 29 ರಂದು ನಡೆಯುವ 5ನೇ ವರ್ಷದ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ಶ್ರೀ ದುರ್ಗಾ ಫೌಂಡೇಶನ್ ಅಧ್ಯಕ್ಷರಾದ ರೇಖಾ ಶ್ರೀನಿವಾಸ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೂರಹಳ್ಳಿ ಶ್ರೀಗಳು ಲಿಂಗೈಕ್ಯ: ಗೋಷ್ಠಿಯ ಶ್ರದ್ಧಾಂಜಲಿ



ಮೈಸೂರು, ಜು.22-ನಂಜನಗೂಡು ತಾಲೂಕು ಸೂರಹಳ್ಳಿ ಶ್ರೀ ವಿರಕ್ತಮಠದ ಶ್ರೀ ನಾಗಭೂಷಣ ಸ್ವಾಮಿಗಳ ನಿಧನಕ್ಕೆ ಮೈಸೂರು ಮತ್ತು ಚಾಮರಾಜನಗರದ ವೀರಶೈವ-ಲಿಂಗಾಯತ ಮಠಾಧಿಪತಿಗಳ ಗೋಷ್ಠಿ ಶ್ರದ್ಧಾಂಜಲಿ ಅರ್ಪಿಸಿತು. ಶ್ರೀಗಳ ಅಗಲಿಕೆಯಿಂದ ಉಂಟಾಗಿರುವ ಕೊರತೆಯನ್ನು ಅವರ ಉತ್ತರಾಧಿಕಾರಿಗಳಾದ ಶ್ರೀ ಕೆಂಡಗಣ್ಣ ಸ್ವಾಮಿಗಳು ಮುಂದುವರೆಸಿಕೊಂಡು ಹೋಗಲು ಮತ್ತು ಶ್ರೀಗಳ ಅಗಲಿಕೆಯಿಂದ ಶ್ರೀಮಠದ ಭಕ್ತಾದಿಗಳಿಗೆ ಹಾಗೂ ಸಾರ್ವಜನಿಕರಿಗೆ ಉಂಟಾಗಿರುವ ದುಃಖವನ್ನು ಭರಿಸುವ ಶಕ್ತಿಯನ್ನು ಭಗವಂತನು ನೀಡಲೆಂದು ಮೈಸೂರು ಮತ್ತು ಚಾಮರಾಜನಗರದ ವೀರಶೈವ-ಲಿಂಗಾಯತ ಮಠಾಧಿಪತಿಗಳ ಗೋಷ್ಠಿ ಪ್ರಾರ್ಥಿಸಿತು.

ಮನ ಸೆಳೆದ ಗಣಪತಿ ಸಚ್ಚಿದಾನಂದ ಸ್ವಾಮೀಜಿಯವರ ನೇತೃತ್ವದ ಚಿಕಾಗೋ ನ್ಯೂ ಅರೆನಾದ ಗೀತಾ ಉತ್ಸವ



ಮೈಸೂರಿನ ಅವಧೂತ ದತ್ತ ಪೀಠದ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಅವರ ನೇತೃತ್ವದಲ್ಲಿ ಯುಎಸ್‌ನ ಇಲಿನಾಯ್ಸ್‌ನ ಚಿಕಾಗೋದ ನ್ಯೂ ಅರೆನಾದಲ್ಲಿ ನಡೆದ ಗೀತಾ ಉತ್ಸವ ಎಲ್ಲರ ಮನಸೂರೆಗೊಂಡಿತು.

ಮೈಸೂರು,ಜು.22-ಮೈಸೂರಿನ ಅವಧೂತ ದತ್ತ ಪೀಠದ ಪೂಜ್ಯ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಅವರ ನೇತೃತ್ವದಲ್ಲಿ ಯುಎಸ್‌ನ ಇಲಿನಾಯ್ಸ್‌ನ ಚಿಕಾಗೋದ ನ್ಯೂ ಅರೆನಾದಲ್ಲಿ ನಡೆದ ಗೀತಾ ಉತ್ಸವ ಎಲ್ಲರ ಮನಸೂರೆಗೊಂಡಿತು.

ಎಸ್‌ಜಿಎಸ್ ಗೀತಾ ಫೌಂಡೇಶನ್ ಮತ್ತು ಕೃಷ್ಣ ದತ್ತ ಹನುಮಾನ್ ದೇವಸ್ಥಾನವು ಅತಿದೊಡ್ಡ ಯುಎಸ್ ಗೀತಾ ಉತ್ಸವವನ್ನು ಆಯೋಜಿಸಿದ್ದವು. ಎಸ್‌ಜಿಎಸ್ ಗೀತಾ ಫೌಂಡೇಶನ್‌ನಿಂದ ನಡೆದ ಈ ಗೀತಾ ಉತ್ಸವವು ಯುಎಸ್‌ನಲ್ಲಿ ಇದುವರೆಗೆ ನಡೆದಿರುವ ಭಗವದ್ಗೀತೆಯ ಅತಿ ದೊಡ್ಡ ಕಾರ್ಯಕ್ರಮ ಎಂದೇ ಗಣ್ಯರು ಬಣ್ಣಿಸಿದ್ದಾರೆ. ವಿದ್ಯಾರ್ಥಿಗಳು ಕೇವಲ 10 ತಿಂಗಳಿನಲ್ಲಿ ಗೀತೆಯ ಎಲ್ಲಾ 700 ಶ್ಲೋಕಗಳನ್ನು ಕಂಠಪಾಠ ಮಾಡಿದುದು ವಿಶೇಷ.

ಎಸ್‌ಜಿಎಸ್ ಗೀತಾ ಫೌಂಡೇಶನ್ ಮೂಲಕ, 10,000ಕ್ಕೂ ಹೆಚ್ಚು ವಿದ್ಯಾರ್ಥಿಗಳು ಜಾಗತಿಕವಾಗಿ ಪದವಿ ಪಡೆದಿದ್ದಾರೆ. ಈ ಜಾಗತಿಕ ಚಳವಳಿಯನ್ನು ಸಕ್ರಿಯಗೊಳಿಸಲೆಂದೇ ಎಸ್‌ಜಿಎಸ್ ಗೀತಾ ಫೌಂಡೇಶನ್ 500ಕ್ಕೂ ಹೆಚ್ಚು ಶಿಕ್ಷಕರಿಗೆ ತರಬೇತಿ ನೀಡಿದೆ.

ಕಿರಿಯ ಪದವೀಧರರು 4 ವರ್ಷ ವಯಸ್ಸಿನವರು, ಹಿರಿಯ ಪದವೀಧರರು 85 ವರ್ಷ ವಯಸ್ಸಿನವರು, 2,000 ಕಂಠಪಾಠಗಳು 10 ವರ್ಷ ಮತ್ತು ಅದಕ್ಕಿಂತ ಕಡಿಮೆ ವಯಸ್ಸಿನವರು.

1,350 ಕಂಠಪಾಠ ಮಾಡುವವರು ವಯಸ್ಕರು ಗೀತಾ ಕಲಿಕೆಯನ್ನು ಸುಗಮಗೊಳಿಸಿದ್ದಾರೆ. ಗೀತಾ ಉತ್ಸವದಲ್ಲಿ, ಸಾವಿರಾರು ಜನರು ಏಕಸ್ವರದಲ್ಲಿ ಗೀತಾ ಪಠಣ ಮಾಡಿದುದು ನ್ಯೂ ಅರೆನಾ ಪ್ರೇಕ್ಷಕರನ್ನು ಮಂತ್ರಮುಗ್ಧರನ್ನಾಗಿಸಿತು. ಗಣ್ಯರಾದ ರಾಜಾ ಕೃಷ್ಣಮೂರ್ತಿ (ಕಾಂಗ್ರೆಸ್‌ಮನ್, ಇಲಿನಾಯ್ಸ್) ಮತ್ತು ಜೂಲಿಯಾನಾ ಸ್ಟ್ರಾಟನ್, ಇಲಿನಾಯ್ಸ್‌ನ ಲೆಫ್ಟಿನೆಂಟ್ ಗವರ್ನರ್, ಇಲಿನಾಯ್ಸ್ ನಗರಗಳ ಏಳು ಮೇಯರ್‌ಗಳ ಉಪಸ್ಥಿತರಿದ್ದು ಗೀತಾ ಉತ್ಸವವನ್ನು ಕೊಂಡಾಡಿದರು.

ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ, ಚಿಕಾಗೋದ ನ್ಯೂ ಅರೆನಾದಲ್ಲಿ ಇಂದಿನ ಭಗವದ್ಗೀತೆ ಕಾರ್ಯಕ್ರಮವು ವಿದ್ಯಾರ್ಥಿಗಳು, ಪ್ರೇಕ್ಷಕರು ಮತ್ತು ದೊಡ್ಡ ಸನಾತನ ಧರ್ಮ ಸಮುದಾಯಕ್ಕೆ ಮಹತ್ವದ ಮೈಲಿಗಲ್ಲನ್ನು ನೀಡಿದೆ. ಮಕ್ಕಳಿಂದ ಹಿಡಿದು ದೊಡ್ಡವರವರೆಗೆ ಎಲ್ಲರ ಮುಖದಲ್ಲೂ ಶ್ರೀಕೃಷ್ಣನನ್ನು ಸಾಕ್ಷೀಕರಿಸುವುದು ನಿಜಕ್ಕೂ ವಿಸ್ಮಯ ಹುಟ್ಟಿಸುವಂತಿತ್ತು ಎಂದು ಬಣ್ಣಿಸಿದರು.

ಭಗವದ್ಗೀತೆಯ ಈ ಉತ್ಸವ ಯುಎಸ್ ಬಹಳಷ್ಟು ಕುಟುಂಬಗಳು, ಸ್ವಯಂಸೇವಕರು ಮತ್ತು ಇಡೀ ಕಾರ್ಯಕ್ರಮದ ತಂಡದ ಸಮರ್ಪಣೆ ನನ್ನಲ್ಲಿ ಭಾವಪರವಶತೆಯನ್ನು ತುಂಬಿದೆ ಎಂದು ಶ್ರೀಗಳು ತಿಳಿಸಿದರು.

ಎಸ್‌ಜಿಎಸ್ ಗೀತಾ ಫೌಂಡೇಶನ್ ಮುಂದಿನ ದಿನಗಳಲ್ಲಿ 100,000 ವಿದ್ಯಾರ್ಥಿಗಳಿಗೆ ತರಬೇತಿ ನೀಡಲಿದೆ ಎಂದು ಇದೇ ವೇಳೆ ಶ್ರೀಗಳು ಘೋಷಿಸಿದರು.

ರಾಜ್ಯ ಮಾಹಿತಿ ಹಕ್ಕು ವೇದಿಕೆಯ ಜಿಲ್ಲಾ ಘಟಕಕ್ಕೆ ಚಾಲನೆ

ಮೈಸೂರು, ಜು.22(ಜಿಎ)- ಮೈಸೂರು ಜಿಲ್ಲೆಯ ಎಲ್ಲಾ ಸರ್ಕಾರಿ ಕಚೇರಿ ಇಲಾಖೆಗಳಲ್ಲಿ ಸರ್ಕಾರದ ಸುತ್ತೋಲೆ ಹಾಗೂ ಆದೇಶದಂತೆ ಕರ್ತವ್ಯ ನಿರ್ವಹಿಸದ ಅಥವಾ ಲಂಚಕ್ಕೆ ಒತ್ತಾಯಿಸುವವರ ವಿರುದ್ಧ ಹೋರಾಟದ ಉದ್ದೇಶ ಹೊಂದಿರುವ ರಾಜ್ಯ ಮಾಹಿತಿ ಹಕ್ಕು ವೇದಿಕೆಯ ಜಿಲ್ಲಾ ಘಟಕಕ್ಕೆ ನಗರದ ಜಿಲ್ಲಾ ಪತ್ರಕರ್ತರ ಭವನದಲ್ಲಿ ಚಾಲನೆ ದೊರೆಯಿತು.

ಈ ವೇಳೆ ರಾಜ್ಯಾಧ್ಯಕ್ಷ ಹೇಮಂತ್ ನಾಗರಾಜ್ ಮಾತನಾಡಿ, ಜಿಲ್ಲೆಯಲ್ಲಿನ ಹಲವಾರು ಸರ್ಕಾರಿ ಕಚೇರಿ ಹಾಗೂ ಇಲಾಖೆಗಳಲ್ಲಿ ಅಧಿಕಾರಿ ವರ್ಗ, ಸಿಬ್ಬಂದಿ ಸರ್ಕಾರದ ಆದೇಶ ಅಥವಾ ಸುತ್ತೋಲೆಯಂತೆ ಕಾರ್ಯನಿರ್ವಹಿಸುತ್ತಿಲ್ಲ. ಇದರಿಂದಾಗಿ ಸಾರ್ವಜನಿಕ ಕೆಲಸ ಕಾರ್ಯ ಸುಸೂತ್ರವಾಗಿ ನಡೆಯುತ್ತಿಲ್ಲ.ಇದೇ ವೇಳೆ ಲಂಚಕ್ಕೆ ಬೇಡಿಕೆ ಇರಿಸಲಾಗುತ್ತಿದೆ ಎಂಬ ದೂರುಗಳು ಕೇಳಿ ಬರುತ್ತಿವೆ. ಹೀಗಾಗಿ ಆಡಳಿತ ಪಾರದರ್ಶಕವಾಗಿರುವಂತೆ ನೋಡಿಕೊಳ್ಳುವ ನಿಟ್ಟಿನಲ್ಲಿ ಜಿಲ್ಲಾ ಘಟಕ ಆರಂಭಿಸಲಾಗಿದ್ದು, ವೇದಿಕೆಯೂ ವಿವಿಧ ಇಲಾಖೆಗಳಲ್ಲಿ ಕಂಡು ಬರುವ ಆಡಳಿತ ವೈಫಲ್ಯದ ಬಗ್ಗೆ ಗಮನಹರಿಸಿ, ಈ ನಿಟ್ಟಿನಲ್ಲಿ ಹೋರಾಟ ನಡೆಸಲಿದೆ ಎಂದು ಎಚ್ಚರಿಸಿದರು.

ಕಾರ್ಯಕ್ರಮದಲ್ಲಿ ಪದಾಧಿಕಾರಿಗಳಿಗೆ ಇದೇ ವೇಳೆ ಪ್ರಮಾಣಪತ್ರ ವಿತರಿಸಲಾಯಿತು. ಈ ವೇಳೆ ಪ್ರಧಾನ ಕಾರ್ಯದರ್ಶಿ ನವೀನ್‌ಕುಮಾರ್, ಜಿಲ್ಲಾಧ್ಯಕ್ಷ ವಿ.ಪ್ರಶಾಂತ್, ಉಪಾಧ್ಯಕ್ಷ ಸಿ.ಪ್ರಸನ್ನಕುಮಾರ್, ಪ್ರಧಾನ ಕಾರ್ಯದರ್ಶಿ ಆಂಬ್ರೋಸ್ ಜಾರ್ಜ್ ಮತ್ತಿತರರು ಉಪಸ್ಥಿತರಿದ್ದರು.

ಸೆ.8, ಪ್ರತಿಭಾ ಪುರಸ್ಕಾರ, ಪ್ರತಿಭಾ ಕಾರಂಜಿ

ಮೈಸೂರು, ಜು.22(ಜಿಎ)-ಮೈಸೂರಿನ ವಿಶ್ವಕರ್ಮ ಸೇವಾ ಟ್ರಸ್ಟ್ ವತಿಯಿಂದ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ಪ್ರತಿಭಾ ಕಾರಂಜಿ ಹಾಗೂ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಸೆಪ್ಟೆಂಬರ್ 8ರಂದು ನಡೆಯಲಿದ್ದು, ಅರ್ಹರು ಟ್ರಸ್ಟ್ ಸಂಪರ್ಕಿಸಬಹುದಾಗಿದೆ ಎಂದು ಉಪಾಧ್ಯಕ್ಷ ನಾಗೇಂದ್ರ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಟ್ರಸ್ಟ್‌ನ ಮೂರನೇ ವಾರ್ಷಿಕೋತ್ಸವದ ಅಂಗವಾಗಿ ಈ ಕಾರ್ಯಕ್ರಮ ಆಯೋಜಿಸಲಾಗಿದೆ. ಆದ್ದರಿಂದ ಆಗಸ್ಟ್ 20ರೊಳಗೆ ವಿದ್ಯಾರ್ಥಿಗಳು ಅಗತ್ಯ ದಾಖಲಾತಿ ಸಲ್ಲಿಸಬೇಕು. ಮೈಸೂರು, ಚಾಮರಾಜನಗರ, ಹಾಸನ, ಕೊಡಗು, ಮಂಡ್ಯ ಹಾಗೂ ರಾಮನಗರ ವ್ಯಾಪ್ತಿಯವರು ಮಾತ್ರ ಅರ್ಜಿ ಸಲ್ಲಿಸಬಹುದಾಗಿದ್ದು, ಹೆಚ್ಚಿನ ಮಾಹಿತಿಗೆ ಮೊಬೈಲ್ ಸಂಖ್ಯೆ 86183 60331 ಅನ್ನು ಸಂಪರ್ಕಿಸಿ ಎಂದು ವಿವರಿಸಿದರು.

ಸುದ್ದಿಗೋಷ್ಠಿಯಲ್ಲಿ ಪ್ರಧಾನ ಕಾರ್ಯದರ್ಶಿ ಎಂ.ಎಸ್.ಶಂಕರ್, ರಾಮಲಿಂಗಾಚಾರಿ, ವಿ.ಆರ್.ಮಹೇಶ್, ಎಂ.ಸಿ.ಜನಾರ್ಧನ ಮತ್ತಿತರರು ಉಪಸ್ಥಿತರಿದ್ದರು.

ಗುರುಪೂರ್ಣಿಮೆ: ಮಹಾನ್ ಗುರು ಪ್ರಶಸ್ತಿ ಪ್ರದಾನ



ಮಹಾರಾಜ ಸಂಸ್ಕೃತ ಕಾಲೇಜು ಆವರಣದಲ್ಲಿ ಗುರುಪೂರ್ಣಿಮಾ ಅಂಗವಾಗಿ ಸಾಧಕರಿಗೆ ಮಹಾನ್ ಗುರು ಪ್ರಶಸ್ತಿ ಪ್ರದಾನ ಮಾಡಲಾಯಿತು.

ಮೈಸೂರು, ಜು.22- ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಹಾಗೂ ಹಿಮಾಲಯ ಪ್ರತಿಷ್ಠಾನ ಸಂಯುಕ್ತಾಶ್ರಯದಲ್ಲಿ ಮಹಾರಾಜ ಸಂಸ್ಕೃತ ಕಾಲೇಜು ಆವರಣದಲ್ಲಿ ಗುರುಪೂರ್ಣಿಮೆ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಯೋಗ ಗುರುಗಳಾದ ಕೃಷ್ಣಮಾಚಾರ್ಯ, ಶ್ರೀರಂಗ ಸದ್ಗುರು, ಪಟ್ಟಾಭಿ ಜೋಯಿಸ್, ಬಿ.ಕೆ.ಎಸ್ ಅಯ್ಯಂಗಾರ್, ಮಲ್ಲಾಡಿಹಳ್ಳಿ ಶ್ರೀಗಳು ಮುಂತಾದ ಯೋಗ ಗುರುಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಲಾಯಿತು.

ಈ ಸಂದರ್ಭದಲ್ಲಿ ನಾಲ್ವರು ಸಾಧಕರಿಗೆ ಮಹಾನ್ ಗುರು ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು. ಡಾ.ಪಿ.ಸತ್ಯನಾರಾಯಣ ಪ್ರಾಂಶುಪಾಲರು ಮಹಾರಾಜ ಸಂಸ್ಕೃತ ಕಾಲೇಜು, ಶ್ರೀ ಹರಿ ದ್ವಾರಕನಾಥ್ ಸಂಸ್ಥಾಪಕರು, ಜಿಎಸ್‌ಎಸ್ ಪ್ರತಿಷ್ಠಾನ, ಕೆ.ಎಸ್.ಮುಕುಂದನ್ ಖ್ಯಾತ ಯೋಗಾಚಾರ್ಯರು, ಮೈಸೂರು, ಡಾ. ಸಿ.ರಮೇಶ್ ಶೆಟ್ಟಿ ಅಂತರರಾಷ್ಟ್ರೀಯ ಯೋಗ ಶಿಕ್ಷಕರು ಇವರನ್ನು ಸನ್ಮಾನಿಸಲಾಯಿತು.

ನಂತರ ಮಾತನಾಡಿದ ಕೃಷ್ಣರಾಜ ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ, ಪ್ರತಿಯೊಬ್ಬರೂ ತಮ್ಮ ಗುರುಗಳನ್ನು ಅಥವಾ ಮಾರ್ಗದರ್ಶಕರನ್ನು ಸ್ಮರಿಸಿಕೊಳ್ಳುತ್ತಿರುವುದು ಭಾರತೀಯ ಸಂಸ್ಕೃತಿಯ ಹಿರಿಮೆ ಎಂದರು.

ಹಿರಿಯ ಸಮಾಜಸೇವಕ ಡಾ.ಕೆ ರಘುರಾಂ ವಾಜಪೇಯಿ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಉಪಾಧ್ಯಕ್ಷರಾದ ಅನಂತು, ಹಿಮಾಲಯ ಪ್ರತಿಷ್ಠಾನದ ಸಂಚಾಲಕ ಎಂ.ವಿ ನಾಗೇಂದ್ರಬಾಬು, ಅರುಣ್, ಚಕ್ರಪಾಣಿ, ಶ್ರೀನಿವಾಸ್‌ಪ್ರಸಾದ್, ಹರ್ಷವರ್ಧನ್ ಇದ್ದರು.

ಶಿಕ್ಷಣ ಸಚಿವರಿಗೆ ಅಭಿನಂದನೆ




ಕೆಪಿಸಿಸಿ ರಾಜ್ಯ ಓಬಿಸಿ ಉಪಾಧ್ಯಕ್ಷರಾಗಿ ನೇಮಕಗೊಂಡ ಆರ್.ವಿನೋದ್‌ರಾಜ್ ಕೆಪಿಸಿಸಿ ಓಬಿಸಿ ರಾಜ್ಯಾಧ್ಯಕ್ಷರಾದ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರನ್ನು ಅಭಿನಂದಿಸಿದರು. ಓಬಿಸಿ ಪದಾಧಿಕಾರಿಗಳಾದ ಶಮಂತ್, ಚಂದ್ರು ವಿಶ್ವಕರ್ಮ, ಲೋಕೇಶ್ ಮಾದಾಪುರ ಹಾಗೂ ಅರವಿಂದ್ ಇನ್ನಿತರರಿದ್ದರು.

ಜು.28ರಂದು ಅಮೋಘ ಜುಗಲ್‌ಬಂಧಿ ಕಾರ್ಯಕ್ರಮ

ಮೈಸೂರು, ಜು.22-ಮೈಸೂರಿನ ನರಸಿಂಹರಾಜ ಮೊಹಲ್ಲಾ ಸಂಗೀತ ಸಭಾ ಚಾರಿಟಬಲ್ ಟ್ರಸ್ಟ್ ವತಿಯಿಂದ ಜು.28ರಂದು ಸಂಜೆ 6.30ಕ್ಕೆ ಎನ್.ಆರ್.ಮೊಹಲ್ಲಾದ ಶಿವಾಜಿ ರಸ್ತೆಯಲ್ಲಿರುವ ಶ್ರೀ ಪ್ರಸನ್ನ ಮಹಾಗಣಪತಿ ದೇವಸ್ಥಾನದಲ್ಲಿ ಅಮೋಘ ಜುಗಲ್‌ಬಂಧಿ ಕಾರ್ಯಕ್ರಮ ಆಯೋಜಿಸಿದ್ದು, ವಿದ್ವಾನ್ ಎಲ್.ವಿ.ಮುಕುಂದ್, ವಿದ್ವಾನ್ ಸಮೀರ್ ರಾವ್, ವಿದ್ವಾನ್ ಹೆಚ್.ಎಲ್.ಶಿವಶಂಕರ ಸ್ವಾಮಿ, ವಿದ್ವಾನ್ ಆದರ್ಶ ಶೆಣೈ ಕೊಳಲು, ಮೃದಂಗ, ಬಾನ್ಸುರಿ ಮತ್ತು ತಬಲ ಪ್ರಸ್ತುತಪಡಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

23.07.2024 ಮಂಗಳವಾರ, ಮಳೆ ನಕ್ಷತ್ರ: ಪುಷ್ಯ, 20.07.2024ರಿಂದ 02.08.2024
ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಗ್ರೀಷ್ಮ ಋತು, ಆಷಾಢ ಮಾಸ, ಕೃಷ್ಣ ಪಕ್ಷ,
ತಿಥಿ: ಬಿದಿಗೆ, ನಕ್ಷತ್ರ: ಧನಿಷ್ಠ, ರಾಹುಕಾಲ: ಮಧ್ಯಾಹ್ನ 3ರಿಂದ 4.30ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಮಧುಮೇಹ ತೊಂದರೆ ಮತ್ತು ಚರ್ಮರೋಗಗಳಿಗೆ ಆಯುರ್ವೇದ ಪಂಚಕರ್ಮ ಪ್ರತ್ಯೇಕ ಚಿಕಿತ್ಸಾ ಶಿಬಿರ. ಸ್ಥಳ: ಆಸ್ಪತ್ರೆ ಆವರಣ, ಆಲನಹಳ್ಳಿ, ಬೆಳಗ್ಗೆ 9 ಗಂಟೆಯಿಂದ.

■ **ಕಾವೇರಿ ಆಯುರ್ವೇದ ಆಸ್ಪತ್ರೆ :** ಸೈನೊಸೈಟಿಸ್, ತಲೆನೋವಿಗೆ ಉಚಿತ ಚಿಕಿತ್ಸಾ ಶಿಬಿರ. ಸ್ಥಳ: ಆಸ್ಪತ್ರೆ ಆವರಣ, ದೇವೇಗೌಡ ಸರ್ಕಲ್, ಕೆಬಿಎಲ್ ಲೇಔಟ್. ಬೆಳಗ್ಗೆ 10ರಿಂದ ಸಂಜೆ 4ರವರೆಗೆ.

■ **ನಿವೃತ್ತ ಪೊಲೀಸ್ ಅಧಿಕಾರಿಗಳ ಸಂಘ :** ವಾರ್ಷಿಕ ಮಹಾಸಭೆ, ಉದ್ಘಾಟನೆ ಮತ್ತು ಮುಖ್ಯ ಅತಿಥಿಗಳು : ನಗರ ಪೊಲೀಸ್ ಆಯುಕ್ತರಾದ ಶ್ರೀಮತಿ ಸೀಮಾ ಲಾಟ್ಕರ್, ಅಧ್ಯಕ್ಷತೆ : ಪೊಲೀಸ್ ಉಪ ಅಧೀಕ್ಷಕ ಮತ್ತು ಸಂಘದ ಅಧ್ಯಕ್ಷ ಎಂ.ಸಿ. ಮರಿಸ್ವಾಮಿ, ಉಪಸ್ಥಿತರು : ಸಂಘದ ಗೌರವ ಅಧ್ಯಕ್ಷ ಬಿ.ಎಂ. ನಾಣಯ್ಯ, ಸ್ಥಳ: ಪೊಲೀಸ್ ಭವನ, ಲಲಿತಮಹಲ್ ರಸ್ತೆ, ಬೆಳಗ್ಗೆ 10ಕ್ಕೆ.

■ **ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ), ಜಿಲ್ಲಾ ಇತಿಹಾಸ ವೇದಿಕೆ:** ಇತಿಹಾಸ ಸಂಭ್ರಮ, ಪ್ರಥಮ ಪಿಯುಸಿ ವಿದ್ಯಾರ್ಥಿ ಕೈಪಿಡಿ ಬಿಡುಗಡೆ, ಪ್ರತಿಭಾ ಪುರಸ್ಕಾರ, ಸನ್ಮಾನ ಸಮಾರಂಭ, ಅಧ್ಯಕ್ಷತೆ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಮರಿಸ್ವಾಮಿ, ಕೈಪಿಡಿ ಬಿಡುಗಡೆ : ಮಹಾರಾಜ ಪದವಿಪೂರ್ವ ಕಾಲೇಜು ಪ್ರಿನ್ಸಿಪಾಲ್ ಎನ್. ಉದಯಶಂಕರ್, ವಿಶೇಷ ಉಪನ್ಯಾಸ : ವಾಗ್ಮಿ ಪ್ರೊ. ಎಂ. ಕೃಷ್ಣೇಗೌಡ, ಸ್ಥಳ: ಮಹಾರಾಜ ಸರ್ಕಾರಿ ಪದವಿಪೂರ್ವ ಕಾಲೇಜು ಆವರಣ, ಬೆಳಗ್ಗೆ 10.30ಕ್ಕೆ.

■ **ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಮೈಸೂರು ಜಿಲ್ಲಾ ಸಹಕಾರ ಒಕ್ಕೂಟ, ಮೈಸೂರು ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ :** ತಾಲೂಕಿನ ಹಾಲು ಉತ್ಪಾದಕ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ವಿಶೇಷ ತರಬೇತಿ ಕಾರ್ಯಕ್ರಮ, ಉದ್ಘಾಟನೆ : ಮೈಮುಲ್ ಮಾಜಿ ಅಧ್ಯಕ್ಷ ಕೆ. ಉಮಾಶಂಕರ, ಅಧ್ಯಕ್ಷತೆ : ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ. ರಾಜೀವ್, ಸ್ಥಳ: ಮೈಸೂರು ಜಿಲ್ಲಾ ಸಹಕಾರ ಯೂನಿಯನ್ ಸಭಾಂಗಣ, ಚಾಮರಾಜ ಜೋಡಿ ರಸ್ತೆ, ಬೆಳಗ್ಗೆ 11ಕ್ಕೆ.

■ **ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ :** ಶಿವಶರಣ ಶ್ರೀ ಹಡಪದ ಅಪ್ಪಣ್ಣ ಜಯಂತಿ, ಉಪಸ್ಥಿತರು : ಮುಖ್ಯಮಂತ್ರಿ ಸಿದ್ದರಾಮಯ್ಯ, ಉಕ್ಕು ಮತ್ತು ಬೃಹತ್ ಕೈಗಾರಿಕಾ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ, ಉದ್ಘಾಟನೆ : ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಉಪಸ್ಥಿತರು : ಸಚಿವ ಕೆ. ವೆಂಕಟೇಶ್, ಅರಣ್ಯ ವಸತಿ ಮತ್ತು ವಿಹಾರ ಧಾಮಗಳ ನಿಗಮದ ಅಧ್ಯಕ್ಷ ಸಿ. ಅನಿಲ್ ಕುಮಾರ್, ಸೆಸ್ಕಾಂ ಅಧ್ಯಕ್ಷ ಎ.ಬಿ. ರಮೇಶ್ ಬಂಡಿಸಿದ್ದೇಗೌಡ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷೆ ಡಾ.ಪುಷ್ಪ ಅಮರನಾಥ್, ಅಧ್ಯಕ್ಷತೆ : ಶಾಸಕ ಕೆ.ಹರೀಶ್‌ಗೌಡ, ಮುಖ್ಯ ಅತಿಥಿಗಳು : ಸಂಸದರಾದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಸುನೀಲ್ ಬೋಸ್, ಅತಿಥಿಗಳು : ಶಾಸಕರಾದ ತನ್ವೀರ್ ಸೇಠ್, ಎಚ್. ವಿಶ್ವನಾಥ್, ಜಿ.ಟಿ. ದೇವೇಗೌಡ, ಡಾ. ಡಿ. ತಿಮ್ಮಯ್ಯ, ಮಧು ಜಿ. ಮಾದೇಗೌಡ, ಸಿ.ಎನ್. ಮಂಜೇಗೌಡ, ಡಿ. ರವಿಶಂಕರ್, ಜಿ.ಡಿ. ಹರೀಶ್‌ಗೌಡ, ದರ್ಶನ್ ಧ್ರುವನಾರಾಯಣ, ಟಿ.ಎಸ್. ಶ್ರೀವತ್ಸ, ಡಾ. ಎಸ್. ಯತೀಂದ್ರ, ಕೆ. ವಿವೇಕಾನಂದ, ಮುಡಾ ಅಧ್ಯಕ್ಷ ಕೆ. ಮರೀಗೌಡ, ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರ ಅಧ್ಯಕ್ಷ ಅಯೂಬ್ ಖಾನ್, ಕಾಡಾ ಅಧ್ಯಕ್ಷ ಮರಿಸ್ವಾಮಿ, ಲೇಖಕ ಡಾ. ಉಮೇಶ್ ಬೇವಿನಹಳ್ಳಿ ಅವರಿಂದ ಉಪನ್ಯಾಸ, ವಿದುಷಿ ಎಸ್. ಸಂಗೀತ ಮತ್ತು ತಂಡದಿಂದ ವಚನ ಗಾಯನ, ಸ್ಥಳ: ಸುಚಿತ್ರ ಆರ್ಟ್ ಗ್ಯಾಲರಿ, ಕಲಾಮಂದಿರ ಆವರಣ, ಬೆಳಗ್ಗೆ 10ಕ್ಕೆ

■ **ದಿವ್ಯ ಜೀವನ ಸಂಘ, ಮಹಿಳಾ ಶಾಖೆ:** ಗುರು ಪೂರ್ಣಿಮೆ. ಸಾಧನಾ ಸಪ್ತಾಹ ಹಾಗೂ ಆರಾಧನಾ ಕಾರ್ಯಕ್ರಮ. ಚಿನ್ಮಯ ಮಿಷನ್‌ನ ಗುರುಸರ್ವಸ್ವ ಪೂಜ್ಯ ಸ್ವಾಮಿನಿ ಕಾಶಿಕಾನಂದ ಅವರಿಂದ ಪ್ರವಚನ. ಸ್ಥಳ: ಶಿವಾನಂದ ಜ್ಞಾನಾಲಯ, ಜೆಎಲ್‌ಬಿ ರಸ್ತೆ, ಲಕ್ಷ್ಮೀಪುರಂ. ಸಂಜೆ: 6.30ರಿಂದ 7.30ರವರೆಗೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 "ಶ್ರದ್ಧೆಯ ಶಿಲ್ಪ" -ಕರ್ನಾಟಕದ ಪ್ರಾಚೀನ ದೇವಾಲಯಗಳ ಪರಿಚಯ ಮಾಲಿಕೆ, ಲೇಖನ ಮತ್ತು ಪ್ರಸ್ತುತಿ: ಟಿ.ಎಸ್. ಗೋಪಾಲ್, ಪ್ರಾಯೋಜಕರು: ಅದಮ್ಯ ಚೇತನ ಫೌಂಡೇಶನ್, ಬೆಂಗಳೂರು. 6.40 ಅರಿವಿನ ಶಿಖರ : ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ : ಡಾ. ಎಂ.ಎ. ಜ್ಯೋತಿ, ವ್ಯಾಖ್ಯಾನ : ಡಾ. ಬಿ.ವಿ. ವಸಂತ್ ಕುಮಾರ್, 6.50 ರೈತರಿಗೆ ಸಲಹೆ, 7.15 ಕಾದಂಬರಿ ವಿಹಾರ: ಅ.ನ.ಕೃ ಅವರ "ಉದಯರಾಗ" ಕಾದಂಬರಿಯ ಬಾನುಲಿ ಓದು, ಪ್ರಸ್ತುತಿ: ಉಮೇಶ್ ಎಸ್. ಎಸ್., 8.30 ಕರೆಗೊಂದು ಗೀತೆ-ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ನೇರ ಫೋನ್ ಇನ್ ಕಾರ್ಯಕ್ರಮ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಅಮಾಯಂ ಪಟ್ಟಿ, ಎಸ್. ಗಣೇಶನ್ - ಜಲತರಂಗ್, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ- ಕಥೆಯಲ್ಲಿದೆ ಉತ್ತರ, ಪ್ರಸ್ತುತಿ : ಪ್ರಭುಸ್ವಾಮಿ ಮಳಿಮಠ್ ಹಾಗೂ ಚೈತ್ರಿಕಾ

ಮಧ್ಯಾಹ್ನ: 12.05 ವನಿತಾ ವಿಹಾರ : ಹೀಗಿದೆ ನೋಡಿ ನಮ್ ಜೋಡಿ, ಭಾಗವಹಿಸುವವರು: ಒಡನಾಡಿ ಸಂಸ್ಥೆಯ ಸ್ಟ್ಯಾನ್ ಲೀ ಮತ್ತು ಸಮಾಜಕಾರ್ಯ ಪ್ರಾಧ್ಯಾಪಕರಾದ ಕುಮುದಿನಿ ಅಚ್ಚಿ, ಪ್ರಸ್ತುತಿ : ಅಬ್ದುಲ್ ರಶೀದ್, 12.30 ದೇವರನಾಮ-ನಿರಂಜನ್, 12.45 ಕನ್ನಡದಲ್ಲಿ ಭಾಷಣ, 1.20 ಭಾವಗೀತೆಗಳು-ಅಂಬಿಕಾ. ಕೆ. ರಾಮ್, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಸುಧಾ ರಘುನಾಥನ್- ಹಾಡುಗಾರಿಕೆ, 4.00 ಕಥಾ ಕಾಲಕ್ಷೇಪ-ಗದಾಯುದ್ಧ, ಪ್ರಸ್ತುತಿ: ವಿದ್ವಾನ್. ಭದ್ರಗಿರಿ ಅಚ್ಯುತದಾಸರು, 6.50 ಕೃಷಿರಂಗ: ಕಿಸಾನ್‌ವಾಣಿ-ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ. ರೇಷ್ಮೆ ಐಸಿರಿ- ರೇಷ್ಮೆ ಕೃಷಿ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ ಪರಿಪಾಕಣೆ ಮತ್ತು ಕಪ್ಪು ಪೆಟ್ಟಿಗೆ ಮಹತ್ವ, ಈ ಕುರಿತು ಮೈಸೂರಿನ ಕೇಂದ್ರ ರೇಷ್ಮೆ ಸಂಶೋಧನೆ ಹಾಗೂ ತರಬೇತಿ ಸಂಸ್ಥೆಯ ವಿಜ್ಞಾನಿ ಡಾ. ಎಂ.ಎಸ್. ರಂಜಿನಿ ಅವರೊಂದಿಗೆ ಸಂದರ್ಶನ. ಸಂದರ್ಶಕರು : ಎನ್. ಕೇಶವಮೂರ್ತಿ, 7.45 ವಿಧಾನಮಂಡಲದಲ್ಲಿ ಇಂದು, 8.00 ಕ್ರೀಡಾಲೋಕ, 8.15 ಸಂಸತ್ತಿನ ಉಭಯ ಕಲಾಪಗಳ ಸಮೀಕ್ಷೆ, 8.30 ಮೈಸೂರು ಜಂಕ್ಷನ್-ಸಾಪ್ತಾಹಿಕ ಸಂಚಿಕೆ. ಪ್ರಸ್ತುತಿ: ಜಾಂಪಣ್ಣ ಆಶೀಹಾಳ್, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ: ಎನ್. ರವಿಕಿರಣ್- ಚಿತ್ರವೀಣಾ, 10.00 ಚೈತ್ರವನ ಲಕ್ಷೀಶನ ಜೈಮಿನಿ ಭಾರತ ಕಾವ್ಯದ ಸಮಗ್ರ ವಾಚನ ವ್ಯಾಖ್ಯಾನ, ವಾಚನ: ಹೆಚ್.ಎಲ್. ಶ್ರೀಕಂಠ, ವ್ಯಾಖ್ಯಾನ : ಹೆಚ್. ಎಸ್. ಗೋಪಾಲ್, ಪ್ರಸ್ತುತಿ: ಡಾ. ಎ. ಎಸ್. ಶಂಕರನಾರಾಯಣ, 10.30 ಸವಿನೆನಪು

ಮೈಸೂರು ಮಿತ್ರ ಮಂಗಳವಾರ 23 ಜುಲೈ 2024

ಮೈಸೂರು ಪಾಲಿಕೆಯಿಂದ ಅಪಾಯಕಾರಿ ಮರದ ರೆಂಬೆಗಳ ತೆರವು

ಮೈಸೂರು, ಜು. 22(ಆರ್‌ಕೆ)- ನಿರಂತರ ಮಳೆ ಹಿನ್ನೆಲೆಯಲ್ಲಿ ಮೈಸೂರು ನಗರದಾದ್ಯಂತ ಅಪಾಯಕಾರಿ ಮರದ ರೆಂಬೆಗಳನ್ನು ಮೈಸೂರು ಮಹಾನಗರ ಪಾಲಿಕೆ ಅಧಿಕಾರಿಗಳು ಹಾಗೂ ಸಿಬ್ಬಂದಿ ತೆರವುಗೊಳಿಸುವ ಕಾರ್ಯ ಆರಂಭಿಸಿದ್ದಾರೆ.

ಇತ್ತೀಚೆಗಷ್ಟೇ ಕುಕ್ಕರಹಳ್ಳಿ ಕೆರೆ ಬಳಿ ಬೋಗಾದಿ ರಸ್ತೆಯಲ್ಲಿ ಒಣಗಿ ನಿಂತಿದ್ದ ಮರದ ರೆಂಬೆ ಬಿದ್ದು ದ್ವಿಚಕ್ರ ವಾಹನದಲ್ಲಿ ಹೋಗುತ್ತಿದ್ದ ಹಿರಿಯ ನಾಗರಿಕರೊಬ್ಬರು ಸಾವನ್ನಪ್ಪಿದ ಪ್ರಕರಣದಿಂದ ಎಚ್ಚೆತ್ತ ಪಾಲಿಕೆ ತೋಟಗಾರಿಕೆ ವಿಭಾಗದ ಅಸಿಸ್ಟೆಂಟ್ ಡೈರೆಕ್ಟರ್ ಮೋಹನ್‌ಗೌಡ, ಮೈಸೂರು ನಗರದಾದ್ಯಂತ ಸಮೀಕ್ಷೆ ನಡೆಸಿ ಒಣಗಿ ಬೀಳುವ ಹಂತದಲ್ಲಿರುವ ಮರದ ರೆಂಬೆಗಳನ್ನು ಗುರ್ತಿಸಿದ್ದು, ಇಂದಿನಿಂದ ತೆರವು ಕಾರ್ಯ ಆರಂಭಿಸಿದ್ದಾರೆ.

ಮಹಾರಾಜ ಜೂನಿಯರ್ ಕಾಲೇಜು ಹಿಂಭಾಗ ದಿ ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ ಬಳಿ ಮರದ ರೆಂಬೆಗಳು ಒಣಗಿ ನಿಂತಿದ್ದವು. ಅದೇ ರೀತಿ ಎಸ್‌ಜೆಸಿಇ-ಆರ್‌ಐಇ ನಡುವೆ ಚದುರಂಗ ರಸ್ತೆಯಲ್ಲಿ ಮರವೊಂದು ಟೊಳ್ಳಾಗಿ ಕಾಂಡ ಸಮೇತ ಮುರಿದು ಬಿದ್ದಿತ್ತು.



ಮರದ ರೆಂಬೆಗಳನ್ನು ಕತ್ತರಿಸುತ್ತಿರುವುದು

ಇಂದು ಪಾಲಿಕೆ ಅಧಿಕಾರಿಗಳು ಅಭಯ ತಂಡದ ನೆರವಿನೊಂದಿಗೆ ಕಾರ್ಯಾಚರಣೆ ನಡೆಸಿ ತೆರವುಗೊಳಿಸಿದರು.

ಸಯ್ಯಾಜಿರಾವ್ ರಸ್ತೆ, ಬಿ.ಎನ್. ರಸ್ತೆ, ಎಂಜಿ ರಸ್ತೆ, ಚಾಮರಾಜ ಜೋಡಿ ರಸ್ತೆ, ಜೆಎಲ್‌ಬಿ ರಸ್ತೆ, ಹುಣಸೂರು ರಸ್ತೆ, ವಾಲ್ಮೀಕಿ ರಸ್ತೆ, ಟೆಂಪಲ್ ರಸ್ತೆ ಸೇರಿದಂತೆ ಮೈಸೂರು ನಗರದಾದ್ಯಂತ ಅಪಾಯ ತಂದೊಡ್ಡುವ ಮರ ಹಾಗೂ ರೆಂಬೆಗಳನ್ನು ತೆರವುಗೊಳಿಸಲಾಗುತ್ತಿದೆ.

ಅಭಿನಂದನೆ...



ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ನೂತನ ಅಧ್ಯಕ್ಷರಾದ ಕೆ.ದೀಪಕ್ ಅವರನ್ನು ಇಂಡಿಯನ್ ಟಿವಿ ವ್ಯವಸ್ಥಾಪಕ ನಿರ್ದೇಶಕ ಎಸ್.ವೆಂಕಟೇಶ್ ಕುಮಾರ್ ಅಭಿನಂದಿಸಿದರು. ಚಿತ್ರದಲ್ಲಿ ಹಿರಿಯ ಪತ್ರಕರ್ತ ಯಶ್ವಂತ್ ಇತರರನ್ನು ಕಾಣಬಹುದು

ಪೈಪ್‌ಗಳಿಗೆ ಕಾಲು ಸಿಲುಕಿ ನರಳಿದ ಹಸು



ಮೈಸೂರಿನ ನಜರ್‌ಬಾದ್‌ನಲ್ಲಿ ಮಳೆ ನೀರು ಚರಂಡಿಯ ಪೈಪ್‌ಗಳ ನಡುವೆ ಕಾಲು ಸಿಲುಕಿಕೊಂಡು ನರಳುತ್ತಿರುವ ಹಸು.

ಮೈಸೂರು, ಜು.22(ಎಸ್‌ಬಿಡಿ)- ಚರಂಡಿಗೆ ನೀರು ಹರಿಯುವ ಜಾಗದಲ್ಲಿ ಅಳವಡಿಸಿರುವ ಪೈಪ್‌ಗಳ ನಡುವೆ ಹಸುವಿನ ಕಾಲು ಸಿಲುಕಿಕೊಂಡು ನರಳಿದ ಘಟನೆ ಮೈಸೂರಿನ ನಜರ್‌ಬಾದ್‌ನಲ್ಲಿ ಸೋಮವಾರ ನಡೆದಿದೆ.

ಇಲ್ಲಿನ ಮಲೆ ಮಹದೇಶ್ವರ ರಸ್ತೆ ಪಕ್ಕದಲ್ಲಿ ಮಳೆ ನೀರು ಚರಂಡಿಗೆ ಕಬ್ಬಿಣದ ಪೈಪ್‌ಗಳ ಜೋಡಣೆ ಮಾಡಲಾಗಿದೆ. ಖಾಲಿ ಜಾಗದಲ್ಲಿ ಮೇಯುತ್ತಿದ್ದ ಹಸು, ರಸ್ತೆ ಕಡೆಗೆ ಹೋಗುವಾಗ ಈ ಪೈಪ್‌ಗಳ ನಡುವೆ ಅದರ ಕಾಲುಗಳು ಸಿಲುಕಿಕೊಂಡಿವೆ. ಮೇಲೇಳಲು ಎಷ್ಟೇ ಪ್ರಯತ್ನಿಸಿದರೂ ಕಾಲುಗಳನ್ನು ಬಿಡಿಸಿಕೊಳ್ಳಲಾಗದೆ ನರಳಾಡಿದೆ.

ಸ್ಥಳೀಯರು ಹಸುವನ್ನು ಮೇಲೆತ್ತಲು ಪ್ರಯತ್ನಿಸಿದರಾದರೂ ಅದು ಸಾಧ್ಯವಾಗದಿದ್ದಾಗ ಪಶು ಸಂಗೋಪನಾ ಇಲಾಖೆ ಕಚೇರಿಯ ದೂರವಾಣಿ ಸಂಖ್ಯೆಗೆ ಕರೆ ಮಾಡಿದ್ದಾರೆ. ಆದರೆ ಸಂಪರ್ಕ ಸಾಧ್ಯವಾಗಲಿಲ್ಲ ಬಳಿಕ ಪೊಲೀಸ್ ಸಿಬ್ಬಂದಿ ಜೊತೆಗೆ ಹತ್ತಾರು ಜನ ಸೇರಿಕೊಂಡು ಹಸುವನ್ನು ರಕ್ಷಿಸಿದ್ದಾರೆ. ಆ ವೇಳೆ ಮೂಕ ಹಸು ಮತ್ತಷ್ಟು ನರಕಯಾತನೆ ಅನುಭವಿಸಿದೆ.

ಬೀದಿಗೆ ಬಿಡಬೇಡಿ: ಎರಡು ದಿನಗಳ ಹಿಂದೆ ಕರು ಹಾಕಿರುವ ಹಸುವನ್ನು ರಸ್ತೆಗೆ ಬಿಟ್ಟಿದ್ದರು. ಅದು ಮೇವು ತಿನ್ನುವ ಭರದಲ್ಲಿ ಚರಂಡಿಯ ಕಬ್ಬಿಣದ ಪೈಪುಗಳ ನಡುವೆ ಸಿಲುಕಿಕೊಂಡು ನರಕಯಾತನೆ ಅನುಭವಿಸಿತು ಎಂದು ತಿಳಿಸಿದ ಮೈಸೂರು ಹೃದಯವಂತ ಕನ್ನಡಿಗರ ಬಳಗದ ಸಂಸ್ಥಾಪಕ ರಾಜ್ಯಾಧ್ಯಕ್ಷ ಡಿಪಿಕೆ ಪರಮೇಶ್, ಕಾಮಧೇನು ಎಂದು ಪೂಜಿಸುವ ಹಸುವನ್ನು ಬೀದಿಗೆ ಬಿಡುವ ಮುನ್ನ ಪಾಲಕರು ಯೋಚಿಸಬೇಕು ಎಂದು ಮನವಿ ಮಾಡಿದ್ದಾರೆ.

ಬಿಡಾಡಿ ದನಗಳ ಸಮಸ್ಯೆ ನಗರದಲ್ಲಿ ಬಿಗಡಾಯಿಸಿದೆ. ಇದರಿಂದ ರಸ್ತೆ ಸಂಚಾರಕ್ಕೆ ಕಂಟಕ ಉಂಟಾಗಿದೆ. ಅಪಘಾತ ಸಂಭವಿಸಿದರೆ ಸಾವು-ನೋವು ಸಂಭವಿಸುತ್ತದೆ ವಾಹನ ಸವಾರರ ಜೊತೆಗೆ ಮೂಕ ಪ್ರಾಣಿಗಳೂ ನೋವು ಅನುಭವಿಸಬೇಕಾಗುತ್ತದೆ. ಈ ಬಗ್ಗೆ ಮೈಸೂರು ನಗರಪಾಲಿಕೆ ಸೂಕ್ತ ಕ್ರಮ ವಹಿಸಬೇಕು. ಪ್ರಾಣಿಗಳನ್ನು ರಸ್ತೆಗೆ ಬಿಡುವವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಸಹಾಯಕ ಪ್ರಾಧ್ಯಾಪಕರ ನೇಮಕಾತಿ: ಷರತ್ತು ಬದ್ಧ ಆದೇಶ ಇಲ್ಲ

ಬೆಂಗಳೂರು: ಸಹಾಯಕ ಪ್ರಾಧ್ಯಾಪಕರ ನೇಮಕಾತಿಗೆ ಸಂಬಂಧಿಸಿದ ಪ್ರಕರಣ ಹೈಕೋರ್ಟ್‌ನಲ್ಲಿದ್ದು, ನ್ಯಾಯಾಲಯ ತೀರ್ಪು ನೀಡಿದ ನಂತರವಷ್ಟೇ ನೇಮಕಾತಿ ಆದೇಶಗಳನ್ನು ನೀಡಲಾಗುತ್ತದೆ ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ. ಸುಧಾಕರ್ ತಿಳಿಸಿದರು. ವಿಧಾನ ಪರಿಷತ್‌ನಲ್ಲಿ ಬಿಜೆಪಿ ಚಿದಾನಂದ ಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಅವರು, 2023ರ ಮಾರ್ಚ್‌ನಲ್ಲಿ 1,208 ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಪ್ರಕಟಿಸಿದೆ. ಈ ಪಟ್ಟಿಯಿಂದ ಬಾಧಿತರಾದ ಅಭ್ಯರ್ಥಿಗಳು ಕೆಎಟಿ ಮೊರೆ ಹೋಗಿದ್ದರು. ಅಲ್ಲಿ ಅರ್ಜಿ ವಜಾಗೊಂಡಿತ್ತು. ಅದನ್ನು ಪ್ರಶ್ನಿಸಿ ಹೈಕೋರ್ಟ್ ಮೊರೆ ಹೋಗಿದ್ದಾರೆ. ಅಲ್ಲಿನ ಆದೇಶದ ಮೇರೆಗೆ ನಾವು ಮುಂದುವರಿಯಬೇಕಾಗುತ್ತದೆ. ಷರತ್ತು ಬದ್ಧ ನೇಮಕಾತಿ ಆದೇಶ ನೀಡಲು ಸಾಧ್ಯವಿಲ್ಲ ಎಂದರು.

ಹುಬ್ಬಳ್ಳಿಯಲ್ಲಿ ಇರಿದು ಪೂಜಾರಿಯ ಬರ್ಬರ ಕೊಲೆ

ಹುಬ್ಬಳ್ಳಿ, ಜುಲೈ 22- ಚಾಕುವಿನಿಂದ ಇರಿದು ದುಷ್ಕರ್ಮಿಗಳು ಪೂಜಾರಿಯನ್ನು ಹತ್ಯೆಗೈದಿರುವಂತಹ ಘಟನೆ ಈಶ್ವರನಗರದಲ್ಲಿ ನಡೆದಿದೆ. ವೈಷ್ಣವಿ ದೇವಸ್ಥಾನದ ಪೂಜಾರಿ ದೇವಪ್ಪಜ್ಜ ಬರ್ಬರ ಹತ್ಯೆಗೊಳಗಾದ ವ್ಯಕ್ತಿ. ನವನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ. ಕಳೆದ ಒಂದು ವರ್ಷದ ಹಿಂದೆ ಕೂಡ ಸ್ವಾಮೀಜಿ ಮೇಲೆ ದುಷ್ಕರ್ಮಿಗಳು ಅಟ್ಯಾಕ್ ಮಾಡಿದ್ದರು. ಅಂದು ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದರು. ಆದರೆ ಇಂದು ಸಾವನ್ನಪ್ಪಿದ್ದಾರೆ. ಕೊಲೆಗೆ ನಿಖರ ಕಾರಣ ತಿಳಿದುಬಂದಿಲ್ಲ.



ವೃದ್ಧೆ, ಹೊರಗುತ್ತಿಗೆ ನೌಕರ ನಾಪತ್ತೆ

ಮೈಸೂರು, ಜು.22(ಎಸ್‌ಪಿಎನ್)-ವೃದ್ಧೆ ಹಾಗೂ ಹೊರಗುತ್ತಿಗೆ ನೌಕರನೊಬ್ಬ ಕಾಣೆಯಾಗಿರುವ ಬಗ್ಗೆ ಮೈಸೂರು ತಾಲೂಕು ಇಲವಾಲ ಮತ್ತು ಸರಸ್ವತಿಪುರಂ ಠಾಣೆಯಲ್ಲಿ ಪ್ರತ್ಯೇಕ ದೂರು ದಾಖಲಾಗಿವೆ.



ಇಲವಾಲ ಠಾಣೆ: ಮೈಸೂರು ತಾಲೂಕು ಇಲವಾಲ ಹೋಬಳಿಯ ಸಾಗರಕಟ್ಟೆ ನಿವಾಸಿ 70 ವರ್ಷದ ಜಯಲಕ್ಷ್ಮಮ್ಮ ಅವರು ಜು.25ರಂದು ಮನೆಯಲ್ಲಿ ಯಾರೂ ಇಲ್ಲದ ವೇಳೆ ಹೊರ ಹೋಗಿದ್ದು, ಇಲ್ಲಿಯವರೆಗೂ ವಾಪಸ್ಸು ಬಂದಿಲ್ಲ. ಪರಿಚಿತರ ಮನೆಯಲ್ಲಿ ವಿಚಾರಿಸಿದರೂ ಸುಳಿವು ಸಿಕ್ಕಿಲ್ಲ. ಹಾಗಾಗಿ ಇವರನ್ನು ಹುಡುಕಿ ಕೊಡುವಂತೆ ಇಲವಾಲ ಪೊಲೀಸ್ ಠಾಣೆಯಲ್ಲಿ ಜಯಲಕ್ಷ್ಮಮ್ಮನವರ ಸೊಸೆ ವಿಜಯಲಕ್ಷ್ಮಿ ದೂರು ದಾಖಲಿಸಿದ್ದಾರೆ.



ಸರಸ್ವತಿಪುರಂ ಠಾಣೆ: ಮೈಸೂರಿನ ಬೋಗಾದಿ ಎರಡನೇ ಹಂತದ ನಿವಾಸಿ, ಸಬ್ ರಿಜಿಸ್ಟ್ರಾರ್ ಕಚೇರಿ(ಉತ್ತರ)ಯಲ್ಲಿ ಹೊರಗುತ್ತಿಗೆ ನೌಕರ 51 ವರ್ಷದ ಎಸ್.ದಯಾನಂದ, ಜು.12ರ ಮಧ್ಯಾಹ್ನದಂದು ಮನೆಯಿಂದ ಹೊರಹೋದವರು, ಇಲ್ಲಿಯವರೆಗೂ ಮನೆಗೆ ವಾಪಸ್ಸಾಗಿಲ್ಲ. ನಮಗೆ ಪರಿಚಿತರ ಮನೆಯಲ್ಲಿ ವಿಚಾರಿಸಿದರೂ ಪತ್ತೆಯಾಗದ ಕಾರಣ ನನ್ನ ಗಂಡನನ್ನು ಹುಡುಕಿ ಕೊಡುವಂತೆ ಅವರ ಪತ್ನಿ ಹೇಮಾವತಿ ಸರಸ್ವತಿಪುರಂ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ವರುಣ ನಾಲೆ ಏರಿ ಮೇಲೆ ಅವಧಿ ಮೀರಿದ ಪಾನೀಯಗಳ ರಾಶಿ!

● ಗ್ರಾಮೀಣ ಮಕ್ಕಳ ಜೀವದೊಂದಿಗೆ ಚೆಲ್ಲಾಟ ● ಪ್ರತಿಷ್ಠಿತ ಕಂಪನಿಗಳ ಪ್ರಾಡಕ್ಟ್‌ಗಳು ● ಮಕ್ಕಳನ್ನು ಆಕರ್ಷಿಸುವ ಈ ಪಾನೀಯ ಪ್ಯಾಕೆಟ್ ● ಕ್ರಿಮಿನಲ್ ಪ್ರಕರಣ ದಾಖಲಿಸಲು ಸಾರ್ವಜನಿಕರ ಆಗ್ರಹ

ಎಂ.ಟಿ.ಯೋಗೇಶ್ ಕುಮಾರ್

ಮೈಸೂರು,ಜು.22- ಅವಧಿ ಮುಗಿದಿರುವ ಪ್ರತಿಷ್ಠಿತ ಕಂಪನಿಗಳ ತಂಪು ಪಾನೀಯಗಳ ಪ್ಯಾಕೆಟ್ ಹಾಗೂ ಬಾಟಲಿಗಳನ್ನು ಶಾಂತವೇರಿ ಗೋಪಾಲಗೌಡ ನಗರ ಸಮೀಪ ವರುಣ ನಾಲೆ ಏರಿ ಮೇಲೆ ಸುರಿಯಲಾಗಿದ್ದು, ಇದರಿಂದ ಗ್ರಾಮೀಣ ಮಕ್ಕಳು ಹಾಗೂ ಪ್ರಾಣಿ-ಪಕ್ಷಿಗಳಿಗೆ ಸಂಚಕಾರ ಎದುರಾಗಿದೆ. ಸಂಬಂಧಿಸಿದ ಡೀಲರ್‌ಗಳ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸುವಂತೆ ಸಾರ್ವಜನಿಕರು ಆಗ್ರಹಿಸಿದ್ದಾರೆ.



ಶಾಂತವೇರಿ ಗೋಪಾಲಗೌಡನಗರದ ಬಳಿ ವರುಣ ನಾಲೆ ಏರಿ ಮೇಲೆ ಅವಧಿ ಮುಗಿದಿರುವ ಪಾನೀಯ ಹಾಗೂ ತಿನಿಸುಗಳ ಪ್ಯಾಕೆಟ್‌ಗಳ ರಾಶಿ

ಕಳೆದ ಕೆಲವು ವರ್ಷಗಳಿಂದ ಕೆಲ ಡೀಲರ್‌ಗಳು ದಾಸ್ತಾನು ಮಾಡಿದ್ದ ಪಾನೀಯ, ಆಹಾರ ಪದಾರ್ಥ ಸೇರಿದಂತೆ ಇನ್ನಿತರ ವಸ್ತುಗಳ ಅವಧಿ ಮೀರುತ್ತಿದ್ದಂತೆ ವೈಜ್ಞಾನಿಕ ವಿಧಾನದಲ್ಲಿ ನಾಶಪಡಿಸದೆ, ಹೊರವಲಯದ ರಸ್ತೆ ಬದಿ, ಗೋಮಾಳದಲ್ಲಿ ಬಿಸಾಡಿ ಕೈ ತೊಳೆದುಕೊಳ್ಳುವ ಪರಿಪಾಠ ಮುಂದುವರಿಸಿದ್ದಾರೆ. ಈ ಬೇಜವಾಬ್ದಾರಿ ಧೋರಣೆಯಿಂದ ಪ್ರಾಣಿ-ಪಕ್ಷಿ, ಜಾನುವಾರುಗಳ ಜೀವಕ್ಕೂ ಹಾನಿಯಾಗುತ್ತಿದ್ದು, ಮಕ್ಕಳಿಗೂ ಕಂಟಕವಾಗಿ ಪರಿಣಮಿಸುತ್ತಿದೆ. ಕೆಲ ವರ್ಷದ ಹಿಂದೆ ಚಾಮುಂಡಿಬೆಟ್ಟದ ತಪ್ಪಲಿನ ಖಾಲಿ ಜಾಗದಲ್ಲಿ ಅವಧಿ ಮುಗಿದ ತಿನಿಸು, ಪಾನೀಯ, ಜಾಮ್, ಎಣ್ಣೆಯಲ್ಲಿ ಕರಿದ ವಸ್ತುಗಳು ರಾಶಿ ಹಾಕಿ ಹೋಗಿದ್ದರು. ಇದನ್ನು ತಿಂದ ಗುಂಡೂರಾವ್‌ನಗರ, ಗೌರಿಶಂಕರ ನಗರ, ಗುಡಮಾದನಹಳ್ಳಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಜಾನುವಾರುಗಳು ಕರುಳು ಊದಿಕೊಂಡು ಉಸಿರಾಟದ ಸಮಸ್ಯೆಯಾಗಿ ಮೃತಪಡುತ್ತಿದ್ದವು.

ಪರಿಸ್ಥಿತಿಯ ಗಂಭೀರತೆಯ ಅರಿವಿದ್ದರೂ, ಕೆಲ ಡೀಲರ್‌ಗಳು ಸಮಾಜಕ್ಕೆ ಮಾರಕವಾದ ಧೋರಣೆ ಅನುಸರಿಸುತ್ತಿದ್ದು, ಅಮಾಯಕರ ಜೀವನದಲ್ಲಿ ಚೆಲ್ಲಾಟವಾಡುತ್ತಿದ್ದಾರೆ. ದಾಸ್ತಾನು ಮಾಡಲು ಲೈಸೆನ್ಸ್ ನೀಡುವಾಗ ಕೆಲವು ನಿಯಮವನ್ನು ಕಡ್ಡಾಯವಾಗಿ ಪಾಲಿಸಬೇಕೆಂಬ ಷರತ್ತು ಹಾಕಿದ್ದರೂ ಅವಧಿ ಮುಗಿದ ವಸ್ತುಗಳನ್ನು ಬೇಕಾಬಿಟ್ಟಿಯಾಗಿ ಎಸೆದು ಹೋಗುವ ಮೂಲಕ ಬೇಜವಾಬ್ದಾರಿ ಮೆರೆದಿದ್ದಾರೆ.

ಈ ಪಾನೀಯ ಬಾಟಲಿಗಳು ಮಕ್ಕಳನ್ನು ಆಕರ್ಷಿಸುತ್ತಿದ್ದು, ಯಾರಾದರೂ ಸೇವಿಸಿದರೆ ಪ್ರಾಣಕ್ಕೆ ಕುತ್ತು ಬರಲಿದೆ. ಅಲ್ಲದೆ, ಕೆಲ ಪಕ್ಷಿಗಳು ಪಾನೀಯ ಸೇವಿಸಿ ಅಸ್ವಸ್ಥಗೊಂಡಿವೆ. ಈ ಭಾಗದಲ್ಲಿ ಅಳಿವಿನಂಚಿನಲ್ಲಿರುವ ನರಿ ಸೇರಿದಂತೆ ಇನ್ನಿತರ ಪ್ರಾಣಿಗಳಿಗೂ ಈ ವಿಷಕಾರಿ ಪಾನೀಯ ಜೀವ ತೆಗೆಯುವ ಪಾನೀಯವಾಗಿ ಪರಿಣಮಿಸಿದೆ.

ಎಗ್ಗಿಲ್ಲದೆ ನಡೆಯುತ್ತಿದೆ: ಅವಧಿ ಮುಗಿದ ತಿನಿಸು, ಪಾನೀಯ ಪದಾರ್ಥಗಳನ್ನು ವೈಜ್ಞಾನಿಕ ವಿಧಾನದಲ್ಲಿ ನಾಶ ಮಾಡುವಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಅದಕ್ಕಾಗಿ ಕೆಲ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ. ಆದರೆ, ಕೆಲ ಡೀಲರ್‌ಗಳು ವೈಜ್ಞಾನಿಕ ವಿಧಾನದಲ್ಲಿ ನಾಶ ಮಾಡಲು ಹಣ ವಿನಿಯೋಗಿಸಬೇಕಾಗುತ್ತದೆ ಎಂಬ ಕಾರಣಕ್ಕೆ ನಿರ್ಜನ ಪ್ರದೇಶ, ಹೊರವಲಯದಲ್ಲಿ ರಾಶಿ ಸುರಿದು ಹೋಗುತ್ತಿದ್ದಾರೆ.



ಅಪಾಯ ಸಂಭವಿಸುವ ಮುನ್ನ: ವಿಷಕಾರಿ ಪದಾರ್ಥಗಳ ಸೇವಿಸಿ ಮನುಷ್ಯ, ಪ್ರಾಣಿ ಪಕ್ಷಿಗಳ ಪ್ರಾಣಕ್ಕೆ ಸಂಚಕಾರ ತಂದೊಡ್ಡುವ ಮುನ್ನವೇ ಜಿಲ್ಲಾಡಳಿತ, ಪೊಲೀಸ್ ಇಲಾಖೆ ಎಚ್ಚರವಹಿಸಬೇಕಾಗಿದೆ. ತೆರವುಗೊಳಿಸುವುದಕ್ಕೆ ಮಾತ್ರ ಸೀಮಿತಗೊಳ್ಳದೆ, ತಪ್ಪಿತಸ್ಥರನ್ನು ಪತ್ತೆ ಮಾಡಬೇಕು. ಸಂಬಂಧಪಟ್ಟ ಕಂಪನಿಗಳ ವಿರುದ್ಧವೂ ಪ್ರಕರಣ ದಾಖಲಿಸಬೇಕು. ಪ್ರತಿಯೊಂದು ಪ್ಯಾಕ್ ಮೇಲೂ ನಿಗದಿತ ಸಂಖ್ಯೆ ಕೋಡ್‌ವರ್ಡ್ ಇರುವುದರಿಂದ ಅವುಗಳು ಯಾವ ಡೀಲರ್‌ಗೆ ಸೇರಿದ್ದು ಎಂದು ತಿಳಿಯುತ್ತದೆ. ಇದನ್ನು ಪತ್ತೆ ಮಾಡಿ ಕಠಿಣ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಇವು ಇನ್ನಷ್ಟು ಹೆಚ್ಚಾಗುತ್ತದೆ ಎಂದು ಸಾರ್ವಜನಿಕರು ಅಭಿಪ್ರಾಯಪಟ್ಟಿದ್ದಾರೆ.

ಕಠಿಣ ಕ್ರಮ ಅನಿವಾರ್ಯ

ಲಲಿತಾದ್ರಿಪುರದ ರಸ್ತೆ, ಶಾಂತವೇರಿ ಗೋಪಾಲಗೌಡ ನಗರದ ಬಳಿ ವರುಣ ನಾಲೆ ಏರಿ ಮೇಲೆ ಅವಧಿ ಮುಗಿದಿರುವ ಪ್ರತಿಷ್ಠಿತ ಕಂಪನಿಗಳ ಪಾನೀಯ, ಜಾಮ್ ಸೇರಿದಂತೆ ಇನ್ನಿತರ ತಿನಿಸು ಪದಾರ್ಥಗಳನ್ನು ಕಿಡಿಗೇಡಿಗಳು ಸುರಿದು ಹೋಗಿದ್ದಾರೆ. ಇದನ್ನು ಯಾರಾದರೂ ಸೇವಿಸಿದರೆ ಅಪಾಯ ಕಟ್ಟಿಟ್ಟ ಬುತ್ತಿ. ಕಿಡಿಗೇಡಿಗಳನ್ನು ಪತ್ತೆ ಮಾಡಿ ಕಠಿಣ ಕ್ರಮ ಕೈಗೊಳ್ಳಬೇಕು.

-ಶೈಲಜೇಶ್, ಪರಿಸರ ಹೋರಾಟಗಾರ

ಎನ್‌ಆರ್ ಗ್ರೂಪ್‌ನಿಂದ ಮೈಸೂರಲ್ಲಿ ಟ್ಯಾಲೆಂಟ್ ಹಂಟ್ ಪ್ಲೇಯರ್ ಸೆಲೆಕ್ಷನ್ ಕ್ಯಾಂಪ್ ಯಶಸ್ವಿ

● ಶೀಘ್ರದಲ್ಲಿ ಇಬ್ಬರು ಕ್ರಿಕೆಟ್ ಪಟುಗಳ ಆಯ್ಕೆ

● ಮೈಸೂರು ವಾರಿಯರ್ಸ್ ತಂಡ ಪ್ರತಿನಿಧಿಸಲು ಅವಕಾಶ



ಮೈಸೂರಿನ ಮಾನಸ ಗಂಗೋತ್ರಿಯ ಎಸ್‌ಡಿಎನ್‌ಆರ್ ಒಡೆಯರ್ ಸ್ಟೇಡಿಯಂನಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಎನ್‌ಆರ್ ಗ್ರೂಪ್‌ನ ಟ್ಯಾಲೆಂಟ್ ಹಂಟ್ ಕ್ಯಾಂಪ್‌ನಲ್ಲಿ ಆಟಗಾರರು ತಮ್ಮ ಪ್ರತಿಭೆ ಪ್ರದರ್ಶಿಸಿದರು.

ಮೈಸೂರು,ಜು.22(ಪಿಎಂ)- ಮೈಸೂರು ವಾರಿಯರ್ಸ್ ಕ್ರಿಕೆಟ್ ತಂಡದ ಮಾಲೀಕತ್ವ ಹೊಂದಿರುವ ಎನ್.ಆರ್.ಗ್ರೂಪ್ ವತಿಯಿಂದ ಉದಯೋನ್ಮುಖ ಕ್ರಿಕೆಟ್ ಪಟುಗಳಿಗೆ ಅವಕಾಶ ಕಲ್ಪಿಸಲು 'ಟ್ಯಾಲೆಂಟ್ ಹಂಟ್' ಶೀರ್ಷಿಕೆಯಡಿ ಸೋಮವಾರ ನಡೆದ ಪ್ಲೇಯರ್ ಸೆಲೆಕ್ಷನ್ ಕ್ಯಾಂಪ್‌ನಲ್ಲಿ 200ಕ್ಕೂ ಹೆಚ್ಚು ಯುವ ಕ್ರಿಕೆಟ್ ಪಟುಗಳು ಭಾಗವಹಿಸಿದ್ದರು.

ಮೈಸೂರಿನ ಮಾನಸ ಗಂಗೋತ್ರಿಯ ಎಸ್‌ಡಿಎನ್‌ಆರ್ ಒಡೆಯರ್ ಸ್ಟೇಡಿಯಂನಲ್ಲಿ ನಡೆದ ಸೆಲೆಕ್ಷನ್ ಕ್ಯಾಂಪ್‌ನಲ್ಲಿ 55 ಮಧ್ಯಮ ವೇಗದ ಬೌಲರ್‌ಗಳು, 50 ಸ್ಪಿನ್ನರ್‌ಗಳು, 40 ಬ್ಯಾಟ್ಸ್‌ಮನ್‌ಗಳು, 40 ಆಲ್‌ರೌಂಡರ್‌ಗಳು ಹಾಗೂ 40 ವಿಕೆಟ್ ಕೀಪರ್‌ಗಳು ಸೇರಿದಂತೆ ಒಟ್ಟು 225 ಯುವ ಕ್ರಿಕೆಟ್ ಆಟಗಾರರು ಪಾಲ್ಗೊಂಡಿದ್ದರು.

ಈ ಪೈಕಿ ಆಯ್ಕೆಯಾಗಲಿರುವ ಇಬ್ಬರು ಆ.15ರಿಂದ ಸೆ.1ರವರೆಗೆ ಬೆಂಗಳೂರಿನ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ನಡೆಯುವ 2024ರ ಮಹಾರಾಜ ಟ್ರೋಫಿ ಕೆಎಸ್‌ಸಿಎ ಟಿ-20 ಪಂದ್ಯಾವಳಿಯಲ್ಲಿ ಮೈಸೂರು ವಾರಿಯರ್ಸ್ ತಂಡವನ್ನು ಪ್ರತಿನಿಧಿಸಲಿದ್ದಾರೆ. ಈ ಇಬ್ಬರು ಆಟಗಾರರು ಸದರಿ ಪಂದ್ಯಾವಳಿಗೂ ಮುನ್ನ 15 ದಿನಗಳ ಕಾಲ ಕಠಿಣ ತರಬೇತಿ ಪಡೆಯಲಿದ್ದಾರೆ.

ಮೈಸೂರು ವಾರಿಯರ್ಸ್ ತಂಡದ ಸಹಾಯಕ ಕೋಚ್ ವಿಜಯ್ ಮದ್ಯಾಳ್ಕರ್, ಬೌಲಿಂಗ್ ಕೋಚ್ ಆದಿತ್ಯ ಬಿ.ಸಾಗರ್ ಮತ್ತು ತಂಡದ ವ್ಯವಸ್ಥಾಪಕ ಎಂ.ಆರ್.ಸುರೇಶ್ ಅವರ ನೇತೃತ್ವದಲ್ಲಿ ಇಂದು ಸೆಲೆಕ್ಷನ್ ಕ್ಯಾಂಪ್ ನಡೆಯಿತು.

ಇದೇ ವೇಳೆ ಮಾತನಾಡಿದ ಮೈಸೂರು ವಾರಿಯರ್ಸ್ ತಂಡದ ಮಾಲೀಕರೂ ಆದ ಸೈಕಲ್ ಪ್ಯೂರ್ ಅಗರಬತ್ತಿ ವ್ಯವಸ್ಥಾಪಕ ನಿರ್ದೇಶಕ ಅರ್ಜುನ್ ರಂಗ, ಎನ್‌ಆರ್ ಗ್ರೂಪ್ ಯುವ ಕ್ರಿಕೆಟ್ ಪ್ರತಿಭಾವಂತರಿಗೆ ಸೂಕ್ತ ವೇದಿಕೆ ಒದಗಿಸಿ ಅವರ ಪ್ರತಿಭೆ ಪ್ರದರ್ಶನಕ್ಕೆ ಅವಕಾಶ ನೀಡುತ್ತಿದ್ದು, ಆ ಮೂಲಕ ಅವರು ರಾಜ್ಯವನ್ನು ಪ್ರತಿನಿಧಿಸುವ ಮಟ್ಟಿಗೆ ಬೆಳೆಸಲು ಬದ್ಧವಾಗಿದೆ ಎಂದು ತಿಳಿಸಿದರು.

ಇಂದು ನಾವು ಹಲವು ಪ್ರತಿಭೆಗಳ ಅಸಾಧಾರಣ ಕೌಶಲಗಳನ್ನು ನೋಡಿದ್ದೇವೆ. ಅವರು ಮೈಸೂರು ವಾರಿಯರ್ಸ್ ತಂಡದ ಪರವಾಗಿ ಆಡಿ ಯಶಸ್ಸುಗಳಿಸುವುದನ್ನು ನೋಡಲು ಉತ್ಸುಕರಾಗಿದ್ದೇವೆ ಎಂದು ಹರ್ಷ ವ್ಯಕ್ತಪಡಿಸಿದರು.

2024ರ ಮಹಾರಾಜ ಟ್ರೋಫಿ ಕೆಎಸ್‌ಸಿಎ ಟಿ-20 ಪಂದ್ಯಾವಳಿಯಲ್ಲಿ ಮೈಸೂರು ವಾರಿಯರ್ಸ್ ತಂಡದ ಜೊತೆಗೆ ಹುಬ್ಬಳ್ಳಿ ಟೈಗರ್ಸ್, ಬೆಂಗಳೂರು ಬ್ಲಾಸ್ಟರ್ಸ್, ಮಂಗಳೂರು ಡ್ರಾಗನ್ಸ್, ಗುಲ್ಬರ್ಗ ಮಿಸ್ಟಿಕ್ಸ್ ಮತ್ತು ಶಿವಮೊಗ್ಗ ಲಯನ್ಸ್ ತಂಡಗಳು ಸೇರಿದಂತೆ ಕರ್ನಾಟಕದ ಒಟ್ಟು ಆರು ತಂಡಗಳು ಸ್ಪರ್ಧಿಸಲಿವೆ. ಮೊದಲ ಸೆಲೆಕ್ಷನ್ ಕ್ಯಾಂಪ್ ಜು.12ರಂದು ಬೆಂಗಳೂರಿನ ಜಸ್ಟ್ ಕ್ರಿಕೆಟ್ ಅಕಾಡೆಮಿಯಲ್ಲಿ ನಡೆದಿದ್ದು, ಈ ಕ್ಯಾಂಪ್‌ನಲ್ಲಿ ಉತ್ತಮ ಪ್ರದರ್ಶನ ನೀಡಿದ ಆಟಗಾರರ ಆಯ್ಕೆ ಪ್ರಕ್ರಿಯೆ ಜೊತೆಗೆ ವಿವಿಧ ತಂಡಗಳಿಗೆ ಅವರ ನಿಯೋಜನೆ ಸಂಬಂಧ ಕೆಎಸ್‌ಸಿಎ ನಿರ್ಧರಿಸಲಿದೆ.

ಅಂತರ ಜಿಲ್ಲಾ ಖದೀಮನ ಸೆರೆ; 8 ಬೈಕ್‌ಗಳು ವಶಕ್ಕೆ

ಮೈಸೂರು, ಜು.22(ಎಸ್‌ಬಿಡಿ)- ಮೈಸೂರು ಜಿಲ್ಲಾ ಅಪರಾಧ ಪತ್ತೆ ದಳವು ಅಂತರ ಜಿಲ್ಲಾ ಬೈಕ್ ಕಳ್ಳನನ್ನು ಬಂಧಿಸಿ, 8 ವಾಹನಗಳನ್ನು ವಶಪಡಿಸಿಕೊಂಡಿದೆ.

ನಂಜನಗೂಡು ತಾಲೂಕು ಹುಲ್ಲಹಳ್ಳಿಯಲ್ಲಿ ಅಂಗಡಿ ಬಳಿ ನಿಲ್ಲಿಸಿದ್ದ ಬೈಕ್ ಹಾಡಹಗಲೇ ಕಳ್ಳತನವಾಗಿತ್ತು. ಈ ಸಂಬಂಧ ಹುಲ್ಲಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಜಿಲ್ಲೆಯ ವಿವಿಧೆಡೆ ದ್ವಿಚಕ್ರ ವಾಹನ ಕಳವು ಪ್ರಕರಣಗಳು ಹೆಚ್ಚಾಗಿದ್ದರಿಂದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್.ವಿಷ್ಣುವರ್ಧನ ಅವರು ಎಎಸ್ಪಿ ಎಲ್.ನಾಗೇಶ್ ನೇತೃತ್ವದಲ್ಲಿ ಜಿಲ್ಲಾ ಅಪರಾಧ ಪತ್ತೆ ದಳವನ್ನು ರಚಿಸಿದ್ದರು.

ಕೂಡಲೇ ಕಾರ್ಯಾಚರಣೆ ಆರಂಭಿಸಿದ ಎಎಸ್‌ಐ ಸತೀಶ್, ಸಿಬ್ಬಂದಿಗಳಾದ ಅಬ್ದುಲ್ ಲತೀಫ್, ಭಾಸ್ಕರ್, ಹಾಗೂ ಅಶೋಕ್ ಅವರನ್ನೊಳಗೊಂಡ ತಂಡ, ಆರೋಪಿಯನ್ನು ಬಂಧಿಸಿ ಆತ ಕಳವು ಮಾಡಿದ್ದ ಸುಮಾರು 4 ಲಕ್ಷ ರೂ. ಮೌಲ್ಯದ 8 ಬೈಕ್‌ಗಳನ್ನು ವಶಪಡಿಸಿಕೊಂಡಿದೆ. ಈ ಮೂಲಕ ಹುಲ್ಲಹಳ್ಳಿ ಠಾಣಾ ವ್ಯಾಪ್ತಿಯ ಹೀರೋ ಸ್ಪ್ಲೆಂಡರ್ ಪ್ಲಸ್(ಕೆಎ-09, ಹೆಚ್‌ಹೆಚ್-1915), ಮೈಸೂರು ನಗರದ ದೇವರಾಜ ಠಾಣೆಯ ಎರಡು ಪ್ಯಾಷನ್ ಪ್ರೋ(ಕೆಎ-55, ಕ್ಯೂ-2980 ಮತ್ತು ಕೆಎ-53, ಎಸ್-9297) ಹಾಗೂ ಹೋಂಡಾ ಪ್ಲಸ್(ಕೆಎ-09, ಇಹೆಚ್-7663), ಕೃಷ್ಣರಾಜ ಠಾಣೆಯ ಪ್ಯಾಷನ್ ಪ್ರೋ(ಕೆಎ-45, ಕೆ-9709), ಮಂಡ್ಯ ಪಶ್ಚಿಮ ಠಾಣೆಯ ಹೋಂಡಾ ಸ್ಪ್ಲೆಂಡರ್ ಪ್ಲಸ್(ಕೆಎ-11, ಡಬ್ಲ್ಯೂ-5811) ಹಾಗೂ ಹೋಂಡಾ ಸ್ಪೆಡರ್(ಕೆಎ-55, ಜೆ-2009) ಮತ್ತು ಮಂಡ್ಯ ಪೂರ್ವ ಠಾಣೆಯ ಸ್ಪ್ಲೆಂಡರ್ ಪ್ಲಸ್(ಕೆಎ-11, ಇಎಲ್-0048) ಕಳವು ಪ್ರಕರಣಗಳು ಪತ್ತೆಯಾದಂತಾಗಿದೆ.

ದಾಂಪತ್ಯ ಜೀವನಕ್ಕೆ ಕಾಲಿಡಲು ಸಜ್ಜಾದ ತರುಣ್ ಸುಧೀರ್-ಸೋನಲ್ ಜೋಡಿ

ಬೆಂಗಳೂರು: ಕಳೆದ ಕೆಲವು ದಿನಗಳಿಂದ ಸೋಷಿಯಲ್ ಮೀಡಿಯಾಗಳಲ್ಲಿ ಭಾರಿ ಚರ್ಚೆಗೆ ಗ್ರಾಸವಾಗಿದ್ದ ಕನ್ನಡ ನಟಿ ಸೋನಲ್ ಮತ್ತು ನಿರ್ದೇಶಕ ತರುಣ್ ಸುಧೀರ್ ಮದುವೆ ಸುದ್ದಿ, ಇದೀಗ ದೃಢವಾಗಿದೆ ಕಡೆಗೂ ತಮ್ಮಿಬ್ಬರ ನಡುವಿನ ಮದುವೆ ವಿಚಾರವನ್ನು ತರುಣ್ ಹಾಗೂ ಸೋನಲ್ ಅಧಿಕೃತವಾಗಿ ಘೋಷಿಸಿದ್ದಾರೆ.



ತಮ್ಮಿಬ್ಬರ ವಿವಾಹ ವಿಚಾರವನ್ನು ವಿಶೇಷ ವಿಡಿಯೋ ಹಂಚಿಕೊಳ್ಳುವ ಮೂಲಕ ಸ್ಪಷ್ಟಪಡಿಸಿದ್ದಾರೆ. 'ಕಾಟೇರ' ನಿರ್ದೇಶಕನ ಬಾಳಿಗೆ ಎಂಟ್ರಿಕೊಟ್ಟ ಸ್ಯಾಂಡಲ್‌ವುಡ್ ನಟಿ ಸೋನಲ್‌ಗೆ ಅಭಿಮಾನಿಗಳಿಂದ ಶುಭಾಶಯಗಳು ಹರಿದುಬರುತ್ತಿವೆ. ಚಿತ್ರಮಂದಿರದಲ್ಲಿ ವಿಭಿನ್ನವಾಗಿ ಫೋಟೋಶೂಟ್ ಮಾಡಿಸಿ ಸದ್ಯ ಎಲ್ಲರ ಗಮನಸೆಳೆದಿದ್ದಾರೆ.

ಇದೇ ಆಗಸ್ಟ್ 10,11ಕ್ಕೆ ತರುಣ್ ಮತ್ತು ಸೋನಾಲ್ ಸಪ್ತಪದಿ ತುಳಿಯಲಿದ್ದು, ಬೆಂಗಳೂರು-ಮೈಸೂರು ರಸ್ತೆಯಲ್ಲಿರುವ ಪೂರ್ಣಿಮಾ ಫ್ಯಾಲೆಸ್‌ನಲ್ಲಿ ನವಜೋಡಿಗಳ ಅದ್ದೂರಿ ವಿವಾಹ ಮಹೋತ್ಸವ ನಡೆಯಲಿದೆ.

ಶುಭಾಶಯ



ಯುವ ಮುಖಂಡ ಮಾರ್ಕೆಟ್ ಕೆ. ದಿನೇಶ್ ಅವರಿಗೆ ಹುಟ್ಟುಹಬ್ಬದ ಅಂಗವಾಗಿ ಅವರನ್ನು ನಗರ ಪಾಲಿಕೆ ಮಾಜಿ ಸದಸ್ಯ ಸಿ.ಮಾದೇಶ್, ಒಕ್ಕಲಿಗ ಮುಖಂಡ ವಿಕ್ರಾಂತ್ ಪಿ ದೇವೇಗೌಡ, ಬೋಟಿ ಬಜಾರ್ ಕೃಷ್ಣಪ್ಪ ಹಾಗೂ ಇತರರು ಶುಭಾಶಯ ಕೋರಿದರು

'ಅಭಿವ್ಯಕ್ತಿ ಸಂಪದ', 'ಕಾಡು ಮಲ್ಲಿಗೆ' ಕೃತಿ ಬಿಡುಗಡೆ

ಮೈಸೂರು,ಜು.22(ಎಸ್‌ಪಿಎನ್)- ಯುವಕರು ನಿರ್ಧರಿಸಿದ ಗುರಿ ತಲುಪುವತ್ತ ಗಮನ ಕೇಂದ್ರೀಕರಿಸಿ ಹೆಚ್ಚು ಕೆಲಸ ಮಾಡಬೇಕು. ಅನ್ಯರು ನೀಡುವ ತರಾವರಿ ಸಲಹೆಗಳನ್ನು ಕಡೆಗಣಿಸುವುದು ಉತ್ತಮ ಎಂದು ಮಹಾರಾಜ ಕಾಲೇಜಿನ ಕನ್ನಡ ಪ್ರಾಧ್ಯಾಪಕಿ ಡಾ.ಬಿ.ಪಿ.ಆಶಾಕುಮಾರಿ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಮೈಸೂರು ಜೆಎಲ್‌ಬಿ ರಸ್ತೆಯ ಎಂಜಿನಿಯರ್‌ಗಳ ಸಂಸ್ಥೆ ಸಭಾಂಗಣದಲ್ಲಿ ವಿಸ್ಮಯ ಬುಕ್ ಹೌಸ್ ಹೊರತಂದಿರುವ ಲೇಖಕ ಸಾತನೂರು ದೇವರಾಜು ರಚಿತ 'ಅಭಿವ್ಯಕ್ತಿ ಸಂಪದ' ಹಾಗೂ ಲೇಖಕ ಡಾ.ಬಿ.ಬಸವರಾಜು(ಕಂದ) ರಚಿತ 'ಕಾಡು ಮಲ್ಲಿಗೆ' ಕಿರು ಕಾದಂಬರಿ ಬಿಡುಗಡೆ ಸಮಾರಂಭದಲ್ಲಿ ಅವರು ಮಾತನಾಡಿದರು.

ನಮ್ಮ ಕಾರ್ಯವನ್ನು ಬೇರೆಯವರು ಮೆಚ್ಚಬಹುದು ಇಲ್ಲವೇ ಮೂಗು ಮುರಿಯಬಹುದು. ಯಾವುದಕ್ಕೂ ತಲೆಕೆಡಿಸಿಕೊಳ್ಳದೇ ನೀವು ಅಂದುಕೊಂಡ ಕ್ಷೇತ್ರದಲ್ಲಿ ಅಚ್ಚುಕಟ್ಟಾಗಿ ಕೆಲಸ ಮಾಡುತ್ತ, ಗುರಿ ತಲುಪುವುದರ ಕಡೆ ಗಮನಹರಿಸಬೇಕು. ಸ್ನೇಹಿತರು, ಪರಿಚಿತರು ನೀಡುವ ಸಲಹೆಗಳಲ್ಲಿ ಒಳ್ಳೆಯದ್ದನ್ನು ಪರಿಗಣಿಸಿ, ಜೀವನ ಕಟ್ಟಿಕೊಳ್ಳುವುದರ ಕಡೆ ಮುನ್ನಡೆಯಬೇಕು ಎಂದು ಹೇಳಿದರು.



ವಿಸ್ಮಯ ಬುಕ್ ಹೌಸ್ ಹೊರತಂದಿರುವ ಲೇಖಕ ಸಾತನೂರು ದೇವರಾಜು ರಚಿತ 'ಅಭಿವ್ಯಕ್ತಿ ಸಂಪದ' ಹಾಗೂ ಲೇಖಕ ಡಾ.ಬಿ.ಬಸವರಾಜು(ಕಂದ) ರಚಿತ 'ಕಾಡುಮಲ್ಲಿಗೆ' ಕಿರು ಕಾದಂಬರಿ ಬಿಡುಗಡೆಗೊಳಿಸಲಾಯಿತು.

ಸಾತನೂರು ದೇವರಾಜು ರಚಿತ 'ಅಭಿವ್ಯಕ್ತಿ ಸಂಪದ' ಓದುಗರಿಗೆ ಹತ್ತಿರವಾಗಿ, ಸಮಾಜಕ್ಕೆ ಬೇಕಾದ ಸಲಹೆಗಳು ಈ ಪುಸ್ತಕದಲ್ಲಿವೆ. ಈ ಪುಸ್ತಕದಲ್ಲಿನ ಲೇಖನಗಳನ್ನು ಓದಿದಾಗ ಒಮ್ಮೆಯಾದರೂ ಓದುಗನ ಜೀವನದಲ್ಲಿ ಘಟಿಸಿರುವಂತೆ ಭಾಸವಾಗುವ ರೀತಿ ಅನುಭವ ನೀಡುತ್ತವೆ ಎಂದರು.

ವಿಮರ್ಶಕ ಟಿ.ಸತೀಶ್ ಜವರೇಗೌಡ ಮಾತನಾಡಿ, ಲೇಖಕ ಡಾ.ಬಿ.ಬಸವರಾಜು(ಕಂದ) ರಚಿತ 'ಕಾಡು ಮಲ್ಲಿಗೆ'ಯ ಕಥೆಯನ್ನು ಸಿನಿಮಾ ನಿರ್ದೇಶಕರೊಬ್ಬರು ಸಿನಿಮಾ ನಿರ್ಮಿಸಲು ಕೇಳಿದ್ದರು. ಆದರೆ, ಡಾ.ಬಸವರಾಜು ಅನುಮತಿ ನೀಡಲಿಲ್ಲ ಯಾಕೆ ಕೊಡಲಿಲ್ಲ ಎಂಬುದು ಇಂದಿಗೂ ನನ್ನೊಳಗೆ ಯಕ್ಷ ಪ್ರಶ್ನೆಯಾಗಿ ಕಾಡುತ್ತಿದೆ. 'ಕಾಡು ಮಲ್ಲಿಗೆ' ತಳ ಸಮುದಾಯದ ನೋವುಗಳು, ಗ್ರಾಮೀಣ ಪ್ರದೇಶದ ಪಾತ್ರಗಳಿಗೆ ಹೆಚ್ಚಿನ ಆದ್ಯತೆಯನ್ನು ಲೇಖಕರು ನೀಡಿದ್ದಾರೆ ಎಂದರು.

ಇತ್ತೀಚಿನ ದಿನಗಳಲ್ಲಿ ಯುವ ಬರಹಗಾರರ ಕೃತಿಗಳಿಗೆ ವಿಮರ್ಶೆಗಳೇ ಬರುತ್ತಿಲ್ಲ ಹಾಗೂ ವಿಮರ್ಶಾ ಕ್ಷೇತ್ರದಲ್ಲಿ ತೊಡಗಿಸಿಕೊಳ್ಳುವವರ ಸಂಖ್ಯೆಯೂ ದಿನೇದಿನೆ ಕಡಿಮೆಯಾಗುತ್ತಿದೆ. ಒಂದು ಕೃತಿಗೆ ವಿಮರ್ಶೆ ಇಲ್ಲದಿದ್ದರೆ, ಸಮಾಜ ನಡುವೆ ಆ ಪುಸ್ತಕಗಳು ಹೆಚ್ಚು ದಿನ ಉಳಿಯುವುದಿಲ್ಲ. ಈ ನಿಟ್ಟಿನಲ್ಲಿ ಪ್ರಕಾಶಕರು, ಸಂಘ-ಸಂಸ್ಥೆಗಳು, ಮಾಧ್ಯಮಗಳು ಹೆಚ್ಚು ಹೆಚ್ಚು ವಿಮರ್ಶ ವಲಯವನ್ನು ಪ್ರೋತ್ಸಾಹಿಸಬೇಕು ಎಂದು ಮನವಿ ಮಾಡಿದರು.

ಕೃತಿ ಬಿಡುಗಡೆಗೊಳಿಸಿ ಮಾತನಾಡಿದ ಹಿರಿಯ ಲೇಖಕ ಪ್ರೊ.ಅರವಿಂದ ಮಾಲಗತ್ತಿ, ಭೂಮಿಗೆ ಬಿದ್ದ ಬೀಜ, ಎದೆಗೆ ಬಿದ್ದ ಅಕ್ಷರ ಇಂದಲ್ಲ, ನಾಳೆ ಫಲವನ್ನು ಕೊಡುವುದರಲ್ಲಿ ಯಾವುದೇ ಸಂಶಯವಿಲ್ಲ. ಹಾಗೆಯೇ ಈ ನೆಲದಲ್ಲಿ ಅನಾದಿ ಕಾಲದಿಂದಲೂ ಜೀವಂತವಾಗಿರುವ ಭೇದ ನಿರ್ಮೂಲನೆಯ ಬೇರು-ಕಾಂಡ-ಚಿಗುರುಗಳನ್ನು ಜೀವಪರ, ಚೈತನ್ಯಶೀಲ, ಗ್ರಾಮ ಕೇಂದ್ರಿತವಾಗಿ ಶೋಧಿಸಿದಂತಿರುವ ಕಾದಂಬರಿ 'ಕಾಡು ಮಲ್ಲಿಗೆ'ಯಲ್ಲಿ ಅಡಕವಾಗಿದೆ. ಪ್ರಸ್ತುತ ಕಾದಂಬರಿಯು ಸಮಸ್ತ ಭಾರತದೊಳಗಣ ಜೀವಂತವಾಗಿರುವ ಜಾತೀಯತೆ, ಅಸ್ಪೃಶ್ಯತೆ, ದಲಿತ ಶೋಷಣೆ, ಸ್ತ್ರೀ ಶೋಷಣೆ, ಭೂಮಾಲೀಕರ ಅಟ್ಟಹಾಸ ಹಾಗೂ ಕುಡಿತದಿಂದ ಉಂಟಾಗುವ ಬಡತನ, ದೈಹಿಕ ನಿಶ್ಶಕ್ತೆ, ಆರ್ಥಿಕ ದಾರಿದ್ರ್ಯ ಸೇರಿದಂತೆ ಇತರೆ ಸಂಗತಿಗಳನ್ನು ಸೂಕ್ಷ್ಮವಾಗಿ ಕಟ್ಟಿಕೊಡುತ್ತದೆ ಎಂದರು. ವೇದಿಕೆಯಲ್ಲಿ ಹಿರಿಯ ಸಾಹಿತಿ ಪ್ರೊ.ಸಿ.ನಾಗಣ್ಣ ಅಧ್ಯಕ್ಷತೆ ವಹಿಸಿದ್ದರು. ವಿಸ್ಮಯ ಬುಕ್‌ಹೌಸ್‌ನ ಪ್ರಕಾಶ್ ಚಿಕ್ಕಪಾಳ್ಯ ಇತರರು ಉಪಸ್ಥಿತರಿದ್ದರು.

> ಅಂಧರು ಕೇಳಿಸಿಕೊಳ್ಳುವ ಇನ್ನೊಂದು ಸ್ವರೂಪವೇ ಆಡಿಯೋ. ಅಂತೆಯೇ ಕಣ್ಣಿದ್ದವರೂ ಪುಸ್ತಕಗಳನ್ನು ಆಡಿಯೋ ಮೂಲಕ ಕೇಳಿಸಿಕೊಳ್ಳುತ್ತಾರೆ. ಹಾಗಾಗಿ ಓದುಗರ ರೂಪ- ಆಲೋಚನೆ ಬದಲಾಗುತ್ತಿದೆ. ನೋಡುವ, ಕೇಳುವ ಪರಿಭಾಷೆ ಬದಲಾಗಿರುವುದಕ್ಕೆ ಇವೆರಡು ಉದಾಹರಣೆಯಾಗಿದೆ.
>
> - ಪ್ರೊ.ಅರವಿಂದ ಮಾಲಗತ್ತಿ, ಹಿರಿಯ ಸಾಹಿತಿ

ನಕ್ಕರೆ ಅದೇ ಸ್ವರ್ಗ

ಗುಂಡ : ಎಲ್ಲಿಂಯುವರೆಗೆ ಓದಿದ್ದು?
ಪತ್ನಿ : ಬಿ.ಎ.
ಗುಂಡ : ಓದಿರೋದೆ ಎರಡು ಅಕ್ಷರ. ಅದು ಉಲ್ಟಾ!!!

ಮೈಸೂರು ಮಿತ್ರ

ಮಂಗಳವಾರ, 23 ಜುಲೈ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ..........

ಮನಸ್ಸಿಗೆ ಮದವೇರಿದಾಗ ಸ್ಮಶಾನದಲ್ಲಿ ತಿರುಗಾಡಿ ಬರಬೇಕಂತೆ, ಏಕೆಂದರೆ ಅಲ್ಲಿ ನಾನು, ನನ್ನಿಂದಲೇ ಎಂದು ಹೇಳಿದ ಎಷ್ಟೋ ಜನ ಮಣ್ಣಾಗಿರುವುದು ಕಾಣಸಿಗುತ್ತಾರೆ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಹೋಗುವುದು ಮೂಡಿದ ಹೊತ್ತು, ಹೋಗೋದಿಲ್ಲ ಆಡಿದ ಮಾತು.

ನಿಮ್ಮ ಪತ್ರಗಳು

ಬೆಂಕಿಯಿಲ್ಲದೇ ಹೊಗೆಯಾಡಲಾರದು

ಮಾನ್ಯರೇ,

ಕಾಂಗ್ರೆಸ್ ಸರ್ಕಾರದ ಮುಡಾ ಹಗರಣ ಹಾಗೂ ವಾಲ್ಮೀಕಿ ನಿಗಮದ ಹಗರಣ ನೋಡಿದಾಗ ಯಾವುದೇ ರಾಜಕಾರಣಿಯ ಮೇಲೆ ಭ್ರಷ್ಟಾಚಾರದ ಆಪಾದನೆಗಳು ಬಂದಾಗ ಬೆಂಕಿಯಿಲ್ಲದೇ ಹೊಗೆಯಾಡಲಾರದು ಎಂಬ ಸಾಮಾನ್ಯ ಅಭಿಪ್ರಾಯ ಸಾರ್ವಜನಿಕರದು. ಹಾಗೆಂದ ಮಾತ್ರಕ್ಕೆ ಸಾರ್ವಜನಿಕ ಜೀವನದಲ್ಲಿರುವವರು ಸೀಸರನ ಹೆಂಡತಿಯಂತೆ ಸಂಶಯಾತೀತರಾಗಿರಬೇಕೆಂಬುದನ್ನು ಪಾಲಿಸುವಷ್ಟು ಒಳ್ಳೆಯ ರಾಜಕಾರಣಿಗಳು ಇಂದು ಯಾವ ಪಕ್ಷದಲ್ಲೂ ಇಲ್ಲವೆಂಬುದು ವಾಸ್ತವಿಕ ಸತ್ಯ.

ಆದರೆ ಹಗರಣಗಳನ್ನು ಸಿಕ್ಕಿ ಹಾಕಿಕೊಳ್ಳದೇ ಹೇಗೆ ಮಾಡಬಹುದು ಎಂಬುದರಲ್ಲಿ ನಿಷ್ಣಾತರು. ಒಂದು ವೇಳೆ ಸಿಕ್ಕಿ ಹಾಕಿಕೊಂಡರೂ ಜಾತಿ, ಹಣ, ಅಧಿಕಾರ ಬಲದಿಂದ ಜನರನ್ನು ಹೇಗೆ ಯಾಮಾರಿಸಬೇಕೆಂಬುದನ್ನು ಚೆನ್ನಾಗಿ ಕರಗತ ಮಾಡಿಕೊಂಡಿರುತ್ತಾರೆ. ಅಲ್ಲದೆ ಹೊಸ ಕಳ್ಳ ಒಬ್ಬ ಸಿಕ್ಕಿದಾಗ ಹಳೆ ಕಳ್ಳನನ್ನು ಜನ ಸಲೀಸಾಗಿ ಮರೆಯುತ್ತಾರೆ ಎಂಬುದು ಎಲ್ಲರಿಗೂ ತಿಳಿದಿದೆ.

ಅಷ್ಟರ ಮಟ್ಟಿಗೆ ಸಾರ್ವಜನಿಕ ನೆನಪುಗಳು ಕ್ಷಿಣ ಎಂಬುದು ವಾಸ್ತವ. ಈ ನಾಟಕ, ಬೀದಿ ಹೋರಾಟ ಧರಣಿ ಸತ್ಯಾಗ್ರಹಗಳೆಲ್ಲವೂ ಮುಂದೆ ಅಧಿಕಾರ ಹಿಡಿಯಲು ಎಷ್ಟರ ಮಟ್ಟಿಗೆ ಸಹಾಯಕ ಎಂಬುದರ ಮೇಲೆ ಅದರ ತೀವ್ರತೆ, ಗಂಭೀರತೆ ಅವಲಂಬಿಸಿರುತ್ತದೆ.

ಕಳೆದ ವರ್ಷದ ಆರಂಭದಲ್ಲಿ ಸದ್ದು ಮಾಡಿದ್ದ ಶೇ.40 ಹೋರಾಟದ ತಾರ್ಕಿಕ ಅಂತ್ಯ ನಿಜಕ್ಕೂ ಸಾಧ್ಯವೇ? ತಮ್ಮ ಗ್ಯಾರಂಟಿ ಯೋಜನೆಗಳಿಗೆ ಈ ಶೇ. 40ಕ್ಕೆ ಕಡಿವಾಣ ಹಾಕಿಯೇ ಸಂಪನ್ಮೂಲ ಒದಗಿಸುವುದಾಗಿ ಬೊಗಳೆ ಬಿಟ್ಟವರು ಇಂದು ಯೋಜನೆ ಜಾರಿಗೆ ಒಂದೊಂದು ತಿಂಗಳ ಖರ್ಚಿಗೂ ಜನರ ಜೇಬಿಗೆ ಕತ್ತರಿ ಹಾಕುತ್ತಿರುವುದನ್ನು ವಿರೋಧಿಸುವವರು ನಿಮ್ಮ ಹಿಂದಿನ ಬಡಾಯಿಗಳ ಸತ್ಯಾಸತ್ಯತೆ ಕಥೆ ಏನಾಯಿತು ಎಂದು ಜಗ್ಗಿಸಿ ಕೇಳುತ್ತಿಲ್ಲ. ಕಳ್ಳನಿಗೆ ಮತ್ತೊಬ್ಬ ಕಳ್ಳನ ತಂತ್ರಗಳು ಪೊಲೀಸಿನವರಿಗಿಂತ ಜಾಸ್ತಿ ಗೊತ್ತಿರುತ್ತದೆ ಎಂಬ ಮಾತೇ ಉಂಟಲ್ಲ. ಒಟ್ಟಿನಲ್ಲಿ ಇವರ ದೊಂಬರಾಟವನ್ನು ನೋಡುತ್ತಾ ಐದು ವರ್ಷಕ್ಕೊಮ್ಮೆ ಸಿಕ್ಕ ಅವಕಾಶದಲ್ಲಿ ಸ್ವಲ್ಪ ಕಡಿಮೆ ಕಳ್ಳ ಎಂದು ಒಬ್ಬನನ್ನು ಚುನಾಯಿಸಿ ಮತ್ತೆ ಐದು ವರ್ಷ ಹಲುಬುತ್ತಾ ಕಾಲ ಕಳೆಯುವ ಪಾಡು ಮತದಾರರದು. ಸಾರ್ವಜನಿಕ ಜೀವನದಲ್ಲಿ ನೈತಿಕ ಮೌಲ್ಯಗಳನ್ನು ಗುರುತಿಸಿ, ಬೆಳಸಿ, ಅನಿವಾರ್ಯವಾಗಿಸುವವರೆಗೂ ಈ ಗೋಳು ತಪ್ಪಿದ್ದಲ್ಲ.

–ಶಿವಮೊಗ್ಗ ನಾ. ದಿನೇಶ್ ಅಡಿಗ, ಮೈಸೂರು.

ಅಯ್ಯೋ, ಎಂಥ ಕಾಲ ಬಂತಪ್ಪ!

ಮಾನ್ಯರೆ,

ನಾಯಿಗಳ ಮೇಲೆ ಅತ್ಯಾಚಾರವೆಸಗಿ ಅವುಗಳನ್ನು ಕೊಲ್ಲುತ್ತಿದ್ದ ವ್ಯಕ್ತಿಗೆ ಆಸ್ಟ್ರೇಲಿಯಾದ ಸಿಡ್ನಿಯ ನ್ಯಾಯಾಲಯವೊಂದು 249 ವರ್ಷಗಳ ಕಠಿಣ ಶಿಕ್ಷೆ ವಿಧಿಸಿರುವ ಬಗ್ಗೆ ಮಾಧ್ಯಮಗಳಲ್ಲಿ ವರದಿ ಪ್ರಕಟವಾಗಿದೆ.

ಈ ತೀರ್ಪಿನಿಂದಾಗಿ ಆತ ಬದುಕಿರುವವರೆಗೂ ಜೈಲಿನಲ್ಲೇ ಕೊಳೆಯಬೇಕಾಗಿದೆ. ಆಡಮ್ ಬ್ರಿಟನ್ ಎಂಬಾತ ಹತ್ತಾರು ನಾಯಿಗಳ ಮೇಲೆ ಅತ್ಯಾಚಾರ ಮಾಡಿ ಅವುಗಳನ್ನು ಕೊಂದಿದ್ದ. ಅರೇ, ಅವನಿಗೇನು ಬಂದಿತ್ತು ದೊಡ್ಡರೋಗ! ಪ್ರಾಣಿಗಳ ಮೇಲೆ ಅತ್ಯಾಚಾರ ನಡೆಸುವುದು ನಮ್ಮ ದೇಶದ ಕಾನೂನಿನ ಪ್ರಕಾರ ಶಿಕ್ಷಾರ್ಹ ಅಪರಾಧ ಕೂಡ ಹೌದು. ಮನುಷ್ಯನ ವಿಕೃತಿಗಳು ಎಲ್ಲೇ ಮೀರುತ್ತಿದೆ. ನಾಯಿಯ ಮೇಲೆ ಅತ್ಯಾಚಾರ ನಡೆಸಬೇಕಾದರೆ, ಆತನ ಮನಸ್ಥಿತಿ ಹೇಗಿರಬೇಡ! ಅಯ್ಯೋ ಎಂಥ ಕಾಲ ಬಂತಪ್ಪ ! ಎಷ್ಟಾದರೂ ಇದು ಕಲಿಗಾಲವಲ್ಲವೇ, ಏನು ಬೇಕಾದರೂ ನಡೆಯಬಹುದು.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ವಿವೇಕಾನಂದನಗರ, ಮೈಸೂರು

ಭಯೋತ್ಪಾದನೆ ಬಗ್ಗೆ ಕಠಿಣ ಕ್ರಮ ಕೈಗೊಳ್ಳಿ

ಮಾನ್ಯರೆ,

ಕಾಶ್ಮೀರ ಕಣಿವೆಯಲ್ಲಿ ಭಯೋತ್ಪಾದಕರ ದಾಳಿ ಮತ್ತೆ ಅಟ್ಟಹಾಸ ಮೆರೆದಿದೆ. ತಡರಾತ್ರಿ ಭಯೋತ್ಪಾದಕರೊಂದಿಗೆ ನಡೆದ ಭೀಕರ ಗುಂಡಿನ ಕಾಳಗದಲ್ಲಿ ಗಾಯಗೊಂಡಿದ್ದ ಒಬ್ಬ ಕ್ಯಾಪ್ಟನ್ ಸೇರಿ ನಾಲ್ವರು ಸೈನಿಕರು ಹುತಾತ್ಮರಾಗಿದ್ದಾರೆ.

ಕೆಲವು ವರ್ಷಗಳಲ್ಲಿ ಉಗ್ರಾಮಿಗಳ ಹಾವಳಿ ಕಡಿಮೆಯಾಗಿದ್ದರೂ ಮೂರು ತಿಂಗಳಿಂದ ಮತ್ತೆ ಭಯೋತ್ಪಾದಕರ ದಾಳಿ ಪ್ರಕರಣ ಹೆಚ್ಚುತ್ತಿರುವುದು ಗಂಭೀರ ವಿಷಯ. ಉಗ್ರ ಸಂಘಟನೆಗಳು ಸ್ಥಳೀಯರಿಂದ ಮಾಹಿತಿ ಸಂಗ್ರಹಿಸಿ ಇಂಥ ದಾಳಿ ನಡೆಸುತ್ತಿದೆ ಎಂಬುದು ಗುಪ್ತಚರ ಮೂಲಗಳು ಹಲವು ಸಂದರ್ಭದಲ್ಲಿ ಸ್ಪಷ್ಟ ಪುರಾವೆಗಳನ್ನು ಹೇಳಿವೆ ಎಂದು ಮಾಧ್ಯಮಗಳ ಮೂಲಕ ತಿಳಿದಿದೆ. ಭಯೋತ್ಪಾದಕರಿಗೆ ಮತ್ತು ಭಯೋತ್ಪಾದನಾ ಕೃತ್ಯಗಳಿಗೆ ಸಹಕರಿಸುವವರ ವಿರುದ್ಧ ಕೇಂದ್ರ ಸರ್ಕಾರ ಕಠಿಣ ಕ್ರಮ ಕೈಗೊಳ್ಳಲಿ.

–ಪಿ.ಸಿಕಂಗಾಣಿಸೋಮು, ಕ್ಯಾತಮಾರನಹಳ್ಳಿ, ಮೈಸೂರು.

ಸಾನೆಟ್‌ನ ಪೂರ್ಣಪಾಠ

ಮಾನ್ಯರೆ,

ಇತ್ತೀಚೆಗೆ ನಗರದಲ್ಲಿ ನಡೆದ ಸಮಾರಂಭವೊಂದರಲ್ಲಿ ಪ್ರಸಿದ್ಧ ವಾಗ್ಮಿ ಎಂ. ಕೃಷ್ಣೇಗೌಡರು ನಾನು ಬಹಳ ಹಿಂದೆ ಬರೆದ ಈ (ಸಾನೆಟ್) ಕವನವನ್ನು ಪ್ರಶಂಸಾಪೂರ್ವಕವಾಗಿ ಭಾಗಶಃ ಉದ್ಧರಿಸಿದರು. ಅದರ ಪೂರ್ಣಪಾಠ ಇಲ್ಲಿದೆ:

ಇದು ನಗರ, ಡಿಟಿ, ಬರಿಯ ನಗರವಾದೊಡೆ ಇದಕೆ
ಕವಿತೆ ಹಡೆಯುವ ಕಸುವೆ? ಅತ್ತ ಕಡೆ ಗಿರಿಕಲಶ,
ಇತ್ತ ಕಡೆ ಕೆರೆಯ ಕನ್ನಡಿ–ನಡುವೆ ನಿಂತಿಹುದು
ಮರಮರದ ಹೊದರಿನಲಿ ಮಂಗಳಾಶ್ರಮದಂತೆ!
ಶ್ರೀಗಂಧದುಸಿರು, ದಂತದ ತಿರುಳು, ಮಲ್ಲಿಗೆ ಹುರುಳು,
ವಾಣಿವೀಣೆಯ ಚದುರು ಬೆರೆತಾದುದಿದು. ಮಕ್ಕಳ
ಲೋಕ ವರ್ಷಕ್ಕೊಮ್ಮೆ; ಅದನುಳಿಯ ಸರ್ವದಾ
ಚಾಮುಂಡಿಯಂಕದಲಿ ಮಲಗಿರುವ ಮುಗ್ಧ ಶಿಶು!
ನಗರ–ದಿವ್ಯಾಕಾಮಗಳ ಬೆಸುಗೆ; ಶಿವದೊಡನೆ
ಸೌಂದರ್ಯ ಕೂಡಿ ಮಾಡುವುದಿಲ್ಲ; ಗತವೈಭವದ ಹೊಗರು
ಹಾಯುತ್ತದೆ ವರ್ತಮಾನದ ಬೆಡಗು ಬಿಂಕದೊಳು!
ಅಚ್ಚಕನ್ನಡದ ಮೆಚ್ಚಿನ ಬೀಡು, ಹೃತ್ಕೋಶ;
ಆಧುನಿಕ ವಾಲ್ಮೀಕಿ ಗಂಗೋತ್ರಿ ಸಂಪೂತ
ಕಲ್ಯಾಣಗಿರಿ ಜಯಿಸಲಾ ನಮ್ಮ ನಮನವಿದೋ!

– ಸಿಪಿಕೆ, ಮೈಸೂರು.



ಬಿಚ್ಚು ನುಡಿ

ವಿಕ್ರಂ ಮುತ್ತಣ್ಣ

ನೀವು ಮೊದಲು ಉದ್ಯೋಗ ಸೃಷ್ಟಿಸಿ; ಬಳಿಕ ಮೀಸಲಿರಿಸಿ





ರಾಜ್ಯದಲ್ಲೇ ಅತ್ಯಂತ ಬೃಹತ್ ಕೈಗಾರಿಕಾ ವಲಯ ಎಂಬ ಖ್ಯಾತಿ ಪಡೆದಿರುವ ಮೈಸೂರಿನ ಹೆಬ್ಬಾಳ ಕೈಗಾರಿಕಾ ಪ್ರದೇಶದ ರಸ್ತೆಗಳ ದುಸ್ಥಿತಿ

ಕರ್ನಾಟಕ ರಾಜ್ಯ ಸರ್ಕಾರ ಇತ್ತೀಚೆಗೆ ರಾಜ್ಯ ವಿಧಾನ ಮಂಡಲದಲ್ಲಿ ಮಂಡಿಸಲು ಉದ್ದೇಶಿಸಿದ್ದ ಖಾಸಗಿ ವಲಯದಲ್ಲಿ ಕನ್ನಡಿಗರಿಗೆ ಉದ್ಯೋಗ ಮೀಸಲಾತಿ ಕಲ್ಪಿಸುವ ವಿಧೇಯಕವು ಈಗ ಗೊಂದಲದ ಗೂಡಾಗಿದೆ.

ಕಳೆದ ಸೋಮವಾರ (ಜು.15), ಸದರಿ ವಿಧೇಯಕ ಸಚಿವ ಸಂಪುಟದ ಅನುಮೋದನೆಯನ್ನೇನೋ ಪಡೆಯಿತು.

ಅದರ ಮಾರನೇ ದಿನ, ಅಂದರೆ ಮಂಗಳವಾರ (ಜು.16) ಮುಖ್ಯಮಂತ್ರಿ ಸಿದ್ದರಾಮಯ್ಯ ಅತ್ಯುತ್ಸಾಹದಿಂದಲೇ ಅದನ್ನು ಘೋಷಣೆ ಕೂಡ ಮಾಡಿದರು.

ಅದರ ಮಾರನೇ ದಿನ ಬುಧವಾರದ ವೇಳೆಗೆ ವಿಧೇಯಕವನ್ನು ತಡೆಹಿಡಿಯಲಾಯಿತು.

ಅದರ ಮಾರನೇ ದಿನ ಅಂದರೆ ಗುರುವಾರ ವಿಧೇಯಕದ ಮೇಲೆ ಸಚಿವ ಸಂಪುಟದಲ್ಲಿ ವಿಸ್ತೃತವಾದ ಚರ್ಚೆ ಆಗಬೇಕಿದೆ. ಅದನ್ನು ಮಾಡಿದ ನಂತರ ಮಂಡಿಸುತ್ತೇವೆ ಎಂದು ಮುಖ್ಯಮಂತ್ರಿಗಳು ತಿಳಿಸಿ, ಕೈತೊಳೆದುಕೊಂಡರು. ಆಹಾ ಎಂತಹ ವಿಪರ್ಯಾಸ!

ಒಂದು ಸರ್ಕಾರವು ಲಕ್ಷಾಂತರ ಕುಟುಂಬಗಳ ಜೀವನೋಪಾಯದ ಹಾಗೂ ಪ್ರಮುಖವಾಗಿ ಉದ್ಯಮಗಳ ಮೇಲೆ ಪರಿಣಾಮ ಉಂಟು ಮಾಡಬಲ್ಲ ಕಾಯಿದೆಯ ವಿಚಾರದಲ್ಲಿ ಈ ರೀತಿ ನಡೆದುಕೊಳ್ಳುವುದು ಜವಾಬ್ದಾರಿ ನಡೆಯಲ್ಲ.

ಕರ್ನಾಟಕ ಕೈಗಾರಿಕಾ ಉದ್ಯೋಗ ನಿಯಮಾವಳಿ 2024 ಕಾಯ್ದೆ, ರಾಜ್ಯದಲ್ಲಿನ ಎಲ್ಲಾ ಕೈಗಾರಿಕೆಗಳು ಹಾಗೂ ಇನ್ನಿತರ ಸಂಸ್ಥೆಗಳು, ಸ್ಥಳೀಯ ಅಭ್ಯರ್ಥಿಗಳನ್ನು ನಿರ್ವಹಣಾ ಹುದ್ದೆಗಳಲ್ಲಿ ಶೇಕಡಾ 50ರಷ್ಟು ಹಾಗೂ ನಿರ್ವಹಣೇತರ ಹುದ್ದೆಗಳಿಗೆ ಶೇಕಡಾ 70ರಷ್ಟು ಅಭ್ಯರ್ಥಿಗಳನ್ನು ನೇಮಕ ಮಾಡಿಕೊಳ್ಳಬೇಕೆಂದು ಹೇಳುತ್ತದೆ.

ಇಂತಹ ಕಠಿಣ ರೀತಿಯ ಮೀಸಲು (quota) ನೀತಿಯು, ಒಂದು ಹಾಲಿ ಕೈಗಾರಿಕೆಗಳು ರಾಜ್ಯದಿಂದ ಕಾಲ್ತೆಗೆಯುವಂತೆ ಮಾಡುವ ಸಾಧ್ಯತೆಗಳಿವೆ. ಮತ್ತೊಂದು, ಹೊಸ ಉದ್ದಿಮೆದಾರರಲ್ಲಿ ನಿರುತ್ಸಾಹ ಉಂಟು ಮಾಡಿ ರಾಜ್ಯವನ್ನು ಬಲಹೀನಗೊಳಿಸಬಹುದು.

ಇಂತಹ ಪ್ರಸಂಗವನ್ನು ಈ ಹಿಂದೆಯೂ ನಾವು ನೋಡಿದ್ದೇವೆ. ಸ್ವಲ್ಪ ಇಂತಹುದನ್ನೇ ಹೋಲುವ ಮಸೂದೆಯೊಂದನ್ನು ಶಿವಸೇನೆಯ ಬಾಳ್ ಠಾಕ್ರೆ, ಮಹಾರಾಷ್ಟ್ರದಲ್ಲಿ ಜಾರಿಗೆ ತರಲು ಪ್ರಯತ್ನಿಸಿದ್ದರು. ಆದರೆ, ಅದಕ್ಕೆ ದಯನೀಯ ಸೋಲುಂಟಾಯಿತು. ಈಗ ಮಹಾರಾಷ್ಟ್ರ ಭಾರತದ ಅತೀ ಸಂಪದ್ಭರಿತ ರಾಜ್ಯ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಕಾರಣ, ಕೈಗಾರಿಕಾ ವಲಯದ ಪ್ರಚಂಡ ಸಾಧನೆ.

ಕಾಂಗ್ರೆಸ್ ತನ್ನ ಜಯಪ್ರಿಯ ಯೋಜನೆಗಳ ನೆರವಿನಿಂದಲೇ ಕಳೆದ ವಿಧಾನಸಭಾ ಚುನಾವಣೆಯಲ್ಲಿ ಬಹುಮತದಿಂದ ಆಯ್ಕೆಯಾಗಿ ಅಧಿಕಾರಕ್ಕೆ ಬಂದಿರುವುದನ್ನು ಮರೆಯಬಾರದು.

ಇಂತಹ ಜನಪ್ರಿಯ ಯೋಜನೆಗಳಿಗೆ ಕೈಗಾರಿಕೆಗಳು ಹಾಗೂ ಇನ್ನಿತರ ಉದ್ಯಮಗಳಿಂದ ಸಂಗ್ರಹಿಸಿದ ತೆರಿಗೆಗಳ ಬಲವೇ ಕಾರಣ. ಆದರೆ, ಕರ್ನಾಟಕದ ರಾಜಕಾರಣಿಗಳು ಕೈಗಾರಿಕೆಗಳನ್ನು ಬೆಳೆಸಲು ಇಲ್ಲವೇ ಪ್ರೋತ್ಸಾಹಿಸುವ ಕಾರ್ಯ ಏನು ಮಾಡಿದ್ದಾರೆ?

ಇತ್ತೀಚೆಗೆ ರಾಜ್ಯದಲ್ಲಿ ಉದ್ಯಮ ಪರ ನಿಂತ ಪ್ರಮುಖ ವ್ಯಕ್ತಿ ಅದು ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ. ಅವರು ಬೆಂಗಳೂರನ್ನು ಚಿನ್ನದ ಮೊಟ್ಟೆ ಇಡುವ ಕೋಳಿಯನ್ನಾಗಿ ಪರಿವರ್ತಿಸಿದರು. ಅವರ ನಂತರ ಅಧಿಕಾರಕ್ಕೆ ಬಂದ ಯಾವ ನಾಯಕರು, ಯಾವುದೇ ರೀತಿಯ ಕೊಡುಗೆಗಳನ್ನು ನೀಡದೆ, ಅದನ್ನು ಶೋಷಣೆಗೀಡು ಮಾಡಿದರು.

ಈಗ, ಅವರು ಕನ್ನಡಿಗರಿಗೆ ನೆರವಾಗುವ ಸೋಗಿನಲ್ಲಿ ಚಿನ್ನದ ಮೊಟ್ಟೆ ಇಡುವ ಕೋಳಿಯನ್ನೇ ಮುಗಿಸಲು ಸಿದ್ಧವಾದಂತೆ ಕಂಡುಬರುತ್ತಿದೆ.

ವಾಸ್ತವವಾಗಿ, ಈ ರೀತಿಯ ಸರ್ಕಸ್‌ಗಳು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮಗಳಲ್ಲಿ ನಡೆದಿರುವಂತಹ ಹಗರಣಗಳಿಂದ ಜನರ ಗಮನ ಬೇರೆಡೆ ಸೆಳೆಯಲು ಹೂಡಿರುವ ತಂತ್ರ ಎಂಬುದಾಗಿ ವಿಪಕ್ಷಗಳು ಹಾದಿ–ಬೀದಿಯಲ್ಲಿ ಹೇಳಿಕೊಳ್ಳುತ್ತಿವೆ.

ನಮ್ಮ ಮುಖ್ಯಮಂತ್ರಿಗಳು ಖಾಸಗಿ ಉದ್ಯಮಗಳಲ್ಲಿ ಮೀಸಲಾತಿಯನ್ನು ಹೆಮ್ಮೆಯಿಂದ, ಅದು ಕನ್ನಡಿಗರಿಗೆ ತಾವು ನೀಡುತ್ತಿರುವ ವರ ಅನ್ನುವಷ್ಟರ ಮಟ್ಟಿಗೆ ಬಿಂಬಿಸಿಕೊಳ್ಳುತ್ತಿದ್ದಂತೆ ತಕ್ಷಣ ನೆರೆಯ ಆಂಧ್ರಪ್ರದೇಶ ಇದನ್ನು ತನ್ನ ಬಂಡವಾಳವನ್ನಾಗಿ ಮಾಡಿಕೊಳ್ಳಲು ಹವಣಿಸಿದೆ.

> **“ ಸರ್ಕಾರ ಜಾರಿಗೆ ತರಲು ಹೊರಟಿರುವ ಮಸೂದೆ ಯಾವುದನ್ನು ಆಧರಿಸಿದೆ ಎಂಬುದು ಕೂಡ ಮುಖ್ಯವಾಗುತ್ತದೆ. ಸದರಿ ಮಸೂದೆಯು ಮಾಜಿ ಕೇಂದ್ರ ಸಚಿವೆ ಸರೋಜಿನಿ ಮಹಿಷಿಯವರು 1984ರ ಅಂಕಿ ಅಂಶಗಳನ್ನು ಆಧರಿಸಿ 1986ರಲ್ಲಿ ರಾಜ್ಯ ಸರ್ಕಾರಕ್ಕೆ ಶಿಫಾರಸು ಮಾಡಿದ ವರದಿಯನ್ನು ಆಧರಿಸಿದೆ. 40 ವರ್ಷಗಳಷ್ಟು ಹಿಂದಿನ ಅಂಕಿ ಅಂಶಗಳನ್ನು ಅಧಾರವಾಗಿಟ್ಟುಕೊಂಡು ಈಗ, 2024ರಲ್ಲಿ ನಾವು ಕಾಯಿದೆ ರಚಿಸುತ್ತಿದ್ದೇವೆಯೇ? ಇದೊಂದು ಅದ್ಭುತ ಎನಿಸದೇ...!**

ಆಂಧ್ರಪ್ರದೇಶದ ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವ ನಾರಾ ಲೋಕೇಶ್, ಕರ್ನಾಟಕದ ಉದ್ದಿಮೆದಾರರನ್ನು ವಿಶಾಖಪಟ್ಟಣಂಗೆ ತಮ್ಮ ಉದ್ಯಮಗಳನ್ನು ಸ್ಥಳಾಂತರಿಸುವಂತೆ ಆಹ್ವಾನ ನೀಡಿದರು.

ಅಲ್ಲಿ ಅವರು ಕರ್ನಾಟಕದ ಉದ್ಯಮಿಗಳಿಗೆ ಎಲ್ಲಾ ರೀತಿಯ ಶ್ರೇಷ್ಠ ದರ್ಜೆಯ ಸೌಕರ್ಯಗಳನ್ನು, ಅನಿಯಮಿತ ವಿದ್ಯುತ್, ಮೂಲಭೂತ ಸೌಲಭ್ಯಗಳ ಜೊತೆಗೆ ಸರ್ಕಾರದಿಂದ ಯಾವುದೇ ರೀತಿಯ ನಿರ್ಬಂಧ ಇರುವುದಿಲ್ಲ ಎಂಬ ಆಶ್ವಾಸನೆಯನ್ನೂ ನೀಡಿದ್ದರು.

ನಾರಾ ಲೋಕೇಶ್‌ರವರ ಈ ತಂತ್ರಗಾರಿಕೆ, ಇವರ ತಂದೆ, ಆಂಧ್ರಪ್ರದೇಶದ ಹಾಲಿ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರು ಈ ಹಿಂದೆ ಅಂದರೆ ತೊಂಬತ್ತರ ದಶಕದಲ್ಲಿ ಅಖಂಡ ಆಂಧ್ರಪ್ರದೇಶದ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಕರ್ನಾಟಕದಲ್ಲಿದ್ದ ಮಾಹಿತಿ ತಂತ್ರಜ್ಞಾನ ಕಂಪನಿಗಳನ್ನು ತಮ್ಮ ರಾಜ್ಯಕ್ಕೆ ಆಕರ್ಷಿಸಿ, ರಾಜಧಾನಿ ಹೈದರಾಬಾದ್ ಅನ್ನು 'ಸೈಬರ್ ಬಾದ್'ನ್ನಾಗಿ ಪರಿವರ್ತಿಸಿದ ಅದೇ ತಂತ್ರಗಾರಿಕೆಯ ಮರುಧ್ವನಿಯಾಗಿದೆ.

ನಾರಾ ಲೋಕೇಶ್‌ರವರ ಈ ಕರೆಯಿಂದ ಈಗಾಗಲೇ ಪರಿಣಾಮ ಉಂಟಾಗಿದೆ. ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆಐಎಡಿಬಿ) ಅಧಿಕಾರಿ ವರ್ಗದ ಅಸಮರ್ಥತೆಯಿಂದಾಗಿ ಬೇಸರಗೊಂಡು ಮೈಸೂರಿನಲ್ಲಿರುವ ಓರ್ವ ಆಸ್ಟ್ರಿಯನ್ ಉದ್ಯಮಿ, ಆಂಧ್ರಪ್ರದೇಶಕ್ಕೆ ಸ್ಥಳಾಂತರಗೊಳ್ಳುವ ಯೋಚನೆಯಲ್ಲಿದ್ದಾರೆ ಎಂದು ಹೇಳಲಾಗಿದೆ.

ಅವರು ಪ್ರಿಂಟೆಡ್ ಸರ್ಕೂಟ್ ಬೋರ್ಡ್ (ಪಿಸಿಬಿ) ತಯಾರಿಕಾ ಉದ್ಯಮ ಸ್ಥಾಪಿಸಲು ಒಂದು ಎಕರೆ ಭೂಮಿಗಾಗಿ ಕಳೆದ ಎರಡು ವರ್ಷಗಳಿಂದ ಪ್ರಯತ್ನಿಸುತ್ತಿದ್ದು, ಅವರಿಗೆ ಕೆಐಎಡಿಬಿಯ ಭೂಮಿಯನ್ನು ರಿಯಲ್ ಎಸ್ಟೇಟ್ ಏಜೆಂಟರ ಮೂಲಕ ತೋರಿಸಲಾಗಿದೆ!

ಈ ರೀತಿ ಕೈಗಾರಿಕಾ ಭೂಮಿಯ ದುರ್ಬಳಕೆ ಅತಿಯಾಗಿದೆ. ಕೆಐಎಡಿಬಿ ಭೂಮಿಯನ್ನು ಒಮ್ಮೆ ಮಂಜೂರು ಮಾಡಿದರೆ ಮೂರು ವರ್ಷಗಳ ಒಳಗೆ ಸಂಬಂಧಿಸಿದ ಉದ್ಯಮವನ್ನು ಆರಂಭಿಸಬೇಕೆಂಬ ನಿಯಮವಿದೆ. ಇದಕ್ಕೆ ಬದಲಾಗಿ, ಭೂ ಮಾಫಿಯಾಗಳು ಸಣ್ಣ ಇಟ್ಟಿಗೆ ತಯಾರಿಕಾ ಘಟಕಗಳನ್ನು ಸ್ಥಾಪಿಸಿ, ಮೂರು ವರ್ಷಗಳ ಆದಾಯ ತೆರಿಗೆ ವಿವರವನ್ನು ಸಲ್ಲಿಸಿ, ನಂತರ, ಅಗ್ಗದ ಬೆಲೆಗೆ ಭೂಮಿಯನ್ನು ಖರೀದಿಸಿ, ಅದನ್ನು ದುಬಾರಿ ಬೆಲೆಗೆ ಮಾರುವ ಮೂಲಕ ಕೈಗಾರಿಕಾ ಪ್ರದೇಶಗಳ ಮೂಲ ಉದ್ದೇಶಗಳನ್ನೇ ಬುಡಮೇಲು ಮಾಡುತ್ತಿವೆ.

ಕಾಂಗ್ರೆಸ್ ಸರ್ಕಾರವು ಉದ್ಯೋಗಗಳನ್ನು ಮೀಸಲಿಡುವುದಕ್ಕಿಂತ ಮೊದಲು ಉದ್ಯೋಗಗಳನ್ನು ಸೃಷ್ಟಿಸಬೇಕು.

ಮೊದಲು, ಬೃಹತ್ತಾದ ಹೆಬ್ಬಾಳ ಕೈಗಾರಿಕಾ ಪ್ರದೇಶವನ್ನು ಭೂಮಾಫಿಯಾಗಳ ಹಿಡಿತದಿಂದ ಮುಕ್ತಗೊಳಿಸಬೇಕು. ಅಲ್ಲಿ ಅನಿಯಮಿತ ವಿದ್ಯುಚ್ಛಕ್ತಿ, ನೀರು ಸರಬರಾಜು, ಭಾರಿ ವಾಹನಗಳು ಚಲಿಸಲು ಉತ್ತಮ ಗುಣಮಟ್ಟದ ರಸ್ತೆಗಳನ್ನು ನಿರ್ಮಿಸಬೇಕು. ಅದೇ ರೀತಿ ಸೂಕ್ತ ಚರಂಡಿ ವ್ಯವಸ್ಥೆ ಕಲ್ಪಿಸಿ, ಪ್ರವಾಹದಂತಹ ಪರಿಸ್ಥಿತಿಯನ್ನು ತಡೆಯಬೇಕು. ಇಂತಹ ಆದ್ಯ ಕ್ರಮಗಳು ಕರ್ನಾಟಕ ರಾಜ್ಯವನ್ನು ಒಂದು ಸಮರ್ಥ ಉತ್ಪಾದನಾ ಕೇಂದ್ರವನ್ನಾಗಿಸುತ್ತದೆ.

ಎಷ್ಟಾದರೂ, ಉತ್ಪಾದನೆಯಷ್ಟೇ ಮುಂದಿನ ಪ್ರಮುಖ ಉದ್ಯೋಗದಾತನಾಗುವ ಸಾಧ್ಯತೆಗಳಿವೆ. ಏಕೆಂದರೆ ಮಾಹಿತಿ ತಂತ್ರಜ್ಞಾನ ಕ್ಷೇತ್ರ(ಐಟಿ)ದಲ್ಲಿ ಕೃತಕ ಬುದ್ಧಿಮತ್ತೆ (Artificial Intelligence)ಯು, ಉದ್ಯೋಗಾವಕಾಶಗಳ ಕ್ಷೀಣತೆಗೆ ಕಾರಣವಾಗುತ್ತಿದೆ.

ಸರ್ಕಾರ ಜಾರಿಗೆ ತರಲು ಹೊರಟಿರುವ ಮಸೂದೆ ಯಾವುದನ್ನು ಆಧರಿಸಿದೆ ಎಂಬುದು ಕೂಡ ಮುಖ್ಯವಾಗುತ್ತದೆ. ಸದರಿ ಮಸೂದೆಯು ಮಾಜಿ ಕೇಂದ್ರ ಸಚಿವೆ ಸರೋಜಿನಿ ಮಹಿಷಿ ಅವರು 1984ರ ಅಂಕಿ ಅಂಶಗಳನ್ನು ಆಧರಿಸಿ 1986ರಲ್ಲಿ ರಾಜ್ಯ ಸರ್ಕಾರಕ್ಕೆ ಶಿಫಾರಸು ಮಾಡಿದ ವರದಿಯನ್ನು ಆಧರಿಸಿದೆ. 40 ವರ್ಷಗಳಷ್ಟು ಹಿಂದಿನ ಅಂಕಿ ಅಂಶಗಳನ್ನು ಅಧಾರವಾಗಿಟ್ಟುಕೊಂಡು ಈಗ, 2024ರಲ್ಲಿ ನಾವು ಕಾಯಿದೆ ರಚಿಸುತ್ತಿದ್ದೇವೆಯೇ? ಇದೊಂದು ಅದ್ಭುತ ಎನಿಸದೇ...!

ಅದಕ್ಕಿಂತ ಅಚ್ಚರಿ ಸಂಗತಿಯೆಂದರೆ, ಭಾಷೆಯ ಅಡಚಣೆಯಿಂದ ಕೈಗಾರಿಕಾ ಅಪಘಾತಗಳ ಪ್ರಮಾಣವು ಕನ್ನಡೇತರರಲ್ಲಿ ಹೆಚ್ಚಾಗಿದೆ ಎಂಬ ವಿತಂಡ ವಾದವನ್ನು ಮುಂದಿಟ್ಟುಕೊಂಡು, ತನ್ನ ಮಸೂದೆಗೆ ಹೊಸ ಆಯಾಮ ನೀಡಿ ಸ್ಥಳೀಯ ಮೀಸಲಾತಿ ಅಗತ್ಯವನ್ನು ರಾಜ್ಯ ಸರ್ಕಾರ ಸಮರ್ಥಿಸಿಕೊಂಡಿದೆ. ಸರ್ಕಾರದ ಈ ವಾದವಂತೂ ದೋಷಪೂರಿತವಾಗಿದೆ.

ಒಂದು ವೇಳೆ ರಾಜ್ಯ ಸರ್ಕಾರವು, ಖಾಸಗಿ ಉದ್ಯಮಗಳ ಮೇಲೆ ಸ್ಥಳೀಯ ಮೀಸಲಾತಿಯನ್ನು ಹೇರಲು ಮುಂದಾದರೆ ಅದೇ ಮಾನದಂಡವನ್ನು ತನ್ನ ವಿಷಯದಲ್ಲಿ ಏಕೆ ಅನ್ವಯಿಸಿಕೊಳ್ಳುತ್ತಿಲ್ಲ?.

ಸರೋಜಿನಿ ಮಹಿಷಿ ವರದಿ ಅನ್ವಯ ರಸ್ತೆ, ಸೇತುವೆ ನಿರ್ಮಾಣಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದ ಶೇಕಡಾ 70ರಷ್ಟು ಗುತ್ತಿಗೆ ಕಾಮಗಾರಿಗಳನ್ನು ಕನ್ನಡ ಓದಲು ಮತ್ತು ಬರೆಯಲು ಬಲ್ಲಂತಹ ನಿರ್ದೇಶಕರ ಒಳಗೊಂಡ ಕರ್ನಾಟಕ ಕಂಪನಿಗಳಿಗೆ ನೀಡುವುದರ ಬದಲು ಆಂಧ್ರಪ್ರದೇಶದ ಕಂಪನಿಗಳಿಗೇಕೆ ನೀಡುತ್ತಿದ್ದಾರೆ?

ರಾಜ್ಯ ಸರ್ಕಾರವು, ತೆರಿಗೆ, ಮಾಲಿನ್ಯ, ಕಾರ್ಮಿಕ ಕಾನೂನುಗಳ ವಿಷಯಗಳಲ್ಲಿ ಮಾತ್ರವೇ ಖಾಸಗಿ ಉದ್ಯಮಗಳ ಮೇಲೆ ನಿಯಂತ್ರಣ ಹೇರಬೇಕು. ಆದರೆ, ಉದ್ಯಮಗಳ ಅತಿಸೂಕ್ಷ್ಮ ನಿರ್ವಹಣೆ ವಿಚಾರಗಳಲ್ಲಿ ತಲೆ ಹಾಕಬಾರದು. ಅಂತಹ ಸಂದರ್ಭ ಬಂದಾಗ ಸರ್ಕಾರದೊಂದಿಗೆ ವ್ಯವಹರಿಸುವುದೇ ಅವುಗಳಿಗೆ ಒಂದು ವ್ಯವಹಾರವಾಗಿ ಬಿಡಬಹುದು. ಹಾಗಾದರೆ ಅವರು ನಿರೀಕ್ಷಿತ ಸಾಧನೆ ಸಾಧ್ಯವೆ?

ಸದರಿ ಉದ್ಯೋಗ ಮೀಸಲಾತಿ ವಿಧೇಯಕವು, ಕೈಗಾರಿಕೆಗಳು ಕರ್ನಾಟಕದಿಂದ ಕಾಲ್ತೆಗೆಯುವಂತೆ ಮಾಡುವ ಆತಂಕವಿದೆ. ಹಾಗೂ ಮುಂದಿನ 15 ವರ್ಷಗಳಲ್ಲಿ ನಮ್ಮ ಕನ್ನಡಿಗರು, ತೆಲಂಗಾಣ ಅಥವಾ ಅತ್ಯಂತ ಹಿಂದುಳಿದ ರಾಜ್ಯವೆಂದೇ ಪರಿಗಣಿತವಾಗಿರುವ ಬಿಹಾರದಲ್ಲಿ ಕೆಲಸಕ್ಕಾಗಿ ಅಲೆಯುವ ಪರಿಸ್ಥಿತಿ ತಲೆದೋರಬಹುದು.

ಈ ಮಸೂದೆಯು ಮುಖ್ಯಮಂತ್ರಿಗಳ ದೂರದೃಷ್ಟಿಗೆ ವ್ಯತಿರಿಕ್ತವಾಗಿರುವಂತೆಯೂ ಕಂಡು ಬರುತ್ತಿರುವುದು ಕುತೂಹಲಕಾರಿ ಸಂಗತಿಯಾಗಿದೆ.

ಕೇವಲ ಒಂದು ತಿಂಗಳ ಹಿಂದೆಯಷ್ಟೆ ಅಂದರೆ, ಕಳೆದ ಜೂನ್ 19ರಂದು, ಜಾಗತಿಕ ಉದ್ದಿಮೆದಾರರ ಸಮಾವೇಶ 2025ರ, ಪೂರ್ವ ಸಮಾರಂಭದ ಉದ್ಘಾಟನೆ ಸಂದರ್ಭದಲ್ಲಿ, ಅವರು 'ನಮ್ಮ ಗುರಿ ವಾರ್ಷಿಕ ಶೇಕಡಾ 15–20 ಕೈಗಾರಿಕಾ ಬೆಳವಣಿಗೆ ದರವನ್ನು ಸಾಧಿಸುವ ಮೂಲಕ 2032ರ ಹೊತ್ತಿಗೆ ಒಂದು ಲಕ್ಷ ಕೋಟಿ ಜಿಡಿಪಿ ಬೆಳವಣಿಗೆ ಕಾಣುವುದೇ ಆಗಿದೆ' ಎಂದು ಅವರು ಹೇಳಿದ್ದರು. ಇಂತಹ ಮೀಸಲಾತಿ ನೀತಿಯಿಂದಾಗಿ ಅಂತಹ ಗುರಿಯನ್ನು ಮುಟ್ಟಲು ಹೇಗೆ ಸಾಧ್ಯ?

ಅದಾಗ್ಯೂ ಸ್ವಲ್ಪವೂ ಚಿಂತೆ ಪಡಬೇಕಿಲ್ಲ. ಅತೀ ದೊಡ್ಡ ಭೂ ಬ್ಯಾಂಕುಗಳು ರಾಜಕಾರಣಿಗಳ ನಿಯಂತ್ರಣದಲ್ಲಿವೆ. ಒಂದು ವೇಳೆ ಕೈಗಾರಿಕೆಗಳೇ ಇಲ್ಲವಾದರೆ, ಅವರ ಭೂಮಿ ಬೆಲೆ ಕಳೆದುಕೊಳ್ಳಲಿದೆ. ಹಾಗಾಗಲು ಅವರು ಬಿಡುತ್ತಾರೆಯೇ, ಸಾಧ್ಯವೇ ಇಲ್ಲ.

ಸದ್ಯಕ್ಕೆ ಉದ್ಯಮಗಳು ನಿರಾಳವಾಗಿರಬಹುದು. ಏಕೆಂದರೆ, ಭ್ರಷ್ಟಾಚಾರದಿಂದ ಜನರ ಗಮನವನ್ನು ಬೇರೆಡೆ ಸೆಳೆಯಲು ಇದು ಕೇವಲ ಕರ್ನಾಟಕ ರಾಜಕೀಯ ರಂಗದ 'ನಾಟಕ' ಅಷ್ಟೆ.

(ಮೂಲ ಇಂಗ್ಲಿಷ್ ಲೇಖನದ ಕನ್ನಡ ಅನುವಾದ)

email: vikram@starofmysore.com

* * *

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಮೈಸೂರು ಮಿತ್ರ

ಪ್ಯಾನಿಕ್ ಬಟನ್, ಜಿಪಿಎಸ್ ವಿರೋಧಿಸಿ ಪ್ರವಾಸಿ ವಾಹನ ಚಾಲಕರು, ಮಾಲೀಕರ ಸಂಘದಿಂದ ಪ್ರತಿಭಟನೆ

ಪ್ರತಿಭಟನಾಕಾರರಿಗೆ ಮಾಜಿ ಸಂಸದ ಪ್ರತಾಪ್ ಸಿಂಹ ಬೆಂಬಲ



ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಆರ್‌ಟಿಓ ಕಚೇರಿ ಮುಂಭಾಗ ಪ್ರವಾಸಿ ವಾಹನಗಳಿಗೆ ಅವೈಜ್ಞಾನಿಕವಾಗಿ ಪ್ಯಾನಿಕ್ ಬಟನ್, ಜಿಪಿಎಸ್ ಅಳವಡಿಕೆ ವಿರೋಧಿಸಿ ಪ್ರವಾಸಿ ವಾಹನ ಚಾಲಕರ ಮತ್ತು ಮಾಲೀಕರ ಕ್ಷೇಮಾಭಿವೃದ್ಧಿ ಸಂಘದಿಂದ ಪ್ರತಿಭಟನೆ ನಡೆಸಿ, ಆರ್‌ಟಿಓ ಅಧಿಕಾರಿಗೆ ಮನವಿ ಸಲ್ಲಿಸಿದರು. ಈ ವೇಳೆ ಮಾಜಿ ಸಂಸದ ಪ್ರತಾಪ್ ಸಿಂಹ ಉಪಸ್ಥಿತರಿದ್ದರು.

ಮೈಸೂರು, ಜು.22(ಜಿಎ)–ಪ್ರವಾಸಿ ವಾಹನಗಳಿಗೆ ಅವೈಜ್ಞಾನಿಕವಾಗಿ ಪ್ಯಾನಿಕ್ ಬಟನ್, ಜಿಪಿಎಸ್ ಅಳವಡಿಕೆ ವಿರೋಧಿಸಿ ಮೈಸೂರು ಜಿಲ್ಲಾ ಪ್ರವಾಸಿ ವಾಹನ ಚಾಲಕರ ಮತ್ತು ಮಾಲೀಕರ ಕ್ಷೇಮಾಭಿವೃದ್ಧಿ ಸಂಘದಿಂದ ನಗರದ ಜೆಎಲ್‌ಬಿ ರಸ್ತೆಯಲ್ಲಿರುವ ಆರ್‌ಟಿಓ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಲಾಯಿತು.

ಹೊರ ರಾಜ್ಯದಲ್ಲಿ ನೋಂದಣಿ ಮಾಡಿ ರಾಜ್ಯದ ಬೊಕ್ಕಸಕ್ಕೆ ನಷ್ಟವನ್ನುಂಟು ಮಾಡಿ, ರಾಜ್ಯ ಬಸ್ ಮಾಲೀಕರ ಮೇಲೆ ದೌರ್ಜನ್ಯ ನಡೆಸಲಾಗುತ್ತಿದೆ. ಈ ಕೂಡಲೇ ಇದರ ಬಗ್ಗೆ ಕ್ರಮ ಕೈಗೊಂಡು ನ್ಯಾಯ ಕೊಡಿಸಬೇಕು. ಸರ್ಕಾರ ನಿಗದಿಪಡಿಸಿರುವ ಜಿಪಿಎಸ್ ಹಾಗೂ ಪ್ಯಾನಿಕ್ ಬಟನ್‌ನ ಹಣವನ್ನು ಸರ್ಕಾರವೇ ಭರಿಸಬೇಕು. ಪ್ರವಾಸಿ ವಾಹನಗಳ ತೆರಿಗೆ ಶೇ.30ರಷ್ಟು ಕಡಿತಗೊಳಿಸಬೇಕು ಎಂದು ಆಗ್ರಹಿಸಿದರು.

ವೈಟ್ ಬೋರ್ಡ್‌ನಲ್ಲಿ ಪ್ರವಾಸ ಹೋಗುವ ವಾಹನಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ವೈಟ್ ಬೋರ್ಡ್ ಸೆಲ್ಫ್ ಡ್ರೈವ್ ವಾಹನಗಳು, ಆ್ಯಪ್ ಮೂಲಕ ಅಂತರಾಜ್ಯ ತೆರಿಗೆ ಕಳ್ಳರಿಗೆ ಕಠಿಣ ಶಿಕ್ಷೆ ನೀಡಬೇಕು. ಬೆಂಗಳೂರು ಮೈಸೂರು ಎಕ್ಸ್‌ಪ್ರೆಸ್ ವೇನಲ್ಲಿ ದಂಡ ತೆಗೆಯಬೇಕು. ನಮ್ಮ ಪ್ರವಾಸಿ ವಾಹನಗಳು ಪಾವತಿಸಿರುವ ಶೇ.10ರಷ್ಟು ತೆರಿಗೆಯನ್ನು ನಮಗೆ ಹಿಂದಿರುಗಿಸಬೇಕು. ಹೊರರಾಜ್ಯದಿಂದ ನೋಂದಣಿ ಮಾಡಿಸಿ ರಾಜ್ಯದಲ್ಲಿ ಚಾಲನೆಯಲ್ಲಿರುವ ವಾಹನಗಳನ್ನು ಆರ್‌ಟಿಓ ಕೂಡಲೇ ವಶಪಡಿಸಿಕೊಳ್ಳಬೇಕು. ಇಲ್ಲದಿದ್ದರೆ ನಮ್ಮ 250 ಬಸ್‌ಗಳನ್ನು ಆರ್‌ಟಿಓ ಕಚೇರಿ ಮುಂದೆ ನಿಲ್ಲಿಸಿ ವಾಹನದ ದಾಖಲೆ, ಕೀಯನ್ನು ಆಯುಕ್ತರಿಗೆ ನೀಡುತ್ತೇವೆ ಎಂದು ಎಚ್ಚರಿಸಿದರು.

ಈ ವೇಳೆ ಸ್ಥಳಕ್ಕೆ ಬಂದ ಮಾಜಿ ಸಂಸದ ಪ್ರತಾಪಸಿಂಹ ಪ್ರತಿಭಟನಾಕಾರರಿಗೆ ಬೆಂಬಲ ಸೂಚಿಸಿದರು. ಬಳಿಕ ಆರ್‌ಟಿಓ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು. ನಂತರ ಮಾತನಾಡಿದ ಅವರು, ಶಕ್ತಿ ಯೋಜನೆಯಿಂದ ಖಾಸಗಿ ಬಸ್ ಹಾಗೂ ವಾಹನಗಳಿಗೆ ಜನ ಬರುತ್ತಿಲ್ಲ. ಖಾಸಗಿ ವಾಹನ ಚಾಲಕರು ಮಾಲೀಕರು ಸಂಕಷ್ಟದಲ್ಲಿದ್ದಾರೆ. ನಿಮ್ಮ ಶಕ್ತಿ ಯೋಜನೆ ಬಗ್ಗೆ ನಾನು ಮಾತನಾಡುವುದಿಲ್ಲ. ಖಾಸಗಿ ವಾಹನಗಳಿಗೆ ಜಿಪಿಎಸ್ ಮತ್ತು ಪ್ಯಾನಿಕ್ ಬಟನ್ ಅಳವಡಿಕೆ ಮಾಡಬೇಕೆಂಬುದು ಉತ್ತಮ ನಿರ್ಧಾರ. ಇದನ್ನು ಜಾರಿಗೆ ತಂದಿದ್ದೇ ಕೇಂದ್ರ ಸರ್ಕಾರ. ಹೊರಗಡೆ ಜಿಪಿಎಸ್ ಅಳವಡಿಕೆ ಮಾಡಿಸಿಕೊಳ್ಳಲು ಒಂದರಿಂದ ಎರಡು ಸಾವಿರ ಖರ್ಚಾಗುತ್ತದೆ. ಆದರೆ ಈ ಜಿಪಿಎಸ್ ಅವಳಡಿಕೆಗೆ 12 ಖಾಸಗಿ ಕಂಪನಿಗಳಿಗೆ ಟೆಂಡರ್ ನೀಡಿರುವುದು ಸರಿಯಾದ ಕ್ರಮವಲ್ಲ. ಈಗಾಗಲೇ ಜಿಪಿಎಸ್ ಅಳವಡಿಕೆ ಕಂಪನಿಯವರು ಯದ್ವಾತದ್ವಾ ರೇಟ್ ಫಿಕ್ಸ್ ಮಾಡ್ತಿದ್ದಾರೆ. ಕೂಡಲೇ ಈ ಲೋಪವನ್ನು ಸರಿಪಡಿಸಬೇಕು. ಇಲ್ಲವಾದಲ್ಲಿ ನಾವೇ ರಾಜ್ಯದಾದ್ಯಂತ ಪ್ರತಿಭಟನೆ ಹಮ್ಮಿಕೊಳ್ಳುತ್ತೇವೆ ಎಂದು ತಿಳಿಸಿದರು.

ಪ್ರತಿಭಟನೆಯಲ್ಲಿ ಜಿಲ್ಲಾ ರಕ್ಷಾಧಿಕಾರಿ ಅರುಣ್‌ಕುಮಾರ್, ಜಿಲ್ಲಾಧ್ಯಕ್ಷ ರವಿ.ಸಿ, ಪ್ರಧಾನ ಕಾರ್ಯದರ್ಶಿ ಕೌಶಿಕ್ ಸೇರಿದಂತೆ ಮತ್ತಿತರರು ಪಾಲ್ಗೊಂಡಿದ್ದರು.

ರಾಮಕೃಷ್ಣ ವಿದ್ಯಾಕೇಂದ್ರದಲ್ಲಿ ಗುರುವಂದನಾ ಕಾರ್ಯಕ್ರಮ



ಮೈಸೂರಿನ ರಾಮಕೃಷ್ಣನಗರದ ರಾಮಕೃಷ್ಣ ವಿದ್ಯಾಕೇಂದ್ರ ಶಾಲೆಯಲ್ಲಿ ಸೋಮವಾರ ಗುರುಪೂರ್ಣಿಮೆ ಪ್ರಯುಕ್ತ ಗುರುವಂದನಾ ಕಾರ್ಯಕ್ರಮ ಆಚರಿಸಲಾಯಿತು.

ಮೈಸೂರು, ಜು. 22– ಮೈಸೂರಿನ ರಾಮಕೃಷ್ಣನಗರದ ರಾಮಕೃಷ್ಣ ವಿದ್ಯಾ ಕೇಂದ್ರ ಶಾಲೆಯಲ್ಲಿ ಗುರುಪೂರ್ಣಿಮೆ ಪ್ರಯುಕ್ತ ಶಾಲೆಯ ವಿದ್ಯಾರ್ಥಿಗಳಿಂದ ಗುರುವಂದನಾ ಕಾರ್ಯಕ್ರಮ ಆಚರಿಸಲಾಯಿತು.

ದಿವ್ಯತ್ರಯರಿಗೆ ಆರತಿ ಬೆಳಗುವ ಮೂಲಕ ಗುರುವಂದನೆ ಸಲ್ಲಿಸಿ ಕಾರ್ಯಕ್ರಮವನ್ನು ಉದ್ಘಾಟನೆ ಮಾಡಲಾಯಿತು. ದಿನದ ವಿಶೇಷತೆ ಬಗ್ಗೆ ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯಿನಿ ಶ್ರೀಮತಿ ವೀಣಾ ಕೆ.ಹೆಗಡೆ ಉಪನ್ಯಾಸ ನೀಡುತ್ತಾ ಗುರು ಇದ್ದಲ್ಲಿ ಪೌರ್ಣಿಮೆ, ಗುರು ಇಲ್ಲದಿದ್ದರೆ ಅಮವಾಸ್ಯೆ ಅಂದರೆ ಕತ್ತಲು ಎಂದು ತಿಳಿಸುತ್ತಾ ಕತ್ತಲಿನಿಂದ ಆವರಿಸಿಕೊಂಡಿದ್ದನ್ನು ಜ್ಞಾನದ ಮೂಲಕ ಮಕ್ಕಳನ್ನು ಹುಣ್ಣಿಮೆಯ ತಂಪಾದ ಬೆಳಕಿನೆಡೆಗೆ ಕೊಂಡೊಯ್ಯುವ ಕಾರ್ಯವೇ ಗುರುವಿನದ್ದಾಗಿದೆ ಎಂದು ತಿಳಿಸಿದರು.

ಪ್ರೌಢಶಾಲಾ ಮುಖ್ಯೋಪಾಧ್ಯಾಯ ಜಿ.ಎನ್.ವಿಶ್ವನಾಥ್ ಮಾತನಾಡಿ, ಗುರು ಮತ್ತು ಗುರಿ ಎರಡೂ ಜೊತೆ ಜೊತೆಯಲ್ಲಿ ಸಾಗಿದಾಗ ಸಾಧನೆ ಸಾಧ್ಯ ಗುರುವು ಪ್ರೇರಕ, ಸೂಚಕ ಮತ್ತು ಬೋಧಕ ಈ ಮೂರು ಆಗಿರಬೇಕೆಂದು ಹೇಳುತ್ತಾ ಮಕ್ಕಳಿಗೆ ಸರಿಯಾದ ದಾರಿಯನ್ನು ತೋರಿಸುವುದೇ ಗುರುವಿನ ಕೆಲಸ ಎಂದರು.


ಎಂ.ಪಾಪೇಗೌಡ ಅಧ್ಯಕ್ಷತೆ ವಹಿಸಿದ್ದರು. ರಾಮಕೃಷ್ಣ ಸೇವಾ ಸಂಘದ ಕಾರ್ಯದರ್ಶಿ ಎಂ.ದೊರೆರಾಜು, ಕಾರ್ಯನಿರ್ವಾಹಕ ಅಧಿಕಾರಿ ಪ್ರೊ.ಜಿ.ಚಂದ್ರಶೇಖರ್, ಹಾಗೂ ಶಾಲಾ ವಿದ್ಯಾರ್ಥಿಗಳು, ಶಿಕ್ಷಕ–ಶಿಕ್ಷಕೇತರರು ಭಾಗವಹಿಸಿದ್ದರು.

ಮಹರ್ಷಿ ವಿದ್ಯಾ ಸಂಸ್ಥೆಯಲ್ಲಿ ಗುರುಪೂರ್ಣಿಮೆ



ಮೈಸೂರಿನ ಮಹರ್ಷಿ ವಿದ್ಯಾ ಸಂಸ್ಥೆಯಲ್ಲಿ ಗುರುಪೂರ್ಣಿಮೆ ಆಚರಿಸಲಾಯಿತು. ಈ ವೇಳೆ ಹಿರಿಯ ಪ್ರಾಚಾರ್ಯ ಗೋಪಾಲಸ್ವಾಮಿ, ಪ್ರಾಚಾರ್ಯರಾದ ವಿಜಯ ನರಸಿಂಹಮ್, ಕುಮಾರ್, ಮಹದೇವಸ್ವಾಮಿ, ಶಾಲೆಯ ಶಿಕ್ಷಕ ವೃಂದ ಇದ್ದರು.

ವಾತ್ಸಲ್ಯ ಸೇವಾಶ್ರಮದಲ್ಲಿ ಹಿರಿಯ ಜೀವಿಗಳೊಂದಿಗೆ ಗುರುಪೂರ್ಣಿಮೆ



ಮೈಸೂರಿನ ಹಿನಕಲ್‌ನಲ್ಲಿರುವ ಹಿರಿಯ ಜೀವಿಗಳ ಆಶ್ರಯ ತಾಣವಾದ ವಾತ್ಸಲ್ಯ ಸೇವಾಶ್ರಮದಲ್ಲಿ ಗುರುಪೂರ್ಣಿಮೆಯನ್ನು ಹಿರಿಯರೊಂದಿಗೆ ಆಚರಿಸಲಾಯಿತು. ಮುಖ್ಯ ಅತಿಥಿಗಳಾಗಿ ಚಿತ್ತಾರ ಸಂಸ್ಥೆ ಮುಖ್ಯಸ್ಥ ಕೆ.ಶಿವಕುಮಾರ್ ಉಪಸ್ಥಿತರಿದ್ದರು. ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಎ.ಸಿ.ರವಿಕುಮಾರ್ ಅಧ್ಯಕ್ಷತೆ ವಹಿಸಿದ್ದರು. ಸಮಾಜ ಸೇವಕರಾದ ಕೃಷ್ಣದಾಸ್, ಸಚಿನ್ ದೀಕ್ಷಿತ್, ನಿರ್ದೇಶಕರಾದ ಸೋಮು, ಶೈಲಜಾ, ಲಕ್ಷ್ಮಿ, ಕಾರ್ಯದರ್ಶಿ ನಾಗರತ್ನ, ಶಶಿಕಲಾ, ಜಯ ಇನ್ನಿತರರು ಹಾಜರಿದ್ದರು.

ಗುರುಪೂರ್ಣಿಮೆ, ಶ್ರೀ ಆಚಾರ್ಯತ್ರಯರ ಜಯಂತಿ, ಪ್ರತಿಭಾ ಪುರಸ್ಕಾರ ಆಚರಣೆ



ಮೈಸೂರಿನ ಬ್ರಾಹ್ಮಣ ಸಂಘ ಹೆಬ್ಬಾಳು–ವಿಜಯನಗರದ ಆಶ್ರಯದಲ್ಲಿ ಗುರುಪೂರ್ಣಿಮೆ ಅಂಗವಾಗಿ ಸೋಮವಾರ ಶ್ರೀ ಆಚಾರ್ಯತ್ರಯರ ಜಯಂತಿ ಆಚರಿಸಲಾಯಿತು.

ಮೈಸೂರು, ಜು. 22– ಮೈಸೂರಿನ ಬ್ರಾಹ್ಮಣ ಸಂಘ ಹೆಬ್ಬಾಳು–ವಿಜಯನಗರದ ಆಶ್ರಯದಲ್ಲಿ ಗುರುಪೂರ್ಣಿಮೆ ಅಂಗವಾಗಿ ಶ್ರೀ ಆಚಾರ್ಯತ್ರಯರ ಜಯಂತಿಯನ್ನು ಆಚರಿಸಲಾಯಿತು.


ಮುಖ್ಯ ಅತಿಥಿಗಳಾಗಿ ಡಾ.ಹೆಚ್.ಎಲ್. ಚಂದ್ರಶೇಖರ್, ಡಾ.ಶೆಲ್ವ ಪಿಳ್ಳೈ ಅಯ್ಯಂಗಾರ್, ಶ್ರೀನಿವಾಸ ಆಚಾರ್ಯ ಕೊರಲಹಳ್ಳಿ ಅವರು ಶ್ರೀ ಆಚಾರ್ಯತ್ರಯರ ಸಿದ್ಧಾಂತ, ಸಾಧನೆ ಬಗ್ಗೆ ಉಪನ್ಯಾಸ ನೀಡಿದರು.

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ರಾಜ್ಯ ಉಪಾಧ್ಯಕ್ಷ ನಂ.ಶ್ರೀಕಂಠಕುಮಾರ್, ಮಹಾಸಭಾದ ಕಾರ್ಯಕ್ರಮಗಳನ್ನು ತಿಳಿಸಿದರು. ಸಂಘದ ಅಧ್ಯಕ್ಷ ಆರ್.ಮಂಜುನಾಥ್ ಅಧ್ಯಕ್ಷತೆ ವಹಿಸಿದ್ದರು.

ಸಮಿತಿಯ ಬಿ.ಎನ್.ಮುರಳೀಶ, ಡಾ.ಮೋಹನ್, ಹೆಚ್.ಎನ್.ಶೇಷಗಿರಿ, ಬಿ.ಎ.ಆನಂದ್, ಎಂ.ಎಲ್.ರವಿಶಂಕರ್, ಆರ್.ರಮೇಶ್, ಎಂ.ಎಲ್.ಸುಬ್ಬನರಸಿಂಹ, ಎಂ.ಎಸ್.ಸುನಿಲ್‌ಕುಮಾರ್, ಶಕುಂತಲಾ, ಪದ್ಮ ಹೆಬ್ಬಾರ್, ವಕೀಲ ಸಿ.ವಿ.ಕೇಶವಮೂರ್ತಿ ಉಪಸ್ಥಿತರಿದ್ದರು. ಹೆಚ್ಚಿನ ಸಂಖ್ಯೆಯಲ್ಲಿ ವಿಪ್ರ ಬಂಧುಗಳು ಭಾಗವಹಿಸಿದ್ದರು.

ಇಂದು ತಿಲಕರ 168ನೇ ಜಯಂತಿ

ಮೈಸೂರು, ಜು.22– ಕೆಎಂಪಿಕೆ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಲೋಕಮಾನ್ಯ



ಬಾಲ ಗಂಗಾಧರ ತಿಲಕರ 168ನೇ ಜಯಂತೋತ್ಸವ ಕಾರ್ಯಕ್ರಮವನ್ನು ನಾಳೆ(ಮಂಗಳವಾರ) ಬೆಳಗ್ಗೆ 11.30ಕ್ಕೆ ವಿಷ್ಣುವರ್ಧನ ರಸ್ತೆ ಚಾಮರಾಜಪುರಂನ ಕೆಎಂಪಿಕೆ ಟ್ರಸ್ಟ್ ಕಚೇರಿಯಲ್ಲಿ ಆಯೋಜಿಸಲಾಗಿದೆ ಎಂದು ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಮ್ ಅಯ್ಯಂಗಾರ್ ತಿಳಿಸಿದ್ದಾರೆ

ಮುಖ್ಯ ಅತಿಥಿಗಳಾಗಿ ಬಿಜೆಪಿ ನಗರ ಅಧ್ಯಕ್ಷ ಎಲ್.ನಾಗೇಂದ್ರ, ಮಾಜಿ ಮೇಯರ್ ಸಂದೇಶ ಸ್ವಾಮಿ, ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ, ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ ಟಿ ಪ್ರಕಾಶ್, ಹಿರಿಯ ಸಮಾಜ ಸೇವಕ ಕೆ ರಘುರಾಮ್ ವಾಜಪೇಯಿ, ಕಾಂಗ್ರೆಸ್ ಮುಖಂಡ ಎನ್ ಎಂ ನವೀನ್ ಕುಮಾರ್, ನಗರ ಪಾಲಿಕೆ ಮಾಜಿ ಸದಸ್ಯ ಮಾ ವಿ ರಾಮ್ ಪ್ರಸಾದ್, ಜೀವದಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್ ಹಾಗೂ ಇನ್ನಿತರರು ಭಾಗವಹಿಸಲಿದ್ದಾರೆ.

ಸರ್ಕಾರದ ಯೋಜನೆಗಳಿಂದ ದಲಿತರಿಗೆ ವಂಚನೆ

ಇಂದು ಮೈಸೂರಿನ ಪುರಭವನದ ಮುಂದೆ ಪ್ರತಿಭಟನೆ

ಮೈಸೂರು,ಜು.22(ಜಿಎ)–ರಾಜ್ಯ ಸರ್ಕಾರ ಹಲವಾರು ಯೋಜನೆಗಳಿಂದ ದಲಿತರನ್ನು ವಂಚಿಸುತ್ತಿದೆ ಎಂದು ಆರೋಪಿಸಿ ಜು.23ರಂದು ಬೆಳಗ್ಗೆ 11 ಗಂಟೆಗೆ ಮೈಸೂರಿನ ಪುರಭವನದ ಮುಂಭಾಗದಲ್ಲಿರುವ ಡಾ.ಅಂಬೇಡ್ಕರ್ ಪ್ರತಿಮೆ ಬಳಿ ದಲಿತ ಸಂಘರ್ಷ ಸಮಿತಿ ವತಿಯಿಂದ ಪ್ರತಿಭಟನಾ ಧರಣಿ ನಡೆಸಲಾಗುವುದು ಎಂದು ಸಂಚಾಲಕ ಜೋರನಹಳ್ಳಿ ಶಿವಣ್ಣ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮಾಜ ಕಲ್ಯಾಣ ಇಲಾಖೆ ಅನೇಕ ಯೋಜನೆ ಅನುಷ್ಠಾನಗೊಳಿಸದೆ ದಲಿತ ಸಮುದಾಯವನ್ನು ವಂಚಿಸುವ ಹುನ್ನಾರ ನಡೆಸಿದ್ದು, 2021ರಲ್ಲಿ ಜಾರಿಗೊಳಿಸಿದ್ದ ಪ್ರಬುದ್ಧ ಯೋಜನೆಯಡಿ ವಿದೇಶಗಳಲ್ಲಿ ಸ್ನಾತಕೋತ್ತರ ಮತ್ತು ಸಂಶೋಧನಾ ವಿದ್ಯಾಭ್ಯಾಸಕ್ಕೆ ಧನ ಸಹಾಯ ಮಾಡುವ ಕಾರ್ಯಕ್ರಮದಲ್ಲಿ ಇದುವರೆಗೆ ಒಂಭತ್ತು ವಿದ್ಯಾರ್ಥಿಗಳಿಗೆ ಅವಕಾಶ ಸಿಕ್ಕಿದೆ. ಆದರೆ ಈಗ ಸಿಎಂ ಸಿದ್ದರಾಮಯ್ಯ ಅವರ ಸರ್ಕಾರ ಬಂದ ನಂತರ ಈ ಯೋಜನೆಯನ್ನು ಮೊಟಕುಗೊಳಿಸಿ ಆದೇಶಿಸಿ, ಸಂಶೋಧನಾ ವಿದ್ಯಾಭ್ಯಾಸದ ಧನ ಸಹಾಯ ನಿಲ್ಲಿಸಿದೆ ಎಂದರು.

ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಮನೋಭಾವ ಉತ್ತೇಜಿಸುವ ನಿಟ್ಟಿನಲ್ಲಿ ಮೆಟ್ರಿಕ್ ನಂತರದ ಪರೀಕ್ಷೆಗಳಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ಶ್ರೇಣಿಯಲ್ಲಿ ಶೇ.60ಕ್ಕಿಂತ ಹೆಚ್ಚು ಅಂಕ ಪಡೆದವರಿಗೆ ಕೊಡುತ್ತಿದ್ದ ಪ್ರೋತ್ಸಾಹಧನಕ್ಕೆ ಆದಾಯ ಮಿತಿ ಹೇರಿದೆ. ಜೊತೆಗೆ, ಕೇಂದ್ರ ಯೋಜನಾ ಆಯೋಗದ ನಿರ್ದೇಶನದಂತೆ ರಾಜ್ಯ ಸರ್ಕಾರ ಎಸ್‌ಸಿಪಿಟಿ, ಟಿಎಸ್‌ಪಿ ಯೋಜನೆ ರೂಪಿಸಿ ಕಾರ್ಯಗತಗೊಳಿಸುವಾಗ ಉದ್ದೇಶಪೂರ್ವಕವಾಗಿ ಸೆಕ್ಷನ್ 7ಡಿ, 7ಸಿ ಸೇರ್ಪಡೆ ಮಾಡಿ ಕಾಯ್ದೆಯನ್ನು ಉಲ್ಲಂಘಿಸಿದೆ. ಜೊತೆಗೆ ರಾಜಾರೋಷವಾಗಿ ಸಾರ್ವತ್ರಿಕ ಯೋಜನೆಗಳಾದ ಗ್ಯಾರಂಟಿ ಯೋಜನೆಗಳಿಗೆ ಹಣ ವಿನಿಯೋಗಿಸುತ್ತಿರುವುದು ಅಕ್ಷಮ್ಯ ಅಪರಾಧವಾಗಿದೆ ಎಂದು ಕಿಡಿಕಾರಿದರು.

ಹೀಗಾಗಿ ಇದೇ ರೀತಿ ರಾಜ್ಯ ಸರ್ಕಾರ ದಲಿತರನ್ನು ವಂಚಿಸುತ್ತಿದೆ. ಆದ್ದರಿಂದ ನಗರದ ಪುರಭವನ ಬಳಿಯ ಡಾ.ಬಿ.ಆರ್. ಅಂಬೇಡ್ಕರ್ ಪ್ರತಿಮೆ ಬಳಿ ಇತರೆ ಪ್ರಗತಿಪರ ಸಂಘಟನೆಗಳೊಂದಿಗೆ ಪ್ರತಿಭಟನಾ ಧರಣಿ ಹಮ್ಮಿಕೊಂಡಿರುವುದಾಗಿ ತಿಳಿಸಿದರು. ಗೋಷ್ಠಿಯಲ್ಲಿ ಕಂದೇಗಾಲ ಶಿವಣ್ಣ, ಹರದನಹಳ್ಳಿ ರಾಜೇಶ್, ಬೊಕ್ಕಳ್ಳಿ ಮಹದೇವಸ್ವಾಮಿ, ಆರ್.ಮಂಜುನಾಥ್ ಇದ್ದರು.

ಜಯಚಾಮರಾಜೇಂದ್ರ ಒಡೆಯರ್ ಜಯಂತಿ ಆಚರಣೆ



ಮೈಸೂರಿನ ಜೆ.ಪಿ.ನಗರ, ಸಿದ್ದಲಿಂಗೇಶ್ವರ ಬಡಾವಣೆಯಲ್ಲಿರುವ ಶ್ರೀ ಸಾಯಿಸಿರಿ ವೃದ್ಧಾಶ್ರಮದ ಹಿರಿಯ ನಾಗರಿಕರಿಗೆ ಹಣ್ಣುಗಳನ್ನು ಹಾಗೂ ದಿನಸಿ ಸಾಮಗ್ರಿಗಳನ್ನು ವಿತರಿಸುವ ಮೂಲಕ ಶ್ರೀ ಜಯಚಾಮರಾಜೇಂದ್ರ ಒಡೆಯರ್ ಜಯಂತಿ ಆಚರಿಸಲಾಯಿತು. ಈ ವೇಳೆ ಮೈಸೂರು ನಗರ ಜೆಡಿಎಸ್ ಕಾರ್ಯಾಧ್ಯಕ್ಷ ಎಸ್.ಪ್ರಕಾಶ್ ಪ್ರಿಯಾದರ್ಶನ್, ಶ್ರೀ ಸಾಯಿ ಸಿರಿ ವೃದ್ಧಾಶ್ರಮದ ಅರುಣ, ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಹೋಮದೇವ, ಛಾಯಾ, ಯಶವಂತ್‌ಕುಮಾರ್, ಮಹೇಶ್, ಎಸ್.ಪಿ. ಅಕ್ಷಯ ಪ್ರಿಯದರ್ಶನ್, ಹರ್ಷಿತ್ ಉಪಸ್ಥಿತರಿದ್ದರು.

ಕಲಾಪದಿಂದ ಹೊರಗುಳಿದು ಪ್ರತಿಭಟಿಸಿದ ವಕೀಲರು



ಮೈಸೂರಿನ ಕೃಷ್ಣ ಬುಲೇವಾರ್ಡ್ ರಸ್ತೆಯಲ್ಲಿರುವ ನ್ಯಾಯಾಲಯದ ಮುಂಭಾಗ ಜಿಲ್ಲಾ ವಕೀಲರ ಸಂಘದ ವತಿಯಿಂದ ಸೋಮವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಜು.22 (ಜಿಎ)– ಬಾದಾಮಿಯ ಸಿವಿಲ್ ನ್ಯಾಯಾಲಯದಲ್ಲಿ ನ್ಯಾಯಾಧೀಶರು ವಕೀಲರನ್ನು ಬಂಧಿಸಿದ್ದನ್ನು ವಿರೋಧಿಸಿ ಮೈಸೂರು ಜಿಲ್ಲಾ ವಕೀಲರ ಸಂಘದ ವತಿಯಿಂದ ನಗರದ ಕೃಷ್ಣರಾಜ ಬುಲೇವಾರ್ಡ್ ರಸ್ತೆಯಲ್ಲಿರುವ ನ್ಯಾಯಾಲಯದ ಮುಂಭಾಗ ಪ್ರತಿಭಟನೆ ನಡೆಸಲಾಯಿತು.

ವಕೀಲರು ಸ್ವಯಂಪ್ರೇರಣೆಯಿಂದ ಕಲಾಪಗಳಿಂದ ಹೊರಗುಳಿದು ಪ್ರತಿಭಟನೆಯಲ್ಲಿ ಭಾಗವಹಿಸಿ, ಕಕ್ಷಿದಾರ ಸೂಕ್ತ ಸಮಯಕ್ಕೆ ನ್ಯಾಯಾಲಯಕ್ಕೆ ಹಾಜರಾಗಲಿಲ್ಲವೆಂಬ ಕಾರಣಕ್ಕೆ ವಕೀಲರನ್ನೇ ನ್ಯಾಯಾಧೀಶರು ಕೋರ್ಟ್‌ನಲ್ಲಿ ಸುಮಾರು 4 ಗಂಟೆಗಳ ಕಾಲ ಬಂಧಿಸಿಟ್ಟಿದ್ದು ಸರಿಯಲ್ಲ. ಇದು ಖಂಡನೀಯ ಎಂದು ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆಯಲ್ಲಿ ಸಂಘದ ಅಧ್ಯಕ್ಷ ಎಸ್.ಲೋಕೇಶ್, ಪದಾಧಿಕಾರಿಗಳಾದ ಸುಧೀರ್, ಚಂದ್ರಶೇಖರ್, ಚರಣ್‌ರಾಜ್ ಭರತ್ ಸೇರಿದಂತೆ ಹಿರಿಯ ವಕೀಲರು ಪಾಲ್ಗೊಂಡಿದ್ದರು.

ಗುರುಪೂರ್ಣಿಮೆ ಅಂಗವಾಗಿ ರಕ್ತದಾನ, ಕಣ್ಣಿನ ಉಚಿತ ತಪಾಸಣೆ ಶಿಬಿರ



ಗುರುಪೂರ್ಣಿಮೆ ಅಂಗವಾಗಿ ಮೈಸೂರಿನ ಶ್ರೀ ಗುರು ರಾಘವೇಂದ್ರಸ್ವಾಮಿ ಮಠದಲ್ಲಿ ರಕ್ತದಾನ ಹಾಗೂ ಕಣ್ಣಿನ ಉಚಿತ ತಪಾಸಣೆ ಶಿಬಿರ ನಡೆಯಿತು.

ಮೈಸೂರು,ಜು.22–ಗುರು–ಶಿಷ್ಯರ ಸಂಬಂಧ ಅನಾದಿ ಕಾಲದಿಂದಲೂ ಇದ್ದು, ಜ್ಞಾನದ ಭಂಡಾರವಾಗಿರುವ ಗುರುವಿನ ಬಳಿ ಕಲಿತ ವಿದ್ಯೆ ಶ್ರೇಷ್ಠ ಎಂದು ಹಿರಿಯ ವಕೀಲ ಕೆ.ಆರ್.ಶಿವಶಂಕರ್ ಹೇಳಿದರು.

ಮೈಸೂರಿನ ಟಿ.ಕೆ.ಲೇಔಟ್‌ನಲ್ಲಿರುವ ಶ್ರೀ ಗುರು ರಾಘವೇಂದ್ರಸ್ವಾಮಿ ಮಠದಲ್ಲಿ ದಕ್ಷಿಣಾಮ್ನಾಯ ಶ್ರೀ ಶಾರದ ಪೀಠ, ಶೃಂಗೇರಿ, ಶೃಂಗೇರಿ ಶ್ರೀ ಶಂಕರಮಠ ಅಭಿನವ ಶಂಕರಾಲಯ ಮೈಸೂರು, ಶ್ರೀ ಗುರುರಾಘವೇಂದ್ರ ಸೇವಾ ಟ್ರಸ್ಟ್ ಮತ್ತು ಮೈಸೂರು ಜಿಲ್ಲಾ ಮತ್ತು ನಗರ ಬ್ರಾಹ್ಮಣ ಸಂಘ, ಜೀವಧಾರ ರಕ್ತನಿಧಿ ಕೇಂದ್ರವನ್ನು ಎಎಸ್‌ಜಿ ಕಣ್ಣಿನ ಆಸ್ಪತ್ರೆಯ ಸಂಯುಕ್ತಾಶ್ರಯದಲ್ಲಿ ನಡೆದ ರಕ್ತದಾನ, ಉಚಿತ ಕಣ್ಣಿನ ತಪಾಸಣೆ ಶಿಬಿರವನ್ನು ಉದ್ಘಾಟಿಸಿ, ಮಾತನಾಡಿದರು. ನೂರಕ್ಕೂ ಹೆಚ್ಚು ಜನ ಉಚಿತ ಕಣ್ಣಿನ ತಪಾಸಣೆ ಶಿಬಿರ ಸದ್ಬಳಕೆ ಮಾಡಿಕೊಂಡರು. 30 ಮಂದಿ ರಕ್ತದಾನ ಮಾಡಿದರು. ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಜಿಲ್ಲಾ ಬ್ರಾಹ್ಮಣ ಯುವ ವೇದಿಕೆ ಪ್ರಧಾನ ಕಾರ್ಯದರ್ಶಿ ವಿಕ್ರಂ ಅಯ್ಯಂಗಾರ್, ಗೌರವಾಧ್ಯಕ್ಷ ಎಸ್.ಜಯರಾಮ್, ಅಧ್ಯಕ್ಷ ಸುಬ್ಬರಾವ್, ಕಾರ್ಯದರ್ಶಿ ವಿಜಯ್‌ಕುಮಾರ್, ಸಹ ಕಾರ್ಯದರ್ಶಿ ಪದ್ಮನಾಭರಾವ್, ಖಜಾಂಚಿ ನರಹರಿರಾವ್, ಸಂಘದ ಟ್ರಸ್ಟಿಗಳಾದ ಸತ್ಯಮೂರ್ತಿ, ಮುಕುಂದ, ಕೃಷ್ಣಮೂರ್ತಿ, ವೇಣು ಗೋಪಾಲ್ ರಾವ್, ನರಸಿಂಹರಾಜು, ದ್ವಾರಕನಾಥ್, ಮುಕುಂದಾಚಾರ್, ನಂದನ್ ಹಾಗೂ ಇನ್ನಿತರರು ಭಾಗವಹಿಸಿದ್ದರು.

ಮಹಾವೀರ ವಿದ್ಯಾ ಮಂದಿರ (ಜೈನ್ ಸೊಸೈಟಿ)ದಲ್ಲಿ ಪದಗ್ರಹಣ ಸಮಾರಂಭ



ಮೈಸೂರಿನ ಶ್ರೀರಾಂಪುರದಲ್ಲಿರುವ ಮಹಾವೀರ ವಿದ್ಯಾ ಮಂದಿರ (ಜೈನ್ ಸೊಸೈಟಿ)ದಲ್ಲಿ ಪದಗ್ರಹಣ ಸಮಾರಂಭ ನಡೆಯಿತು. ಕಾರ್ಯಕ್ರಮದಲ್ಲಿ ಅಧ್ಯಕ್ಷ ಡಾ.ಬಾಹುಬಲಿ ಜಿ. ನಾಗಾವಿ, ಕಾರ್ಯದರ್ಶಿ ಶ್ರೀಮತಿ ಇಚ್ಛಾ, ಖಜಾಂಚಿ ಗೌತಮ್‌ಕುಮಾರ್ ಎಚ್.ಡಿ., ಪ್ರಾಂಶುಪಾಲರಾದ ಶ್ರೀಮತಿ ಅನಿತಾ, ಡಾ.ಎಸ್.ಎ.ಮೋಹನ್ ಕೃಷ್ಣ ಮತ್ತಿತರರು ಉಪಸ್ಥಿತರಿದ್ದರು. ಇದೇ ವೇಳೆ ಮಕ್ಕಳಿಗೆ ನಾಯಕತ್ವದ ಬಗ್ಗೆ ತಿಳಿಸಲಾಯಿತು. ವಿದ್ಯಾರ್ಥಿ ಮಂತ್ರಿ ಮಂಡಲದ ಎಲ್ಲಾ ನಾಯಕರಿಗೂ ಬ್ಯಾಡ್ಜ್ ವಿತರಿಸಲಾಯಿತು.

ಅಂಧ ಮಕ್ಕಳ ಸರ್ಕಾರಿ ಪಾಠಶಾಲೆಯಲ್ಲಿ ಪ್ರತಿಭಾ ಪುರಸ್ಕಾರ



ತಿಲಕ್‌ನಗರದ ಅಂಧ ಮಕ್ಕಳ ಸರ್ಕಾರಿ ಪಾಠಶಾಲೆಯಲ್ಲಿ ಎಸ್‌ಎಸ್‌ಎಲ್‌ಸಿ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಮೈಸೂರು,ಜು.22–ಮಕ್ಕಳಿಗೆ ಮೌಲ್ಯಗಳನ್ನು ಕಲಿಸಬೇಕು. ತಂದೆ– ತಾಯಿಯೇ ಮಕ್ಕಳಿಗೆ ಆದರ್ಶವಾಗಿರಬೇಕು ಎಂದು ಶಿಕ್ಷಣ ಇಲಾಖೆಯ ರಾಜ್ಯ ಸಂಪನ್ಮೂಲ ವ್ಯಕ್ತಿ ಬಿ.ಬಾಲಕೃಷ್ಣಯ್ಯ ಹೇಳಿದರು.

ಎಚ್.ಡಿ.ಕೋಟೆ ತಾಲೂಕಿನ ಜಿ.ಬಿ. ಸರಗೂರಿನ ಶ್ರೀ ಗಣೇಶ ಕಲ್ಚರ್ ಅಂಡ್ ಎಜುಕೇಷನ್ ಟ್ರಸ್ಟ್, ಲಿಟಲ್ ಸ್ಟಾರ್ ಕಿಂಡರ್‌ಗಾರ್ಟನ್ ವತಿಯಿಂದ ತಿಲಕ್ ನಗರದ ಅಂಧ ಮಕ್ಕಳ ಸರ್ಕಾರಿ ಪಾಠಶಾಲೆಯಲ್ಲಿ ಏರ್ಪಡಿಸಿದ್ದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪೋಷಕರು ಹೇಗಿರುತ್ತಾರೋ ಮಕ್ಕಳು ಅದನ್ನು ಅನುಕರಿಸುತ್ತಾರೆ. ಆದ್ದರಿಂದ ಪೋಷಕರು ಮಾದರಿಯಾಗುವಂತೆ ನಡೆದುಕೊಳ್ಳಬೇಕು. ಮಕ್ಕಳಿಗೆ ಸಾಕಷ್ಟು ಸಮಯ ನೀಡಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮ ಉದ್ಘಾಟಿಸಿದ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಮಾತನಾಡಿ, ಪ್ರತಿಭೆ ಯಾರೊಬ್ಬರ ಸ್ವತ್ತಲ್ಲ. ಅವಕಾಶಗಳನ್ನು ಬಳಸಿಕೊಂಡು ಯಾರೂ ಬೇಕಾದರೂ ವಿದ್ಯಾವಂತರಾಗಬಹುದು, ಪ್ರತಿಭಾವಂತರಾಗಬಹುದು. ಮೊದಲಿನಂತೆ ಸರ್ಕಾರಿ ಕೆಲಸಗಳಿಗೆ ಕಾದು ಕೂರಬೇಕಾಗಿಲ್ಲ. ಖಾಸಗಿ ವಲಯದಲ್ಲಿ ಪ್ರಪಂಚದ ಯಾವುದೇ ಮೂಲೆಯಲ್ಲಿ ಬೇಕಾದರೂ ಕೆಲಸ ಪಡೆಯಬಹುದು. ಆದ್ದರಿಂದ ಸಿಕ್ಕ ಅವಕಾಶಗಳನ್ನು ಸದುಪಯೋಗ ಮಾಡಿಕೊಂಡು ಚೆನ್ನಾಗಿ ವಿದ್ಯಾಭ್ಯಾಸ ಮಾಡಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಅಂಧ ಮಕ್ಕಳ ಸರ್ಕಾರಿ ಪಾಠಶಾಲೆಯ ಅಧೀಕ್ಷಕ ಸತೀಶ್ ಕ್ಯಾತನಹಳ್ಳಿ ಮಾತನಾಡಿ, ಮಕ್ಕಳಿಗೆ ನೈತಿಕ ಪಾಠ ಮುಖ್ಯವಾಗುತ್ತದೆ ಎಂದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿರುವ ಅಂಧ ಮಕ್ಕಳ ಸರ್ಕಾರಿ ಪಾಠಶಾಲೆಯ ಮೋಹನ್, ಗಂಗಾಧರ್, ದೀಕ್ಷಿತ್, ಶ್ರೀಶಾಂತ್, ಚಂದ್ರಶೇಖರ್, ಕೆ. ಧರ್ಮ, ಉಸ್ಮಾನ್, ಜೆ.ಎಸ್. ಅಶೋಕ್ ಅವರಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು.

ಟ್ರಸ್ಟಿನ ಸಂಸ್ಥಾಪಕ ಎಂ.ಸಿ. ಶೋಭಾರಾಣಿ ಕಾರ್ಯಕ್ರಮದ ನೇತೃತ್ವ ವಹಿಸಿದ್ದರು. ಸಮೃದ್ಧಿ ಮತ್ತು ತಂಡದವರು ಪ್ರಾರ್ಥನಾ ನೃತ್ಯ ಪ್ರಸ್ತುತಪಡಿಸಿದರು. ಅರ್ಪಿತಾ ಕಾರ್ಯಕ್ರಮ ನಿರೂಪಿಸಿದರು. ಟ್ರಸ್ಟಿನ ಕಾರ್ಯದರ್ಶಿ ಲಕ್ಷ್ಮೀಶ ಸ್ವಾಗತಿಸಿದರು. ರಂಜನ್ ಪ್ರಾಸ್ತಾವಿಕ ಭಾಷಣ ಮಾಡಿದರು. ನಂದಿನಿ ಸಾಧಕರು ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಪರಿಚಯಿಸಿದರು.

ಶ್ರೀಮತಿ ಗೋಪಾಲಯ್ಯ, ಶ್ರೀಕಂಠಮೂರ್ತಿ, ರೂಪಾ, ಕೋಟಿ ವೃಕ್ಷದ ಪರಿಸರ ಚಂದ್ರು, ರಂಗಣ್ಣ, ನಾಗರಾಜ್, ಪ್ರದೀಪ್, ಕುಮಾರ್, ನವೀನ್‌ಕುಮಾರ್, ರವಿ, ಮನೋಹರ, ರಾಬರ್ಟ್ ಇತರರಿದ್ದರು.

ಮೈಸೂರು ಮಿತ್ರ

ಮಂಗಳವಾರ 23 ಜುಲೈ 2024

ಮಳವಳ್ಳಿ ಬಳಿ ಭೀಕರ ರಸ್ತೆ ಅಪಘಾತ: ಬೈಕ್ ಸವಾರನ ದೇಹ ಛಿದ್ರ

● ಮಾನವೀಯತೆ ಮರೆತು ವಿಡಿಯೋ ಮಾಡಿಕೊಳ್ಳುತ್ತಿದ್ದ ಸಾರ್ವಜನಿಕರು

● ಪೊಲೀಸರಿಂದ ಗಾಯಾಳು ರಕ್ಷಣೆ, ಆಸ್ಪತ್ರೆಗೆ ದಾಖಲು

ಮಳವಳ್ಳಿ,ಜು.22–ಲಾರಿ ಮತ್ತು ಬೈಕ್ ನಡುವೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ವ್ಯಕ್ತಿಯೊಬ್ಬರು ಸ್ಥಳದಲ್ಲೇ ಸಾವನ್ನಪ್ಪಿ, ಮತ್ತೊಬ್ಬ ತೀವ್ರ ಗಾಯಗೊಂಡಿರುವ ಘಟನೆ ತಾಲೂಕಿನ ಮರಕಾಲು ಗೇಟ್ ಬಳಿ ನಡೆದಿದೆ.

ತಾಲೂಕಿನ ಕೊದೇನಕೊಪ್ಪಲು ಗ್ರಾಮದ ಮಾದೇಗೌಡ(63) ಸ್ಥಳದಲ್ಲೇ ಸಾವನ್ನಪ್ಪಿದ್ದು, ಹಿಂಬದಿ ಸವಾರ ಬಸವೇಗೌಡ ತೀವ್ರ ಗಾಯಗೊಂಡವರು.

ಮಾದೇಗೌಡ ತಮ್ಮ ಬೈಕ್‌ನಲ್ಲಿ ಬಸವೇಗೌಡರ ಜೊತೆ ಕೊದೇನಕೊಪ್ಪಲು ಗ್ರಾಮದಿಂದ ಮಳವಳ್ಳಿಗೆ ಬರುತ್ತಿದ್ದ ವೇಳೆ ಮೈಸೂರು–ಮಳವಳ್ಳಿ ರಾಜ್ಯ ಹೆದ್ದಾರಿಯ ಮರಕಾಲು ಗೇಟ್ ಬಳಿ



ಹಿಂದಿನಿಂದ ವೇಗವಾಗಿ ಬಂದ ಲಾರಿಯೊಂದು ಬೈಕ್‌ಗೆ ಡಿಕ್ಕಿ ಹೊಡೆಯಿತು ಎನ್ನಲಾಗಿದೆ. ಡಿಕ್ಕಿ ಹೊಡೆದ ರಭಸಕ್ಕೆ ಮಾದೇಗೌಡರ ದೇಹ ರುಂಡ ಮುಂಡ ಎರಡು ಭಾಗವಾಗುವುದರ ಜೊತೆಗೆ ಮೇಲ್ಭಾಗದ ದೇಹ ಸಂಪೂರ್ಣ ಛಿದ್ರಗೊಂಡು ಸ್ಥಳದಲ್ಲೇ ಸಾವನ್ನಪ್ಪಿದರು.

ಅಪಘಾತ ನಡೆದು ವ್ಯಕ್ತಿಯೊಬ್ಬ ಸಾವನ್ನಪ್ಪಿ ಮತ್ತೊಬ್ಬ ಗಾಯಗೊಂಡಿದ್ದರೂ ಕೂಡ ಪೊಲೀಸರು ಸ್ಥಳಕ್ಕೆ ಬರುವ ತನಕ ಸಾರ್ವಜನಿಕರು ವಿಡಿಯೋ ಮಾಡಿಕೊಳ್ಳುತ್ತಿದ್ದರೆ ಹೊರತು ಆಸ್ಪತ್ರೆಗೆ ಕರೆದೊಯ್ಯಲು ಯಾರು ಮುಂದೆ ಬಾರದಿರುವುದು ಮಾನವೀಯತೆ ಎಂಬ ಪದ ಘಟನೆ ಸ್ಥಳದಲ್ಲಿ ಅಣಕ ಮಾಡುವಂತಿತ್ತು.

ಅಪಘಾತವಾಗಿರುವ ಸುದ್ದಿ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಆಗಮಿಸಿದ ಸಿಪಿಐ ಶ್ರೀಧರ್ ಹಾಗೂ ಎಸ್‌ಐ ರವಿಕುಮಾರ್ ತಮ್ಮ ಕಾರಿನಲ್ಲೇ ಬಸವೇಗೌಡರನ್ನು ಆಸ್ಪತ್ರೆಗೆ ದಾಖಲಿಸಿ ಸಾರ್ವಜನಿಕರ ಪ್ರಶಂಸೆಗೆ ಪಾತ್ರರಾಗಿದ್ದಾರೆ. ಈ ಸಂಬಂಧ ಕಿರುಗಾವಲು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕನ್ನಡಿಗರ ಉದ್ಯೋಗ ಮೀಸಲಾತಿ ವಿಧೇಯಕ ಮಂಡನೆಗೆ ಆಗ್ರಹಿಸಿ ಪ್ರತಿಭಟನೆ



ರಸ್ತೆಯಲ್ಲೇ ಮಲಗಿ ಪ್ರತಿಭಟನೆ ನಡೆಸಿದ ಕನ್ನಡ ಸೇನೆ ಕಾರ್ಯಕರ್ತರು.

ಮಂಡ್ಯ,ಜು.22–ಖಾಸಗಿ ವಲಯದಲ್ಲಿ ಕನ್ನಡಿಗರಿಗೆ ಉದ್ಯೋಗ ಮೀಸಲಾತಿ ಕಲ್ಪಿಸುವ ವಿಧೇಯಕವನ್ನು ಶಾಸನ ಸಭೆಯಲ್ಲಿ ಮಂಡನೆ ಮಾಡುವಂತೆ ಒತ್ತಾಯಿಸಿ ಕನ್ನಡ ಸೇನೆ ಕಾರ್ಯಕರ್ತರು ಮಂಡ್ಯದಲ್ಲಿ ರಸ್ತೆಯಲ್ಲಿ ಮಲಗಿ ವಿನೂತನ ಪ್ರತಿಭಟನೆ ನಡೆಸಿದರು

ನಗರದ ಜಯಚಾಮರಾಜೇಂದ್ರ ಒಡೆಯರ್ ವೃತ್ತದಲ್ಲಿ ಸೇನೆಯ ಕಾರ್ಯಕರ್ತರು ರಸ್ತೆಯಲ್ಲಿ ಮಲಗಿ ಪ್ರತಿಭಟಿಸುವ ಮೂಲಕ ಕನ್ನಡಿಗರ ಉದ್ಯೋಗ ಮೀಸಲಾತಿ ಕಾಯ್ದೆ ಜಾರಿಗೆ ಒತ್ತಾಯಿಸಿದರು.

ರಾಜ್ಯದ ಖಾಸಗಿ ವಲಯದಲ್ಲಿ ಸ್ಥಳೀಯರಿಗೆ ಸಿ ಮತ್ತು ಡಿ ದರ್ಜೆಯ ಹುದ್ದೆಗಳನ್ನು ಕಡ್ಡಾಯಗೊಳಿಸಲು ರಾಜ್ಯ ಸರ್ಕಾರ ಸಂಪುಟ ಸಭೆ ಒಪ್ಪಿಗೆ ನೀಡಿದೆ, ಆದರೆ ಕೈಗಾರಿಕೋದ್ಯಮಿಗಳು ವಿರೋಧ ಮಾಡಿದ್ದರಿಂದ ಕಾಯ್ದೆ ಜಾರಿಗೆ ತಾತ್ಕಾಲಿಕವಾಗಿ ತಡೆ ನೀಡಿರುವುದು ಕನ್ನಡಿಗರಿಗೆ ಮಾಡಿದ ದ್ರೋಹವಾಗಿದೆ, ವಿಧೇಯಕವನ್ನು ಶಾಸನ ಸಭೆಗಳಲ್ಲಿ ಮಂಡಿಸಿ ಅಂಗೀಕಾರ ಪಡೆದು ಕಾಯ್ದೆ ಜಾರಿ ಮಾಡುವ ಮೂಲಕ ಕಾರ್ಪೊರೇಟ್ ವಲಯದ ಉದ್ಯಮಿಗಳಿಗೆ ತಕ್ಕ ಪಾಠ ಕಲಿಸಬೇಕು ಎಂದು ಆಗ್ರಹಿಸಿದರು.

ಕನ್ನಡ ನಾಡಿನಲ್ಲಿ ಕನ್ನಡಿಗರಿಗೆ ಉದ್ಯೋಗವಕಾಶ ದೊರಕಿಸಿ ಕೊಡುವ ಡಾ.ಸರೋಜಿನಿ ಮಹಿಷಿ ವರದಿಯನ್ನು ಜಾರಿ ಮಾಡಬೇಕು ಎಂಬುದು ಕನ್ನಡಿಗರ ಬಹುದಿನದ ಬೇಡಿಕೆಯಾಗಿದ್ದು ಇದಕ್ಕಾಗಿ ನಿರಂತರ ಹೋರಾಟ ಮಾಡುತ್ತಾ ಬರಲಾಗಿದೆ, ಆದರೆ ಕಾರ್ಪೊರೇಟ್ ವಲಯದ ಉದ್ಯಮಿಗಳು ಕನ್ನಡಿಗರಿಗೆ ಉದ್ಯೋಗ ಮೀಸಲಾತಿ ವಿಧೇಯಕವನ್ನು ವಿರೋಧ ಮಾಡುತ್ತಿರುವುದನ್ನು ಪ್ರತಿಭಟನಾ ನಿರತರು ಖಂಡಿಸಿದರು.

ಕರ್ನಾಟಕದಲ್ಲಿ ನಿರುದ್ಯೋಗ ಸಮಸ್ಯೆ ಹೆಚ್ಚಾಗುತ್ತಿರುವುದನ್ನು ಆಳುವ ಸರ್ಕಾರ ಕಂಡಿದೆ, ಕನ್ನಡಿಗರಿಗೆ ಉದ್ಯೋಗ ಕಲ್ಪಿಸಲು ಸರ್ಕಾರ ಮುಂದಾಗಿರುವುದು ಒಳ್ಳೆಯ ಬೆಳವಣಿಗೆ, ಆದರೆ ಸರ್ಕಾರ ಕೊಟ್ಟ ಮಾತಿನಂತೆ ನಡೆದುಕೊಳ್ಳಬೇಕು, ಯಾರ ಮಾತಿಗೂ ಮನ್ನಣೆ ನೀಡದೆ ವಿಧೇಯಕವನ್ನು ಪ್ರಸ್ತುತ ನಡೆಯುತ್ತಿರುವ ಅಧಿವೇಶನದಲ್ಲಿ ಉಭಯ ಶಾಸನಸಭೆಗಳಲ್ಲಿ ಮಂಡನೆ ಮಾಡಬೇಕು, ಮೂರು ಪಕ್ಷದ ಚುನಾಯಿತ ಜನಪ್ರತಿನಿಧಿಗಳು ಸರ್ವಾನುಮತದಿಂದ ವಿಧೇಯಕ ಅನುಮೋದಿಸಿ ಅಂಗೀಕರಿಸಬೇಕು ಎಂದು ಒತ್ತಾಯಿಸಿದರು.

ರಾಜ್ಯದ ಏಳು ಕೋಟಿ ಕನ್ನಡಿಗರು ಸರ್ಕಾರದ ಬೆನ್ನಿಗೆ ನಿಲ್ಲಲಿದ್ದು ಯಾವುದೇ ಕಾರಣಕ್ಕೂ ಹಿಂದೆ ಸರಿಯಬಾರದು. ಹಾಗೊಮ್ಮೆ ರಾಜ್ಯ ಸರ್ಕಾರ ಕನ್ನಡಿಗರಿಗೆ ಉದ್ಯೋಗ ಕಲ್ಪಿಸುವ ಕಾಯ್ದೆ ಜಾರಿಗೆ ಮುಂದಾಗದಿದ್ದರೆ ರಾಜ್ಯದ ಎಲ್ಲೆಡೆ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಕನ್ನಡ ಸೇನೆಯ ಹೆಚ್.ಸಿ.ಮಂಜುನಾಥ್, ಜಿ.ಮಹಾಂತಪ್ಪ, ರಾಘವೇಂದ್ರ, ಕುಮಾರ, ಕೆ.ಎಸ್.ಆತ್ಮಾನಂದ, ಅಶೋಕ್, ಇಂದುಮತಿ, ಪ್ರತಿಮಾ, ಲಕ್ಷ್ಮಿ, ರಂಜಿತ್, ಮನೋಜ್, ಪ್ರಸನ್ನ ಭಾಗವಹಿಸಿದ್ದರು.

ವಿಶ್ವೇಶ್ವರಯ್ಯ ಪ್ರತಿಮೆಗೆ ಮಾಲಾರ್ಪಣೆ



ಮಂಡ್ಯ ಜಿಲ್ಲೆಯ ಕೆಆರ್‌ಎಸ್‌ಗೆ ತೆರಳುತ್ತಿದ್ದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾರ್ಗ ಮಧ್ಯೆ ಶ್ರೀರಂಗಪಟ್ಟಣ ತಾಲೂಕಿನ ಪಾಲಹಳ್ಳಿ ಗ್ರಾಮದ ವಿಶ್ವೇಶ್ವರಯ್ಯ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಹಾಗೂ ಜಿಲ್ಲಾ ಡಿ.ಸಿ.ಸಿ ಬ್ಯಾಂಕ್ ನಿರ್ದೇಶಕರಾದ ಪಿ.ಎಸ್.ಚಂದ್ರಶೇಖರ್ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಊಚನಹಳ್ಳಿ ಡೇರಿಗೆ ಮಮತಾ ಕೃಷ್ಣೇಗೌಡ ಅಧ್ಯಕ್ಷೆ



ಕೆ.ಆರ್.ಪೇಟೆ ತಾಲೂಕಿನ ಶೀಳನೆರೆ ಹೋಬಳಿಯ ಊಚನಹಳ್ಳಿ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ಆಡಳಿತ ಮಂಡಳಿಗೆ ನೂತನ ಅಧ್ಯಕ್ಷರಾಗಿ ಮಮತಾ ಕೃಷ್ಣೇಗೌಡ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷೆ ಮಂಜುಳಾ ಚಲುವರಾಜು, ನಿರ್ದೇಶಕರಾದ ನಿರ್ಮಲ ಪುಟ್ಟಶೇಖರ್, ರೂಪ ಪುಟ್ಟಸ್ವಾಮಿ, ಸವಿತಾ ಸಂತೋಷ್, ಶಶಿಕಲಾ ಯೋಗೇಶ್, ಲತಾ ನಾಗೇಶ್, ಊಚನಹಳ್ಳಿ ನಟರಾಜ್, ಸದಾಶಿವ, ಪುಟ್ಟಶೇಖರ್, ಪುಟ್ಟಸ್ವಾಮಿ, ಕೃಷ್ಣೇಗೌಡ, ಸಂಘದ ಕಾರ್ಯದರ್ಶಿ ಭಾಗ್ಯ ಬಿಕೆ, ಶಿವಮೂರ್ತಿ ಮತ್ತಿತರರು ಉಪಸ್ಥಿತರಿದ್ದರು.

ಕಲಬೆರಕೆ ಆಹಾರದಿಂದಾಗಿ ಮನುಷ್ಯರಲ್ಲಿ ಜಠರ, ಕರುಳಿನ ಸಮಸ್ಯೆ ಹೆಚ್ಚಳ: ಡಾ.ನಿಶ್ಚಯ್



ಡಾ.ಆರ್.ನಿಶ್ಚಯ್

ಮಂಡ್ಯ,ಜು.22– ಜಾಗತಿಕವಾಗಿ ಸರಿಸುಮಾರು 40 ಪ್ರತಿಶತದಷ್ಟು ಜನರು ದೀರ್ಘಕಾಲದ ಜಠರ ಹಾಗೂ ಕರುಳಿನ ಸಮಸ್ಯೆಗಳಿಂದ ಬಳಲುತ್ತಿದ್ದಾರೆ. ಇತ್ತೀಚಿಗೆ ಕಲಬೆರಕೆಯಿಂದಾಗಿ ಕ್ಷೀಣಿಸುತ್ತಿರುವ ಆಹಾರದ ಗುಣಮಟ್ಟ, ಬದಲಾಗುತ್ತಿರುವ ಜೀವನಶೈಲಿ, ಮತ್ತು ಆಹಾರ ಪದ್ಧತಿ, ಜಿಐ ಸಮಸ್ಯೆಗಳ ಸಾಮಾನ್ಯತೆಗೆ ಮುಖ್ಯ ಕಾರಣಗಳಾಗಿವೆ. ಜೀವನದ ಗುಣಮಟ್ಟದ ಮೇಲೆ ಈ ಸಮಸ್ಯೆಗಳು ಗಂಭೀರ ಪರಿಣಾಮ ಬೀರಬಹುದು ಎಂದು ಮೈಸೂರಿನ ಮಣಿಪಾಲ ಆಸ್ಪತ್ರೆಯ ಮೆಡಿಕಲ್ ಗ್ಯಾಸ್ಟ್ರೋಎಂಟರಾಲಜಿಸ್ಟ್ ಮತ್ತು ಹೆಪಟಾಲಜಿಸ್ಟ್ ಕನ್ಸಲ್ಟೆಂಟ್ ಡಾ.ಆರ್.ನಿಶ್ಚಯ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹೊಟ್ಟೆನೋವಿನಂತಹ ಸಾಮಾನ್ಯ ಸಮಸ್ಯೆಗಳಿಂದ ಹಿಡಿದು ತೀವ್ರವಾದ ಗ್ಯಾಸ್ಟ್ರೋಎಂಟರೈಟಿಸ್, ಹೆಪಟೈಟಿಸ್ ಮತ್ತು ಲಿವರ್ ಸಿರೋಸಿಸ್‌ನಂತಹ ಗಂಭೀರ ಸಮಸ್ಯೆಗಳವರೆಗೆ ವಿವಿಧ ರೋಗಲಕ್ಷಣಗಳನ್ನು ಉಂಟುಮಾಡಬಹುದು. ಈ ಸವಾಲುಗಳನ್ನು ಎದುರಿಸಲು, ಹೆಚ್ಚುತ್ತಿರುವ ಜಿಐ ಆರೋಗ್ಯ ಸಮಸ್ಯೆಗಳ ಬಗ್ಗೆ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಹೇಳಿದರು.

ಹೊಟ್ಟೆನೋವು, ಉಬ್ಬುವುದು, ಅತಿಸಾರ, ಮಲಬದ್ಧತೆ, ವಾಕರಿಕೆ ಮತ್ತು ವಾಂತಿಯಂತಹ ಕಡಿಮೆ ತೀವ್ರವಾದ ಸಮಸ್ಯೆಗಳಿಂದ ಹಿಡಿದು ಜಠರ ಹುಣ್ಣು ಕಾಯಿಲೆ, ಗ್ಯಾಸ್ಟ್ರೋಸೊಫೇಜಿಲ್ ರಿಫ್ಲಕ್ಸ್ ಕಾಯಿಲೆ, ಉರಿಯೂತದ ಕರುಳಿನ ಕಾಯಿಲೆಗಳು, ಅಲ್ಸರೇಟಿವ್ ಕೊಲೈಟಿಸ್ ಮತ್ತು ಕ್ರೋನ್ಸ್ ಕಾಯಿಲೆಯಂತಹ ಹೆಚ್ಚು ಗಂಭೀರವಾದ ಜಿಐ ಸಮಸ್ಯೆಗಳು ಮತ್ತು ಯಕೃತ್ತಿನ ಆರೋಗ್ಯದ ಕಾಳಜಿ ಅಗತ್ಯ ಎಂದರು.

ಪ್ರಸ್ತುತ ಆಹಾರ ಪದ್ಧತಿ ಮತ್ತು ಆಹಾರ ಉತ್ಪನ್ನಗಳ ಕಲಬೆರಕೆಯಿಂದಾಗಿ, ಜಿಐ ಸೋಂಕುಗಳು ಮತ್ತು ಆಹಾರ ವಿಷವು ಆತಂಕಕಾರಿಯಾಗಿ ಆಗಾಗ್ಗೆ ಸಂಭವಿಸುತ್ತದೆ. ಅಂತಹ ಸಮಸ್ಯೆಗಳನ್ನು ತಪ್ಪಿಸಲು ಚೆನ್ನಾಗಿ ಬೇಯಿಸಿದ ಮತ್ತು ಉತ್ತಮವಾಗಿ ಸಂರಕ್ಷಿಸಲಾದ ಆಹಾರವನ್ನು ಸೇವಿಸುವುದು ಬಹಳ ಮುಖ್ಯ. ಯಾವುದೇ ಸೋಂಕು ಇಲ್ಲದೆಯೂ ಕೂಡ ಜಠರ ಹಾಗೂ ಕರುಳಿನ ಸಮಸ್ಯೆಗಳ ಹೆಚ್ಚಳವನ್ನು ಸಹ ನಾವು ಗಮನಿಸುತ್ತಿದ್ದೇವೆ. ಬದಲಾಗುತ್ತಿರುವ ಜೀವನ ಶೈಲಿ ಮತ್ತು ಅದರಿಂದ ಉಂಟಾಗುವ ಒತ್ತಡ ಈ ತರಹದ ಸಮಸ್ಯೆಗಳಿಗೆ ಮುಖ್ಯ ಕಾರಣಗಳಾಗಿವೆ. ಈ ಪರಿಸ್ಥಿತಿಗಳನ್ನು ನಿರ್ವಹಿಸುವಲ್ಲಿ ಸರಿಯಾದ ವೈದ್ಯಕೀಯ ಸಮಾಲೋಚನೆ ಮತ್ತು ಚಿಕಿತ್ಸೆಯು ಅತ್ಯಗತ್ಯವಾಗಿದೆ ಎಂದು ಅವರು ವಿವರಿಸಿದರು.

ಕರುಳಿನ ಆರೋಗ್ಯಕ್ಕೆ ಪ್ರಯೋಜನಕಾರಿಯಾದ, ನಿಯಮಿತ ಹಾಗೂ ಸರಿಯಾದ ಸಮಯದಲ್ಲಿ ಆಹಾರ ಸೇವನೆ, ಊಟವಾದ ತಕ್ಷಣ ಮಲಗದಿರುವುದು, ಇಂತಹ ಮುಂತಾದ ಸರಳ ಕ್ರಮಗಳನ್ನು ಪಾಲಿಸುವುದು ಉತ್ತಮ. ಈ ಕ್ರಮಗಳು ಜಠರ ಹುಣ್ಣುಗಳನ್ನು ತಡೆಗಟ್ಟಲು, ಅನ್ನನಾಳಕ್ಕೆ ಆಮ್ಲ ಮರುಕಳಿಕೆಯನ್ನು ಕಡಿಮೆ ಮಾಡಲು ಮತ್ತು ಎದೆಯುರಿಯನ್ನು ನಿವಾರಿಸಲು ಸಹಕರಿಸುತ್ತವೆ ಎಂದರು.

ಜಿಐ ರಕ್ತಸ್ರಾವದಂತಹ ತೀವ್ರ ಪರಿಸ್ಥಿತಿಗಳ ಬಗ್ಗೆ ಮಾತನಾಡಿ, ಜೀವಕ್ಕೆ ಅಪಾಯಕಾರಿಯಾಗಬಹುದಾದ ಈ ಸಮಸ್ಯೆಗಳ ತುರ್ತು ನಿರ್ವಹಣೆ ಮತ್ತು ರಕ್ತಸ್ರಾವವನ್ನು ನಿಲ್ಲಿಸಲು ಜಿಐ ಎಂಡೋಸ್ಕೋಪಿ ಅಗತ್ಯವಿರುತ್ತದೆ ಎಂದರು.

ಮೌಂಟ್ ಅಬು ರಾಷ್ಟ್ರೀಯ ಕಾರ್ಯಕ್ರಮಕ್ಕೆ ಎಚ್‌ಡಿಕೆ

ಕೆ.ಆರ್.ಪೇಟೆ: ಅಂತರರಾಷ್ಟ್ರೀಯ ಆಧ್ಯಾತ್ಮಿಕ ಸಂಸ್ಥೆ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಮೌಂಟ್ ಅಬುವಿನಲ್ಲಿ ಸೆ. 13ರಿಂದ 16ರವರೆಗೆ ನಡೆಯಲಿರುವ ರಾಜಕಾರಣಿಗಳ ಮಹಾಸಭೆ ಹಾಗೂ ಒತ್ತಡ ಮುಕ್ತ ಆಡಳಿತಕ್ಕಾಗಿ ಆಧ್ಯಾತ್ಮಿಕ ಸಬಲೀಕರಣ ಕಾರ್ಯಾಗಾರವನ್ನು ಕೇಂದ್ರ ಬೃಹತ್ ಕೈಗಾರಿಕೆ ಸಚಿವ ಎಚ್.ಡಿ.ಕುಮಾರಸ್ವಾಮಿ ಉದ್ಘಾಟಿಸಲಿದ್ದಾರೆ.



ಮೈಸೂರು ಉಪವಲಯದ ಮುಖ್ಯ ಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ಲಕ್ಷ್ಮೀಜಿ ಅವರು ನಿನ್ನೆ ಸಚಿವರು ಕೆ.ಆರ್.ಪೇಟೆಗೆ ಆಗಮಿಸಿದ್ದಾಗ ಅವರನ್ನು ಸನ್ಮಾನಿಸಿ ಮೌಂಟ್ ಅಬು ಕಾರ್ಯಕ್ರಮಕ್ಕೆ ಆಹ್ವಾನ ಪತ್ರಿಕೆಯನ್ನು ನೀಡಿ ಆಹ್ವಾನಿಸಿದರು. ಸಚಿವರು ಬಹಳ ಸಂತೋಷದಿಂದ ಒಪ್ಪಿಕೊಂಡಿದ್ದಾರೆ ಎಂದು ತಿಳಿಸಿದ್ದಾರೆ. ಕಾರ್ಯಕ್ರಮದಲ್ಲಿ ಬಿ.ಕೆ. ರಂಗನಾಥ್, ಬಿ.ಕೆ.ಜಯಂತಿ ಹಾಜರಿದ್ದರು.

ಕಲ್ಲಿನಿಂದ ಹೊಡೆಯುವ ಬೆದರಿಕೆಯೊಡ್ಡಿ ಮಹಿಳೆ ಚಿನ್ನಾಭರಣ ದೋಚಿದ ಅಪರಿಚಿತರು

ಶ್ರೀರಂಗಪಟ್ಟಣ,ಜು.22–ವಾಕಿಂಗ್‌ಗೆ ಹೊರಟಿದ್ದ ಮಹಿಳೆ ಮೇಲೆ ಕಲ್ಲಿನಿಂದ ಹಲ್ಲೆ ನಡೆಸುವುದಾಗಿ ಬೆದರಿಕೆ ಹಾಕಿ ಬಂಗಾರದ ಆಭರಣ ದೋಚಿ ಪರಾರಿಯಾಗಿರುವ ಘಟನೆ ತಾಲೂಕಿನ ಬಸ್ತಿಪುರ ಗ್ರಾಮದಲ್ಲಿ ಸಂಭವಿಸಿದೆ.

ಕೆ.ಆರ್.ಸಾಗರ–ಹೂಟಗಳ್ಳಿ ರಸ್ತೆ ವಿಬಿ ಸಿಟಿ ಬಡಾವಣೆ ನಿವಾಸಿ ವಿನುತ ಎಂಬುವರೇ ಆಭರಣ ಕಳೆದುಕೊಂಡ ಮಹಿಳೆ. ಭಾನುವಾರ ಸಂಜೆ ವಿನುತ ಎಂದಿನಂತೆ ತಮ್ಮ ಶ್ವಾನಗಳ ಜೊತೆ ಬಸ್ತಿಪುರ ಗ್ರಾಮದ ಚಾಮುಂಡೇಶ್ವರಿ ದೇವಾಲಯ ರಸ್ತೆಯಲ್ಲಿ ವಾಕಿಂಗ್‌ಗೆ ಹೊರಟಿದ್ದ ಸಂದರ್ಭದಲ್ಲಿ ಬೈಕ್‌ನಲ್ಲಿ ಬಂದ ಇಬ್ಬರು ಅಪರಿಚಿತರು ವಿನುತರಿಗೆ ಕಲ್ಲು ತೆಗೆದುಕೊಂಡು ಹೊಡೆಯುವ ಬೆದರಿಕೆ ಹಾಕಿ ಅವರ ಬಳಿ ಇದ್ದ 1.80 ಲಕ್ಷ ಮೌಲ್ಯದ 37 ಗ್ರಾಂ ತೂಕದ ಎರಡು ಬಳೆ, ಒಂದು ಉಂಗುರ, ಮಾಂಗಲ್ಯ ಸರ ಕಿತ್ತುಕೊಂಡು ಪರಾರಿಯಾಗಿದ್ದು ಕೆ.ಆರ್.ಸಾಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಸ್ಥಳಕ್ಕೆ ಸಿಪಿಐ ಪುನೀತ್, ಪಿಎಸ್‌ಐ ಬಸವರಾಜು ಹಾಗು ಸಿಬ್ಬಂದಿ ಭೇಟಿ ನೀಡಿದ್ದರು.

ನೀಟ್–ಯುಜಿ: ವಿವಾದಿತ ಪ್ರಶ್ನೆಯ ಉತ್ತರ ಪರಿಶೀಲನೆಗೆ ಐಐಟಿ ತಜ್ಞರಿಗೆ ಸುಪ್ರೀಂಕೋರ್ಟ್ ಆದೇಶ

ನವದೆಹಲಿ: ನೀಟ್–ಯುಜಿ ಪರೀಕ್ಷೆಯಲ್ಲಿನ ವಿವಾದಿತ ಪ್ರಶ್ನೆಗೆ ಸರಿಯಾದ ಉತ್ತರವನ್ನು ಮೌಲ್ಯಮಾಪನ ಮಾಡಲು ಮತ್ತು ನಿರ್ಧರಿಸಲು ಮಂಗಳವಾರ ಮಧ್ಯಾಹ್ನದೊಳಗೆ ಮೂವರು ವಿಷಯ ತಜ್ಞರ ಸಮಿತಿ ರಚಿಸುವಂತೆ ಸುಪ್ರೀಂ ಕೋರ್ಟ್ ಸೋಮವಾರ ಐಐಟಿ ದೆಹಲಿಯ ನಿರ್ದೇಶಕರಿಗೆ ಸೂಚನೆ ನೀಡಿದೆ.

ಒಂದೇ ಪ್ರಶ್ನೆಗೆ ಎರಡು ಸಂಭವನೀಯ ಉತ್ತರಗಳಿಗೆ ಅಂಕಗಳನ್ನು ನೀಡುವ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ನಿರ್ಧಾರದ ವಿರುದ್ಧ ಕೆಲವು ವಿದ್ಯಾರ್ಥಿಗಳ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಡಿ.ವೈ. ಚಂದ್ರಚೂಡ್ ನೇತೃತ್ವದ ಸುಪ್ರೀಂಕೋರ್ಟ್ ತ್ರಿಸದಸ್ಯ ಪೀಠ ಈ ನಿರ್ದೇಶನ ನೀಡಿದೆ. ಪರೀಕ್ಷೆಯಲ್ಲಿ ಒಂದೇ ಪ್ರಶ್ನೆಗೆ ಎರಡು ಸರಿಯಾದ ಉತ್ತರಗಳಿವೆ ಎಂದು ಕೆಲವು ಅರ್ಜಿದಾರರು ತಿಳಿಸಿದ ನಂತರ ಸುಪ್ರೀಂ ಕೋರ್ಟ್ ಈ ಆದೇಶ ನೀಡಿದೆ.

ಹಳೆಯ ಮತ್ತು ಹೊಸ NCERT ಪಠ್ಯಕ್ರಮಗಳ ಪ್ರಕಾರ, NTA, ಸರಿಯಾದ ಆಯ್ಕೆಗಳಲ್ಲಿ ಒಂದನ್ನು ಆಯ್ಕೆ ಮಾಡಿದ ವಿದ್ಯಾರ್ಥಿಗಳಿಗೆ ಅಂಕಗಳನ್ನು ನೀಡಿದೆ. ಎನ್‌ಟಿಎ ನಿರ್ಧಾರವು ಅಸಮಂಜಸ ಮತ್ತು ಅನ್ಯಾಯವಾಗಿದೆ ಎಂದು ಅರ್ಜಿದಾರರು ನ್ಯಾಯಾಲಯದಲ್ಲಿ ವಾದಿಸಿದ್ದಾರೆ.

ಪೇಪರ್ ಸೋರಿಕೆ ಮತ್ತು ಇತರ ಅವ್ಯವಹಾರಗಳ ಆರೋಪಗಳನ್ನು ಒಳಗೊಂಡಿರುವ ಪ್ರಕರಣವು ಜುಲೈ 23 ರಂದು ತನ್ನ ವಿಚಾರಣೆ ಪುನರಾರಂಭಿಸಲಿದೆ. ಏಕೆಂದರೆ ನ್ಯಾಯಾಲಯವು ವಿದ್ಯಾರ್ಥಿಗಳು ಎತ್ತಿರುವ ಕಳವಳಗಳನ್ನು ಪರಿಹರಿಸಲು ಮತ್ತು ಪರೀಕ್ಷಾ ಪ್ರಕ್ರಿಯೆಯ ಸಮಗ್ರತೆಯನ್ನು ಖಚಿತಪಡಿಸಿಕೊಳ್ಳಲು ಪ್ರಯತ್ನಿಸುತ್ತಿದೆ.

ನೀಟ್–ಯುಜಿ ಪರೀಕ್ಷೆಯನ್ನು ಯಾವುದೇ ಕಾರ್ಯವಿಧಾನಗಳನ್ನು ಅನುಸರಿಸದೆ ನಡೆಸಲಾಗಿದೆ. ಇದು ಸಂಪೂರ್ಣ ವ್ಯವಸ್ಥಿತ ವೈಫಲ್ಯ. ಯಾವುದೇ ಸ್ಥಳದಲ್ಲಿ ಯಾವುದೇ ವಿಳಾಸ ಪರಿಶೀಲನೆ ಮತ್ತು ಸಿಸಿಟಿವಿ ಕ್ಯಾಮೆರಾ ಮೇಲ್ವಿಚಾರಣೆ ಇಲ್ಲ ಎಂದು ನೀಟ್–ಯುಜಿ ಎಂದು ಅರ್ಜಿದಾರರು ಆರೋಪಿಸಿದ್ದಾರೆ.

ಕಾಲು ಕೆರೆದು ಜಗಳಕ್ಕೆ ಬರಬೇಡಿ: ತಮಿಳುನಾಡು ಸಿಎಂಗೆ ಎಚ್‌ಡಿಕೆ ಕಿವಿಮಾತು

ನವದೆಹಲಿ: ಸುಖಾ ಸುಮ್ಮನೆ ಕಾಲು ಕೆರೆದು ಜಗಳಕ್ಕೆ ಬರಬೇಡಿ ಎಂದು ತಮಿಳುನಾಡು ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ಹಾಗೂ ಅಲ್ಲಿನ ರಾಜಕಾರಣಿಗಳಿಗೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಕಿವಿಮಾತು ಹೇಳಿದ್ದಾರೆ.



ಕರ್ನಾಟಕದಲ್ಲಿ ಉತ್ತಮ ಮಳೆಯಾಗುತ್ತಿದೆ. ಕಳೆದ ಐದಾರು ದಿನಗಳಿಂದ ಕೆಆರ್‌ಎಸ್ ಮತ್ತು ಕಬಿನಿ ಜಲಾಶಯಗಳಿಂದ ಪ್ರತಿದಿನ ಎಂಟರಿಂದ ಹತ್ತು ಟಿಎಂಸಿ ನೀರು ಹರಿದುಹೋಗಿದೆ. ಜೂನ್ ಮತ್ತು ಜುಲೈ ತಿಂಗಳಿನಲ್ಲಿ ಎಷ್ಟೆಲ್ಲಾ ನೀರು ಹರಿಸಬೇಕಾಗಿತ್ತೋ ಅಷ್ಟೂ ನೀರನ್ನು ಈ ತಿಂಗಳಲ್ಲಿ ಸಂಪೂರ್ಣವಾಗಿ ಹರಿಸಲಾಗಿದೆ. ಕಾವೇರಿ ಜಲ ನಿರ್ವಹಣಾ ಸಮಿತಿ ಮತ್ತು ಪ್ರಾಧಿಕಾರ ಹೇಳಿದ್ದಕ್ಕಿಂತ ಹೆಚ್ಚು ಪ್ರಮಾಣದ ನೀರು ತಮಿಳುನಾಡಿಗೆ ಹೋಗಿದೆ ಎಂದು ಅವರು ತಿಳಿಸಿದ್ದಾರೆ.

ಕರ್ನಾಟಕದ ಬಗ್ಗೆ ನಿಮ್ಮ ನಡವಳಿಕೆಗಳನ್ನು ತಿದ್ದಿಕೊಳ್ಳಿ. ಮಳೆ ನಿರಂತರವಾಗಿ ಬಂದಾಗ ನಿಮಗಾಗಲಿ ಅಥವಾ ನಿಮ್ಮ ರೈತರಿಗಾಗಲಿ ನೀರಿನ ಕೊರತೆ ಮಾಡಿಲ್ಲ. ಹಲವಾರು ವರ್ಷ ನಿಮಗೆ ಕೊಡಬೇಕಾದ ನೀರಿಗಿಂತ ಮೂರು ಪಟ್ಟು ಹೆಚ್ಚು ನೀರನ್ನು ಕೊಟ್ಟಿದ್ದೇವೆ. ನಾವು ಬಿಟ್ಟ ನೀರೆಲ್ಲವೂ ಸಮುದ್ರಕ್ಕೆ ಹೋಗ್ತಾ ಇರುವುದನ್ನು ನಾವು ಕಾಣುತ್ತಿದ್ದೇವೆ ಎಂದು ಅವರು ಹೇಳಿದರು.

ವ್ಯರ್ಥವಾಗಿ ಸಮುದ್ರಕ್ಕೆ ಸೇರುವ ನೀರನ್ನು ಸದ್ಬಳಕೆ ಮಾಡಿಕೊಳ್ಳುವ ಉದ್ದೇಶದಿಂದ, ಎರಡೂ ರಾಜ್ಯಗಳ ರೈತರಿಗೆ ಹಾಗೂ ಕುಡಿಯುವ ನೀರಿಗೆ ಅನುಕೂಲವಾಗುವಂತೆ ಮೇಕೆದಾಟು ಯೋಜನೆ ನಿರ್ಮಾಣ ಆಗಬೇಕಿದೆ. ಅನೇಕ ವರ್ಷಗಳಿಂದ ಈ ಬಗ್ಗೆ ತಮಿಳುನಾಡು ಆಕ್ಷೇಪ ತೆಗೆಯುತ್ತಿದೆ. ಇದರ ಬಗ್ಗೆ ತಮಿಳುನಾಡು ಸರ್ಕಾರ ಅರ್ಥ ಮಾಡಿಕೊಳ್ಳಬೇಕಿದೆ ಎಂದು ಅವರು ಕಿವಿಮಾತು ಹೇಳಿದರು

ಡಿಕೆಶಿಗೆ ತಿರುಗೇಟು: ನೀರಿನ ವಿಷಯದಲ್ಲಿಯೂ ರಾಜ್ಯ ಕಾಂಗ್ರೆಸ್ ಸರಕಾರ ಚಿಲ್ಲರೆ ರಾಜಕಾರಣ ಮಾಡುತ್ತಿದೆ. ನಾವೆಂದೂ ಚಿಲ್ಲರೆ ರಾಜಕಾರಣ ಮಾಡಿಲ್ಲ. ಅತ್ಯಂತ ಕೆಟ್ಟ ರೀತಿಯಲ್ಲಿ ಕೇಂದ್ರದ ಸಚಿವರನ್ನು ನಡೆಸಿಕೊಳ್ಳುವುದು, ಲಘುವಾಗಿ ಮಾತನಾಡುವುದು ಶೋಭೆಯಲ್ಲ ಇಂಥ ನಡವಳಿಕೆಯನ್ನು ಪ್ರತಿದಿನವೂ ನಾನು ಕಾಣುತ್ತಿದ್ದೇನೆ ಮೊದಲು ಇಂಥ ರಾಜಕಾರಣವನ್ನು ನಿಲ್ಲಿಸಿ. ರಾಜ್ಯದ ಅಭಿವೃದ್ಧಿಗೆ ಪೂರಕವಾದ ನಡವಳಿಕೆ ಅಳವಡಿಸಿಕೊಳ್ಳಿ ಎಂದು ಕುಮಾರಸ್ವಾಮಿ ಅವರು ಡಿಕೆಶಿಗೆ ತಿರುಗೇಟು ನೀಡಿದರು.

ಕರ್ನಾಟಕ ನೀರಾವರಿ ತಿದ್ದುಪಡಿ ಸೇರಿದಂತೆ ಎರಡು ವಿಧೇಯಕಗಳ ಮಂಡನೆ

ಬೆಂಗಳೂರು: ನೀರಾವರಿ ನಾಲುವೆಗಳಿಂದ ಅಕ್ರಮವಾಗಿ ನೀರು ಹರಿಸುವುದನ್ನು ತಡೆಗಟ್ಟಲು ಮತ್ತು ಕೊನೆಯವರೆಗೂ ನೀರು ತಲುಪುವುದನ್ನು ಖಚಿತಪಡಿಸಿಕೊಳ್ಳಲು ಕರ್ನಾಟಕ ಸರ್ಕಾರ ಸೋಮವಾರ ವಿಧಾನಸಭೆಯಲ್ಲಿ ಮಸೂದೆಯನ್ನು ಮಂಡಿಸಿದೆ. ಆಸ್ತಿ ತೆರಿಗೆ ಬಾಕಿ ಸಂಗ್ರಹಿಸಲು ವಿಫಲರಾದ ಪಾಲಿಕೆ ಅಧಿಕಾರಿಗಳಿಗೆ ದಂಡ ವಿಧಿಸಿ ಜೈಲು ಶಿಕ್ಷೆ ವಿಧಿಸುವ ಇನ್ನೊಂದು ವಿಧೇಯಕವನ್ನೂ ವಿಧಾನಸಭೆಯಲ್ಲಿ ಮಂಡಿಸಲಾಯಿತು.

ಜಲಸಂಪನ್ಮೂಲ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಮಂಡಿಸಿದ ಕರ್ನಾಟಕ ನೀರಾವರಿ (ತಿದ್ದುಪಡಿ) ವಿಧೇಯಕವು ಈ ಹಿಂದಿದ್ದ 1,000 ರೂ.ನಿಂದ 2 ಲಕ್ಷ ರೂ. ದಂಡ ಮತ್ತು ಎರಡು ವರ್ಷಗಳವರೆಗೆ ಜೈಲು ಶಿಕ್ಷೆಯನ್ನು ಪ್ರಸ್ತಾಪಿಸಿದೆ. ಮಸೂದೆ ಪ್ರಕಾರ, ನಾಲೆ ಅಥವಾ ಪೈಪ್ ಒಡೆಯುವುದು, ಕಾಲುವೆ ಒಡೆದು ಪೈಪ್ ಅಳವಡಿಸುವುದು ಅಥವಾ ಪಂಪ್ ಹಾಕುವುದು ಮತ್ತಿತರ ಕಾಲುವೆ ಸುರಕ್ಷತೆಗೆ ಹಾನಿಯಾಗುವಂತಹ ಯಾವುದೇ ಸಲಕರಣೆ ಇಡುವುದು ಉಲ್ಲಂಘನೆಯಾಗಲಿದೆ.

ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಮಂಡಿಸಿದ ಕರ್ನಾಟಕ ಪುರಸಭೆಗಳು ಮತ್ತಿತರ ಕಾನೂನು (ತಿದ್ದುಪಡಿ) ಮಸೂದೆಯಲ್ಲಿ ಅಧಿಕಾರಿಗಳಿಗೆ ದಂಡ ವಿಧಿಸಲು ಅವಕಾಶವಿದೆ. ಮಸೂದೆಯ ಪ್ರಕಾರ ಆಸ್ತಿ ತೆರಿಗೆ ಬಾಕಿಗಳನ್ನು ಸಂಗ್ರಹಿಸಲು ವಿಫಲರಾದ ಪುರಸಭೆಯ ಯಾವುದೇ ಅಧಿಕಾರಿ ಅಥವಾ ನೌಕರನಿಗೆ ಪ್ರತಿ ಪ್ರಕರಣದಲ್ಲಿ ರೂ. 50,000 ವರೆಗೆ ದಂಡ ವಿಧಿಸಲಾಗುತ್ತದೆ ಮತ್ತು 15 ದಿನಗಳ ಜೈಲುವಾಸ ಶಿಕ್ಷೆಯನ್ನು ಸಹ ವಿಧಿಸಬಹುದು.

ಉಪ–ಕಾನೂನುಗಳನ್ನು ಉಲ್ಲಂಘಿಸಿ ನಿರ್ಮಿಸಲಾದ ಅನಧಿಕೃತ ಕಟ್ಟಡಗಳು ಅಥವಾ ಅನಧಿಕೃತ ಲೇಔಟ್‌ಗಳು, ಕಂದಾಯ ಭೂಮಿ ಮತ್ತಿತರ ಕಡೆಗಳಿಂದ ಆಸ್ತಿ ತೆರಿಗೆ ಸಂಗ್ರಹಿಸಲು ಪುರಸಭೆಗಳಿಗೆ ಅಧಿಕಾರ ನೀಡುವ ನಿಬಂಧನೆಯನ್ನು ಇದು ಹೊಂದಿದೆ. ಅಂತಹ ಆಸ್ತಿಗಳು ಮೊದಲ ವರ್ಷಕ್ಕೆ ಪಾವತಿಸಬೇಕಾದ ಆಸ್ತಿ ತೆರಿಗೆಯನ್ನು ದುಪ್ಪಟ್ಟು ಪಾವತಿಸಬೇಕಾಗುತ್ತದೆ. ಸರ್ಕಾರಿ ಭೂಮಿ ಅಥವಾ ಯಾವುದೇ ಸ್ಥಳೀಯ ಸಂಸ್ಥೆ, ಶಾಸನಬದ್ಧ ಸಂಸ್ಥೆ ಅಥವಾ ಸರ್ಕಾರದ ಒಡೆತನದ ಅಥವಾ ನಿಯಂತ್ರಣದಲ್ಲಿರುವ ಸಂಸ್ಥೆಗೆ ಸೇರಿದ ಭೂಮಿಯಲ್ಲಿ ಅಕ್ರಮವಾಗಿ ನಿರ್ಮಿಸಲಾದ ಕಟ್ಟಡಗಳಿಗೆ ಆಸ್ತಿ ತೆರಿಗೆಯನ್ನು ವಿನಾಯಿತಿ ನೀಡಲಾಗುತ್ತದೆ ಎಂದು ಮಸೂದೆಯು ಹೇಳುತ್ತದೆ.

ಒಲಿಂಪಿಕ್ಸ್ ಬಳಿಕ ಹಾಕಿಗೆ ಗೋಲ್‌ಕೀಪರ್ ಶ್ರೀಜೇಶ್ ವಿದಾಯ

ನವದೆಹಲಿ: ಪ್ಯಾರಿಸ್ ಒಲಿಂಪಿಕ್ಸ್ ಬಳಿಕ ಹಾಕಿಗೆ ವಿದಾಯ ಹೇಳುವುದಾಗಿ ಭಾರತದ ಗೋಲ್‌ಕೀಪರ್ ಪಿ.ಆರ್. ಶ್ರೀಜೇಶ್ ಘೋಷಿಸಿದ್ದಾರೆ.



36 ವರ್ಷದ ಶ್ರೀಜೇಶ್ 328 ಅಂತರ ರಾಷ್ಟ್ರೀಯ ಪಂದ್ಯಗಳಲ್ಲಿ ಭಾರತವನ್ನು ಪ್ರತಿನಿಧಿಸಿದ್ದಾರೆ. ಕಾಮನ್‌ವೆಲ್ತ್ ಕ್ರೀಡಾಕೂಟ ಸೇರಿದಂತೆ ಮೂರು ಒಲಿಂಪಿಕ್ ಕ್ರೀಡಾಕೂಟದಲ್ಲಿ ಆಡಿದ್ದಾರೆ. ಇದೇ ಜುಲೈ 26ರಿಂದ ಆರಂಭವಾಗಲಿರುವ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಶ್ರೀಜೇಶ್ ಕಣಕ್ಕಿಳಿಯಲಿದ್ದಾರೆ.

ನಾನೀಗ ನನ್ನ ವೃತ್ತಿಜೀವನದ ಟರ್ನಿಂಗ್ ಪಾಯಿಂಟ್‌ನಲ್ಲಿ ನಿಂತಿದ್ದೇನೆ. ನಾನು ನನ್ನ ವೃತ್ತಿಜೀವನದ ಬಗ್ಗೆ ತುಂಬಾ ಹೆಮ್ಮೆಪಡುತ್ತೇನೆ ಮತ್ತು ಮುಂದೆ ಸಾಗಲು ಎದುರು ನೋಡುತ್ತಿದ್ದೇನೆ. ಇಲ್ಲಿಯವರೆಗಿನ ನನ್ನ ಪ್ರಯಾಣವು ಉತ್ತಮವಾಗಿದ್ದು, ಇದಕ್ಕೆ ಸಹಕಾರ ನೀಡಿದ ನನ್ನ ಕುಟುಂಬ, ತಂಡದ ಸಹ ಆಟಗಾರರು, ಎಲ್ಲಾ ತರಬೇತುದಾರರು, ಅಭಿಮಾನಿಗಳು ಮತ್ತು ಹಾಕಿ ಇಂಡಿಯಾದ ಪ್ರೀತಿ ಮತ್ತು ಬೆಂಬಲಕ್ಕೆ ನಾನು ಶಾಶ್ವತವಾಗಿ ಕೃತಜ್ಞನಾಗಿದ್ದೇನೆ. ನನ್ನ ಮೇಲೆ ನಂಬಿಕೆ ಇಟ್ಟಿದ್ದಕ್ಕಾಗಿ ಧನ್ಯವಾದಗಳು. ಕಷ್ಟದ ಸಮಯದಲ್ಲಿ ಸಹ ಆಟಗಾರರು ನನ್ನ ಬೆಂಬಲಕ್ಕೆ ನಿಂತಿದ್ದಾರೆ. ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಉತ್ತಮ ಪ್ರದರ್ಶನ ತೋರುವ ಮೂಲಕ ನಮ್ಮ ಪದಕದ ಬಣ್ಣವನ್ನು ಬದಲಾಯಿಸಲು ಬಯಸುತ್ತೇನೆ ಎಂದು ಶ್ರೀಜೇಶ್ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿದ್ದಾರೆ.

2010ರ ಹಾಕಿ ವಿಶ್ವಕಪ್‌ನಲ್ಲಿ ಪಾದಾರ್ಪಣೆ ಮಾಡಿದ ಶ್ರೀಜೇಶ್, 2014ರ ಏಷ್ಯನ್ ಗೇಮ್ಸ್‌ನಲ್ಲಿ ಚಿನ್ನ ಮತ್ತು 2018ರ ಚಾಂಪಿಯನ್ಸ್ ಟ್ರೋಫಿಯಲ್ಲಿ ಕಂಚಿನ ಪದಕ ಗೆಲುವಲ್ಲಿ ಪ್ರಮುಖ ಪಾತ್ರವಹಿಸಿದ್ದರು.

ಶ್ರೀಜೇಶ್ ಅವರು ಗೋಲ್‌ಕೀಪಿಂಗ್ ಮೂಲಕ ಒಲಿಂಪಿಕ್ಸ್, ಏಷ್ಯನ್ ಗೇಮ್ಸ್, ಕಾಮನ್‌ವೆಲ್ತ್ ಗೇಮ್ಸ್ ಮತ್ತು ಚಾಂಪಿಯನ್ಸ್ ಟ್ರೋಫಿಯಂತಹ ಟೂರ್ನಿಯಲ್ಲಿ ಅನೇಕ ಪಂದ್ಯಗಳನ್ನು ಗೆಲ್ಲಿಸಿಕೊಟ್ಟಿದ್ದಾರೆ.

ಉದ್ಯೋಗಿಗಳ ಕೆಲಸದ ಅವಧಿ ವಿಸ್ತರಣೆ: ಸರ್ಕಾರದ ಮೇಲೆ ಐಟಿ ಉದ್ಯಮದ ಒತ್ತಡ

ಕಾರ್ಮಿಕ ಸಚಿವ ಸಂತೋಷ್ ಲಾಡ್

ಬೆಂಗಳೂರು: ಐಟಿ,ಐಟಿಇಎಸ್, ಬಿಪಿಒ ವಲಯದ ಉದ್ಯೋಗಿಗಳ ಕೆಲಸದ ಅವಧಿಯನ್ನು ವಿಸ್ತರಿಸುವ ಪ್ರಸ್ತಾವನೆ ಐಟಿ ಉದ್ಯಮದಿಂದ ಬಂದಿದ್ದು, ಕ್ಷೇತ್ರದ ನಾಯಕರು ಮತ್ತು ಉದ್ಯೋಗಿಗಳು ಸೇರಿದಂತೆ ಎಲ್ಲಾ ಪಾಲುದಾರರೊಂದಿಗೆ ಅಭಿಪ್ರಾಯ ಸಂಗ್ರಹಿಸಿದ ನಂತರ ಸರ್ಕಾರ ನಿರ್ಧಾರ ತೆಗೆದುಕೊಳ್ಳಲಿದೆ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಸೋಮವಾರ ಹೇಳಿದ್ದಾರೆ.



ಐಟಿ ಉದ್ಯೋಗಿಗಳ ಒಕ್ಕೂಟ ತಮ್ಮ ಅಸಮ್ಮತಿ ವ್ಯಕ್ತಪಡಿಸಿದ್ದು, ಉದ್ಯಮದ ಅನುಭವಿಗಳು ಮತ್ತು ನಾಯಕರು ಸಹ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳುವಂತೆ ಒತ್ತಾಯಿಸಿದರು. ಪ್ರಸ್ತಾವಿತ 'ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಸಂಸ್ಥೆಗಳ (ತಿದ್ದುಪಡಿ) ಮಸೂದೆ 2024, ಕೆಲಸದ ದಿನವನ್ನು 14 ಗಂಟೆಗಳಿಗೆ ಸಾಮಾನ್ಯಗೊಳಿಸಲು ಪ್ರಯತ್ನಿಸುತ್ತದೆ. ಅಸ್ತಿತ್ವದಲ್ಲಿರುವ ಕಾಯಿದೆಯು ಓವರ್‌ಟೈಮ್ (ದೀರ್ಘಾವಧಿ) ಸೇರಿದಂತೆ ದಿನಕ್ಕೆ ಗರಿಷ್ಠ 10 ಗಂಟೆಗಳ ಕೆಲಸವನ್ನು ಮಾತ್ರ ಅನುಮತಿಸುತ್ತದೆ.

ಉದ್ದೇಶಿತ ಮಸೂದೆಯನ್ನು ತಾವೇ ತಂದಿಲ್ಲ. ಉದ್ಯಮ ಒತ್ತಡ ಹೇರುತ್ತಿದೆ. ಬೇಕು ಅಂತಾ ಅವರು ಕೇಳುತ್ತಿದ್ದಾರೆ. ಉದ್ಯಮದ ಒತ್ತಡದಿಂದ ಮಸೂದೆ ರೂಪಿಸಲಾಗಿದೆ. ನಾವು ಇನ್ನೂ ಪರಿಶೀಲನೆ ಮಾಡುತ್ತಿದ್ದೇವೆ. ಉದ್ಯಮದ ಎಲ್ಲಾ ಮುಖ್ಯಸ್ಥರು ಈ ವಿಚಾರ ಕುರಿತು ಚರ್ಚಿಸಬೇಕಾಗಿದೆ ಎಂದು ಅವರು ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಈ ವಿಚಾರ ಕುರಿತು ಚರ್ಚಿಸಲು ಜನರು ಮುಕ್ತರಾಗಿದ್ದಾರೆ. ಉದ್ಯಮದ ನಾಯಕರು ಪ್ರತಿ ವಿಷಯಕ್ಕೂ ತಮ್ಮ ಅಭಿಪ್ರಾಯ ವ್ಯಕ್ತಪಡಿಸುತ್ತಾರೆ. ಹೀಗಾಗಿ ಉದ್ಯಮದ ಎಲ್ಲಾ ನಾಯಕರು ಚರ್ಚೆ ನಡೆಸಿ ತಮ್ಮ ಅಭಿಪ್ರಾಯ ವ್ಯಕ್ತಪಡಿಸಬೇಕು ಎಂದು ಬಯಸುತ್ತೇನೆ. ಐಟಿ ಉದ್ಯೋಗಿಗಳಿಂದ ಭಿನ್ನಾಭಿಪ್ರಾಯವಿದೆ. ಜನರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಬೇಕು ಎಂದು ಬಯಸುತ್ತೇನೆ. ಅದರ ಆಧಾರದ ಮೇಲೆ ನಾವು ಏನು ಮಾಡಬೇಕೆಂದು ಪರಿಶೀಲಿಸುತ್ತೇವೆ ಎಂದರು. ಈ ಮಧ್ಯೆ ಕೆಲಸದ ಸಮಯವನ್ನು ವಿಸ್ತರಿಸುವ ಯೋಜನೆಯನ್ನು ಮರುಪರಿಶೀಲಿಸುವಂತೆ ಕರ್ನಾಟಕ ರಾಜ್ಯ ಐಟಿ/ಐಟಿಇಎಸ್ ನೌಕರರ ಸಂಘ (ಕೆಐಟಿಯು) ಸಿದ್ದರಾಮಯ್ಯ ನೇತೃತ್ವದ ಸರ್ಕಾರವನ್ನು ಒತ್ತಾಯಿಸಿದೆ.

ಕರ್ನಾಟಕ ರಾಜ್ಯ ಐಟಿ/ಐಟಿಇಎಸ್ ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ಸುಹಾಸ್ ಅಡಿಗ ಮಾತನಾಡಿ, ಉದ್ದೇಶಿತ ಮಸೂದೆಯಂತೆ ನೌಕರರು ವಾರದಲ್ಲಿ 80–85 ಗಂಟೆಗಳ ಕಾಲ ಕೆಲಸ ಮಾಡಬೇಕಾಗಬಹುದು. ಇದನ್ನು ಯಾವುದೇ ಸಂದರ್ಭದಲ್ಲೂ ಒಪ್ಪಿಕೊಳ್ಳಲಾಗುವುದಿಲ್ಲ. ಎಲ್ಲಾ ಐಟಿ, ಐಟಿಇಎಸ್ ಉದ್ಯೋಗಿಗಳು ಮತ್ತು ಅವರ ಅವಲಂಬಿತರು ಅಥವಾ ಕುಟುಂಬದ ಸದಸ್ಯರು ಹೊರಗೆ ಬಂದು ಇದನ್ನು ವಿರೋಧಿಸಲು ಕರೆ ನೀಡುತ್ತೇವೆ ಎಂದಿದ್ದಾರೆ.

ಈ ವಿಷಯದ ಬಗ್ಗೆ ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿರುವ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ, ಕರ್ನಾಟಕದ ಕಾಂಗ್ರೆಸ್ ಸರ್ಕಾರವು ತಮ್ಮನ್ನು ಅಪಹಾಸ್ಯ ಮಾಡಿಕೊಂಡಿದೆ. ಸಿದ್ದರಾಮಯ್ಯ ಸರ್ಕಾರವೇ ನಿದ್ರಾವಸ್ಥೆಯಲ್ಲಿರುವಾಗ, ಐಟಿ ಕ್ಷೇತ್ರವನ್ನು ದಿನಕ್ಕೆ 14 ಕೆಲಸದ ಗಂಟೆಗಳು, ವಾರಕ್ಕೆ 70 ಗಂಟೆಗಳ ಕಾಲ ಕೆಲಸ ಮಾಡುವಂತೆ ಒತ್ತಾಯಿಸುವ ಮಸೂದೆಯನ್ನು ಪ್ರಸ್ತಾಪಿಸಲು ಯೋಜಿಸಿದೆ ಎಂದು ಅವರು 'ಎಕ್ಸ್'ನಲ್ಲಿ ಪೋಸ್ಟ್ ಮಾಡಿದ್ದಾರೆ.

ಪವನ್ ಕಲ್ಯಾಣ್ ಹತ್ಯೆಗೆ ಸ್ಕೆಚ್: ಗುಪ್ತಚರ ಇಲಾಖೆ ಎಚ್ಚರಿಕೆ ಸಂದೇಶ

ಅಮರಾವತಿ: ಟಾಲಿವುಡ್ ನಟ ಪವನ್ ಕಲ್ಯಾಣ್ ಈಗ ಆಂಧ್ರ ಪ್ರದೇಶ ಉಪ ಮುಖ್ಯಮಂತ್ರಿ. ಅವರ ಪ್ರಾಣಕ್ಕೆ ಅಪಾಯ ಇದೆ ಎಂಬ ಮಾಹಿತಿ ಹರಿದಾಡುತ್ತಿದೆ. ಕೇಂದ್ರ ಗುಪ್ತಚರ ಇಲಾಖೆಯ ಅಧಿಕಾರಿಗಳು ಈ ಬಗ್ಗೆ ಪವನ್ ಕಲ್ಯಾಣ್ ಅವರಿಗೆ ಮಾಹಿತಿ ರವಾನಿಸಿದ್ದಾರೆ ಎನ್ನಲಾಗಿದೆ. ಈ ಸುದ್ದಿ ಕೇಳಿ ಪವನ್ ಕಲ್ಯಾಣ್ ಅವರ ಅಭಿಮಾನಿಗಳಿಗೆ ಆತಂಕ ಆಗಿದೆ.



ಜನಸೇನಾ ಪಕ್ಷದ ಮೂಲಕ ಪವನ್ ಕಲ್ಯಾಣ್ ಅವರಿಗೆ ಈ ವರ್ಷ ದೊಡ್ಡ ಗೆಲುವು ಸಿಕ್ಕಿತು. ಲೋಕಸಭೆ ಮತ್ತು ವಿಧಾನಸಭೆ ಚುನಾವಣೆಯಲ್ಲಿ ಜನಸೇನಾ ಪಕ್ಷ ಜಯಭೇರಿ ಬಾರಿಸಿತು. ಸಿನಿಮಾರಂಗದಲ್ಲೂ ಪವನ್ ಕಲ್ಯಾಣ್ ಅವರಿಗೆ ದೊಡ್ಡ ಅಭಿಮಾನಿ ಬಳಗ ಇದೆ. ಇದೆಲ್ಲದರ ನಡುವೆ ಅವರ ಹತ್ಯೆಗೆ ಕೆಲವರು ಸ್ಕೆಚ್ ಹಾಕುತ್ತಿದ್ದಾರೆ ಎಂಬುದು ಆತಂಕಕಾರಿ ವಿಷಯ. ಈ ಬಗ್ಗೆ ಪವನ್ ಕಲ್ಯಾಣ್ ಅವರು ಗಮನ ಹರಿಸುವ ಅಗತ್ಯ ಇದೆ.

ಕಿಡಿಗೇಡಿಗಳು ಪವನ್ ಕಲ್ಯಾಣ್ ಅವರ ಹತ್ಯೆಗೆ ಸಂಚು ರೂಪಿಸುತ್ತಿರುವ ಕಾರಣದಿಂದ ಪೊಲೀಸರು ಭದ್ರತೆ ಹೆಚ್ಚಿಸಬೇಕು ಎಂದು ಗುಪ್ತಚರ ಇಲಾಖೆಯ ಅಧಿಕಾರಿಗಳು ಸಂದೇಶ ನೀಡಿದ್ದಾರೆ ಎನ್ನಲಾಗಿದೆ. ಈ ಮಾಹಿತಿಯನ್ನು ಜನಸೇನಾ ಪಕ್ಷದ ಮೂಲಗಳು ಖಚಿತಪಡಿಸಿವೆ ಎಂದು ಮಾಧ್ಯಮಗಳಲ್ಲಿ ವರದಿ ಆಗಿದೆ. ಅಷ್ಟಕ್ಕೂ ಪವನ್ ಕಲ್ಯಾಣ್ ಅವರನ್ನು ಮುಗಿಸಲು ಯತ್ನಿಸುತ್ತಿರುವವರು ಯಾರು ಎಂಬುದು ಸದ್ಯಕ್ಕೆ ಬಹಿರಂಗ ಆಗಿಲ್ಲ.

ತಮ್ಮ ಪ್ರಾಣಕ್ಕೆ ಅಪಾಯ ಇರುವ ಬಗ್ಗೆ ಈ ಮೊದಲು ಸ್ವತಃ ಪವನ್ ಕಲ್ಯಾಣ್ ಅವರು ಹೇಳಿದ್ದರು. ಈಗ ಗುಪ್ತಚರ ಇಲಾಖೆಗೂ ಈ ಬಗ್ಗೆ ಮಾಹಿತಿ ಸಿಕ್ಕಿರುವುದರಿಂದ ಪವನ್ ಕಲ್ಯಾಣ್ ಅವರಿಗೆ ಝಡ್ ಪ್ಲಸ್ ಸೆಕ್ಯೂರಿಟಿ ನೀಡಬೇಕು ಎಂದು ಜನಸೇನಾ ಪಕ್ಷದವರು ಬೇಡಿಕೆ ಇಟ್ಟಿದ್ದಾರೆ ಎನ್ನಲಾಗಿದೆ.

ಮೈಸೂರು ಮಿತ್ರ

ದೇಶ - ವಿದೇಶ

ಅಮೆರಿಕ ಚುನಾವಣೆ: ಭಾರತ ಮೂಲದ ಕಮಲಾ ಹ್ಯಾರಿಸ್ ಡೆಮಾಕ್ರಟಿಕ್ ಪಕ್ಷದ ಅಭ್ಯರ್ಥಿ



ವಾಷಿಂಗ್ಟನ್: ಅಮೆರಿಕ ಅಧ್ಯಕ್ಷ ಸ್ಥಾನಕ್ಕೆ ಮರು ಆಯ್ಕೆ ಬಯಸಿದ್ದ ಅಧ್ಯಕ್ಷ ಜೋ ಬೈಡನ್, ಭಾನುವಾರ ಸ್ಪರ್ಧೆಯಿಂದ ಹಠಾತ್ ಹಿಂದೆ ಸರಿದಿದ್ದು, ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಅವರನ್ನು ಅಧ್ಯಕ್ಷ ಸ್ಥಾನಕ್ಕೆ ಅಭ್ಯರ್ಥಿಯಾಗಿ ಘೋಷಿಸಿದ್ದಾರೆ.

ಕಳೆದ ವಾರ ಬೈಡನ್ ಕೋವಿಡ್‌ಗೆ ತುತ್ತಾಗಿದ್ದು, ಕ್ವಾರಂಟೈನ್‌ನಲ್ಲಿದ್ದರು. ಇದೀಗ ಅಧ್ಯಕ್ಷ ಸ್ಥಾನದ ಸ್ಪರ್ಧೆಯಿಂದ ಹಿಂದೆ ಸರಿದಿದ್ದು ಕುತೂಹಲಕ್ಕೆ ಕಾರಣವಾಗಿದೆ. ತಮ್ಮ ಈ ನಿರ್ಧಾರದ ಬಗ್ಗೆ ಹೆಚ್ಚು ವಿವರವಾಗಿ ಮುಂದಿನ ದಿನಗಳಲ್ಲಿ ದೇಶವನ್ನು ಉದ್ದೇಶಿಸಿ ಮಾತನಾಡುವುದಾಗಿ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಹಂಚಿಕೊಂಡಿರುವ ಅಮೆರಿಕ ಶಾಸಕಿ ಪ್ರಮೀಳಾ ಜಯಪಾಲ್, 'ಕಮಲಾ ಹ್ಯಾರಿಸ್ ಅಧ್ಯಕ್ಷರಾಗಲು ಸಂಪೂರ್ಣ ಬೆಂಬಲವಿದೆ. ಡೊನಾಲ್ಡ್ ಟ್ರಂಪ್ ಅವರನ್ನು ಮಣಿಸಿ ಹೊಸ ಇತಿಹಾಸ ನಿರ್ಮಿಸೋಣ. ಕಮಲಾ ಹ್ಯಾರಿಸ್‌ರೊಂದಿಗೆ ದೂರವಾಣಿ ಮಾತುಕತೆ ನಡೆಸಿದ್ದೇನೆ, ಅವರ ಗೆಲ್ಲುತ್ತಾರೆ ಎಂದು ಸಾವಿರ ಪ್ರತಿಶತದಷ್ಟು ನಂಬಿಕೆಯಿದೆ. ನವೆಂಬರ್‌ನಲ್ಲಿ ನಮ್ಮನ್ನು ವಿಜಯದ ಹಾದಿಯಲ್ಲಿ ಕಮಲಾ ಕೊಂಡೊಯ್ಯಲಿದ್ದಾರೆ' ಎಂದಿದ್ದಾರೆ. ನವೆಂಬರ್ 5ರಂದು ಅಮೆರಿಕ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಯಲಿದೆ.

ಮುಂಬೈನ ಹಲವೆಡೆ 20 ಸೆಂ.ಮೀ. ಮಳೆ: ಎನ್‌ಡಿಆರ್‌ಎಫ್ ತಂಡ ನಿಯೋಜನೆ


ಮುಂಬೈ: ಮುಂಬೈನಲ್ಲಿ ಭಾರಿ ಮಳೆಯಾಗುತ್ತಿದ್ದು, ಕಳೆದ 24 ಗಂಟೆಗಳಲ್ಲಿ ನಗರದ ಹಲವು ಪ್ರದೇಶಗಳಲ್ಲಿ 20 ಸೆಂ.ಮೀ. ಮಳೆಯಾಗಿದ್ದು, ಜನಜೀವನ ಅಸ್ತವ್ಯಸ್ತವಾಗಿದೆ ಎಂದು ಅಧಿಕಾರಿಗಳು ಸೋಮವಾರ ತಿಳಿಸಿದ್ದಾರೆ.



ಕಳೆದ 24 ಗಂಟೆಗಳಲ್ಲಿ ಮುಂಬೈನ ಕೆಲವು ಪ್ರದೇಶಗಳಲ್ಲಿ ಭಾರಿ ಮಳೆಯಾಗಿದ್ದು, ಭಾರಿ ಮಳೆಯಿಂದಾಗಿ ರೈಲು ಸಂಚಾರದಲ್ಲೂ ವ್ಯತ್ಯಯವಾಗಿತ್ತು ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ. ಮುಂಬೈ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಭಾರಿ ಮಳೆಯಾಗುತ್ತಿರುವ ಪ್ರದೇಶಗಳಲ್ಲಿ ಯಾವುದೇ ಪರಿಸ್ಥಿತಿಯನ್ನು ಎದುರಿಸಲು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆಯ ಮೂರು ತಂಡಗಳನ್ನು ನಿಯೋಜಿಸಲಾಗಿದೆ. ಮನ್‌ಖುರ್ದ್‌ನ ಟ್ರಾಂಬೆಯಲ್ಲಿ 24.1ಸೆಂ.ಮೀ. ಅತ್ಯಧಿಕ ಮಳೆ ದಾಖಲಾಗಿದೆ. ಮನ್‌ಖುರ್ದ್ ನೂತನ್ ವಿದ್ಯಾಮಂದಿರದಲ್ಲಿ 22.4 ಸೆಂ.ಮೀ. ವಡಾಲಾದ ನಾಡಕರ್ಣಿ ಪಾರ್ಕ್‌ನಲ್ಲಿ 22.3 ಸೆಂ.ಮೀ. ಮತ್ತು ಭಾಂಡಪ್‌ನ 'ಎಸ್' ವಾರ್ಡ್‌ನಲ್ಲಿ 21.5 ಸೆಂ.ಮೀ. ಮಳೆ ಪ್ರಮಾಣ ದಾಖಲಾಗಿದೆ ಎಂದು ಮುಂಬೈ ಮಹಾನಗರ ಪಾಲಿಕೆ(ಬಿಎಂಸಿ) ಹೇಳಿದೆ.

ಸಿಕ್ಕಿಂ ಪ್ರವಾಸಿಗರು ಕೈಚೀಲ ತರಲೇಬೇಕು

ಸಿಕ್ಕಿಂ: ಸಿಕ್ಕಿಂ ಭಾರತದ ಎರಡನೇ ಪುಟ್ಟ ರಾಜ್ಯ. ಗೋವಾದ ಬಳಿಕ ಅತ್ಯಂತ ಕಡಿಮೆ ಜನಸಂಖ್ಯೆ ಹೊಂದಿರುವ ಈ ರಾಜ್ಯದ ಆದಾಯ ಪ್ರವಾಸೋದ್ಯಮವನ್ನೇ ಅವಲಂಬಿಸಿದೆ ಅಂದಾಜು 6 ಲಕ್ಷ ಜನಸಂಖ್ಯೆ ಹೊಂದಿರೋ ಈ ರಾಜ್ಯ ತಣ್ಣನೆಯ ಗಾಳಿ ಮತ್ತು ಹಿಮಚ್ಛಾದಿತ ಪ್ರದೇಶಗಳಿಂದ ಪ್ರವಾಸಿಗರ ಪ್ರಮುಖ ಆಕರ್ಷಣೆಯ ತಾಣವಾಗಿದೆ. ಹೆಚ್ಚಿನ ಪ್ರವಾಸಿಗರ ಆಗಮನದಿಂದ ಸಿಕ್ಕಿಂನ ಸ್ವಚ್ಛತೆ, ಪರಿಸರದ ಸಮತೋಲನ ಹದಗೆಡಲಾರಂಭಿಸಿದೆ. ಅತಿಯಾದ ಪ್ಲಾಸ್ಟಿಕ್ ಹಾಗೂ ಪ್ರವಾಸಿ ತಾಣಗಳಲ್ಲಿ ತುಂಬಿ ತುಳುಕುತ್ತಿರುವ ತ್ಯಾಜ್ಯದಿಂದ ಸ್ಥಳೀಯರು ಬೇಸತ್ತಿದ್ದಾರೆ. ಹೀಗಾಗಿ ಅಲ್ಲಿನ ಸ್ಥಳೀಯ ಆಡಳಿತ ಪ್ರವಾಸಿಗರು ಕಸದ ಕವರ್ ಜೊತೆ ಪ್ರವಾಸಕ್ಕೆ ಬರುವಂತೆ ಸೂಚಿಸಿದೆ. ಪರಿಸರ ಸುಸ್ಥಿರತೆಯ ಗುರಿಯನ್ನು ಸಾಧಿಸಲು ಸಮುದಾಯದ ಸಹಭಾಗಿತ್ವಕ್ಕಾಗಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಇನ್ಮುಂದೆ ಪ್ರವಾಸಿ ವಾಹನಗಳನ್ನು ಕಡ್ಡಾಯವಾಗಿ ತಪಾಸಣೆಗೊಳಪಡಿಸಲಾಗುವುದು. ಆದೇಶ ಉಲ್ಲಂಘಿಸಿರುವುದು ಕಂಡುಬಂದಲ್ಲಿ ಭಾರಿ ಮೊತ್ತದ ದಂಡ ವಿಧಿಸಲಾಗುವುದು ಎಂದು ಇಲಾಖೆ ಪ್ರವಾಸಿಗರನ್ನು ಹಾಗೂ ಸ್ಥಳೀಯ ಪ್ರವಾಸಿ ಏಜೆಂಟ್‌ರನ್ನು ಸರ್ಕಾರ ಎಚ್ಚರಿಸಿದೆ.



ಸುರಂಗ ಕಾಮಗಾರಿ ವೇಳೆ ಭೂ ಕುಸಿತ, ಕಾರ್ಮಿಕರು ಪಾರು

ಡೆಹ್ರಾಡೂನ್: ದೇವನಾಡು ಉತ್ತರಾಖಂಡದಲ್ಲಿ ಸುರಂಗ ಕಾಮಗಾರಿ ವೇಳೆ ಭೀಕರ ಭೂ ಕುಸಿತ ಸಂಭವಿಸಿದ್ದು ಕೂದಲೆಳೆ ಅಂತರದಲ್ಲಿ ಅಲ್ಲಿನ ಸಿಬ್ಬಂದಿ ಪಾರಾಗಿದ್ದಾರೆ.



ಚಮೋಲಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಸುರಂಗ ಕಾಮಗಾರಿ ನಡೆಯುತ್ತಿದ್ದು ಇದೇ ಸಂದರ್ಭದಲ್ಲಿ ಈ ಭೀಕರ ಭೂ ಕುಸಿತ ಸಂಭವಿಸಿದೆ. ಕಲ್ಲಿನ ರಾಶಿ ಬೀಳುತ್ತಿದ್ದಂತೆಯೇ ಅಲ್ಲಿದ್ದ ಸಿಬ್ಬಂದಿ ಓಡಿ ಕೂದಲೆಳೆ ಅಂತರದಲ್ಲಿ ಪಾರಾಗಿದ್ದಾರೆ. ಈ ವಿಡಿಯೋ ವ್ಯಾಪಕ ವೈರಲ್ ಆಗುತ್ತಿದೆ.

ಉತ್ತರಾಖಂಡದಲ್ಲಿ ಕಳೆದೊಂದು ತಿಂಗಳಿನಿಂದ ವ್ಯಾಪಕ ಮಳೆಯಾಗುತ್ತಿದ್ದು, ಇದು ಗುಡ್ಡಪ್ರದೇಶಗಳಲ್ಲಿ ಮಣ್ಣಿನ ಸವೆತಕ್ಕೆ ಕಾರಣವಾಗಿದೆ. ಉತ್ತರಾಖಂಡದ ಗುಡ್ಡಗಾಡು ಪ್ರದೇಶಗಳಲ್ಲಿ ನಡೆಯುತ್ತಿರುವ ಕಾಮಗಾರಿ ಪ್ರದೇಶದಲ್ಲಿ ಸಿಬ್ಬಂದಿ ಜೀವ ಕೈಯಲ್ಲಿ ಹಿಡಿದು ಕಾಮಗಾರಿ ನಡೆಸುತ್ತಿದ್ದು, ಯಾವ ಕ್ಷಣದಲ್ಲಿ ಯಾವ ಗುಡ್ಡ ಕುಸಿಯುತ್ತದೆ ಎಂಬ ಭೀತಿಯಲ್ಲೇ ಕೆಲಸ ಮಾಡಬೇಕಿದೆ.

ಮಳೆ ಮತ್ತು ಪ್ರವಾಹದ ಜೊತೆಗೇ ಭೂ ಕುಸಿತ ಕೂಡ ಉತ್ತರಾಖಂಡದಲ್ಲಿ ಸಾಮಾನ್ಯ ಎಂಬಂತಾಗಿದೆ. ಕಳೆದವಾರವಷ್ಟೇ ಕೇದಾರನಾಥ್ ಟ್ರೆಕಿಂಗ್ ಮಾರ್ಗದಲ್ಲಿ ಭೂ ಕುಸಿತ ಸಂಭವಿಸಿ ಓರ್ವ ಸ್ಥಳೀಯ ಮೃತಪಟ್ಟಿದ್ದ.

ಇಬ್ಬರು ಮಹಿಳೆಯರ ಸಜೀವ ಸಮಾಧಿ

ರೇವಾ: ಮಧ್ಯಪ್ರದೇಶದ ರೇವಾ ಜಿಲ್ಲೆಯಲ್ಲಿ ಇಬ್ಬರು ಮಹಿಳೆಯರು ತಮ್ಮ ಪ್ರದೇಶದಲ್ಲಿ ರಸ್ತೆ ನಿರ್ಮಾಣವನ್ನು ವಿರೋಧಿಸಿ ಪ್ರತಿಭಟನೆ ನಡೆಸುತ್ತಿದ್ದಾಗ ಟ್ರಕ್‌ನಿಂದ ಜಲ್ಲಿಕಲ್ಲು ಸುರಿದು ಭಾಗಶಃ ಸಮಾಧಿ ಮಾಡಲಾಗಿದೆ.



ಈ ಆಘಾತಕಾರಿ ಘಟನೆಯ ವಿಡಿಯೋ ವೈರಲ್ ಆಗಿದೆ. ಮಂಗವಾ ಪೊಲೀಸ್ ಠಾಣಾ ವ್ಯಾಪ್ತಿಯ ಹಿನೋಟಾ ಜೋರೋಟ್ ಗ್ರಾಮದಲ್ಲಿ ಖಾಸಗಿ ಜಮೀನಿನಲ್ಲಿ ರಸ್ತೆ ನಿರ್ಮಾಣಕ್ಕೆ ವಿರೋಧ ವ್ಯಕ್ತಪಡಿಸುತ್ತಿದ್ದಾಗ ಮಮತಾ ಪಾಂಡೆ ಮತ್ತು ಆಶಾ ಪಾಂಡೆ ಎಂಬ ಮಹಿಳೆಯರನ್ನು ಜಲ್ಲಿಕಲ್ಲುಗಳ ರಾಶಿಯಲ್ಲಿ ಕುತ್ತಿಗೆಯವರೆಗೂ ಹೂತು ಹಾಕಲಾಗಿದೆ. ಈ ಘಟನೆಯ ವಿಡಿಯೋದಲ್ಲಿ ಇಬ್ಬರು ಮಹಿಳೆಯರು ಜಲ್ಲಿಕಲ್ಲು ತುಂಬಿದ ಟ್ರಕ್‌ನ ಹಿಂದೆ ಕುಳಿತಿರುವುದನ್ನು ಕಾಣಬಹುದು. ಅದನ್ನು ಅವರ ಮೇಲೆ ಲೋಡ್ ಮಾಡಲಾಗಿದೆ. ನಂತರ ಸ್ಥಳೀಯರು ಅವರನ್ನು ರಕ್ಷಿಸಿ ಸಮೀಪದ ಸಮುದಾಯ ಆರೋಗ್ಯ ಕೇಂದ್ರಕ್ಕೆ ಚಿಕಿತ್ಸೆಗಾಗಿ ಕಳುಹಿಸಿದ್ದಾರೆ. ಮಹಿಳೆಯರು ಪ್ರಾಣಾಪಾಯದಿಂದ ಪಾರಾಗಿದ್ದು, ಆಸ್ಪತ್ರೆಗೆ ಸೇರಿಸಲಾಗಿತ್ತು. ಇದೀಗ ಆಸ್ಪತ್ರೆಯಿಂದ ಅವರನ್ನು ಡಿಸ್ಚಾರ್ಜ್ ಮಾಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ವೈರಲ್ ಆದ ಈ ವಿಡಿಯೋ ಆಧರಿಸಿ ಪ್ರಕರಣ ದಾಖಲಾಗಿದೆ. ಪೊಲೀಸರು ಡಂಪರ್ ಅನ್ನು ವಶಪಡಿಸಿಕೊಂಡಿದ್ದು, ಒಬ್ಬ ಆರೋಪಿಯನ್ನು ಬಂಧಿಸಿದ್ದು, ಇನ್ನಿಬ್ಬರು ತಲೆಮರೆಸಿಕೊಂಡಿದ್ದಾರೆ.

ಇಂದು ಸಂಜೆಗೆ ರಿಂಗ್ ರೋಡ್ ಗುಂಡಿ ಮುಚ್ಚುವ ಕಾರ್ಯ ಪೂರ್ಣ



ಭಾರತ ರಾಷ್ಟ್ರೀಯ ಹೆದ್ದಾರಿಗಳ ಪ್ರಾಧಿಕಾರದ ವತಿಯಿಂದ ಮೈಸೂರಿನ ಶ್ರೀರಾಂಪುರ ರಿಂಗ್ ರಸ್ತೆ ಜಂಕ್ಷನ್ ಮತ್ತು ದಟ್ಟಗಳ್ಳಿ ನಡುವೆ ಸೋಮನಾಥನಗರ ಬಳಿ ಶುಕ್ರವಾರ ರಾತ್ರಿ ದಿಢೀರ್ ಪ್ರತ್ಯಕ್ಷವಾಗಿದ್ದ ಅಪಾಯಕಾರಿ ಗುಂಡಿ ಮುಚ್ಚುವ ಕಾರ್ಯ ತ್ವರಿತಗತಿಯಲ್ಲಿ ಸಾಗಿದೆ.

ಮೈಸೂರು, ಜು. 22(ಆರ್‌ಕೆ)– ಮೈಸೂರಿನ ಶ್ರೀರಾಂಪುರ ರಿಂಗ್ ರಸ್ತೆ ಜಂಕ್ಷನ್ ಮತ್ತು ದಟ್ಟಗಳ್ಳಿ ನಡುವೆ ಸೋಮನಾಥ ನಗರ ಬಳಿ ಶುಕ್ರವಾರ ರಾತ್ರಿ ದಿಢೀರ್ ಪ್ರತ್ಯಕ್ಷವಾಗಿದ್ದ ಅಪಾಯಕಾರಿ ಗುಂಡಿ ಮುಚ್ಚುವ ಕೆಲಸ ತ್ವರಿತಗತಿಯಲ್ಲಿ ನಡೆಯುತ್ತಿದೆ.

ಕೆಆರ್ ಸಂಚಾರ ಠಾಣೆ ಇನ್‌ಸ್ಪೆಕ್ಟರ್ ಶರತ್‌ಕುಮಾರ್ ವಿಶೇಷ ಆಸಕ್ತಿ ವಹಿಸಿ ಭಾರತ ರಾಷ್ಟ್ರೀಯ ಹೆದ್ದಾರಿಗಳ ಪ್ರಾಧಿಕಾರ (ಎನ್‌ಹೆಚ್‌ಎಐ) ಅಧಿಕಾರಿಗಳನ್ನು ಕರೆಸಿ ಗುಂಡಿಯಿಂದ ಉಂಟಾಗುವ ಅನಾಹುತಗಳ ಬಗ್ಗೆ ವಿವರಿಸಿದ ಹಿನ್ನೆಲೆಯಲ್ಲಿ ಇಂದು ಬೆಳಗ್ಗೆಯಿಂದ ಗುಂಡಿ ಮುಚ್ಚುವ ಕೆಲಸ ಆರಂಭವಾಗಿದ್ದು, ಉಂಟಾಗಿದ್ದ ಗುಂಡಿಗೆ ಕಲ್ಲು ತುಂಬಿ ವೈಜ್ಞಾನಿಕವಾಗಿ ಮುಚ್ಚುವ ಕಾಮಗಾರಿ ಆರಂಭವಾಗಿದೆ.

ಸುತ್ತಲೂ ಬ್ಯಾರಿಕೇಡ್ ಅಳವಡಿಸಿ ಸ್ಥಳದಲ್ಲಿ ಸೂಚನಾ ಫಲಕ ಅಳವಡಿಸಿರುವುದರಿಂದ ವಾಹನ ಸವಾರರಿಗೆ ಯಾವುದೇ ತೊಂದರೆ ಉಂಟಾಗದಂತೆ ಮುನ್ನೆಚ್ಚರಿಕಾ ಕ್ರಮ ಕೈಗೊಂಡು ಭರದಿಂದ ಕಾಮಗಾರಿ ನಡೆಸಲಾಗುತ್ತಿದೆ.

ನಾಳೆ (ಜು.23) ಸಂಜೆಯೊಳಗೆ ಗುಂಡಿ ಮುಚ್ಚುವ ಕೆಲಸ ಮುಗಿಯಲಿದ್ದು, ಈ ಪಥದಲ್ಲಿ ವಾಹನ ಸಂಚಾರ ಮುಕ್ತವಾಗಲಿದೆ. ಇಂದೂ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳೊಂದಿಗೆ ಕೆಆರ್ ಸಂಚಾರ ಠಾಣೆ ಅಧಿಕಾರಿಗಳು ಕಾಮಗಾರಿ ಪ್ರಗತಿಯನ್ನು ಪರಿಶೀಲಿಸಿದರು.

ಸಹಾಯಧನಕ್ಕೆ ಅರ್ಜಿ ಆಹ್ವಾನ

ಮೈಸೂರು, ಜು.22– ಮೀನುಗಾರಿಕೆ ಇಲಾಖೆಯ ಜಿಲ್ಲಾ ವಲಯ ಹಾಗೂ ರಾಜ್ಯ ವಲಯ ಯೋಜನೆ, ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪ ಯೋಜನೆಗಳಡಿ ಕಾರ್ಯಕ್ರಮ ಅನುಷ್ಠಾನಗೊಳಿಸಲು ಅರ್ಹ ಮೀನುಗಾರರಿಂದ ಅರ್ಜಿ ಆಹ್ವಾನಿಸಲಾಗಿದೆ. ಈ ಯೋಜನೆಗಳಡಿ ಮೀನುಗಾರರಿಗೆ ಅಗತ್ಯವಿರುವ ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ, ಮೀನುಮರಿ ಖರೀದಿಗೆ ಸಹಾಯಧನ, ಕೆರೆ ಅಂಚಿನಲ್ಲಿ ಕೊಳ ನಿರ್ಮಾಣಕ್ಕೆ ಸಹಾಯಧನ, ಮೀನು ಮಾರಾಟಕ್ಕೆ ಮತ್ಸ್ಯವಾಹಿನಿ ಸಹಾಯಧನವನ್ನು ನೀಡಲಾಗುತ್ತದೆ. ಆಸಕ್ತ ಅರ್ಹ ಅಭ್ಯರ್ಥಿಗಳು ಜು.29 ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಉಪನಿರ್ದೇಶಕರ ಕಚೇರಿ ಹಾಗೂ ಮೈಸೂರು, ಹುಣಸೂರು, ಪಿರಿಯಾಪಟ್ಟಣ, ಹೆಚ್.ಡಿ.ಕೋಟೆ, ಕೆ.ಆರ್. ನಗರ, ನಂಜನಗೂಡು ಹಾಗೂ ತಿ.ನರಸೀಪುರ ತಾಲೂಕುಗಳ ಮೀನುಗಾರಿಕೆ ಇಲಾಖೆ ಸಹಾಯಕ ನಿರ್ದೇಶಕರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ಕೇಂದ್ರ ಸಚಿವ ಕುಮಾರಸ್ವಾಮಿಯೂ ಮುಡಾ ಬದಲಿ ನಿವೇಶನ ಫಲಾನುಭವಿ!

ಕಾಂಗ್ರೆಸ್ ವಕ್ತಾರ ಎಂ.ಲಕ್ಷ್ಮಣ್ ಆರೋಪ



ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ಮಾತನಾಡಿದರು.

ಮೈಸೂರು,ಜು.22(ಎಂಟಿವೈ)– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಮಾಜಿ ಮುಖ್ಯಮಂತ್ರಿ, ಹಾಲಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಬದಲಿ ನಿವೇಶನ ಪಡೆದಿದ್ದಾರೆ ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಆರೋಪಿಸಿದ್ದಾರೆ.

ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಡಾದಿಂದ ಹೆಚ್.ಡಿ.ಕುಮಾರಸ್ವಾಮಿ ಯಾವ ರೀತಿ ನಿವೇಶನ ಪಡೆದಿದ್ದಾರೆ ಎನ್ನುವುದನ್ನು ಬೆಂಗಳೂರಲ್ಲಿ ಸುದ್ದಿಗೋಷ್ಠಿ ನಡೆಸಿ, ದಾಖಲೆ ಬಿಡುಗಡೆ ಮಾಡುತ್ತೇನೆ. ಮುಡಾ ಹಗರಣದಲ್ಲಿ ಬಿಜೆಪಿ, ಜೆಡಿಎಸ್ ನಾಯಕರ ಪಾತ್ರವೇ ಹೆಚ್ಚಾಗಿದೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಪಾಲು ಹಗರಣದಲ್ಲಿ ಇದೆ. ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರ ಅಕ್ಕನ ಮಗನ ಮೂಲಕ ವಿಜಯೇಂದ್ರ ಅಕ್ರಮ ಎಸಗಿದ್ದಾರೆ. ಬಿಜೆಪಿ ನಾಯಕರು ಮಲ್ಲಿಕಾರ್ಜುನಸ್ವಾಮಿ ಮುಖಾಂತರ ಜಿಲ್ಲಾಧಿಕಾರಿಗಳಿಗೆ ದೂರು ಕೊಡಿಸಿದ್ದಾರೆ. ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ತಪ್ಪಿತಸ್ಥರು ಎಂದು ಬಿಂಬಿಸುವ ಪ್ರಯತ್ನ ಆಗುತ್ತಿದೆ ಎಂದು ಕಿಡಿಕಾರಿದರು.

ಮಳೆ ಹಾನಿ ಪ್ರದೇಶಕ್ಕೆ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಭೇಟಿ ನೀಡಿ ಜನರ ಸಮಸ್ಯೆಗಳನ್ನು ಆಲಿಸಿಲ್ಲ. ಮೈಸೂರು, ಕೊಡಗು ಜಿಲ್ಲೆಗಳಲ್ಲಿ ನಿರಂತರವಾಗಿ ಮಳೆಯಾಗುತ್ತಿದೆ. ಅನೇಕ ಕಡೆ ವಿದ್ಯುತ್ ಸಂಪರ್ಕ ಕಡಿತಗೊಂಡಿದೆ. ಮಡಿಕೇರಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಗುಡ್ಡ ಕುಸಿದಿದೆ. ಜನರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಆದರೂ ಸಂಸದರು ಜನರ ಸಮಸ್ಯೆ ಆಲಿಸಲು ಮುಂದಾಗಿಲ್ಲ. ನಾನು ಚುನಾವಣೆಯಲ್ಲಿ ಸೋತಿದ್ದರೂ 40ಕ್ಕೂ ಹೆಚ್ಚು ಕಡೆ ಭೇಟಿ ಕೊಟ್ಟಿದ್ದೇನೆ. ಆದರೆ, ನೀವು ಮಡಿಕೇರಿಯಲ್ಲಿ ದಿಶಾ ಸಭೆ ನಡೆಸಿ ಸನ್ಮಾನ ಸ್ವೀಕರಿಸಿ ಬಂದಿದ್ದು ಆಯ್ತು. ರೈಲ್ವೆ ನಿಲ್ದಾಣಕ್ಕೆ ಭೇಟಿ ನೀಡಿ ಫೋಟೋ ತೆಗೆಸಿಕೊಂಡಿದ್ದಾಯ್ತು ಎಂದು ಟೀಕಿಸಿದರು.

ಮೈಸೂರಿನ ನರಸಿಂಹರಾಜ ಕ್ಷೇತ್ರದಲ್ಲಿ ಯದುವೀರ್ ಅವರಿಗೆ 65 ಸಾವಿರ ಮತಗಳು ಬಂದಿವೆ. ಆ ಭಾಗದಲ್ಲಿಯೂ ಅಭಿವೃದ್ಧಿಗೆ ಗಮನಹರಿಸಬೇಕು. ನಮ್ಮ ಸರ್ಕಾರ ಇದ್ದಾಗ ನರ್ಮ್ ಯೋಜನೆಯಡಿ 2 ಸಾವಿರ ಕೋಟಿ ಅನುದಾನ ಬಿಡುಗಡೆ ಮಾಡಿಸಿದ್ದೆವು. ನೀವು ಅಭಿವೃದ್ಧಿಯತ್ತ ಗಮನ ಕೊಡುವಂತೆ ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಜಿಪಂ ಮಾಜಿ ಅಧ್ಯಕ್ಷ ಬಿ.ಎಂ.ರಾಮು, ಕಾಂಗ್ರೆಸ್ ವಕ್ತಾರ ಕೆ.ಮಹೇಶ್, ಸೇವಾದಳದ ಮುಖಂಡ ಗಿರೀಶ್ ಇದ್ದರು.

ಮೈಸೂರು ನಗರ ಸಾರಿಗೆ ಬಸ್‌ನಿಂದ ಬಿದ್ದು ವೃದ್ಧ ಸಾವು
ಸಂತ್ರಸ್ತ ಕುಟುಂಬಕ್ಕೆ 10 ಲಕ್ಷ ಪರಿಹಾರ



ಮೈಸೂರು ನಗರ ಸಾರಿಗೆ ಸಂಸ್ಥೆ ಬಸ್‌ನಿಂದ ಬಿದ್ದು ಮೃತಪಟ್ಟವರ ಕುಟುಂಬ ಸದಸ್ಯರಿಗೆ ಸೋಮವಾರ ನಗರ ವಿಭಾಗೀಯ ನಿಯಂತ್ರಣಾಧಿಕಾರಿ ಹೆಚ್.ಟಿ.ವೀರೇಶ್ 10 ಲಕ್ಷ ರೂ. ಪರಿಹಾರದ ಚೆಕ್ ವಿತರಿಸಿದರು.

ಮೈಸೂರು,ಜು.22(ಎಂಟಿವೈ)– ನಗರ ಸಾರಿಗೆ ಸಂಸ್ಥೆ ಬಸ್‌ನಿಂದ ಇಳಿಯುವಾಗ ಆಯತಪ್ಪಿ ಬಿದ್ದು ಮೃತಪಟ್ಟ ವ್ಯಕ್ತಿಯ ಕುಟುಂಬಕ್ಕೆ ಸಾರಿಗೆ ಸಂಸ್ಥೆ ಅಪಘಾತ ಪರಿಹಾರ ನಿಧಿಯಿಂದ 10 ಲಕ್ಷ ರೂ. ಪರಿಹಾರ ವಿತರಿಸಿದೆ.

ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲೂಕಿನ ಪಾಲಹಳ್ಳಿ ನಿವಾಸಿ ಟಿ.ಪುಟ್ಟಸ್ವಾಮಿ(80) ಅವರು ಮೇ 19ರಂದು ರಾತ್ರಿ 9.50ಕ್ಕೆ ಮಾರ್ಗ ಸಂಖ್ಯೆ 307ರಲ್ಲಿ ಮೈಸೂರು ನಗರ ಬಸ್ ನಿಲ್ದಾಣದಿಂದ ಪಾಲಹಳ್ಳಿ ಮಾರ್ಗವಾಗಿ ಶ್ರೀರಂಗಪಟ್ಟಣಕ್ಕೆ ತೆರಳುತ್ತಿದ್ದ (ಕೆಎ–42, ಎಫ್–2066) ನಗರ ಸಾರಿಗೆ ಬಸ್‌ನಲ್ಲಿ ಪ್ರಯಾಣಿಸಿದ್ದರು. ಈ ವೇಳೆ ಪಾಲಹಳ್ಳಿ ಬಸ್ ನಿಲ್ದಾಣದಲ್ಲಿ ಕೆಳಗೆ ಇಳಿಯುವ ವೇಳೆ ಆಯತಪ್ಪಿ ಬಿದ್ದು, ಮೃತಪಟ್ಟಿದ್ದರು. ಈ ಸಂಬಂಧ ಶ್ರೀರಂಗಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

> “ಸಾರಿಗೆ ಸಂಸ್ಥೆ ಬಸ್‌ನಲ್ಲಿ ಪ್ರಯಾಣಿಸುವಾಗ ಅಪಘಾತವಾದರೆ ಅಥವಾ ಸಾರಿಗೆ ಬಸ್‌ನಿಂದ ಪಾದಚಾರಿ ಮೃತಪಟ್ಟರೆ ಅಪಘಾತ ಪರಿಹಾರ ನಿಧಿಯಿಂದ 10 ಲಕ್ಷ ರೂ. ಪರಿಹಾರ ನೀಡಲಾಗುತ್ತದೆ. ಆದರೆ ದ್ವಿಚಕ್ರ ವಾಹನ ಸೇರಿದಂತೆ ಇತರೆ ವಾಹನಗಳು ಸಂಸ್ಥೆಯ ಬಸ್‌ಗೆ ಡಿಕ್ಕಿಯಾಗಿ ಯಾರಾದರೂ ಮೃತಪಟ್ಟರೆ ಈ ನಿಧಿಯಿಂದ ಪರಿಹಾರ ನೀಡಲು ಬರುವುದಿಲ್ಲ. **–ಹೆಚ್.ಟಿ.ವೀರೇಶ್**

ಅಪಘಾತ ಪರಿಹಾರ ನಿಧಿಯಿಂದ 10 ಲಕ್ಷ ರೂ. ಪರಿಹಾರ ನೀಡಿದೆ. ಪರಿಹಾರವನ್ನು ಮೃತ ಪುಟ್ಟಸ್ವಾಮಿ ಅವರ ಪತ್ನಿ ಜಯಮ್ಮ ಅವರಿಗೆ ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿ ಹೆಚ್.ಟಿ.ವೀರೇಶ್ ವಿತರಿಸಿದರು. ಈ ವೇಳೆ ವಿಭಾಗೀಯ ಸಂಚಲನಾಧಿಕಾರಿ ದಶರಥ ಇದ್ದರು.

ಕೌನ್ಸೆಲಿಂಗ್ ಮೂಲಕ ಪೊಲೀಸ್ ಸಿಬ್ಬಂದಿ ವರ್ಗಾವಣೆ



ಮೈಸೂರು, ಜು.22(ಆರ್‌ಕೆ)– ಸುದೀರ್ಘ ಅವಧಿಗೆ ಒಂದೇ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಎಸ್‌ಐ, ಹೆಡ್ ಕಾನ್‌ಸ್ಟೇಬಲ್ ಹಾಗೂ ಕಾನ್‌ಸ್ಟೇಬಲ್‌ಗಳನ್ನು ಕೌನ್ಸೆಲಿಂಗ್ ಮೂಲಕ ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಆಂತರಿಕ ವರ್ಗಾವಣೆ ಮಾಡಿದ್ದಾರೆ. ಇಂದು ಬೆಳಗ್ಗೆಯಿಂದ ಸಂಜೆವರೆಗೆ ನಜರ್‌ಬಾದ್‌ನಲ್ಲಿರುವ ತಮ್ಮ ಕಚೇರಿಯಲ್ಲಿ ಒಬ್ಬೊಬ್ಬರನ್ನೂ ಕರೆದು ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಠಾಣೆಗಳನ್ನು ಹೊರತುಪಡಿಸಿ ಉಳಿದ ಸಿವಿಲ್ ಮತ್ತು ಸಂಚಾರ ಠಾಣೆಗಳಲ್ಲಿ ಖಾಲಿ ಇದ್ದು, ಅವರು ಬಯಸಿದಲ್ಲಿಗೆ ಆದ್ಯತೆ ಮೇಲೆ ಆಯುಕ್ತರು ವರ್ಗಾವಣೆ ಪ್ರಕ್ರಿಯೆ ನಡೆಸಿದರು.

ಯಾರು ಎಲ್ಲಿಗೆ ಕೇಳುತ್ತಾರೋ ಆ ಠಾಣೆಯಲ್ಲಿ ಸ್ಥಾನ ಖಾಲಿ ಇದ್ದರೆ ಅಲ್ಲಿಗೇ ಸ್ಥಳ ನಿಯುಕ್ತಿ ಮಾಡಲಾಗಿದ್ದು, ಯಾವುದೇ ಶಿಫಾರಸು, ಒತ್ತಡ ಇಲ್ಲದೆಯೇ ಪಾರದರ್ಶಕವಾಗಿ ಎಎಸ್‌ಐ, ಹೆಡ್‌ಕಾನ್‌ಸ್ಟೇಬಲ್‌ಗಳು, ಕಾನ್‌ಸ್ಟೇಬಲ್‌ಗಳಿಗೆ ಸ್ಥಳದಲ್ಲೇ ವರ್ಗಾವಣೆ ಮಾಡುವ ಮೂಲಕ ಸಿಬ್ಬಂದಿಯ ಕಾರ್ಯಕ್ಷಮತೆ ಹೆಚ್ಚಿಸಲು ಆಯುಕ್ತರು ಕ್ರಮ ವಹಿಸಿದ್ದಾರೆ. ಈ ಸಂದರ್ಭ ಭೇಟಿಯಾದ 'ಮೈಸೂರು ಮಿತ್ರ'ನಿಗೆ ಪ್ರತಿಕ್ರಿಯೆ ನೀಡಿದ ಸೀಮಾ ಲಾಟ್ಕರ್, ವರ್ಗಾವಣೆಗಾಗಿ ಸಿಬ್ಬಂದಿ ಬೇರೆಯವರ ಮೂಲಕ ಶಿಫಾರಸು ಮಾಡಿಸುವುದು ನನಗೆ ಇಷ್ಟವಾಗುವುದಿಲ್ಲ. ಆದ್ದರಿಂದ ನಾನೇ ಎಲ್ಲರನ್ನೂ ಕರೆದು ಅವರ ಸಮಸ್ಯೆ ಆಲಿಸಿ ಅವರು ಕೇಳಿದ ಠಾಣೆಗಳಿಗೆ ವರ್ಗಾವಣೆ ಮಾಡುತ್ತಿದ್ದೇನೆ ಎಂದರು.

ನುಗು ಜಲಾಶಯ ಭರ್ತಿ
ಸುರಕ್ಷಿತ ಸ್ಥಳಗಳಿಗೆ ತೆರಳಲು ಸೂಚನೆ

ಮೈಸೂರು, ಜು.22– ಕಾವೇರಿ ನೀರಾವರಿ ನಿಗಮ ನಿಯಮಿತ ವಿಭಾಗದ ವ್ಯಾಪ್ತಿಗೆ ಒಳಪಡುವ ನುಗು ಜಲಾಶಯದ ಜಲಾನಯನ ಪ್ರದೇಶದಲ್ಲಿ ಮಳೆಯಾಗುತ್ತಿದ್ದು, ಜಲಾಶಯದ ನೀರಿನ ಸಾಮರ್ಥ್ಯವು ಗರಿಷ್ಠ ಮಟ್ಟ ತಲುಪುವ ಹಂತದಲ್ಲಿದೆ. ಜಲಾಶಯವು ಯಾವುದೇ ಸಮಯದಲ್ಲಿ ಭರ್ತಿಯಾಗಬಹುದಾಗಿದ್ದು, ಜಲಾಶಯದ ನದಿಪಾತ್ರದಲ್ಲಿ ಬರುವ ರೈತರು ಮತ್ತು ಸುತ್ತಮುತ್ತಲಿನ ಗ್ರಾಮಸ್ಥರು ಮುನ್ನೆಚ್ಚರಿಕೆಯಿಂದ ಸುರಕ್ಷಿತ ಸ್ಥಳಗಳಿಗೆ ತೆರಳಲು, ಆಸ್ತಿ ಪಾಸ್ತಿ ಹಾಗೂ ಜಾನುವಾರುಗಳ ಬಗ್ಗೆ ನಿಗಾ ವಹಿಸುವಂತೆ ನಂಜನಗೂಡಿನ ಕಬಿನಿ ನಾಲೆಗಳ ವಿಭಾಗದ ಕಾರ್ಯಪಾಲಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಖದೀಮನ ಸೆರೆ: 7.35 ಲಕ್ಷ ರೂ. ಮೌಲ್ಯದ ಆಭರಣ ವಶ

ಮೈಸೂರು, ಜು. 22(ಆರ್‌ಕೆ)– ಮನೆ ಬೀಗ ಮುರಿದು ಕಳವು ಮಾಡಿದ್ದ ಆಸಾಮಿಯನ್ನು ಬಂಧಿಸಿರುವ ಜಿಲ್ಲಾ ಅಪರಾಧ ಪತ್ತೆ ದಳದ ಅಧಿಕಾರಿಗಳು, ಆತನಿಂದ 7,35,400 ರೂ. ಬೆಲೆಯ ಚಿನ್ನ ಹಾಗೂ ಬೆಳ್ಳಿ ಆಭರಣಗಳನ್ನು ವಶಕ್ಕೆ ಪಡೆದಿದ್ದಾರೆ.



ನಂಜನಗೂಡು ತಾಲೂಕು ಗೊದ್ದನಪುರ ನಿವಾಸಿ ಜಯನ ಅವರ ಮನೆಯಲ್ಲಿ ಜನವರಿ 15ರಂದು ಕೊಠಡಿಯ ಬೀರುವಿನಲ್ಲಿದ್ದ 184 ಗ್ರಾಂ ಚಿನ್ನದ ಒಡವೆ, 70 ಗ್ರಾಂ ಬೆಳ್ಳಿ ಪದಾರ್ಥ, 1 ಮೊಬೈಲ್ ಫೋನ್ ಸೇರಿ ಒಟ್ಟು 9,65,000 ರೂ. ಮೌಲ್ಯದ ಸ್ವತ್ತನ್ನು ಕಳವು ಮಾಡಲಾಗಿತ್ತು. ಪ್ರಕರಣ ದಾಖಲಿಸಿಕೊಂಡಿದ್ದ ನಂಜನಗೂಡು ಗ್ರಾಮಾಂತರ ಠಾಣೆ ಪೊಲೀಸರು ತನಿಖೆ ನಡೆಸುತ್ತಿದ್ದರಲ್ಲದೆ, ಎಎಸ್ಪಿ ಎಲ್. ನಾಗೇಶ್ ನೇತೃತ್ವದಲ್ಲಿ ರಚಿಸಿದ್ದ ಜಿಲ್ಲಾ ಅಪರಾಧ ಪತ್ತೆ ದಳದ ಸಿಬ್ಬಂದಿ ಕಾರ್ಯಾಚರಣೆ ನಡೆಸಿ ಆರೋಪಿಯನ್ನು ಜುಲೈ 4ರಂದು ಪತ್ತೆ ಮಾಡಿ ಬಂಧಿಸಿದ್ದಾರೆ. ಆರೋಪಿಯಿಂದ ಒಟ್ಟು 99 ಗ್ರಾಂ ಚಿನ್ನಾಭರಣ, 67 ಗ್ರಾಂ ಬೆಳ್ಳಿ ಪದಾರ್ಥ ಸೇರಿ ಒಟ್ಟು 7,34,000 ರೂ. ಬೆಲೆಯ ಸ್ವತ್ತನ್ನು ವಶಪಡಿಸಿಕೊಳ್ಳಲಾಗಿದೆ. ಎಸ್ಪಿ ಎನ್.ವಿಷ್ಣುವರ್ಧನ್ ನಿರ್ದೇಶನದಂತೆ ಎಎಸ್ಪಿ ಎಲ್.ನಾಗೇಶ್ ನೇತೃತ್ವದಲ್ಲಿ ಎಎಸ್‌ಐ ಸತೀಶ್, ಸಿಬ್ಬಂದಿಗಳಾದ ಅಬ್ದುಲ್ ಲತೀಫ್, ಭಾಸ್ಕರ, ಅಶೋಕ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

ಈಗ ಮೊಬೈಲ್‌ನಲ್ಲೇ ಪ್ರಪಂಚ ದರ್ಶನ

● ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್ ಅಚ್ಚರಿ ● ಡಾ.ಅಗ್ನಿಕಾ ಅಜಯ್‌ಕುಮಾರ್ 'ನೃತ್ಯ ಸಮರ್ಪಣೆ' ಕಾರ್ಯಕ್ರಮದಲ್ಲಿ ಉಪಸ್ಥಿತಿ



ವಿದುಷಿ ಡಾ.ಅಗ್ನಿಕಾ ಅಜಯ್‌ಕುಮಾರ್, ಅರ್ಧನಾರೀಶ್ವರಂ ವಿಶಿಷ್ಟ ಶೈಲಿ ನೃತ್ಯ ಪ್ರದರ್ಶನ ನೀಡಿದರು.



ಶ್ರೀ ನಿಮಿಷಾಂಬ ನೃತ್ಯಶಾಲೆ ವತಿಯಿಂದ ವಿದ್ವಾನ್ ಶ್ರೀಧರ್ ಜೈನ್ ಅವರ ಶಿಷ್ಯೆ ಡಾ.ಬಿ.ಎಸ್. ಅಜಯ್‌ಕುಮಾರ್ ಮತ್ತು ಭಾಗ್ಯ ಅಜಯ್‌ಕುಮಾರ್ ದಂಪತಿ ಪುತ್ರಿ ವಿದುಷಿ ಡಾ.ಅಗ್ನಿಕಾ ಅಜಯ್ ಕುಮಾರ್ ಪ್ರಸ್ತುತಪಡಿಸಿದ 'ನೃತ್ಯ ಸಮರ್ಪಣೆ' ಕಾರ್ಯಕ್ರಮದಲ್ಲಿ ಪ್ರಮೋದಾದೇವಿ ಒಡೆಯರ್ ಮಾತನಾಡಿದರು.

ಮೈಸೂರು, ಜೂ.22(ಎಸ್‌ಪಿಎನ್)– ತಂತ್ರಜ್ಞಾನ ಮುಂದುವರೆದಂತೆ ಕುಳಿತಲ್ಲೇ ಜಗತ್ತಿನ ಅನೇಕ ವಿಷಯಗಳನ್ನು ತಮ್ಮ ಮೊಬೈಲ್ ಮೂಲಕ ತಿಳಿದುಕೊಳ್ಳಬಹುದು ಎಂದು ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್ ಅಭಿಪ್ರಾಯಪಟ್ಟರು.

ಮೈಸೂರು ಜಗನ್ಮೋಹನ ಅರಮನೆಯಲ್ಲಿ ಶ್ರೀ ನಿಮಿಷಾಂಬ ನೃತ್ಯಶಾಲೆ ವತಿಯಿಂದ ವಿದ್ವಾನ್ ಶ್ರೀಧರ್ ಜೈನ್ ಅವರ ಶಿಷ್ಯೆ, ಖ್ಯಾತ ವೈದ್ಯ ಡಾ.ಬಿ.ಎಸ್. ಅಜಯ್‌ಕುಮಾರ್ ಮತ್ತು ಭಾಗ್ಯ ಅಜಯ್‌ಕುಮಾರ್ ದಂಪತಿ ಪುತ್ರಿ ವಿದುಷಿ ಡಾ.ಅಗ್ನಿಕಾ ಅಜಯ್ ಕುಮಾರ್ ಪ್ರಸ್ತುತಪಡಿಸಿದ 'ನೃತ್ಯ ಸಮರ್ಪಣೆ' ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಈ ಹಿಂದೆ 'ಅಂಗೈಯಲ್ಲಿ ಕೈಲಾಸ ತೋರಿಸುತ್ತಾರೆ' ಎಂಬ ಗಾದೆ ಮಾತನ್ನು ನಮ್ಮ ಹಿರಿಯರು ಹೇಳುತ್ತಿದ್ದರು. ಇದೀಗ ಇದನ್ನು ಸ್ವಲ್ಪ ಬದಲಾಯಿಸಿ ಹೇಳುವುದಾದರೆ, ಮೊಬೈಲ್‌ನಲ್ಲಿ ಇಡೀ ಪ್ರಪಂಚ ತೋರಿಸುತ್ತಾರೆ ಎಂದರೆ ತಪ್ಪಿಲ್ಲ. ಏಕೆಂದರೆ ಪ್ರಪಂಚದ ಯಾವುದೇ ಮೂಲೆಯಲ್ಲಿ ಘಟನೆಗಳು ನಡೆದರೂ ನಾವು ಕುಳಿತಲ್ಲೇ ಮೊಬೈಲ್‌ನಲ್ಲಿ ತಿಳಿದುಕೊಳ್ಳಬಹುದು. ಅದೇ ರೀತಿ ಕಲಾ ಪ್ರದರ್ಶನಗಳು, ಪ್ರಪಂಚದ ಯಾವುದೇ ವೇದಿಕೆಯಲ್ಲಿ ಪ್ರದರ್ಶನಗೊಂಡರೂ ಮೊಬೈಲ್‌ನಲ್ಲಿ ವೀಕ್ಷಣೆ ಮಾಡಬಹುದಾಗಿದೆ ಎಂದರು.

ಅಂತರರಾಷ್ಟ್ರೀಯ ಪಿಟೀಲು ವಾದಕ ವಿದ್ವಾನ್ ಡಾ.ಮೈಸೂರು ನಾಗರಾಜು ಮಾತನಾಡಿ, ಖ್ಯಾತ ವೈದ್ಯ ಡಾ.ಅಜಯ್‌ಕುಮಾರ್ ದಂಪತಿ ಪುತ್ರಿ ಡಾ.ಅಗ್ನಿಕಾ ಅಜಯ್‌ಕುಮಾರ್ ಅವರು, ಹಿರಿಯ ಕಲಾವಿದ ಶ್ರೀಧರ್ ಜೈನ್ ಶಿಷ್ಯೆಯಾಗಿ, 2010ರಲ್ಲೇ ಈ ವೇದಿಕೆಯಲ್ಲಿ ರಂಗಪ್ರವೇಶ ಮಾಡಿದ್ದರು. 2011ರಲ್ಲಿ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಏಕವ್ಯಕ್ತಿ ನೃತ್ಯ ಪ್ರದರ್ಶನ ನೀಡಿ, ಖ್ಯಾತಿ ಹೊಂದಿದ್ದಾರೆ. ಬೆಂಗಳೂರಿನ ಎಂ.ಎಸ್.ರಾಮಯ್ಯ ವೈದ್ಯಕೀಯ ಕಾಲೇಜಿನಲ್ಲಿ ಎಂಬಿಬಿಎಸ್ ಪೂರೈಸಿದ್ದು, ಜೊತೆಗೆ ನೃತ್ಯದಲ್ಲೂ ಗಮನಾರ್ಹ ಹೆಜ್ಜೆ ಇಟ್ಟಿರುವುದು ಹೆಮ್ಮೆಯ ವಿಚಾರ ಎಂದರು.

ಬೆಂಗಳೂರಿನ ಖ್ಯಾತ ನೃತ್ಯ ಕಲಾವಿದೆ ವಿದುಷಿ ಅನುರಾಧ ಶ್ರೀಧರ್ ಮಾತನಾಡಿ, ಡಾ.ಅಗ್ನಿಕಾ ಅಜಯ್‌ಕುಮಾರ್ ಅವರು, ಭರತನಾಟ್ಯ ಕ್ಷೇತ್ರದಲ್ಲಿ ಅಸಾಧಾರಣ ಪ್ರತಿಭಾವಂತರಾಗಿದ್ದಾರೆ. ವೈದ್ಯಕೀಯ ಹಾಗೂ ನೃತ್ಯ ಕ್ಷೇತ್ರ ಎರಡು ವಿಭಿನ್ನ ಕ್ಷೇತ್ರಗಳು. ಇವೆರಡರಲ್ಲಿ ತೊಡಗಿಸಿಕೊಳ್ಳುವುದು ಸುಲಭ ಮಾತಲ್ಲ. ಇದಕ್ಕೆ ಪೋಷಕರ ಪ್ರೋತ್ಸಾಹ ಅತೀ ಮುಖ್ಯವಾಗುತ್ತದೆ. ಅಗ್ನಿಕಾ ತಾಯಿ ಭಾಗ್ಯ ಅಜಯ್‌ಕುಮಾರ್, ಚಿಕಾಗೋದ ಸ್ಕೂಲ್ ಆಫ್ ಆರ್ಟ್ ಇನ್‌ಸ್ಟಿಟ್ಯೂಟ್‌ನಿಂದ ಲಲಿತಾ ಕಲೆಯಲ್ಲಿ ಸ್ನಾತಕೋತ್ತರ ಪದವಿ ಪಡೆದಿದ್ದಾರೆ ಮತ್ತು ಬೆಂಗಳೂರು ವಿವಿಯಲ್ಲಿ ದೃಶ್ಯ ಕಲೆಗಳ ವಿಭಾಗದಲ್ಲಿ ಪ್ರಾಧ್ಯಾಪಕರಾಗಿ ಕಾರ್ಯನಿರ್ವಹಿಸುತ್ತಿರುವುದರಿಂದ ಅಗ್ನಿಕಾ ಎರಡೂ ಕ್ಷೇತ್ರಗಳಲ್ಲೂ ಸಾಧನೆ ಮಾಡಲು ಸಾಧ್ಯವಾಗಿದೆ ಎಂದರು.

ಅಗ್ನಿಕಾ ಅವರ ತಂದೆ ಡಾ.ಬಿ.ಎಸ್.ಅಜಯ್ ಕುಮಾರ್ ಅವರು ಹೆಸರಾಂತ ವೈದ್ಯಕೀಯ ಮತ್ತು ವಿಕಿರಣ ಆಂಕೊಲಾಜಿಸ್ಟ್ ಮತ್ತು ಕ್ಯಾನ್ಸರ್ ಕೇರ್‌ನಲ್ಲಿ ಪರಿಣತಿ ಹೊಂದಿರುವ ಹೆಲ್ತ್ ಕೇರ್ ಗ್ಲೋಬಲ್ ಎಂಟರ್‌ಪ್ರೈಸಸ್ ಲಿಮಿಟೆಡ್ (ಎಚ್‌ಸಿಜಿ) ಸಂಸ್ಥಾಪಕ ಮತ್ತು ಕಾರ್ಯನಿರ್ವಾಹಕ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸುತ್ತಿದ್ದಾರೆ. ಭಾರತ್ ಹಾಸ್ಪಿಟಲ್ ಇನ್‌ಸ್ಟಿಟ್ಯೂಟ್ ಆಫ್ ಆಂಕೊಲಾಜಿ ಸಂಸ್ಥೆಯ ಮೈಸೂರು ಸ್ಥಾಪಕರೂ ಆಗಿದ್ದಾರೆ. ಡಾ.ಅಗ್ನಿಕಾ ಅವರ ಪೋಷಕರಿಬ್ಬರೂ ಜಂಟಿಯಾಗಿ ಇಂಟರ್‌ನ್ಯಾಷನಲ್ ಹ್ಯೂಮನ್ ಡೆವಲಪ್‌ಮೆಂಟ್ & ಅಪ್ಲಿಫ್ಟ್‌ಮೆಂಟ್ ಅಕಾಡೆಮಿ (IHDUA) ಅನ್ನು ಸ್ಥಾಪಿಸಿದ್ದಾರೆ. ಈ ಸಂಸ್ಥೆ ಗ್ರಾಮೀಣ ಪ್ರದೇಶದ ಮಕ್ಕಳು ಮತ್ತು ಮಹಿಳಾ ಸಬಲೀಕರಣ ಮತ್ತು ಶಿಕ್ಷಣಕ್ಕೆ ಒತ್ತು ನೀಡುತ್ತಿರುವುದಕ್ಕೆ ಸಾಕ್ಷಿ ಎಂದರು.

ವೇದಿಕೆಯಲ್ಲಿ ಶ್ರೀ ನಿಮಿಷಾಂಬ ಸ್ಕೂಲ್ ಆಫ್ ಡ್ಯಾನ್ಸ್‌ನ ಡಾ.ಅಜಯಕುಮಾರ್, ಭಾಗ್ಯ ಅಜಯ್ ಕುಮಾರ್, ಪ್ರಕಾಶ್, ವಿದ್ವಾನ್ ಶ್ರೀಧರ್ ಜೈನ್ ಉಪಸ್ಥಿತರಿದ್ದರು. ವೇದಿಕೆ ಕಾರ್ಯಕ್ರಮದ ನಂತರ ವಿದುಷಿ ಡಾ.ಅಗ್ನಿಕಾ ಅಜಯ್‌ಕುಮಾರ್ ಅವರು, ಅರ್ಧನಾರೀಶ್ವರಂ ವಿಶಿಷ್ಟ ಶೈಲಿ ನೃತ್ಯ ಪ್ರದರ್ಶನ ನೀಡಿ, ಪ್ರೇಕ್ಷಕರ ಮನಸೆಳೆದರು.

ಮೈಸೂರು ಮಿತ್ರ ಮಂಗಳವಾರ 23 ಜುಲೈ 2024

ಶ್ರೀ ಕಾವೇರಿ ಆಶ್ರಮ ಪುನಶ್ಚೇತನಕ್ಕೆ ಅಖಿಲ ಕೊಡವ ಸಮಾಜ ನಿರ್ಧಾರ

ಶ್ರೀ ಕಾವೇರಿ ಭಕ್ತ ಜನ ಸಂಘಕ್ಕೆ ಸಂಭಾವಿತ ಪದಾಧಿಕಾರಿಗಳ ಆಯ್ಕೆಗೆ ಸಲಹೆ



ಕಾವೇರಿ ಉಗಮ ಸ್ಥಾನ.

ವಿರಾಜಪೇಟೆ, ಜು.22– ವಿರಾಜಪೇಟೆಯ ಶ್ರೀ ಕಾವೇರಿ ಆಶ್ರಮದ ಪುನಶ್ಚೇತನಕ್ಕೆ ಅಖಿಲ ಕೊಡವ ಸಮಾಜ ತೀರ್ಮಾನಿಸಿ, ಆ ನಿಟ್ಟಿನಲ್ಲಿ ಕಾರ್ಯೋನ್ಮುಖವಾಗಿದೆ.

ಹಾಗಾಗಿ ಕಾವೇರಿ ಆಶ್ರಮದ ಪುನಶ್ಚೇತನಕ್ಕಾಗಿ ಕಾವೇರಿ ಭಕ್ತ ಜನ ಸಂಘವನ್ನು ಹೊಸ ಪದಾಧಿಕಾರಿಗಳೊಂದಿಗೆ ಪುನರ್ ರೂಪಿಸಬೇಕಾಗಿದ್ದು, ಸಂಘದ ಸದಸ್ಯರೂ ಆಗಿರುವ ಖ್ಯಾತ ಹಿರಿಯ ಸಾಹಿತಿ ಬಾಚರಣಿಯಂಡ ಪಿ.ಅಪ್ಪಣ್ಣ ಅವರ ಅಧ್ಯಕ್ಷತೆಯಲ್ಲಿ ಹೊಸ ಪದಾಧಿಕಾರಿಗಳನ್ನು ನೇಮಿಸಿಕೊಂಡು ಮುಂದುವರೆಯುವಂತೆ ಸಲಹೆ ನೀಡಿರುವುದಾಗಿ ಅಖಿಲ ಕೊಡವ ಸಮಾಜದ ವಿರಾಜಪೇಟೆ ಅಧ್ಯಕ್ಷ ಪರದಂಡ ಸುಬ್ರಮಣಿ ಕಾವೇರಪ್ಪ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಹಾಗೆಯೇ ಸಂಭಾವಿತ ಪದಾಧಿಕಾರಿಗಳನ್ನು ಆಯ್ಕೆ ಮಾಡಲು ಸಲಹೆ ನೀಡಿದ್ದು, ಅಧ್ಯಕ್ಷರಾಗಿ ಬಾಚರಣಿಯಂಡ ಪಿ.ಅಪ್ಪಣ್ಣ (ಭಕ್ತ ಜನ ಸಂಘದ ಸದಸ್ಯರು), ಗೌರವ ಅಧ್ಯಕ್ಷರಾಗಿ ಅಖಿಲ ಕೊಡವ ಸಮಾಜದ ಅಧ್ಯಕ್ಷ ಪರದಂಡ ಸುಬ್ರಮಣಿ ಕಾವೇರಪ್ಪ, ಉಪಾಧ್ಯಕ್ಷರಾಗಿ ವಿರಾಜಪೇಟೆ ಕೊಡವ ಸಮಾಜ, ಮೈಸೂರು ಕೊಡವ ಸಮಾಜ ಹಾಗೂ ಕುಶಾಲನಗರ ಕೊಡವ ಸಮಾಜದ ಅಧ್ಯಕ್ಷರುಗಳೊಂದಿಗೆ ಕೊಲ್ಲಿರ ಉಮೇಶ್, ರಾಜೀವ್ ಬೋಪಯ್ಯ, ಕಾರ್ಯದರ್ಶಿಯಾಗಿ ನಾಯಕಂಡ ಯು.ಅರುಣ್ ಅಪ್ಪಯ್ಯ(ಹಾಲಿ ಕಾರ್ಯದರ್ಶಿ), ತಾತ್ಕಾಲಿಕ ಗೌರವ ಕಾರ್ಯದರ್ಶಿಯಾಗಿ ಅಖಿಲ ಕೊಡವ ಸಮಾಜ ಕಾರ್ಯದರ್ಶಿ ಹಾಗೂ ಮತ್ತೊಬ್ಬರನ್ನು ಆಯ್ಕೆ ಮಾಡಲು ಸಲಹೆ ನೀಡಿದ್ದಾರೆ.

ಕೊಡವ ಸಮಾಜಗಳ ಪರ ಸದಸ್ಯರಾಗಿ ಪೊನ್ನಂಪೇಟೆ ಕೊಡವ ಸಮಾಜದ ಅಧ್ಯಕ್ಷರು, ಅಮ್ಮತ್ತಿ ಕೊಡವ ಸಮಾಜದ ಅಧ್ಯಕ್ಷರು, ನಾಪೋಕ್ಲು ಕೊಡವ ಸಮಾಜದ ಅಧ್ಯಕ್ಷರು, ಮೂರ್ನಾಡ್ ಕೊಡವ ಸಮಾಜದ ಅಧ್ಯಕ್ಷರು, ದಾನಿಗಳ ಪರ ಭಾವಿ ಭಕ್ತ ಜನ ಸಂಘದ ಸದಸ್ಯರಾಗಿ ನೆಲ್ಲಮಕ್ಕಡ ಲೋಕೇಶ್ ಬೋಪಣ್ಣ, ಕುಟ್ಟಂಡ ಅಜಿತ್, ಪುಗ್ಗೆರ ಕುಟುಂಬ, ಮಾಳೇಟಿರ ಕುಟುಂಬ, ಪಳಂಗಂಡ ಕುಟುಂಬ, ನಂಬಡುಮಾಡ ಕುಟುಂಬ, ತಾತಂಡ ಕುಟುಂಬ, ಕೊಂಗಂಡ ಕುಟುಂಬ, ಪಟ್ಟಡ ಕುಟುಂಬ ಹಾಗೂ ಪಟ್ರಪಂಡ ಕುಟುಂಬದಿಂದ ತಲಾ ಒಬ್ಬರು, ಹಾಲಿ ಎಲ್ಲಾ ಟ್ರಸ್ಟಿಗಳು ಮತ್ತು ಉಳ್ಳಿಯಡ ಎಂ.ಪೂವಯ್ಯ(ಸಂಪಾದಕರು, ಬ್ರಹ್ಮಗಿರಿ ವಾರಪತ್ರಿಕೆ) ಅವರಿಗೆ ವಿಶೇಷ ಸ್ಥಾನ ನೀಡುವಂತೆಯೂ ತಿಳಿಸಿದ್ದಾರೆ.

ಗ್ಯಾರಂಟಿ ಯೋಜನೆ ಅರ್ಹರಿಗೆ ತಲುಪಿಸಿ

ಸಭೆಯಲ್ಲಿ ಅಧಿಕಾರಿಗಳಿಗೆ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಧರ್ಮಜ ಉತ್ತಪ್ಪ ಸೂಚನೆ



ಮಡಿಕೇರಿ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆಯಲ್ಲಿ ಯೋಜನೆ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಧರ್ಮಜ ಉತ್ತಪ್ಪ ಮಾತನಾಡಿದರು.

ಮಡಿಕೇರಿ, ಜು.22–ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಾದ ಶಕ್ತಿ, ಗೃಹಲಕ್ಷ್ಮಿ, ಗೃಹಜ್ಯೋತಿ, ಯುವನಿಧಿ ಹಾಗೂ ಅನ್ನಭಾಗ್ಯ ಜಾರಿಗೊಳಿಸಿದ್ದು, ಈ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಬೇಕು ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಧರ್ಮಜ ಉತ್ತಪ್ಪ ಅಧಿಕಾರಿಗಳಿಗೆ ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ಗ್ಯಾರಂಟಿ ಪ್ರಗತಿ ಪರಿಶೀಲನೆ ಸಭೆಯಲ್ಲಿ ಮಾತನಾಡಿದ ಅವರು, ಈ ಯೋಜನೆಗಳಿಂದ ಅರ್ಹರು ವಂಚಿತರಾಗದಂತೆ ಗಮನಹರಿಸುವುದು ಅಧಿಕಾರಿಗಳ ಜವಾಬ್ದಾರಿ ಆಗಿದೆ. ಈ ನಿಟ್ಟಿನಲ್ಲಿ ಸರ್ಕಾರದ ಉದ್ದೇಶ ಮತ್ತು ಆಶಯದಂತೆ ಗ್ಯಾರಂಟಿ ತಲುಪಿಸುವಂತೆ ಸಲಹೆ ನೀಡಿದರು.

ಶಕ್ತಿ, ಗೃಹಲಕ್ಷ್ಮಿ, ಗೃಹಜ್ಯೋತಿ, ಯುವನಿಧಿ, ಅನ್ನಭಾಗ್ಯ ಪಂಚ ಯೋಜನೆಗಳು ತಲುಪಿದಾಗ ಸರ್ಕಾರಕ್ಕೆ ಹೆಸರು ಬರಲಿದೆ. ಆ ನಿಟ್ಟಿನಲ್ಲಿ ಕಾರ್ಯನಿರ್ವಹಿಸಬೇಕು. ಯೋಜನೆಗಳ ಅನುಷ್ಠಾನದಲ್ಲಿ ಸಮಸ್ಯೆಗಳು ಇದ್ದಲ್ಲಿ ಮಾಹಿತಿ ನೀಡಬೇಕು ಎಂದು ಸೂಚಿಸಿದರು.

ಗ್ಯಾರಂಟಿ ಯೋಜನೆಗಳ ಕುಶಾಲನಗರ ತಾಲೂಕು ಅನುಷ್ಠಾನ ಸಮಿತಿ ಅಧ್ಯಕ್ಷ ವಿ.ಪಿ.ಶಶಿಧರ ಮಾತನಾಡಿ, ಯುವನಿಧಿ ಯೋಜನೆಯಡಿ ಸಲ್ಲಿಕೆ ಆಗಿರುವ ಬಾಕಿ ಅರ್ಜಿಗಳನ್ನು ತ್ವರಿತವಾಗಿ ವಿಲೇವಾರಿ ಮಾಡುವಂತೆ ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಬಿ.ಎನ್.ವೀಣಾ ಮಾತನಾಡಿ, ಗ್ಯಾರಂಟಿ ಯೋಜನೆ ಅನುಷ್ಠಾನದಲ್ಲಿ ವಿಳಂಬ ಮಾಡದೆ ಕಾಲಮಿತಿಯಲ್ಲಿ ಅರ್ಹರಿಗೆ ಸೌಲಭ್ಯ ಕಲ್ಪಿಸಲು ಪ್ರಯತ್ನಿಸಬೇಕು ಎಂದರು.

ಆಹಾರ ಇಲಾಖೆಯ ಜಂಟಿನಿರ್ದೇಶಕ ಕುಮುದಾ ಶರತ್, ಜಿಲ್ಲೆಯಲ್ಲಿ 97,570 ಜನರಿಗೆ ಅನ್ನಭಾಗ್ಯ ಯೋಜನೆಯಡಿ ಹಣ ಪಾವತಿಯಾಗುತ್ತಿದೆ. ಇದರಿಂದ ಶೇ.98ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಮಾಹಿತಿ ನೀಡಿದರು.

> ಕೊಡಗು ಜಿಲ್ಲೆಯಲ್ಲಿ ಗೃಹಜ್ಯೋತಿ ಯೋಜನೆಯಡಿ 1,53,623 ಕುಟುಂಬಗಳಲ್ಲಿ 1,51,907 ಕುಟುಂಬಗಳು ನೋಂದಣಿಯಾಗಿದ್ದು, ಶೇ.98.88ರಷ್ಟು ಪ್ರಗತಿ ಸಾಧಿಸಲಾಗಿದೆ. ಮೇ ಅಂತ್ಯದವರೆಗೆ 5905.30 ಲಕ್ಷ ರೂ. ಸಹಾಯಧನ ಕಲ್ಪಿಸಲಾಗಿದೆ.
>
> –ವಿನಯ್ ಕುಮಾರ್, ಸೆಸ್ಕ್ ಎಇಇ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ನಟರಾಜು ಮಾತನಾಡಿ, ಗೃಹಲಕ್ಷ್ಮಿ ಯೋಜನೆ ಜೂನ್ ವರೆಗೆ ಹಣ ಪಾವತಿಯಾಗಿದೆ. ಜುಲೈ ಹಣ ಪಾವತಿಸಬೇಕಾಗಿದೆ. ಜಿಲ್ಲೆಯಲ್ಲಿ ಗೃಹಲಕ್ಷ್ಮಿ ಯೋಜನೆಯಡಿ 1,15,229 ಮಹಿಳೆಯರು ಹೆಸರು ನೋಂದಣಿಯಾಗಿದ್ದು, 1,14,056 ಮಂದಿಗೆ ಹಣ ಮಂಜೂರಾಗಿದೆ. ಶೇ.98.98ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ಮೋಹನ್‌ದಾಸ್(ಮಡಿಕೇರಿ), ಜಾನ್ಸನ್ (ವಿರಾಜಪೇಟೆ), ಕೆಎಸ್‌ಆರ್‌ಟಿಸಿ ಮಡಿಕೇರಿ ಘಟಕ ವ್ಯವಸ್ಥಾಪಕ ಮೆಹಬೂಬ್ ಅಲಿ, ರೇಖಾ ಗಣಪತಿ ಮತ್ತಿತರರು ಇದ್ದರು.

ಜು.26, ವಿರಾಜಪೇಟೆಯಲ್ಲಿ ಕಾರ್ಗಿಲ್ ವಿಜಯೋತ್ಸವ



ವಿರಾಜಪೇಟೆ ಪ್ರೆಸ್‌ಕ್ಲಬ್‌ನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಕೊಡಗು ಮಾಜಿ ಸೈನಿಕರ ಸಹಕಾರ ಸಂಘದ ಅಧ್ಯಕ್ಷ ಚಪ್ಪಂಡ ಹರೀಶ್ ಉತ್ತಯ್ಯ ಮಾತನಾಡಿದರು.

ವಿರಾಜಪೇಟೆ, ಜು.22–ಕೊಡಗು ಮಾಜಿ ಸೈನಿಕರ ಸಹಕಾರ ಸಂಘದ ವತಿಯಿಂದ 25ನೇ ವರ್ಷದ ಕಾರ್ಗಿಲ್ ವಿಜಯೋತ್ಸವ ಹಾಗೂ ಹುತಾತ್ಮ ಯೋಧರ ಸ್ಮಾರಕಕ್ಕೆ ಗೌರವ ಸಮರ್ಪಣೆ ಕಾರ್ಯಕ್ರಮವನ್ನು ಜು.26ರಂದು ಬೆಳಗ್ಗೆ 10 ಗಂಟೆಗೆ ಪಟ್ಟಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಅಧ್ಯಕ್ಷ ಚಪ್ಪಂಡ ಹರೀಶ್ ಉತ್ತಯ್ಯ ತಿಳಿಸಿದರು.

ಇಲ್ಲಿನ ಪ್ರೆಸ್‌ಕ್ಲಬ್‌ನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಲಾ–ಕಾಲೇಜು, ಸ್ಕೌಟ್ಸ್ ಅಂಡ್ ಗೈಡ್ಸ್, ಎನ್‌ಸಿಸಿ ವಿದ್ಯಾರ್ಥಿಗಳು ಹಾಗೂ ದೇಶ ಭಕ್ತರು ಸೇರಿ ವಿವಿಧ–ಸಂಘ ಸಂಸ್ಥೆಗಳ ಸಹಯೋಗದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ. ಅಂದು ಬೆಳಗ್ಗೆ 10ಕ್ಕೆ ಪಟ್ಟಣದ ಹೃದಯ ಭಾಗ ಗಡಿಯಾರ ಕಂಬದ ಬಳಿಯಿಂದ ಮುಖ್ಯ ಬೀದಿಗಳಲ್ಲಿ ಮೆರವಣಿಗೆ ನಡೆಸಲಾಗುವುದು. ನಂತರ ತಾಲೂಕು ಕಚೇರಿ ಮುಂಭಾಗದ ಹುತಾತ್ಮ ಯೋಧರ ಸ್ಮಾರಕಕ್ಕೆ ಗೌರವ ಸಲ್ಲಿಸಲಾಗುವುದು ಎಂದರು.

1999ರಲ್ಲಿ ಕಾರ್ಗಿಲ್ ಪ್ರದೇಶಕ್ಕೆ ಪಾಕಿಸ್ತಾನ ಅತಿಕ್ರಮಣ ಮಾಡಿದ್ದರಿಂದ ಭಾರತೀಯ ಸೇನೆ ದಿಟ್ಟ ಉತ್ತರ ನೀಡಿ, ಪಾಕಿಸ್ತಾನ ಸೇನೆಯನ್ನು ಬಗ್ಗು ಬಡಿದು ಕಾರ್ಗಿಲ್ ವಿಜಯೋತ್ಸವ ಆಚರಿಸಿದ್ದರು. ದೇಶದ ಇಂತಹ ಐತಿಹಾಸಿಕ ದಿನವನ್ನು ಭಾರತೀಯರಾದ ನಾವು ಎಂದಿಗೂ ಮರೆಯಲು ಸಾಧ್ಯವಿಲ್ಲ ಎಂದು ತಿಳಿಸಿದರು.

ಸಂಘದ ಉಪಾಧ್ಯಕ್ಷ ರಾಜಚಂದ್ರ ಶೇಖರ್ ಮಾತನಾಡಿ, ಪ್ರತಿವರ್ಷದಂತೆ ಈ ಬಾರಿಯೂ ಸ್ವಾತಂತ್ರ್ಯ ದಿನಾಚರಣೆ ದಿನ ಕಾರ್ಗಿಲ್ ವಿಜಯೋತ್ಸವ ಸಾಧನೆ ಹಾಗೂ ಯುದ್ಧದಲ್ಲಿ ಭಾಗವಹಿಸಿದ್ದ ಮಾಜಿ ಯೋಧರನ್ನು ಗೌರವಿಸಲಾಗುವುದು. 70 ವರ್ಷ ಮೇಲ್ಪಟ್ಟ ಮಾಜಿ ಸೈನಿಕರು ಆಗಸ್ಟ್ 10ರೊಳಗೆ ಸಂಘದ ಕಚೇರಿಗೆ ಅರ್ಜಿ ಸಲ್ಲಿಸಬಹುದು ಎಂದರು.

ಸುದ್ದಿಗೋಷ್ಠಿಯಲ್ಲಿ ಸಂಘದ ಕಾರ್ಯದರ್ಶಿ ಪುಗ್ಗೆರ ನಂದಾ, ಖಜಾಂಚಿ ತೋರೆರ ಪೂವಯ್ಯ, ನಿರ್ದೇಶಕರಾದ ಸಲಾಂ ಎಂ.ಕೆ.ಕಡಂಗ, ಕೊಂಗಂಡ ಭೀಮಯ್ಯ, ಕಬ್ಬಚಿರ ರತ್ನ ಬೋಪಯ್ಯ, ಬಾಳೆಕುಟ್ಟಿರ ದಿನಿ ಬೋಪಯ್ಯ ಉಪಸ್ಥಿತರಿದ್ದರು.

ಮನೆ ಕಳೆದುಕೊಂಡವರಿಗೆ 10 ಲಕ್ಷ ಪರಿಹಾರ ನೀಡಬೇಕು

ರಾಜ್ಯ ಸರ್ಕಾರಕ್ಕೆ ಮಾಜಿ ಶಾಸಕ ಅಪ್ಪಚ್ಚು ರಂಜನ್ ಆಗ್ರಹ



ಕುಶಾಲನಗರದ ಮಳೆ ಹಾನಿಗೊಳಗಾದ ಕುಟುಂಬಗಳಿಗೆ ಮಾಜಿ ಶಾಸಕ ಅಪ್ಪಚ್ಚು ರಂಜನ್ ಆಹಾರ ಕಿಟ್ ವಿತರಿಸಿದರು.

ಕುಶಾಲನಗರ, ಜು.22–ಮಳೆಯಿಂದ ಮನೆ ಕಳೆದುಕೊಂಡ ಕುಟುಂಬಗಳಿಗೆ ರಾಜ್ಯ ಸರ್ಕಾರ 10 ಲಕ್ಷ ರೂ. ಪರಿಹಾರ ನೀಡಬೇಕು ಎಂದು ಮಾಜಿ ಶಾಸಕ ಅಪ್ಪಚ್ಚು ರಂಜನ್ ಆಗ್ರಹಿಸಿದರು.

ತಾಲೂಕಿನ ವಿವಿಧೆಡೆ ಮಳೆ ಹಾನಿ ಪ್ರದೇಶಗಳಿಗೆ ಭೇಟಿ ನೀಡಿ, ಪರಿಶೀಲಿಸಿ ಮಾತನಾಡಿದ ಅವರು, ಬಿಜೆಪಿ ಸರ್ಕಾರವಿದ್ದಾಗ ನೀಡುತ್ತಿದ್ದ ಮಳೆ ಹಾನಿ ಪರಿಹಾರಕ್ಕಿಂತ ಹೆಚ್ಚಿನ ಮೊತ್ತವನ್ನು ಈಗಿನ ಕಾಂಗ್ರೆಸ್ ಸರ್ಕಾರ ನೀಡಬೇಕು. ನಮ್ಮ ಸರ್ಕಾರದ ಅವಧಿಯಲ್ಲಿ 1 ಲಕ್ಷದಿಂದ 10 ಲಕ್ಷದವರೆಗೆ ಪರಿಹಾರ ನೀಡಿದ್ದೇವೆ. ಸಂತ್ರಸ್ತರೆಲ್ಲರಿಗೂ ಕಿಟ್ ಒದಗಿಸಲಾಗಿತ್ತು. ರಾಜ್ಯ ಸರ್ಕಾರ ಹಾಗೂ ಜನಪ್ರತಿನಿಧಿಗಳು ಜನಸಾಮಾನ್ಯರ ಕಷ್ಟಗಳಿಗೆ ಸ್ಪಂದಿಸಬೇಕಿದೆ. ಹೂಳೆತ್ತುವ ಕಾಮಗಾರಿ ಸಂಪೂರ್ಣವಾಗಿ ಮುಗಿದಿಲ್ಲ. ಈ ಕಾಮಗಾರಿಗೆ ಎಷ್ಟು ಹಣ ಬಿಡುಗಡೆಯಾಗಿದೆ, ಎಷ್ಟು ಖರ್ಚಾಗಿದೆ, ಎಲ್ಲೆಲ್ಲಿಗೆ ವಿನಿಯೋಗಿಸಲಾಗಿದೆ ಎಂಬ ಬಗ್ಗೆ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ಇದೇ ವೇಳೆ ಕುಶಾಲನಗರ ಪಪಂ, ಗುಡ್ಡೆಹೊಸೂರು ಗ್ರಾಪಂ ವ್ಯಾಪ್ತಿ ಕುಸಿದ ಮನೆಗಳನ್ನು ವೀಕ್ಷಿಸಿದರು. ಕಾವೇರಿ ನದಿ ದಡದ ಸಾಯಿ ಹಾಗೂ ಕುವೆಂಪು ಬಡಾವಣೆಗೆ ಭೇಟಿ ನೀಡಿ, ಪ್ರವಾಹ ತಡೆಗಟ್ಟಲು ನಿರ್ಮಿಸುತ್ತಿರುವ ತಡೆಗೋಡೆ ಪರಿಶೀಲಿಸಿದರು.

ಬಳಿಕ ಕುವೆಂಪು ಬಡಾವಣೆಯಲ್ಲಿ ಈಗಾಗಲೇ ನಿರ್ಮಾಣಗೊಂಡಿರುವ ತಡೆಗೋಡೆ ಪರಿಶೀಲಿಸಿ, ತಡೆಗೋಡೆ ಆವರಣದಲ್ಲಿರುವ ಮಳೆ ನೀರನ್ನು ಶೀಘ್ರ ವಿಲೇವಾರಿ ಮಾಡುವಂತೆ ಸ್ಥಳೀಯ ಆಡಳಿತಕ್ಕೆ ತಿಳಿಸಿದರು. ಮಳೆ ಹಾನಿಗೊಳಗಾದ ಕುಟುಂಬ ಸದಸ್ಯರಿಗೆ ಸಾಂತ್ವನ ಹೇಳಿ, ಆಹಾರ ಕಿಟ್‌ಗಳನ್ನು ವಿತರಿಸಿದರು.

ಈ ಸಂದರ್ಭ ಬಿಜೆಪಿ ನಗರಾಧ್ಯಕ್ಷ ಚರಣ್, ಪ್ರಧಾನ ಕಾರ್ಯದರ್ಶಿ ಮಧುಸೂದನ್, ಯುವ ಮೋರ್ಚಾ ಅಧ್ಯಕ್ಷ ರಾಮನಾಥನ್, ಪ್ರಧಾನ ಕಾರ್ಯದರ್ಶಿ ಸಚಿನ್, ಜಿಲ್ಲಾ ಬಿಜೆಪಿ ಉಪಾಧ್ಯಕ್ಷ ಆರ್.ಕೆ.ಚಂದ್ರ, ಪುರಸಭಾ ಸದಸ್ಯರಾದ ಅಮೃತ್‌ರಾಜ್, ಜೈವರ್ಧನ್, ಡಿ.ಕೆ.ತಿಮ್ಮಪ್ಪ, ಕೂಡುಮಂಗಳೂರು ಗ್ರಾಪಂ ಅಧ್ಯಕ್ಷ ಭಾಸ್ಕರ್ ನಾಯಕ್, ಪ್ರಮುಖರಾದ ಹೇರೂರು ಚಂದ್ರಶೇಖರ್, ವೈಶಾಖ್, ಪ್ರವೀಣ್, ಆದರ್ಶ್, ದಿನೇಶ್, ಅನುದೀಪ್, ಕುಮಾರಪ್ಪ, ಪುಂಡರೀಕಾಕ್ಷ ಮಣಿ, ಆಸಿಫ್ ಮತ್ತಿತರರು ಹಾಜರಿದ್ದರು.

ಜಿಲ್ಲೆಯಲ್ಲಿ 19.88 ಮಿ.ಮೀ. ಮಳೆ

ಮಡಿಕೇರಿ: ಜಿಲ್ಲೆಯಲ್ಲಿ ಸೋಮವಾರ ಬೆಳಗ್ಗೆ 8.30ಕ್ಕೆ ಕೊನೆಗೊಂಡಂತೆ ಕಳೆದ 24 ಗಂಟೆ ಅವಧಿಯಲ್ಲಿ ಸರಾಸರಿ 19.88 ಮಿ.ಮೀ. ಮಳೆಯಾಗಿದೆ.

ಮಡಿಕೇರಿ ತಾಲೂಕಿನಲ್ಲಿ 10.78 ಮಿ.ಮೀ., ವಿರಾಜಪೇಟೆಯಲ್ಲಿ 1.10 ಮಿ.ಮೀ., ಪೊನ್ನಂಪೇಟೆಯಲ್ಲಿ 20.93 ಮಿ.ಮೀ., ಸೋಮವಾರಪೇಟೆಯಲ್ಲಿ 60.80 ಮಿ.ಮೀ., ಕುಶಾಲನಗರದಲ್ಲಿ ಸರಾಸರಿ 5.80 ಮಿ.ಮೀ. ಮಳೆಯಾಗಿದೆ.

ಚಾ.ನಗರ ಜಿಲ್ಲೆ ಮೊದಲ ಸ್ಥಾನ ಪಡೆಯಬೇಕು

ಅಧಿಕಾರಿಗಳಿಗೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಚಂದ್ರು ಸೂಚನೆ



ಚಾಮರಾಜನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಹೆಚ್.ವಿ.ಚಂದ್ರು ಮಾತನಾಡಿದರು.

> ಯೋಜನೆಗಳ ಅನುಷ್ಠಾನದಲ್ಲಿ ಅಧಿಕಾರಿಗಳು ಸಮರ್ಪಕವಾಗಿ ತೊಡಗಿಕೊಳ್ಳಬೇಕು. ಫಲಾನುಭವಿಗಳ ಸಮಸ್ಯೆಗಳನ್ನು ತ್ವರಿತವಾಗಿ ಪರಿಹರಿಸಬೇಕು. ಸರ್ಕಾರದ ಯೋಜನೆಗಳ ಉದ್ದೇಶ ಫಲಪ್ರದವಾಗುವಂತೆ ನೋಡಿಕೊಳ್ಳುವ ಹೊಣೆಗಾರಿಕೆಯನ್ನು ಅಧಿಕಾರಿಗಳು ನಿರ್ವಹಿಸಬೇಕು.
>
> –ಗೀತಾ ಹುಡೇದ, ಅಪರ ಜಿಲ್ಲಾಧಿಕಾರಿ

ಚಾಮರಾಜನಗರ, ಜು.22–ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಚಾಮರಾಜನಗರ ಜಿಲ್ಲೆ ಮೊದಲ ಸ್ಥಾನಕ್ಕೆ ಬರಲು ಅಧಿಕಾರಿಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕು ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಹೆಚ್.ವಿ.ಚಂದ್ರು ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಅನ್ನಭಾಗ್ಯ, ಗೃಹಜ್ಯೋತಿ, ಗೃಹಲಕ್ಷ್ಮಿ, ಶಕ್ತಿ ಹಾಗೂ ಯುವನಿಧಿ ಯೋಜನೆ ಜಾರಿಗೆ ತಂದಿದೆ. ಈ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮುಖೇನ ಅರ್ಹರೆಲ್ಲರಿಗೂ ಸೌಲಭ್ಯ ತಲುಪಿಸಬೇಕು. ಯೋಜನೆಯ ಪ್ರಯೋಜನ ಬಡಜನತೆಗೆ ತಲುಪಿಲ್ಲ ಎಂಬ ದೂರುಗಳು ಬರಬಾರದು. ಗ್ಯಾರಂಟಿಗಳನ್ನು ಸಮರ್ಪಕವಾಗಿ ತಲುಪಿಸುವ ಜವಾಬ್ದಾರಿ ನಮ್ಮ ನಿಮ್ಮೆಲ್ಲರದ್ದಾಗಿದೆ ಎಂದರು.

ಪ್ರತಿ ಯೋಜನೆಯ ಪ್ರಗತಿ ವಿವರ ಪಡೆದ ಅಧ್ಯಕ್ಷರು, ಅನುಷ್ಠಾನದಲ್ಲಿ ಯಾವುದೇ ತೊಂದರೆ ಕಂಡು ಬಂದರೆ ಕೂಡಲೇ ಅಧಿಕಾರಿಗಳು ಪರಿಹರಿಸಬೇಕು. ಬ್ಯಾಂಕ್‌ಗಳಲ್ಲಿ ಫಲಾನುಭವಿಗಳು ಹಣ ಪಡೆಯಲು ಇರುವ ತೊಡಕುಗಳನ್ನು ನಿವಾರಣೆ ಮಾಡಬೇಕು. ಆಧಾರ್, ಮೊಬೈಲ್ ನಂಬರ್ ಜೋಡಣೆ ಮಾಡದಿರುವ ಕಾರಣಗಳಿಗೆ ಸೌಲಭ್ಯ ವಂಚಿತವಾಗಬಾರದು ಎಂದು ಹೇಳಿದರು.

ಅನ್ನಭಾಗ್ಯದಂತಹ ಮಹತ್ತರ ಕಾರ್ಯಕ್ರಮಗಳಲ್ಲಿ ಫಲಾನುಭವಿಗಳಿಗೆ ಡಿಬಿಟಿ ಮೂಲಕ ಹಣ ವರ್ಗಾವಣೆಯಾಗಬೇಕು. ಪಡಿತರ ಚೀಟಿದಾರರಿಗೆ ಡಿಬಿಟಿ ಹಣ ಹೊಂದಾಣಿಕೆಯಾಗದೆ ಇದ್ದಲ್ಲಿ ಆಹಾರ ನಾಗರಿಕ ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಅಧಿಕಾರಿಗಳು ತಕ್ಷಣ ಕಾರ್ಯಪ್ರವೃತ್ತರಾಗಿ ತೊಂದರೆಗಳನ್ನು ಪರಿಹರಿಸಬೇಕು. ತಾಲೂಕು ಮಟ್ಟದಲ್ಲೂ ತ್ವರಿತ ಸ್ಪಂದನೆ ಸಿಗಬೇಕು ಎಂದರು.

ಸಭೆಯಲ್ಲಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಉಪಾಧ್ಯಕ್ಷರಾದ ಸೋಮೇಶ್ವರ ನಲ್ಲೂರು, ಎಸ್.ಪ್ರಭುಪ್ರಸಾದ್, ಸಿದ್ದರಾಜು, ಎಸ್‌ಆರ್‌ಎಸ್ ರಾಜಶೇಖರ್, ಸದಸ್ಯರಾದ ಕೆ.ವಿ.ಚಿನ್ನಸ್ವಾಮಿ, ಹೆಚ್.ಜಿ.ಉಮಾಪತಿ, ಎಂ.ರಾಚಯ್ಯ, ಅಕ್ಬರ್ ಪಾಷ, ರಾಜೇಂದ್ರ, ಆರ್.ಹೆಚ್.ಎನ್.ಜಯರಾಜು, ಭಾಗ್ಯ, ಎಂ.ದೇವರಾಜು, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಉಪನಿರ್ದೇಶಕ ಯೋಗಾನಂದ, ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿ ಆರ್.ಅಶೋಕ್ ಕುಮಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಮಂಜುನಾಥ್, ಜಿಲ್ಲಾ ಉದ್ಯೋಗಾಧಿಕಾರಿ ಎ.ಮಹಮ್ಮದ್ ಅಕ್ಬರ್ ಹಾಗೂ ಇತರ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

ಮೂಡ್ಲುಪುರ ನಂದೀಶ್ ವೀರಶೈವ–ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ



ಚಾಮರಾಜನಗರ ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾ ಜಿಲ್ಲಾ ನಿರ್ದೇಶಕರನ್ನು ಅಭಿನಂದಿಸಲಾಯಿತು.

ಚಾಮರಾಜನಗರ, ಜು.22–ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷರಾಗಿ ಮೂಡ್ಲುಪುರ ನಂದೀಶ್ ಪುನರಾಯ್ಕೆಯಾಗಿದ್ದಾರೆ.

ನಗರದ ನಂದಿ ಭವನದಲ್ಲಿ ನಡೆದ ಚುನಾವಣೆಯಲ್ಲಿ ನಂದೀಶ್ 1571 ಮತ ಪಡೆದು 191 ಮತಗಳ ಅಂತರದಲ್ಲಿ ಜಯ ಗಳಿಸಿದರು. ಪ್ರತಿಸ್ಪರ್ಧಿ ಹಂಗಳ ನಂಜಪ್ಪ 1380 ಮತ ಪಡೆದರು. ಅಧ್ಯಕ್ಷ ಸ್ಥಾನಕ್ಕೆ ತೀವ್ರ ಪೈಪೋಟಿ ಏರ್ಪಟ್ಟಿತ್ತು. ಜಿಲ್ಲೆಯ ಚಾ.ನಗರ, ಗುಂಡ್ಲುಪೇಟೆ ಹಾಗೂ ಕೊಳ್ಳೇಗಾಲ ತಾಲೂಕಿನಲ್ಲಿ ಮತಗಟ್ಟೆಗಳನ್ನು ಸ್ಥಾಪಿಸಲಾಗಿತ್ತು. ಚಾಮರಾಜನಗರ ತಾಲೂಕು ಮತಗಟ್ಟೆಯಲ್ಲಿ 64 ಮತ ಹಾಗೂ ಕೊಳ್ಳೇಗಾಲ– ಹನೂರು ಮತಗಟ್ಟೆಗಳಲ್ಲಿ 318 ಮುನ್ನಡೆಯನ್ನು ನಂದೀಶ್ ಪಡೆದುಕೊಂಡು ಅಂತಿಮವಾಗಿ 191 ಮತಗಳ ಅಂತರದಲ್ಲಿ ಗೆಲುವು ಸಾಧಿಸಿದರೆ, ಹಂಗಳ ನಂಜಪ್ಪ ಸ್ವ ತಾಲೂಕು ಗುಂಡ್ಲುಪೇಟೆಯಲ್ಲಿ ಮಾತ್ರ 193 ಮತಗಳ ಮುನ್ನಡೆ ಪಡೆದುಕೊಂಡರು.

20 ನಿರ್ದೇಶಕರ ಆಯ್ಕೆ: ಇನ್ನು ಮಹಾಸಭಾ ನಿರ್ದೇಶಕರಾಗಿ ಎನ್.ಉಮೇಶ್ 1695 ಮತ, ಆರ್.ಎನ್.ಗಿರೀಶ್ 1500, ಮನು ಶ್ಯಾನ್‌ಬೋಗ್ 1491, ಜಿ.ಗಿರೀಶ್ 1454, ಎಸ್.ಮಹದೇವಸ್ವಾಮಿ 1405, ಎನ್.ಆರ್.ಪುರುಷೋತ್ತಮ್ 1404, ಹೊಸೂರು ನಟೇಶ್ 1392, ನಿರಂಜನ ಮೂರ್ತಿ 1370, ಡಿ.ಪಿ.ಜಗದೀಶ್ 1350, ಟಿ.ಗುರು 1316, ಕೆ.ಎಂ.ಬಸವರಾಜು 1312, ಕೆ.ಜಿ.ಗುರುಸ್ವಾಮಪ್ಪ 1300, ಮಂಜೇಶ್ 1291, ಮುರುಡೇಶ್ವರಸ್ವಾಮಿ 1259, ಪಿ.ಇಂದ್ರ 1253, ಸ್ಟೈಲ್ ಮಂಜುನಾಥ್ 1253, ಮಲ್ಲಿಕಾರ್ಜುನಸ್ವಾಮಿ 1247, ಲೋಕೇಶ್ 1240, ರಾಜೇಂದ್ರ ಪ್ರಸಾದ್ 1236, ವಿರೇಂದ್ರ 1226 ಮತ ಪಡೆದು ಆಯ್ಕೆಯಾಗಿದ್ದಾರೆ.

ಮಹಿಳಾ ನಿರ್ದೇಶಕರ ಅವಿರೋಧ ಆಯ್ಕೆ: ಮಹಿಳಾ ನಿರ್ದೇಶಕರಾಗಿ ಎಲ್.ಗಾಯತ್ರಿ, ರತ್ನಮ್ಮ, ಬಿ.ರತ್ನಮ್ಮ, ಗೀತಾ, ಎಸ್.ಉಷಾರಾಣಿ, ಎನ್.ಎಸ್.ರೇಣುಕಾ, ಎನ್.ಶೋಭಾ, ಅನುಪಮ, ಗಾಯತ್ರಿ, ಲತಾ ಅವಿರೋಧ ಆಯ್ಕೆಯಾಗಿದ್ದಾರೆ.

ಸಮಾಜ ಅಭಿವೃದ್ಧಿಗೆ ದುಡಿಯೋಣ



ಜಿಲ್ಲೆಯಲ್ಲಿ ವೀರಶೈವ–ಲಿಂಗಾಯತ ಸಮಾಜದ ಬಂಧುಗಳು ಹೆಚ್ಚಿನ ಮತ ನೀಡಿ ನನ್ನನ್ನು ಪುನಾರಾಯ್ಕೆ ಮಾಡಿರುವುದಕ್ಕೆ ನಾನು ಅಭಾರಿಯಾಗಿದ್ದೇನೆ. ಮುಂದಿನ ದಿನಗಳಲಿ ಸಮಾಜದ ಅಭಿವೃದ್ಧಿಗೆ ಎಲ್ಲರೂ ಒಗ್ಗಟ್ಟಾಗಿ ದುಡಿಯೋಣ. ಬಸವ ಭವನ ನಿರ್ಮಾಣ, ಬಸವ ಪುತ್ಥಳಿ ಉದ್ಘಾಟನೆ, ವಿದ್ಯಾರ್ಥಿನಿಲಯ, ಕೌಶಲ್ಯ ಅಭಿವೃದ್ಧಿ ಕೇಂದ್ರ ಸೇರಿದಂತೆ ಜಿಲ್ಲೆಯಲ್ಲಿ ಸಮಾಜವನ್ನು ಒಗ್ಗಟ್ಟಿನಿಂದ ಅಭಿವೃದ್ಧಿಪಡಿಸುವುದೇ ನನ್ನ ಗುರಿ. ಸಮುದಾಯದ ಮಠಾಧೀಶರು, ಹಿರಿಯ ಮುಖಂಡರು, ಮಹಾಸಭಾ ನಿರ್ದೇಶಕರ ಸಹಕಾರ ನೀಡಬೇಕು.

–ಮೂಡ್ಲುಪುರ ನಂದೀಶ್, ವೀರಶೈವ–ಲಿಂಗಾಯತ ಮಹಾಸಭಾ ಅಧ್ಯಕ್ಷ

ತೊಂಡವಾಡಿಯಲ್ಲಿ ಇಂದು ಆರಾಧನೆ



ಬೇಗೂರು, ಜು.22–ಗುಂಡ್ಲುಪೇಟೆ ತಾಲೂಕಿನ ಬೇಗೂರು ಹೋಬಳಿಯ ತೊಂಡವಾಡಿ ಗ್ರಾಮದ ಶ್ರೀ ಪುರದ ಮಾರಮ್ಮನವರ 11ನೇ ವರ್ಷದ ಪೂಜಾ ಮಹೋತ್ಸವ ಹಾಗೂ ಆರಾಧನೆ ಜು.23ರಂದು ನಡೆಯಲಿದೆ.

ಮಂಗಳವಾರ ಬೆಳಗ್ಗೆ 8 ಗಂಟೆಗೆ ಸ್ವಸ್ತಿ ಪುಣ್ಯಾಹ, ಅಭಿಷೇಕ ಪೂಜಾ ಕಾರ್ಯ ಹಾಗೂ ಮಧ್ಯಾಹ್ನ 12ಕ್ಕೆ ಅಮ್ಮನವರಿಗೆ ಮಹಾಮಂಗಳಾರತಿ ನೆರವೇರಿಸಲಾಗುವುದು. 12.30ಕ್ಕೆ ಅನ್ನಸಂತರ್ಪಣೆ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಭ್ರಷ್ಟಾಚಾರದಲ್ಲಿ ಮುಳುಗಿದ ರಾಜ್ಯ ಸರ್ಕಾರ

ಬಿಜೆಪಿ ಜಿಲ್ಲಾ ಕಾರ್ಯಕಾರಿಣಿ ಸಭೆಯಲ್ಲಿ ಲಕ್ಷ್ಮೀ ಅಶ್ವಿನ್‌ಗೌಡ ಆರೋಪ



ಚಾಮರಾಜನಗರದ ಅಂಬೇಡ್ಕರ್ ಭವನದಲ್ಲಿ ನಡೆದ ಬಿಜೆಪಿ ಜಿಲ್ಲಾ ಕಾರ್ಯಕಾರಣಿ ಸಭೆಯನ್ನು ರಾಜ್ಯ ಬಿಜೆಪಿ ಕಾರ್ಯದರ್ಶಿ ಲಕ್ಷ್ಮೀ ಅಶ್ವಿನ್‌ಗೌಡ ಉದ್ಘಾಟಿಸಿದರು.

ಚಾಮರಾಜನಗರ, ಜು.22–ಕಳೆದ 15 ತಿಂಗಳಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿ ದಿವಾಳಿಯಾಗಿದ್ದು, ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿದೆ ಎಂದು ರಾಜ್ಯ ಬಿಜೆಪಿ ಕಾರ್ಯದರ್ಶಿ ಹಾಗೂ ಜಿಲ್ಲೆಯ ಪಕ್ಷದ ಉಸ್ತುವಾರಿ ಲಕ್ಷ್ಮೀ ಅಶ್ವಿನ್‌ಗೌಡ ಆರೋಪಿಸಿದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ನಡೆದ ಬಿಜೆಪಿ ಜಿಲ್ಲಾ ಕಾರ್ಯಕಾರಿಣಿ ವಿಶೇಷ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಜನರಿಗೆ ಬರೀ ಸುಳ್ಳು ಭರವಸೆ ನೀಡಿ, ಗ್ಯಾರಂಟಿ ಯೋಜನೆ ಜಾರಿಗೊಳಿಸುತ್ತೇವೆ ಎಂದು ಹೇಳಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ಸಿಗರು ಜನಕಲ್ಯಾಣ ಯೋಜನೆಗಳನ್ನು ಜಾರಿ ಮಾಡುವ ಬದಲು ಭ್ರಷ್ಟಾಚಾರದಲ್ಲಿ ತೊಡಗಿದ್ದಾರೆ. ಅಹಿಂದ ಹೆಸರಿನಲ್ಲಿ ಅಧಿಕಾರಕ್ಕೆ ಬಂದಿರುವ ಸಿದ್ದರಾಮಯ್ಯ ದಲಿತರಿಗೆ ಮೀಸಲಿಟ್ಟ ಹಣವನ್ನು ಅನ್ಯ ಕಾರ್ಯಗಳಿಗೆ ಬಳಸುವ ಮೂಲಕ ಆ ವರ್ಗಗಳಿಗೆ ಅನ್ಯಾಯ ಮಾಡಿದ್ದಾರೆ. ಇಂತಹವರ ವಿರುದ್ಧ ನಮ್ಮ ಹೋರಾಟ ನಿರಂತರವಾಗಿರುತ್ತದೆ ಎಂದು ಹೇಳಿದರು.

ವಾಲ್ಮೀಕಿ ಅಭಿವೃದ್ಧಿ ನಿಗಮ, ಮುಡಾದಲ್ಲಿ ಸಾವಿರಾರು ಕೋಟಿ ರೂ. ಭ್ರಷ್ಟಾಚಾರ ಮಾಡಿದ್ದಾರೆ. ಸ್ವಪಕ್ಷಿಯ ಶಾಸಕರಿಗೆ ಸರ್ಕಾರದ ಬಗ್ಗೆ ಆತ್ಮಾಭಿಮಾನ ಇಲ್ಲ. ಕ್ಷೇತ್ರದ ಅಭಿವೃದ್ಧಿಗಳಿಗೆ ಅನುದಾನ ನೀಡುತ್ತಿಲ್ಲ. ಸರ್ಕಾರದ ವಿರುದ್ಧ ಕಾಂಗ್ರೆಸ್ ಶಾಸಕರೇ ಅಸಮಾಧಾನ ಗೊಂಡಿದ್ದಾರೆ. ದಲಿತರು ಹಾಗೂ ಬಡವರ ಪರವಾಗಿ ಈ ಸರ್ಕಾರ ಇಲ್ಲ. ಇದರ ವಿರುದ್ಧ ಸಂಘಟನಾತ್ಮಕವಾಗಿ ನಾವೆಲ್ಲರು ಹೋರಾಡಿ ಮತ್ತೆ ರಾಜ್ಯದಲ್ಲಿ ಬಿಜೆಪಿ ಸರ್ಕಾರವನ್ನು ಸ್ಥಾಪಿಸಲು ಶ್ರಮಿಸೋಣ ಎಂದರು.

ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್ ಮಾತನಾಡಿ, ರಾಜ್ಯದಲ್ಲಿರುವ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಸಂವಿಧಾನ ಹಾಗೂ ದಲಿತ ವಿರೋಧಿ ಸರ್ಕಾರವಾಗಿದೆ. ದಲಿತರು ಬಿಜೆಪಿಗೆ ಮತ ಹಾಕಬೇಡಿ, ಸಂವಿಧಾನ ಬದಲಿಸುತ್ತಾರೆ ಎಂದು ಕಾಂಗ್ರೆಸ್ಸಿಗರು ಅಪಪ್ರಚಾರ ಮಾಡಿದರು. ಆದರೂ ಕಾಂಗ್ರೆಸ್ 99ಕ್ಕಿಂತ ಹೆಚ್ಚು ಸೀಟು ಪಡೆದುಕೊಳ್ಳಲು ಸಾಧ್ಯವಾಗಲಿಲ್ಲ ಎಂದರು.


ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನ್ ಕುಮಾರ್ ಮಾತನಾಡಿದರು. ಮಾಜಿ ಶಾಸಕ ಎಸ್.ಬಾಲರಾಜು, ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ, ರಾಷ್ಟ್ರೀಯ ಹಿಂದುಳಿದ ಕಾರ್ಯಕಾರಿಣಿ ಸದಸ್ಯ ನೂರೊಂದುಶೆಟ್ಟಿ, ಕಾಡಾ ಮಾಜಿ ಅಧ್ಯಕ್ಷ ನಿಜಗುಣರಾಜು, ಚಾಮುಲ್ ಅಧ್ಯಕ್ಷ ವೈ.ಸಿ.ನಾಗೇಂದ್ರ, ಡಾ.ಎ.ಆರ್.ಬಾಬು, ಮಾಜಿ ಅಧ್ಯಕ್ಷರಾದ ಸುಂದರ್, ನಾರಾಯಣ ಪ್ರಸಾದ್, ಜಿಪಂ ಮಾಜಿ ಅಧ್ಯಕ್ಷೆ ನಾಗಶ್ರೀ ಪ್ರತಾಪ್, ಎಸ್‌ಟಿ ಮೋರ್ಚಾ ರಾಜ್ಯ ಕಾರ್ಯದರ್ಶಿ ಜಯಸುಂದರ್, ಪಿ.ವೃಷಭೇಂದ್ರಪ್ಪ ಮತ್ತಿತರರು ಹಾಜರಿದ್ದರು.

ಗಿಡ ನೆಡುವ ಕಾರ್ಯಕ್ಕೆ ಶಾಸಕ ಚಾಲನೆ

ಚಾಮರಾಜನಗರ, ಜು.22–ತಾಲೂಕಿನ ಕೋಡಿಮೋಳೆ ಗ್ರಾಮದ ಸ್ಮಶಾನದಲ್ಲಿ ಗಿಡ ನೆಡುವ ಕಾರ್ಯಕ್ಕೆ ಶಾಸಕ ಸಿ.ಪುಟ್ಟರಂಗಶೆಟ್ಟಿ ಚಾಲನೆ ನೀಡಿದರು.

ನಂತರ ಮಾತನಾಡಿದ ಶಾಸಕರು, ಗಿಡ–ಮರಗಳನ್ನು ಬೆಳೆಸುವುದು ಕೇವಲ ವೇದಿಕೆಯಾಗಬಾರದು. ಈ ರೀತಿ ಗಿಡಗಳನ್ನು ನೆಟ್ಟು ಪೋಷಿಸಿದಾಗ ಮಾತ್ರ ಅದಕ್ಕೆ ಅರ್ಥ ಬರುತ್ತದೆ. ಸುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಂಡಾಗ ಮಾತ್ರ ಮನುಷ್ಯ ಆರೋಗ್ಯವಾಗಿರಲು ಸಾಧ್ಯ ಎಂದರು.

ಇದೇ ವೇಳೆ ಚುಡಾ ಅಧ್ಯಕ್ಷ ಮಹಮದ್ ಅಸ್ಗರ್, ಗ್ರಾಪಂ ಅಧ್ಯಕ್ಷ ನಟರಾಜು, ಸದಸ್ಯ ಮಹೇಶ್, ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಕೋಡಿಮೋಳೆ ಗೋವಿಂದಶೆಟ್ಟಿ, ಕೋಡಿಮೋಳೆ ಪ್ರಕಾಶ್, ಕಾಗಲವಾಡಿ ಚಂದ್ರು, ಜಯಶಂಕರ್, ನಂಜುಂಡಶೆಟ್ಟಿ, ಗ್ರಾಪಂ ಮಾಜಿ ಉಪಾಧ್ಯಕ್ಷ ನಾಗನಾಯಕ, ರಾಜಶೆಟ್ಟಿ, ರಂಗಸ್ವಾಮಿ, ವಿಷಕಂಠ, ಮಹದೇವಶೆಟ್ಟಿ, ಶಿವರಾಜು, ಶ್ರೀನಿವಾಸ್, ಮರಿಸ್ವಾಮಿ ಮತ್ತಿತರರು ಹಾಜರಿದ್ದರು.



ಕೋಡಿಮೋಳೆ ಗ್ರಾಮದ ಸ್ಮಶಾನದಲ್ಲಿ ಗಿಡ ನೆಡುವ ಕಾರ್ಯಕ್ಕೆ ಶಾಸಕ ಸಿ.ಪುಟ್ಟರಂಗಶೆಟ್ಟಿ ಚಾಲನೆ ನೀಡಿದರು.

ಒಂದನೇ ಪುಟದಿಂದ

'ಗಂಗಾರತಿ' ಮಾದರಿ 'ಕಾವೇರಿ ಆರತಿ'

ಈಗ ಕಾವೇರಿ ತಾಯಿಯ ಕೃಪೆ ನಮಗೆ ಸಿಕ್ಕಿದೆ. 40 ಟಿಎಂಸಿ ನೀರು ತಮಿಳುನಾಡಿಗೆ ಬಿಡಬೇಕಿತ್ತು. ಸದ್ಯ 20 ಟಿಎಂಸಿ ಬಿಡಿ ಎಂದು ಆದೇಶ ಆಗಿತ್ತು. ಆದರೆ ನಾವು ನಿರ್ಧಾರ ಮಾಡಿ ನೀರು ಬಿಟ್ಟಿರಲಿಲ್ಲ. ಕೆಲವರು ನೀರು ಬಿಟ್ಟಿದ್ದಾರೆ ಎಂದು ಹೇಳುತ್ತಾರೆ. ನಾವು ಯಾವುದೇ ಕಾರಣಕ್ಕೂ ನೀರು ಬಿಟ್ಟಿಲ್ಲ ಎಂದು ಸ್ಪಷ್ಟಪಡಿಸಿದರು.

ಮಳೆ ಆಗುತ್ತಿರುವುದರಿಂದ ತಮಿಳುನಾಡಿಗೆ ಡ್ಯಾಂ ತುಂಬಿ 30 ಟಿಎಂಸಿ ನೀರು ಹರಿದು ಹೋಗಿದೆ. ಇನ್ನು 10 ಟಿಎಂಸಿ ನೀರು ಹರಿದರೆ ಈ ವರ್ಷದ ಗಡುವು ತೀರಲಿದೆ. ಸದ್ಯ ಡ್ಯಾಂನಿಂದ 50ಸಾವಿರ ಕ್ಯೂಸೆಕ್ ನೀರು ಹೋಗುತ್ತಿದ್ದು, ವರುಣನ ಕೃಪೆಯಿಂದ ಆದೇಶ ಪಾಲನೆ ಮಾಡಿದ್ದೇವೆ. 1657 ಕೆರೆಗಳು ಕಾವೇರಿ ಕೊಳ್ಳದಲ್ಲಿವೆ. ಎಲ್ಲಾ ಕೆರೆಗಳಿಗೆ ನೀರು ತುಂಬಿಸಲು ಅಧಿಕಾರಿಗಳಿಗೆ ಸೂಚನೆ ಕೊಟ್ಟಿದ್ದೇನೆ ಎಂದು ತಿಳಿಸಿದರು.

ಡ್ಯಾಂ ಸೇಫ್ಟಿ ಮುಖ್ಯ: ಕೆಆರ್‌ಎಸ್ ಡ್ಯಾಂ ಬಳಿ ಗಣಿಗಾರಿಕೆ ನಿಲ್ಲಿಸುವ ವಿಚಾರದ ಬಗ್ಗೆ ಪ್ರತಿಕ್ರಿಯಿಸಿ, ಡ್ಯಾಂ ಸೇಫ್ಟಿಗೆ ಏನೆಲ್ಲ ವಿಚಾರ ಇದೆ ಅದನ್ನು ಪಾಲನೆ ಮಾಡುತ್ತೇವೆ. ಇದನ್ನು ಸಿಎಂ ಕೂಡ ಹೇಳಿದ್ದಾರೆ. ಗಣಿಗಾರಿಕೆಗೆ, ಕಲ್ಲಿಗೆ ಬೇರೆಕಡೆ ಸಾಕಷ್ಟು ಜಾಗ ಇದೆ. ಡ್ಯಾಂಗೆ ಅಪಾಯ ತಂದೊಡ್ಡಿ ಗಣಿಗಾರಿಕೆ ಮಾಡುವ ಅವಶ್ಯಕತೆ ಇಲ್ಲ ಎಂದು ನುಡಿದರು.

ಮೇಕೆದಾಟು ಯೋಜನೆಗೆ ಕಾಲವೇ ಉತ್ತರಿಸಲಿದೆ: ಮೇಕೆದಾಟು ಯೋಜನೆ ಮಾಡಬೇಕೆಂಬುದು ನಮ್ಮೆಲ್ಲರ ಉದ್ದೇಶವಾಗಿದೆ. ಮೇಕೆದಾಟು ಪ್ರಸ್ತಾವನೆ ಮುಂದುವರೆಸುತ್ತೇವೆ. ಕಾಲ ಅದಕ್ಕೆ ಉತ್ತರಿಸುತ್ತದೆ. ಈಗ ಅದರ ಬಗ್ಗೆ ಮಾತನಾಡಲ್ಲ. ಯೋಜನೆ ತರಲು ಸರ್ಕಾರ ಸಿದ್ಧವಿದೆ ಎಂದರು.

ಪ್ರಚಾರಕ್ಕೆ ಮಾತಾಡ್ತಾರೆ!: ಸರ್ವಪಕ್ಷಗಳ ಸಭೆಗೂ ಮೊದಲೇ ಡ್ಯಾಂ ನಿಂದ ನೀರು ಬಿಡುಗಡೆ ಎಂಬ ಹೆಚ್ಡಿಕೆ ಹೇಳಿಕೆ ವಿಚಾರದ ಬಗ್ಗೆ ಮಾತನಾಡಿ, ಯಾರೋ ಮಾತನಾಡುತ್ತಾರೆ ಅಂತ ನಾನು ಮಾತನಾಡಲ್ಲ. ಕೆಲವರಿಗೆ ಪ್ರಚಾರ ಬೇಕು ಅದಕ್ಕೆ ಮಾತನಾಡುತ್ತಾರೆ. ನನಗೇನು ಪ್ರಚಾರದ ಅವಶ್ಯಕತೆ ಇಲ್ಲ. ನಾನು ಯಾರಿಗೋ ಉತ್ತರ ಕೊಡಬೇಕಿಲ್ಲ. ಅವರ ಬಗ್ಗೆ ತಲೆಕೆಡಿಸಿಕೊಳ್ಳುವ ಅವಶ್ಯಕತೆ ಇಲ್ಲ. ನಾನು ನನ್ನ ಕೆಲಸ, ನನ್ನ ರೈತರು, ನನ್ನ ರಾಜ್ಯದ ವಿಚಾರವಿದೆ. ಅವರಿಗೆ ನನ್ನ ನೆನಸಿಕೊಳ್ಳಲಿಲ್ಲ ಅಂದ್ರೆ ನಿದ್ದೆ ಬರಲ್ಲ ಎಂದು ಪರೋಕ್ಷವಾಗಿ ಹೆಚ್.ಡಿ. ಕುಮಾರಸ್ವಾಮಿ ವಿರುದ್ಧ ಕಿಡಿಕಾರಿದರು.

ಬೆಳಗ್ಗೆ 7.30ಕ್ಕೆ ಆಗಮಿಸಿ ಸುಮಾರು ಅರ್ಧಗಂಟೆ ಕಾಲ ಡ್ಯಾಂ ಪರಿಶೀಲನೆ ಮಾಡಿದ ಡಿ.ಕೆ.ಶಿವಕುಮಾರ್, ಕೆಲ ಹೊತ್ತು ಡ್ಯಾಂ ಬಳಿಯೇ ಕಾಲ ಕಳೆದು ಅಧಿಕಾರಿಗಳಿಂದ ಮಾಹಿತಿ ಪಡೆದು ಕೊಂಡರು. ನಂತರ ಡ್ಯಾಂ ಆವರಣದಲ್ಲಿರುವ ರಾಯಲ್ ಆರ್ಕಿಡ್ ಹೋಟೆಲ್‌ನಲ್ಲಿ ಅಧಿಕಾರಿಗಳ ಸಭೆ ನಡೆಸಿದರು.

ಬೃಂದಾವನ ಅಮ್ಯೂಸ್‌ಮೆಂಟ್ ಪಾರ್ಕ್

ಕೆಆರ್‌ಎಸ್‌ನಲ್ಲಿರುವ ಮ್ಯೂಸಿಕಲ್ ಪಾರ್ಕ್ ಅನ್ನು ಅಭಿವೃದ್ಧಿಪಡಿಸುವುದರ ಜೊತೆಗೆ ಹೊಸ ರೂಪ ನೀಡಲು ಈಗಾಗಲೇ ತಾಂತ್ರಿಕ ವರದಿಯನ್ನು ಪಡೆಯಲಾಗಿದೆ. ಬೃಂದಾವನ ಅಮ್ಯೂಸ್‌ಮೆಂಟ್ ಪಾರ್ಕ್‌ನ್ನು ಪಿಪಿಪಿ ಮಾದರಿಯಲ್ಲಿ ಟೆಂಡರ್ ಕರೆದು ರೂಪಿಸಲಾಗುವುದು. ಈ ಪಾರ್ಕ್‌ನಿಂದ ಸುಮಾರು 8ರಿಂದ 10 ಸಾವಿರ ಸ್ಥಳೀಯ ಜನರಿಗೆ ಉದ್ಯೋಗ ಸಿಗಲಿದೆ ಎಂದು ಡಿಕೆಶಿ ತಿಳಿಸಿದರು.

ಚಿತ್ರಮಂದಿರದ ಗೋಡೆ ಕುಸಿತ

ಪೊಲೀಸರು ಹಾಗೂ ಅಗ್ನಿಶಾಮಕ ಸಿಬ್ಬಂದಿ ಸಹಕಾರದೊಂದಿಗೆ ಮತ್ತಿಬ್ಬರನ್ನೂ ರಕ್ಷಿಸಲಾಯಿತು. ಸ್ವಲ್ಪ ಪ್ರಮಾಣದ ಕಟ್ಟಡ ತ್ಯಾಜ್ಯ ಬಿದ್ದಿದ್ದರಿಂದ ಎಲ್ಲರೂ ಪ್ರಾಣಾಪಾಯದಿಂದ ಪಾರಾದರು. ಗಾಯವಾಗಿದ್ದರಿಂದ ನಾಲ್ವರನ್ನೂ ಕೆ.ಆರ್.ಆಸ್ಪತ್ರೆಗೆ ದಾಖಲಿಸಲಾಗಿದೆ. ದೇವರಾಜ ಠಾಣೆ ಪೊಲೀಸರು, ಅಗ್ನಿಶಾಮಕ ಸಿಬ್ಬಂದಿ ಕಾರ್ಯಾಚರಣೆ ನಡೆಸಿ, ಕಟ್ಟಡ ತ್ಯಾಜ್ಯವನ್ನು ತೆರವುಗೊಳಿಸುವ ಮೂಲಕ ಮತ್ಯಾರೂ ಅವಶೇಷಗಳಡಿ ಸಿಲುಕಿಲ್ಲ ಎನ್ನುವುದನ್ನು ಖಚಿತಪಡಿಸಿಕೊಂಡರು. ಮಣ್ಣಿನ ಇಟ್ಟಿಗೆ ಗೋಡೆಯಾಗಿದ್ದರಿಂದ ಐದಾರು ದಿನ ನಿರಂತರವಾಗಿ ಸುರಿದ ಮಳೆಯಿಂದಾಗಿ ಕುಸಿದಿರಬಹುದು ಎನ್ನಲಾಗಿದೆ.

ಹೆಚ್ಚಿದ ಆತಂಕ: ಒಲಂಪಿಯಾ ಚಿತ್ರಮಂದಿರದ ಬೃಹತ್ ಗೋಡೆ ಕುಸಿದಿರುವುದರಿಂದ ಸ್ಥಳೀಯ ವ್ಯಾಪಾರಿಗಳ ಜೊತೆಗೆ ಆ ರಸ್ತೆಯಲ್ಲಿ ನಿತ್ಯ ಸಂಚರಿಸುವ ಸಾರ್ವಜನಿಕರಿಗೂ ಆತಂಕ ಹೆಚ್ಚಿದೆ. ಚಿತ್ರಮಂದಿರ ಕಟ್ಟಡಕ್ಕೆ ಹೊಂದಿಕೊಂಡಂತಿರುವ ಮಳಿಗೆಗಳು ಹಾಗೂ ಸುತ್ತಮುತ್ತಲ ಕಟ್ಟಡಗಳ ಪರಿಸ್ಥಿತಿಯ ಬಗ್ಗೆಯೂ ಭಯವುಂಟಾಗಿದೆ. ಈ ಭಾಗದಲ್ಲಿ ಅನೇಕ ಹಳೆ ಕಟ್ಟಡಗಳಾಗಿದ್ದು, ಸತತ ಮಳೆಯಿಂದ ಗೋಡೆಗಳು ದುರ್ಬಲವಾಗಿರುವ ಸಾಧ್ಯತೆ ಇದೆ. ಕುಸಿದ ಗೋಡೆ ಮಣ್ಣಿನ ಇಟ್ಟಿಗೆಯಿಂದ ನಿರ್ಮಿಸಿ, ಅದಕ್ಕೆ ಸಿಮೆಂಟ್‌ನಿಂದ ಪ್ಲಾಸ್ಟಿಂಗ್ ಮಾಡಲಾಗಿದೆ. ಇದೇ ರೀತಿಯಲ್ಲಿ ಹಲವು ಕಟ್ಟಡಗಳನ್ನು ರಿಪೇರಿ ಮಾಡಿಕೊಳ್ಳಲಾಗಿದೆ. ಈ ದಿನ ಸಂಭವಿಸಿದ ದುರ್ಘಟನೆಯಿಂದ ಮತ್ತಷ್ಟು ಭಯ ಹೆಚ್ಚಾಗಿದೆ.

ಪರಿಶೀಲನೆ ಅಗತ್ಯ: ಚಿತ್ರಮಂದಿರದ ಗೋಡೆ ಕುಸಿದ ಘಟನೆಯಿಂದ ಮೈಸೂರು ನಗರ ಪಾಲಿಕೆ ಎಚ್ಚೆತ್ತುಕೊಳ್ಳಬೇಕು. ಪರಿಶೀಲನೆ ನಡೆಸಿ, ಶಿಥಿಲಾವಸ್ಥೆ ತಲುಪಿರುವ ಕಟ್ಟಡಗಳಿಂದ ಸಂಭವಿಸಬಹುದಾದ ಅನಾಹುತ ತಡೆಗೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ಮಳಿಗೆಗಳಿರುವ ಕಟ್ಟಡಗಳಲ್ಲಿ ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಜಮಾಯಿಸುವುದರಿಂದ ಸುರಕ್ಷತಾ ಕ್ರಮಗಳ ಬಗ್ಗೆಯೂ ಸೂಚನೆ ನೀಡಬೇಕು ಎಂದು ಸಾರ್ವಜನಿಕರು ಮನವಿ ಮಾಡಿದ್ದಾರೆ. ಗೋಡೆ ಕುಸಿತ ಪ್ರಕರಣಕ್ಕೆ ಸಂಬಂಧಿಸಿದಂತೆ ದೇವರಾಜ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು, ಮುಂದಿನ ಕ್ರಮ ಕೈಗೊಂಡಿದ್ದಾರೆ.

19 ಸಕ್ರಿಯ ಡೆಂಗ್ಯೂ ಪ್ರಕರಣ

ವ್ಯಾಪಿಸದಂತೆ ತಡೆಯೊಡ್ಡಬಹುದು. ಅಂತೆಯೇ ಪರೀಕ್ಷೆ ಪ್ರಮಾಣ ಹೆಚ್ಚಿಸಿ, ಪ್ರಕರಣಗಳನ್ನು ಪತ್ತೆ ಮಾಡಿ, ಡೆಂಗ್ಯೂ ನಿಯಂತ್ರಣ ಮಾಡಲಾಗಿದೆ ಎಂದು ಹೇಳಿದರು. ಈವರೆಗೆ ಜಿಲ್ಲೆಯಲ್ಲಿ 7 ಲಕ್ಷದ 86 ಸಾವಿರ ಮನೆಗಳಿಗೆ ಭೇಟಿ ನೀಡಿ, ಮನೆಯ ಸುತ್ತಮುತ್ತ ಲಾರ್ವ ಸರ್ವೇ ನಡೆಸಿ, ಸೊಳ್ಳೆಗಳ ವಾಸ ಸ್ಥಾನಗಳನ್ನು ನಾಶಪಡಿಸಲಾಗಿದೆ. ಅಂತೆಯೇ ಪ್ರತಿ ಶುಕ್ರವಾರ ಸಾರ್ವಜನಿಕರು ಹಾಗೂ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಈಡಿಸ್ ಸೊಳ್ಳೆ ಲಾರ್ವಾ ಉತ್ಪತ್ತಿ ತಾಣಗಳನ್ನು ನಾಶಪಡಿಸುವ ಚಟುವಟಿಕೆ ನಡೆಸಲಾಗುತ್ತಿದೆ. ಒಂದೂವರೆ ಸಾವಿರಕ್ಕೂ ಅಧಿಕ ಸಂಖ್ಯೆಯಲ್ಲಿ ಗ್ಯಾಂಬೂಸಿಯಾ ಹಾಗೂ ಗಪ್ಪಿ ಮೀನುಗಳನ್ನು ಕೆರೆ ಕಟ್ಟೆಗಳಿಗೆ ಬಿಡುವ ಮೂಲಕ ಸೊಳ್ಳೆಗಳ ನಾಶಕ್ಕೆ ಕ್ರಮ ವಹಿಸಲಾಗಿದೆ ಎಂದರು. ಆರೋಗ್ಯ ಇಲಾಖೆ ಮಾರ್ಗಸೂಚಿಯಂತೆ ಸಾರ್ವಜನಿಕರು ತಮ್ಮ ಮನೆ ಹಾಗೂ ಸುತ್ತಮುತ್ತಲ ಪ್ರದೇಶದಲ್ಲಿ ಸೊಳ್ಳೆ ಸಂತತಿ ನಿಯಂತ್ರಿಸಲು ಮುಂದಾಗಬೇಕು. ತೀವ್ರ ಜ್ವರ, ವಿಪರೀತ ತಲೆನೋವು, ಕಣ್ಣುಗಳ ಹಿಂಭಾಗ ನೋವು, ಮಾಂಸಖಂಡ ಮತ್ತು ಕೀಲುಗಳಲ್ಲಿ ನೋವು, ಚರ್ಮದ ಮೇಲೆ ಗಂಧೆಗಳು ಹಾಗೂ ವಸಡು ಮತ್ತು ಮೂಗಿನಲ್ಲಿ ರಕ್ತಸ್ರಾವ ಉಂಟಾಗುವುದು ಡೆಂಗ್ಯೂ ಜ್ವರದ ಲಕ್ಷಣಗಳಾಗಿದ್ದು, ಇವು ಕಂಡು ಬಂದರೆ ಶೀಘ್ರವೇ ವೈದ್ಯರನ್ನು ಕಾಣಬೇಕು ಎಂದು ಸಾರ್ವಜನಿಕರಿಗೆ ಸಲಹೆ ನೀಡಿದರು.

ಶಾಸಕ ನಾಗೇಂದ್ರ ಜೈಲು ಪಾಲು

ವಾದ–ಪ್ರತಿವಾದ ಆಲಿಸಿದ ನ್ಯಾಯಾಧೀಶ ಸಂತೋಷ್ ಗಜಾನನ ಭಟ್ ಅವರು, ನಾಗೇಂದ್ರ ಅವರನ್ನು ಆ.3 ರವರೆಗೆ ನ್ಯಾಯಾಂಗ ಬಂಧನಕ್ಕೆ ನೀಡಿ, ಆದೇಶಿಸಿದರು. ನಾಗೇಂದ್ರ ಅವರಿಗೆ ಹೃದಯ ಸಂಬಂಧಿ ಕಾಯಿಲೆ ಇರುವುದರಿಂದ ಚಿಕಿತ್ಸೆ ಕೊಡಿಸಲು ಜೈಲು ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕೆಂಬ ವಕೀಲರ ಮನವಿ ಮೇರೆಗೆ ನ್ಯಾಯಾಂಗ ಬಂಧನಕ್ಕೆ ಆದೇಶಿಸಿದೆ. ಹಣ ಅಕ್ರಮ ವರ್ಗಾವಣೆಯಲ್ಲಿ ನಾಗೇಂದ್ರ ಪ್ರಮುಖ ಪಾತ್ರವಿದ್ದು, ವಿಚಾರಣೆ ನಡೆಸಬೇಕಿದೆ ಇಡಿ ಕಸ್ಟಡಿಗೆ ನೀಡಿ ಎಂದು ಮನವಿ ಸಲ್ಲಿಸಲಾಗಿತ್ತು. ಆದರೆ, ಅವರಿಗೆ ಹೃದಯ ಸಂಬಂಧಿ ಕಾಯಿಲೆ ಇರುವುದರಿಂದ ಚಿಕಿತ್ಸೆಗೆ ಜೈಲು ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕೆಂದು ನಾಗೇಂದ್ರ ಪರ ವಕೀಲರು ಮನವಿ ಮಾಡಿದ್ದರಿಂದ ನ್ಯಾಯಾಂಗ ಬಂಧನಕ್ಕೆ ಆದೇಶಿಸಲಾಯಿತು. ಇದೇ ವೇಳೆ ನಾಗೇಂದ್ರ ಪರ ವಕೀಲ ಶ್ಯಾಮ್ ಸುಂದರ್, ಜಾಮೀನು ಅರ್ಜಿ ಸಲ್ಲಿಸುವುದಾಗಿ ಮಾಡಿದ ಮನವಿಗೆ ನ್ಯಾಯಾಧೀಶರು ಸಮ್ಮತಿಸಿದರು.

ಕಾರ್ಯದರ್ಶಿಗಳಿಗೂ ಬಿಸಿ ಸಾಧ್ಯತೆ: ಮಹರ್ಷಿ ವಾಲ್ಮೀಕಿ ನಿಗಮದ ಕೋಟ್ಯಾಂತರ ರೂ. ಹಗರಣಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ ಕಾರ್ಯದರ್ಶಿಗೆ ಜಾರಿ ನಿರ್ದೇಶನಾಲಯ (ಇ.ಡಿ.) ನೋಟಿಸ್ ನೀಡಲು ಮುಂದಾಗಿದೆ. ಹಗರಣಕ್ಕೆ ಸಂಬಂಧಿಸಿದಂತೆ ಇಡಿ ವಶದಲ್ಲಿರುವ ನಿಗಮದ ಅಧಿಕಾರಿಗಳು ಹಾಗೂ ಮಾಜಿ ಸಚಿವ ಮತ್ತು ಕಾಂಗ್ರೆಸ್ ಶಾಸಕ ಬಿ.ನಾಗೇಂದ್ರ ವಿಚಾರಣೆ ವೇಳೆ ನೀಡಿರುವ ಮಾಹಿತಿ ಮತ್ತು ದಾಖಲೆ ಆಧಾರದ ಮೇಲೆ ಕಾರ್ಯದರ್ಶಿಗಳಿಂದಲೂ ವಿವರಣೆ ಪಡೆಯಲು ಇಡಿ ಮುಂದಾಗಿದೆ.

ಇಂದು ಕೇಂದ್ರ ಬಜೆಟ್

ದೇಸಾಯಿ ಅವರ ದಾಖಲೆಯನ್ನು ಮುರಿಯಲಿದ್ದಾರೆ. ಆದರೆ ಅತಿಹೆಚ್ಚು ಬಾರಿ ಬಜೆಟ್ ಮಂಡಿಸಿದ ದಾಖಲೆ ಇಂದಿಗೂ ದೇಸಾಯಿಯವರ ಹೆಸರಿನಲ್ಲಿದೆ. ಮೊರಾರ್ಜಿ ದೇಸಾಯಿ ಅವರು 1959 ಮತ್ತು 1964ರ ನಡುವೆ ಸತತ 5 ಪೂರ್ಣ ಬಜೆಟ್ ಮತ್ತು 1 ಮಧ್ಯಂತರ ಬಜೆಟ್ ಮಂಡಿಸಿದ್ದರು. ಅದೇ ಸಮಯದಲ್ಲಿ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರು 1991 ಮತ್ತು 1995ರ ನಡುವೆ ಸತತ 5 ಬಾರಿ ಬಜೆಟ್ ಮಂಡಿಸಿದ್ದರು. ಪಿವಿ ನರಸಿಂಹ ರಾವ್ ಸರ್ಕಾರದಲ್ಲಿ ಮನಮೋಹನ್ ಸಿಂಗ್ ಅವರು ಹಣಕಾಸು ಸಚಿವರಾಗಿದ್ದರು. ನಿರ್ಮಲಾ ಸೀತಾರಾಮನ್ 2019ರಲ್ಲಿ ಭಾರತದ ಮೊದಲ ಪೂರ್ಣ ಸಮಯದ ಮಹಿಳಾ ಹಣಕಾಸು ಸಚಿವರಾದರು. ಇದೀಗ ಪ್ರಧಾನಿ ಮೋದಿಯವರು ಸತತ 3ನೇ ಬಾರಿಗೆ ಕೇಂದ್ರದಲ್ಲಿ ಸರ್ಕಾರ ರಚಿಸಿದ್ದಾರೆ. ಸೀತಾರಾಮನ್ ಈ ವರ್ಷದ ಫೆಬ್ರವರಿಯ ಮಧ್ಯಂತರ ಸೇರಿದಂತೆ ಸತತ 6 ಬಜೆಟ್‌ಗಳನ್ನು ಮಂಡಿಸಿದ್ದಾರೆ. ನಾಳೆ ಮಂಡಿಸಲಿರುವ 2024–25 ಹಣಕಾಸು ವರ್ಷದ ಪೂರ್ಣ ಬಜೆಟ್ (ಏಪ್ರಿಲ್ 2024ರಿಂದ ಮಾರ್ಚ್ 2025) ಅವರ ಸತತ 7ನೇ ಬಜೆಟ್ ಆಗಿರುತ್ತದೆ.

ಈ ಬಾರಿಯ ಬಜೆಟ್ ವಿಶೇಷ: 2024ರ ಲೋಕಸಭೆ ಚುನಾವಣೆಯಲ್ಲಿ ಗ್ರಾಮೀಣ ಪ್ರದೇಶದಲ್ಲಿ ಬಿಜೆಪಿಯ ಸ್ಥಾನಗಳು ಕಡಿಮೆಯಾಗಿವೆ. ಇಂತಹ ಪರಿಸ್ಥಿತಿಯಲ್ಲಿ ಸರ್ಕಾರ ಈ ಬಾರಿಯ ಬಜೆಟ್‌ನಲ್ಲಿ ಗ್ರಾಮೀಣ ಮತ್ತು ಕೃಷಿ ಕ್ಷೇತ್ರಗಳಿಗೆ ವಿಶೇಷ ಗಮನ ಹರಿಸಬಹುದು. ಕಿಸಾನ್ ಸಮ್ಮಾನ್ ನಿಧಿ, ಪಿಎಂ ಕಿಸಾನ್ ಯೋಜನೆಗೆ ಸಂಬಂಧಿಸಿದಂತೆ ಮೋದಿ ಸರ್ಕಾರವು ಈ ಬಜೆಟ್‌ನಲ್ಲಿ ಕೆಲವು ದೊಡ್ಡ ಘೋಷಣೆಗಳನ್ನು ಮಾಡಬಹುದು ಎಂದು ತಜ್ಞರು ಹೇಳಿದ್ದಾರೆ.

62 ಕೋಟಿ ರೂ. ಪರಿಹಾರ ಕೇಳಿದ ಮುಖ್ಯಮಂತ್ರಿ ಸಿದ್ದರಾಮಯ್ಯರ ಮೇಲಿನ ನಂಬಿಕೆ ಹುಸಿಯಾಗಿದೆ

ಮಾಜಿ ಸಂಸದ ಪ್ರತಾಪ್ ಸಿಂಹ ಪ್ರತಿಕ್ರಿಯೆ

ಮೈಸೂರು, ಜು. 22(ಆರ್‌ಕೆ)– ಮುಡಾ ನಿವೇಶನ ಹಂಚಿಕೆ ಹಗರಣ ಕುರಿತು ಕೊನೆಗೂ ಮೌನ ಮುರಿದಿರುವ ಮಾಜಿ ಸಂಸದ ಪ್ರತಾಪ್ ಸಿಂಹ, 62 ಕೋಟಿ ರೂ. ಪರಿಹಾರ ಕೇಳಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಮೇಲಿದ್ದ ನಂಬಿಕೆ ಹುಸಿಯಾಗಿದೆ ಎಂದು ತಿಳಿಸಿದ್ದಾರೆ.

ಮುಡಾದ ಶೇ. 50:50ರ ಅನುಪಾತದಡಿ ಹಂಚಿಕೆ ಮಾಡಿರುವ ನಿವೇಶನಗಳಿಂದ ಭಾರಿ ಅವ್ಯವಹಾರ ಬೆಳಕಿಗೆ ಬಂದ ನಂತರ ಸಿಎಂ ಸಿದ್ದರಾಮಯ್ಯ ತಮಗೆ ಬಂದ 14 ನಿವೇಶನಗಳನ್ನು ಮುಡಾಗೆ ವಾಪಸ್ ಕೊಟ್ಟು ತನಿಖೆ ಮಾಡಿಸುತ್ತಾರೆಂದು ನಂಬಿದ್ದೆ. ಆದರೆ ಆ ರೀತಿ ಮಾಡದೇ 62 ಕೋಟಿ ರೂ. ಪರಿಹಾರ ಕೇಳಿರುವುದರಿಂದ ನನಗೆ ಸಿಎಂ ಸಿದ್ದರಾಮಯ್ಯ ಮೇಲಿದ್ದ ನಂಬಿಕೆ ಹುಸಿಯಾಗಿದೆ. ಸಿದ್ದರಾಮಯ್ಯ ಸಾಹೇಬರ ಬಗ್ಗೆ ನನಗೆ ಸೈದ್ಧಾಂತಿಕ ವಿರೋಧವಿದೆಯಷ್ಟೇ. ಅವರ ಅಭಿವೃದ್ಧಿ ವಿಚಾರದಲ್ಲಿ ನಾನು ಮಾತನಾಡುವುದಿಲ್ಲ ಎಂದರು.



ಮುಡಾ ನಿವೇಶನ ಹಂಚಿಕೆ ಪ್ರಕರಣದಿಂದಾಗಿ ನನಗೆ ಸಿದ್ದರಾಮಯ್ಯ ಮೇಲಿನ ಅಭಿಮಾನವೂ ಕಡಿಮೆಯಾಗಿದೆ. ಅವರಿಗೆ ದುಡ್ಡಿನ ಹಪಾಹಪಿ ಇಲ್ಲ ಎಂದು ನಾನು ಯಾವಾಗಲೂ ಹೇಳುತ್ತಿದ್ದೆ. ಆದರೆ ಇಲ್ಲಿ ಹಣಕ್ಕೆ ಆಸೆಪಟ್ಟು ನೀಡಿರುವ ಹೇಳಿಕೆ ಬೇಸರ ಮೂಡಿಸಿದೆ. ತಮ್ಮ ಪತ್ನಿ ಹೆಸರಿಗೆ ಬಂದ ನಿವೇಶನಗಳನ್ನು ವಾಪಸ್ ಕೊಟ್ಟು ತನಿಖೆ ಮಾಡಿಸಬೇಕಿತ್ತು. ಬಿಜೆಪಿ ಆಡಳಿತದಲ್ಲೂ ಮಣ್ಣು ತಿನ್ನುವ ಕೆಲಸವಾಗಿದೆ ಎಂದರು.

ಈಗಿನ ಹಾಗೂ ಹಿಂದಿನ ಸರ್ಕಾರದಲ್ಲಿ ನಡೆದಿರುವ ಹಗರಣದ ಬಗ್ಗೆಯೂ ತನಿಖೆ ನಡೆಸಬೇಕಿತ್ತು. ಆದರೆ, ಮುಡಾದಲ್ಲಿ ನಡೆದಿರುವ ಬಹುಕೋಟಿ ಹಗರಣವನ್ನು ತನಿಖೆ ಮಾಡಿಸಿ ತಾರ್ಕಿಕ ಹಂತಕ್ಕೆ ಕೊಂಡೊಯ್ಯಬೇಕೆಂಬ ಮನಸ್ಥಿತಿ ಸಿಎಂ ಸಿದ್ದರಾಮಯ್ಯರಿಗಿಲ್ಲ ಎಂದ ಪ್ರತಾಪ್ ಸಿಂಹ, ಹಗರಣದಲ್ಲಿರುವ ದೊಡ್ಡ ದೊಡ್ಡ ಭ್ರಷ್ಟಾಚಾರಿಗಳು, ಸೈಟ್ ಮಾರಾಟ ಮಾಡಿಸಿದವರ್ಯಾರೂ ಸಿಕ್ಕಿ ಬೀಳುವುದಿಲ್ಲ ಎಂದರು.

ವೈಯಕ್ತಿಕವಾಗಿ ಸಿದ್ದರಾಮಯ್ಯರನ್ನು ನಾನು ಭ್ರಷ್ಟಾಚಾರಿ ಎಂದು ಹೇಳಲಾರೆ. 14 ಸೈಟ್ ವಿಚಾರದಲ್ಲಿ ಅವರು ನಡೆದುಕೊಂಡಿರುವ ರೀತಿ ಮೈಸೂರಿಗನಾಗಿ ನನಗೆ ತೀವ್ರ ಬೇಸರ ಉಂಟಾಗಿದೆ. ನನ್ನ 25 ವರ್ಷಗಳ ಅನುಭವದಲ್ಲಿ ಸಿದ್ದರಾಮಯ್ಯ ಅವರು ಭ್ರಷ್ಟಾಚಾರದ ಕಳಂಕ ಹೊತ್ತಿದ್ದನ್ನು ನಾನು ನೋಡಿಲ್ಲ. ಮುಡಾ ಸೈಟ್ ವಿಚಾರದಲ್ಲಿ ಅವರು ನಡೆದುಕೊಂಡ ರೀತಿ ಸರಿ ಇಲ್ಲ. ಸಿದ್ದರಾಮಯ್ಯರದ್ದು ತಪ್ಪೇ ಇಲ್ಲ ಅಂದುಕೊಳ್ಳೋಣ, ಆರೋಪ ಬಂದ ಕೂಡಲೇ ಸೈಟ್ ವಾಪಸ್ ನೀಡಿ, ತನಿಖೆ ಮಾಡಿಸಬೇಕಿತ್ತು. ಅದನ್ನು ಬಿಟ್ಟು 62 ಕೋಟಿ ರೂ. ಪರಿಹಾರ ಕೇಳಿದ್ದೀರಲ್ಲಾ ಎಂದು ಪ್ರತಾಪ್ ಸಿಂಹ ಪ್ರಶ್ನಿಸಿದರು.

ಮುಡಾ ಹಗರಣ ಸಂಬಂಧ ನಡೆಯುತ್ತಿರುವ ತನಿಖೆಯಿಂದ ಯಾರಿಗೂ ಏನೂ ಆಗುವುದಿಲ್ಲ. ಸೈಟ್ ಮಾರಿದವರು, ತೆಗೆದುಕೊಂಡವರೆಲ್ಲರೂ ಸೇಫ್ ಆಗಿರುತ್ತಾರೆ. 2019ರಲ್ಲಿ ವಿ. ಸೋಮಣ್ಣ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದಾಗ ಮುಡಾದಲ್ಲಿ 7,600 ಖಾಲಿ ನಿವೇಶನಗಳ ಹರಾಜಿಗೆ ಮುಂದಾಗಿದ್ದರು. ಅಷ್ಟರಲ್ಲಿ ಅವರಿಗೆ ಗೇಟ್‌ಪಾಸ್ ಸಿಕ್ಕಿತು. ಆಯುಕ್ತ ಕಾಂತರಾಜ್‌ಗೂ ಗೇಟ್‌ಪಾಸ್ ಸಿಕ್ಕಿತು. ಇದು ಮುಡಾ ವ್ಯವಸ್ಥೆ ಎಂದು ಪ್ರತಾಪ್ ಸಿಂಹ ವ್ಯಂಗ್ಯವಾಡಿದ್ದಾರೆ.

ಆರ್ಥಿಕ ಸಮೀಕ್ಷೆ 2023-24

2025 ರಲ್ಲಿ ಶೇ. 6.5 ರಿಂದ 7 ರಷ್ಟು ಆರ್ಥಿಕ ಬೆಳವಣಿಗೆ ನಿರೀಕ್ಷೆ

ನವದೆಹಲಿ: ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ 2023–24ರ ಆರ್ಥಿಕ ಸಮೀಕ್ಷೆಯನ್ನು ಲೋಕಸಭೆಯಲ್ಲಿ ಪ್ರಕಟಿಸಿದ್ದಾರೆ.



ಸಮೀಕ್ಷೆಯ ಪ್ರಕಾರ 2024–25 ರ ಆರ್ಥಿಕ ವರ್ಷದಲ್ಲಿ ದೇಶದ ಜಿಡಿಪಿ ಶೇ.6.5–7 ರಷ್ಟು ಬೆಳವಣಿಗೆಯನ್ನು ಅಂದಾಜಿಸಿದೆ.

ಆರ್ಥಿಕ ಸಮೀಕ್ಷೆ ವಾರ್ಷಿಕ ಡಾಕ್ಯುಮೆಂಟ್ ಆಗಿದ್ದು, ಸರ್ಕಾರ ಇದನ್ನು ಆರ್ಥಿಕ ಸ್ಥಿತಿಯ ಪರಿಶೀಲನೆಗಾಗಿ ಬಜೆಟ್‌ಗೂ ಮುನ್ನ ಪ್ರಕಟಿಸಲಾಗುತ್ತದೆ. ಡಾಕ್ಯುಮೆಂಟ್ ಆರ್ಥಿಕತೆಯ ಅಲ್ಪಾವಧಿಯಿಂದ ಮಧ್ಯಮ ಅವಧಿಯ ಭವಿಷ್ಯದ ಅವಲೋಕನವನ್ನು ಸಹ ಒದಗಿಸುತ್ತದೆ.

ಮುಖ್ಯ ಆರ್ಥಿಕ ಸಲಹೆಗಾರರ ಮೇಲ್ವಿಚಾರಣೆಯಲ್ಲಿ ಹಣಕಾಸು ಸಚಿವಾಲಯದ ಆರ್ಥಿಕ ವ್ಯವಹಾರಗಳ ಇಲಾಖೆಯ ಆರ್ಥಿಕ ವಿಭಾಗದಿಂದ ಆರ್ಥಿಕ ಸಮೀಕ್ಷೆಯನ್ನು ಸಿದ್ಧಪಡಿಸಲಾಗಿದೆ.

ಮೊದಲ ಆರ್ಥಿಕ ಸಮೀಕ್ಷೆಯು 1950–51 ರಲ್ಲಿ ಬಜೆಟ್ ದಾಖಲೆಗಳ ಭಾಗವಾಗಿ ಅಸ್ತಿತ್ವಕ್ಕೆ ಬಂದಿತ್ತು 1960ರ ದಶಕದಲ್ಲಿ ಇದನ್ನು ಕೇಂದ್ರ ಬಜೆಟ್‌ನಿಂದ ಪ್ರತ್ಯೇಕಿಸಲಾಯಿತು ಮತ್ತು ಬಜೆಟ್ ಮಂಡನೆಗೆ ಒಂದು ದಿನ ಮೊದಲು ಮಂಡಿಸಲಾಗುತ್ತದೆ. 2024–25ರ ಕೇಂದ್ರ ಬಜೆಟ್ ಅನ್ನು ಸೀತಾರಾಮನ್ ನಾಳೆ (ಮಂಗಳವಾರ) ಮಂಡಿಸಲಿದ್ದಾರೆ.

ಆರ್ಥಿಕ ಸಮೀಕ್ಷೆಯ ಮುಖ್ಯಾಂಶಗಳು: FY25 ರಲ್ಲಿ ಆರ್ಥಿಕತೆ ಶೇ.6.5–7 ರಷ್ಟು ಬೆಳವಣಿಗೆ ದಾಖಲಿಸುವ ನಿರೀಕ್ಷೆಯಿದೆ. ಅನಿಶ್ಚಿತ ಜಾಗತಿಕ ಆರ್ಥಿಕ ಕಾರ್ಯಕ್ಷಮತೆಯ ಹೊರತಾಗಿಯೂ FY24 ರಲ್ಲಿ ದೇಶೀಯ ಬೆಳವಣಿಗೆಯ ಚಾಲಕಗಳು ಆರ್ಥಿಕ ಬೆಳವಣಿಗೆಯನ್ನು ಬೆಂಬಲಿಸಿದೆ. ಭೌಗೋಳಿಕ ರಾಜಕೀಯ ಘರ್ಷಣೆಗಳ ಹೆಚ್ಚಳ ಮತ್ತು ಅದರ ಪರಿಣಾಮವು ಆರ್‌ಬಿಐನ ವಿತ್ತೀಯ ನೀತಿಯ ನಿಲುವಿನ ಮೇಲೆ ಪ್ರಭಾವ ಬೀರಬಹುದು. ಸಾಮಾನ್ಯ ಮುಂಗಾರು ನಿರೀಕ್ಷೆಗಳು, ಆಮದುಗಳ ಜಾಗತಿಕ ಬೆಲೆಗಳನ್ನು ಮಿತಗೊಳಿಸುವುದು ಆರ್‌ಬಿಐನಿಂದ ಹಾನಿಕರವಲ್ಲದ ಹಣದುಬ್ಬರ ಪ್ರಕ್ಷೇಪಗಳ ವಿಶ್ವಾಸಾರ್ಹತೆಯನ್ನು ನೀಡುತ್ತದೆ. ಜಾಗತಿಕ ಅನಿಶ್ಚಿತತೆಯ ಹೊರತಾಗಿಯೂ ಬೆಲೆ ಸ್ಥಿರತೆಯನ್ನು ಖಾತ್ರಿಪಡಿಸುವ ಮೂಲಕ ಭಾರತದ ನೀತಿಯು ಸಮರ್ಥವಾಗಿ ಕಾರ್ಯನಿರ್ವಹಿಸುತ್ತದೆ. ತೆರಿಗೆ ಅನುಸರಣೆ ಲಾಭಗಳು, ಖರ್ಚು ತಡೆ ಮತ್ತು ಡಿಜಿಟಲೀಕರಣವು ಭಾರತದ ಸರ್ಕಾರದ ಹಣಕಾಸಿನ ನಿರ್ವಹಣೆಯಲ್ಲಿ ಉತ್ತಮ ಸಮತೋಲನವನ್ನು ಸಾಧಿಸಲು ಸಹಾಯ ಮಾಡುತ್ತದೆ. ಹಣಕಾಸಿನ ವಲಯವು ನಿರ್ಣಾಯಕ ರೂಪಾಂತರಕ್ಕೆ ಒಳಗಾಗುವುದರಿಂದ, ಜಾಗತಿಕವಾಗಿ ಅಥವಾ ಸ್ಥಳೀಯವಾಗಿ ಹುಟ್ಟುವ ಸಾಧ್ಯತೆಯ ದುರ್ಬಲತೆಗಳನ್ನು ಎದುರಿಸಲು ತಯಾರಾಗಬೇಕು. ಎಲ್ಲಾ ಕೌಶಲ ಮಟ್ಟಗಳಲ್ಲಿ ಕಾರ್ಮಿಕರ ವಲಯಕ್ಕೆ ಸಂಬಂಧಿಸಿದಂತೆ AI ಅನಿಶ್ಚಿತತೆಯ ದೊಡ್ಡ ಪಲ್ಲಟವನ್ನು ಉಂಟುಮಾಡುತ್ತದೆ. ಭಾರತ ಬೇಳೆ ಕಾಳುಗಳಲ್ಲಿ ನಿರಂತರ ಕೊರತೆಯನ್ನು ಎದುರಿಸುತ್ತಿದೆ ಮತ್ತು ಅದರ ಪರಿಣಾಮವಾಗಿ ಬೆಲೆ ಒತ್ತಡಗಳನ್ನು ಎದುರಿಸುತ್ತಿದೆ. ಚೀನಾದಿಂದ ಹೆಚ್ಚಿದ ಎಫ್‌ಡಿಐ ಒಳಹರಿವು ಭಾರತವು ಜಾಗತಿಕ ಪೂರೈಕೆ ಸರಪಳಿಯಲ್ಲಿ ಭಾಗವಹಿಸುವಿಕೆಯನ್ನು ಹೆಚ್ಚಿಸಲು, ರಫ್ತುಗಳನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ. ಅನಾರೋಗ್ಯಕರ ಆಹಾರದಿಂದ ಶೇ.54 ರಷ್ಟು ಕಾಯಿಲೆಯ ಹೊರೆ; ಸಮತೋಲಿತ, ವೈವಿಧ್ಯಮಯ ಆಹಾರದ ಕಡೆಗೆ ಪರಿವರ್ತನೆ ಅಗತ್ಯವಿದೆ.

ಅಸಹಜ ಲೈಂಗಿಕ ದೌರ್ಜನ್ಯ ಪ್ರಕರಣ

ಜೆಡಿಎಸ್ ಎಂಎಲ್‌ಸಿ ಸೂರಜ್ ರೇವಣ್ಣಗೆ ಷರತ್ತುಬದ್ಧ ಜಾಮೀನು

ಬೆಂಗಳೂರು: ಅಸಹಜ ಲೈಂಗಿಕ ದೌರ್ಜನ್ಯ ಎಸಗಿದ ಪ್ರಕರಣದಲ್ಲಿ ಬಂಧನಕ್ಕೊಳಗಾಗಿರುವ ಜೆಡಿಎಸ್ ವಿಧಾನಪರಿಷತ್ ಸದಸ್ಯ ಡಾ. ಸೂರಜ್ ರೇವಣ್ಣ ಅವರಿಗೆ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ಕೋರ್ಟ್ ಸೋಮವಾರ ಷರತ್ತುಬದ್ಧ ಜಾಮೀನು ಮಂಜೂರು ಮಾಡಿದೆ. ಹೊಳೆನರಸೀಪುರ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಎರಡು ಪ್ರಕರಣಗಳಿಗೆ ಸಂಬಂಧಿಸಿದಂತೆ ಜಾಮೀನು ಕೋರಿ ಸೂರಜ್ ರೇವಣ್ಣ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ವಿಶೇಷ ಕೋರ್ಟ್, ಆದೇಶ ಕಾಯ್ದಿರಿಸಿತ್ತು. ಇಂದು ಎರಡೂ ಪ್ರಕರಣಗಳಲ್ಲಿ ಜಾಮೀನು ಮಂಜೂರು ಮಾಡಿ ಆದೇಶ ಹೊರಡಿಸಿದೆ.



ಆರೋಪಿ ಸೂರಜ್ ರೇವಣ್ಣ ಯಾವುದೇ ರೀತಿಯಲ್ಲೂ ಸಂತ್ರಸ್ತರನ್ನು ನೇರವಾಗಿ ಅಥವಾ ಪರೋಕ್ಷವಾಗಿ ಸಂಪರ್ಕಿಸಬಾರದು. ತನಿಖಾಧಿಕಾರಿ ಮುಂದೆ ಪ್ರತಿ ತಿಂಗಳ ಎರಡನೇ ಭಾನುವಾರ ಬೆಳಗ್ಗೆ 9.00 ರಿಂದ ಸಂಜೆ 5.00 ರೊಳಗೆ ಹಾಜರಾಗಬೇಕು ಎಂದು ಕೋರ್ಟ್ ಸೂಚಿಸಿದೆ. ಯುವಕನೊಬ್ಬನ ಮೇಲೆ ಅಸಹಜ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದಡಿ ಹೊಳೆನರಸೀಪುರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು

ವಾಲ್ಮೀಕಿ ಹಗರಣ: ಅಧಿಕಾರಿಗೆ ಒತ್ತಡ ಹೇರಿರುವ ಆರೋಪ

ಇಬ್ಬರು ಇಡಿ ಆಫೀಸರ್ ವಿರುದ್ಧ ಅಧಿಕಾರಿ FIR

ಬೆಂಗಳೂರು, ಜು.22– ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇನಾಲಯದ ಇಬ್ಬರು ಅಧಿಕಾರಿಗಳಾದ ಮಿತ್ತಲ್ ಹಾಗೂ ಕಣ್ಣನ್ ವಿರುದ್ಧ ನಗರದ ವಿಲ್ಸನ್ ಗಾರ್ಡನ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ವಾಲ್ಮೀಕಿ ಅಭಿವೃದ್ಧಿ ನಿಗಮದ ಹಿಂದಿನ ಜಂಟಿ ನಿರ್ದೇಶಕ ಕಲ್ಲೇಶ್ ಶೇಷಾದ್ರಿಪುರಂ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಶೇಷಾದ್ರಿಪುರಂ ಠಾಣೆಯಲ್ಲಿ ಎನ್‌ಸಿಆರ್ ದಾಖಲಾಗಿದ್ದು, ವಿಲ್ಸನ್ ಗಾರ್ಡನ್ ಠಾಣೆಗೆ ವರ್ಗಾವಣೆ ಬಳಿಕ FIR ದಾಖಲಾಗಿದೆ.

ಯಾವುದೇ ತಪ್ಪು ಮಾಡದಿದ್ದರೂ ಕಾನೂನುಬಾಹಿರವಾಗಿ ಇಡಿ ಅಧಿಕಾರಿ ವಿಚಾರಣೆ ಮಾಡಿದ್ದಾರೆ. ಬೈದು, ನನ್ನ ಮೇಲೆ ಬೆದರಿಕೆ ಹಾಕುತ್ತಿದ್ದಾರೆಂದು ಆರೋಪ ಮಾಡಲಾಗಿದೆ ಸಿಎಂ ಸಿದ್ದರಾಮಯ್ಯ, ಮಾಜಿ ಸಚಿವ ನಾಗೇಂದ್ರ ಹೆಸರು ಹೇಳುವಂತೆ ಇಡಿ ಅಧಿಕಾರಿಗಳು ಒತ್ತಡ ಹೇರುತ್ತಿದ್ದಾರೆ ಎಂದು ಆರೋಪಿಸಲಾಗಿದೆ.

ಎಂಜಿ ರೋಡ್ ಬ್ಯಾಂಕ್ ಖಾತೆಗೆ ಹಣವನ್ನು ಸಿಎಂ ಸಿದ್ದರಾಮಯ್ಯ, ನಾಗೇಂದ್ರ ಮತ್ತು ಎಫ್‌ಡಿ ನಿರ್ದೇಶನದಂತೆ ಮಾಡಿರುತ್ತೇನೆಂದು ಹೇಳುವಂತೆ ಒತ್ತಡ ಇತ್ತೆಂದು ಬರೆದು ಕೊಡುವಂತೆ ಸೂಚಿಸಿದ್ದು, ಸಿಎಂ, ನಾಗೇಂದ್ರ ಸೂಚನೆ ಇತ್ತೆಂದು ಒಪ್ಪಿಕೊ. ಒಪ್ಪಿಕೊಳ್ಳದಿದ್ದರೆ ಬಂಧಿಸುತ್ತೇವೆಂದು ಭಯ ಹುಟ್ಟಿಸಿದ ಆರೋಪ ಮಾಡಲಾಗಿದೆ.

ಎಂ.ಜಿ.ರೋಡ್ ಬ್ಯಾಂಕ್ ಖಾತೆಗೆ ಅನುದಾನ ಜಮಾ ಮಾಡಲು ನಾಗೇಂದ್ರ ಎಫ್‌ಡಿ ಇಲಾಖೆಯಿಂದ ಸೂಚನೆ ಇತ್ತೆಂದು ಒಪ್ಪಿಕೊಂಡರೆ ಮಾತ್ರ ನಿನ್ನ ಬಿಡುತ್ತೇವೆ. ನಂತರ ಮಿತ್ತಲ್ ಎಂಬ ಅಧಿಕಾರಿ ಬಂದು ನನಗೆ ಬೈದಿದ್ದರು. ನೀನೊಬ್ಬ ಅಪರಾಧಿ, ನಿನ್ನನ್ನು ಈಗಲೇ ಅರೆಸ್ಟ್ ಮಾಡುತ್ತೇನೆ. ಇಡಿ ಬಗ್ಗೆ ನಿನಗೆ ಗೊತ್ತಿಲ್ಲ, 2–3 ವರ್ಷ ನಿನಗೆ ಬೇಲ್ ಸಿಗಲ್ಲ. ನಿನ್ನ ಹೇಳಿಕೆಯನ್ನು ನಾನು ಓದಿದ್ದೇನೆ, ಪ್ರಯೋಜನಕ್ಕೆ ಬರಲ್ಲ. ನಿನಗೆ ಇಡಿ ಸಹಾಯ ಮಾಡಬೇಕೆಂದರೆ ಬರೆದು ಕೊಡಬೇಕು. ಸಿಎಂ, ನಾಗೇಂದ್ರ ನಿರ್ದೇಶನದಂತೆ ಎಂ.ಜಿ.ರೋಡ್ ಬ್ಯಾಂಕ್ ಖಾತೆಗೆ ಹಣವನ್ನು ವರ್ಗಾಯಿಸಿದ್ದೇನೆ ಎಂದು ಬರೆದುಕೊಡಲು ಒತ್ತಡ ಹೇರಿದ್ದಾರೆಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಮೈಸೂರು ಜಿಲ್ಲೆಯಲ್ಲಿ ವಾರದಲ್ಲಿ 90 ಮಿ.ಮೀ. ಮಳೆ

ಮೈಸೂರು,ಜು.22(ಪಿಎಂ)– ರಾಜ್ಯ ನೈಸರ್ಗಿಕ ವಿಕೋಪ ಕೇಂದ್ರದ ಮಾಹಿತಿ ಪ್ರಕಾರ ಮೈಸೂರು ಜಿಲ್ಲೆಯಲ್ಲಿ ಕಳೆದ 7 ದಿನಗಳಲ್ಲಿ (ಜು.16ರಿಂದ 22ರವರೆಗೆ) ಶೇ.227ರಷ್ಟು ಅಧಿಕ ಮಳೆಯಾಗಿದ್ದು, 27 ಮಿ.ಮೀ. ವಾಡಿಕೆ ಮಳೆಗೆ ಬದಲು 90 ಮಿ.ಮೀ. ಮಳೆಯಾಗಿದೆ.



ಜೂ.1ರಿಂದ ಜು.22ರವರೆಗೆ ಮೈಸೂರು ಜಿಲ್ಲೆಯಲ್ಲಿ ವಾಡಿಕೆಗಿಂತ ಶೇ.42ರಷ್ಟು ಅಧಿಕ ಮಳೆಯಾಗಿದೆ. ಈ ಅವಧಿಯಲ್ಲಿ 182 ಮಿ.ಮೀ. ಮಳೆಯಾಗಬೇಕಿತ್ತು. ಆದರೆ 259 ಮಿ.ಮೀ. ಮಳೆ ಸುರಿದಿದೆ.

ಜು.22ರ ಬೆಳಗ್ಗೆ 8.30ರ ಪೂರ್ವದ 24 ಗಂಟೆಗಳಲ್ಲಿ (ಭಾನುವಾರಕ್ಕೆ) ಶೇ.81ರಷ್ಟು ಕಡಿಮೆ ಮಳೆಯಾಗಿದೆ. ವಾಡಿಕೆಯಂತೆ 4.3 ಮಿ.ಮೀ. ಮಳೆಗೆ ಬದಲು 0.8 ಮಿ.ಮೀ. ಕಡಿಮೆ ಮಳೆಯಾಗಿದೆ. ಮೈಸೂರು ಜಿಲ್ಲೆಯ ಸಾಲಿಗ್ರಾಮ ಹೊರತಾಗಿ ಎಲ್ಲಾ ತಾಲೂಕುಗಳಲ್ಲಿ ಭಾನುವಾರದಂದು ಕಡಿಮೆ ಪ್ರಮಾಣದ ಮಳೆಯಾಗಿದ್ದು, ಸಾಲಿಗ್ರಾಮದಲ್ಲಿ ಮಾತ್ರ ಶೇ.21ರಷ್ಟು ಅಧಿಕ ಮಳೆಯಾಗಿದೆ.

ಕಳೆದ 7 ದಿನಗಳಲ್ಲಿ (ಜು.16ರಿಂದ 22ರರವೆಗೆ) ಸಾಲಿಗ್ರಾಮ ತಾಲೂಕಿನಲ್ಲಿ ಶೇ.472ರಷ್ಟು ಅಧಿಕ ಮಳೆಯಾಗಿದೆ. ಉಳಿದಂತೆ ಹೆಚ್‌ಡಿ ಕೋಟೆ ತಾಲೂಕಿನಲ್ಲಿ ಶೇ.330ರಷ್ಟು ವಾಡಿಕೆಗಿಂತ ಅಧಿಕ ಮಳೆಯಾಗಿದೆ. ಅಂತೆಯೇ ಹುಣಸೂರಿನಲ್ಲಿ ಶೇ.372, ಕೆಆರ್ ನಗರದಲ್ಲಿ ಶೇ.248, ಮೈಸೂರಲ್ಲಿ ಶೇ.239, ನಂಜನಗೂಡಿನಲ್ಲಿ ಶೇ.224, ಪಿರಿಯಾಪಟ್ಟಣದಲ್ಲಿ ಶೇ.285, ಟಿ.ನರಸೀಪುರದಲ್ಲಿ ಶೇ.301 ಹಾಗೂ ಸರಗೂರಿನಲ್ಲಿ ಶೇ.190ರಷ್ಟು ಅಧಿಕ ಮಳೆಯಾಗಿದೆ.

ಅದೇ ರೀತಿಯಲ್ಲಿ ಜೂ.1ರಿಂದ ಜು.22ರ ಅವಧಿಯಲ್ಲಿ ಸಾಲಿಗ್ರಾಮ ತಾಲೂಕಿನಲ್ಲಿ ಶೇ.124ರಷ್ಟು ಅಧಿಕ ಮಳೆಯಾಗಿದೆ. ಅಂತೆಯೇ ಹೆಚ್‌ಡಿ ಕೋಟೆ ತಾಲೂಕಿನಲ್ಲಿ ಶೇ.101, ಹುಣಸೂರು ತಾಲೂಕಿನಲ್ಲಿ ಶೇ.67, ಕೆಆರ್ ನಗರದಲ್ಲಿ ಶೇ.41, ಮೈಸೂರಲ್ಲಿ ಶೇ.36, ನಂಜನಗೂಡಿನಲ್ಲಿ ಶೇ.61, ಪಿರಿಯಾ ಪಟ್ಟಣದಲ್ಲಿ ಶೇ.61, ತಿ.ನರಸೀಪುರದಲ್ಲಿ ಶೇ.24, ಸರಗೂರಿನಲ್ಲಿ ಶೇ.31ರಷ್ಟು ಅಧಿಕ ಮಳೆಯಾಗಿದೆ.

ಮುಡಾ ಹಗರಣಕ್ಕೆ ರಾಜ್ಯಪಾಲರ ಮಧ್ಯಪ್ರವೇಶ

ಬೆಂಗಳೂರು: ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಸೈಟ್ ಹಗರಣ ರಾಜ್ಯದಲ್ಲಿ ಭಾರಿ ಸದ್ದು ಮಾಡುತ್ತಿರುವ ಬೆನ್ನಲ್ಲೇ ರಾಜ್ಯಪಾಲರ ಮಧ್ಯಪ್ರವೇಶವಾಗಿದೆ.



ಮುಡಾ ಪ್ರಕರಣದ ಬಗ್ಗೆ ಪೂರ್ಣ ವಿವರಣೆ ನೀಡುವಂತೆ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್ ಅವರಿಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಸೂಚಿಸಿದ್ದಾರೆ.

ಏನಿದು ಆರೋಪ: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಧರ್ಮಪತ್ನಿ ಪಾರ್ವತಿ ಅವರಿಗೆ ಅರ್ಹತೆಗೂ ಮೀರಿ ಕೋಟ್ಯಾಂತರ ಬೆಲೆಬಾಳುವ 14 ನಿವೇಶನಗಳನ್ನು ಪ್ರತಿಷ್ಠಿತ ವಿಜಯನಗರ ಬಡಾವಣೆಯಲ್ಲಿ ಹಂಚಿಕೆ ಮಾಡಲಾಗಿದೆ. ಅರ್ಹತೆ ಪ್ರಕಾರ ಪಾರ್ವತಿ ಅವರಿಗೆ ನೀಡಬೇಕಾಗಿದ್ದು ಕೇವಲ ಎರಡು ನಿವೇಶನ ಮಾತ್ರ. ಆದರೆ 14 ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ಎಂದು ಬಿಜೆಪಿ ಮತ್ತು ಜೆಡಿಎಸ್ ಗಂಭೀರ ಆರೋಪ ಮಾಡುತ್ತಿವೆ.

ಈ ಆರೋಪಕ್ಕೆ ಸಿದ್ದರಾಮಯ್ಯ ನಿಯಮದ ಪ್ರಕಾರವೇ ಎಲ್ಲರಿಗೂ ಹಂಚಿಕೆಯಾಗುವಂತೆ ಮುಡಾದಿಂದ ಸೈಟ್ ಹಂಚಿಕೆಯಾಗಿದೆ. ನಾವು ಯಾವುದೇ ತಪ್ಪು ಮಾಡಿಲ್ಲ. ನಾವು ಅಲ್ಲೇ ಸೈಟ್ ನೀಡಬೇಕೆಂದು ಕೇಳಿಕೊಂಡಿಲ್ಲ ಮುಡಾದವರು ಹಂಚಿಕೆ ಮಾಡಿದ್ದಾರೆ. ಯಾವುದೇ ಅಕ್ರಮ ನಡೆದಿಲ್ಲ ಎಂದು ಸಮರ್ಥಿಸಿಕೊಳ್ಳುತ್ತಿದ್ದಾರೆ.

ಐಎಸ್ ಫೆಡರೇಶನ್‌ನಿಂದ ಇಸ್ರೋಗೆ ವಿಶ್ವ ಬಾಹ್ಯಾಕಾಶ ಪ್ರಶಸ್ತಿ ಗರಿ

ಬೆಂಗಳೂರು, ಜು.22– ಚಂದ್ರನ ದಕ್ಷಿಣ ಧ್ರುವದ ಮೇಲೆ ಯಶಸ್ವಿಯಾಗಿ ಉಪಗ್ರಹ ಇಳಿಸಿದ ಮೊದಲ ರಾಷ್ಟ್ರ ಭಾರತ ಅನ್ನೋ ಹೆಗ್ಗಳಿಗೆ ಬರೆದ ಇಸ್ರೋ ಜಗತ್ತನ್ನೇ ತನ್ನತ್ತ ತಿರುಗಿ ನೋಡುವಂತೆ ಮಾಡಿದೆ. ಈ ಐತಿಹಾಸಿಕ ಸಾಧನೆಗೆ ಅಂತಾರಾಷ್ಟ್ರೀಯ ಅಸ್ಟ್ರೋನಾಟಿಕಲ್ ಫೆಡರೇಶನ್ ಭಾರತಕ್ಕೆ ವಿಶ್ವ ಬಾಹ್ಯಾಕಾಶ ಪ್ರಶಸ್ತಿ ನೀಡಿ ಗೌರವಿಸಿದೆ. ಭಾರತಕ್ಕೂ ಮೊದಲು ಅಮೆರಿಕ, ರಷ್ಯಾ ಹಾಗೂ ಚೀನಾ ಈ ಪ್ರಶಸ್ತಿಗೆ ಭಾಜನವಾಗಿವೆ. ಇದೀಗ ಭಾರತ ಪ್ರತಿಷ್ಠಿತ ಪ್ರಶಸ್ತಿ ಮುಡಿಗೇರಿಸಿಕೊಂಡಿದೆ. ವಿಶ್ವ ಬಾಹ್ಯಾಕಾಶ ಪ್ರಶಸ್ತಿಯನ್ನು ಅಕ್ಟೋಬರ್ 14ರಂದು ಪ್ರಧಾನ ಮಾಡಲಾಗುತ್ತದೆ. 75ನೇ ಅಂತಾರಾಷ್ಟ್ರೀಯ ಅಸ್ಟ್ರೋನಾಟಿಕಲ್ ಕಾಂಗ್ರೆಸ್ ಸಮಾರಂಭದ ಉದ್ಘಾಟನಾ ದಿನ ಈ ಪ್ರಶಸ್ತಿಯನ್ನು ಇಸ್ರೋಗೆ ಪ್ರಧಾನ ಮಾಡಲಾಗುತ್ತದೆ. ಇಟಲಿಯ ಮಿಲನ್‌ನಲ್ಲಿ ಈ ಕಾರ್ಯಕ್ರಮ ನಡೆಯಲಿದೆ. ಇದೀಗ ಪ್ರತಿಷ್ಠಿತ ಪ್ರಶಸ್ತಿಗೆ ಆಯ್ಕೆಯಾಗಿರುವ ಭಾರತಕ್ಕೆ ಅಭಿನಂದನೆಗಳ ಮಹಾಪೂರವೇ ಹರಿದು ಬರುತ್ತಿದೆ.

ವಾಲ್ಮೀಕಿ ನಿಗಮದ ಹಣ ಅಕ್ರಮ ವರ್ಗಾವಣೆ

ಸಿದ್ದರಾಮಯ್ಯ ರಾಜೀನಾಮೆಗೆ ಮುಂದುವರಿದ ಬಿಜೆಪಿ ಸದಸ್ಯರ ಧರಣಿ

ಬೆಂಗಳೂರು, ಜು. 22–ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣದ ವಿಚಾರವನ್ನು ಪ್ರಸ್ತಾಪಿಸಿ ವಿಧಾನಸಭೆಯಲ್ಲಿ ಸೋಮವಾರವೂ ಪ್ರತಿಭಟನೆ ಮುಂದುವರಿಸಿದ ಬಿಜೆಪಿ ನಾಯಕರು, ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿದರು. ಅಕ್ರಮದ ಕುರಿತು ಸಿಎಂ ಸಮರ್ಪಕ ಉತ್ತರ ಕೊಟ್ಟಿಲ್ಲ ಎಂದ ವಿಪಕ್ಷ ನಾಯಕ ಆರ್.ಅಶೋಕ್, ಸಚಿವರು ರಾಜೀನಾಮೆ ಕೊಟ್ಟಿದ್ದಾರೆ. ಆದರೆ, ಮುಖ್ಯಮಂತ್ರಿ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.



ಅಶೋಕ್ ಮಾತಿಗೆ ಆಡಳಿತ ಪಕ್ಷದ ಸದಸ್ಯರು ಆಕ್ಷೇಪ ವ್ಯಕ್ತಪಡಿಸಿದರು. ಈ ವೇಳೆ ಗದ್ದಲ ಉಂಟಾಯಿತು. ಮಳೆ ಹಾನಿ, ಡೆಂಗ್ಯೂ, ಮುಡಾ ಹಗರಣದ ಚರ್ಚೆ ಆಗಬೇಕಿದೆ ಹೀಗಾಗಿ ಧರಣಿ ವಾಪಸ್ ಪಡೆಯುತ್ತೇವೆ ಎಂದು ಅಶೋಕ್ ಹೇಳಿದರು. ಆದರೆ, ವಾಲ್ಮೀಕಿ ನಿಗಮ ಹಗರಣದಲ್ಲಿ ನಮ್ಮ ಹೋರಾಟ ಮುಂದುವರೆಯುತ್ತದೆ ಎಂದರು. ಧರಣಿ ವಾಪಸ್ ಪಡೆದ ನಂತರ ಬಿಜೆಪಿ ಸದಸ್ಯರು ಸಭಾತ್ಯಾಗ ಮಾಡಿದರು.

ನಾನ್ಯಾಕೆ ರಾಜೀನಾಮೆ ನೀಡಬೇಕು : ಗುರುವಾರ ಮತ್ತು ಶುಕ್ರವಾರ ವಿಧಾನಸಭೆಯಲ್ಲಿ ಉತ್ತರ ನೀಡಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಪರಿಷತ್‌ನಲ್ಲಿ ಉತ್ತರ ಕೊಟ್ಟರು. ನನಗೆ ಕಳಂಕ ತರಬೇಕು, ಮಸಿ ಬಳಿಬೇಕು ಎಂಬುದು ಬಿಜೆಪಿಯವರ ಉದ್ದೇಶ ಎಂದು ವಾಗ್ದಾಳಿ ನಡೆಸಿದರು. ಬಿಜೆಪಿ ಮಾಡಿದ ಆರೋಪಗಳು ಸತ್ಯಕ್ಕೆ ದೂರವಾದದ್ದು ಎಂದರು. ಅಕ್ರಮ ನಡೆದೇ ಇಲ್ಲ ಎಂದು ನಾನು ಹೇಳಲ್ಲ. ಆದರೆ, ಅಕ್ರಮಕ್ಕೂ ಸರ್ಕಾರಕ್ಕೂ, ಹಣಕಾಸು ಇಲಾಖೆಗೂ ಸಂಬಂಧವಿಲ್ಲ ಎಂದು ಸ್ಪಷ್ಟನೆ ಕೊಟ್ಟರು. ಅಲ್ಲದೇ, ನಾನ್ಯಾಕೆ ರಾಜೀನಾಮೆ ಕೊಡಬೇಕು ಎಂದು ಪ್ರಶ್ನಿಸಿದರು.

ಸಿಎಂ ಉತ್ತರಕ್ಕೆ ಬಿಜೆಪಿ ಸದಸ್ಯರು ಆರಂಭದಲ್ಲೇ ವಿರೋಧ ವ್ಯಕ್ತಪಡಿಸಿದರು. ಬಿಜೆಪಿಯವರು ಸುಳ್ಳನ್ನೇ ನೂರು ಬಾರಿ ಹೇಳೋ ನಿಸ್ಸೀಮರು ಎಂದು ಸಿಎಂ ಗುಡುಗಿದರು. ಈ ವೇಳೆ ಭ್ರಷ್ಟಾಚಾರದಲ್ಲೂ ನಿಸ್ಸೀಮರು ನೀವು ಎಂದು ರವಿಕುಮಾರ್ ಹೇಳಿದರು. ಈ ವೇಳೆ ಗದ್ದಲ ಉಂಟಾಯಿತು.

ಸಿಎಂ ಜೈಲಿಗೆ ಹೋಗ್ತಾರೆಂದ ಈಶ್ವರಪ್ಪ: ಅತ್ತ ಬಾಗಲಕೋಟೆಯಲ್ಲಿ ಮಾತನಾಡಿದ ಮಾಜಿ ಸಚಿವ ಕೆ.ಎಸ್.ಈಶ್ವರಪ್ಪ, ಎಲ್ಲಾ ಹಗರಣಗಳನ್ನು ಸಿಬಿಐಗೆ ಕೊಡಿ ಎಂದು ಆಗ್ರಹಿಸಿದರು. ಅಲ್ಲದೇ, ಮುಡಾ, ವಾಲ್ಮೀಕಿ ಹಗರಣದಲ್ಲಿ ಸಿದ್ದರಾಮಯ್ಯ ಜೈಲಿಗೆ ಹೋಗುತ್ತಾರೆ ಎಂದು ಭವಿಷ್ಯ ನುಡಿದರು. ದೆಹಲಿಯಲ್ಲಿ ಮಾತನಾಡಿದ ಸಂಸದ ಬಸವರಾಜ ಬೊಮ್ಮಾಯಿ, ಹಣ ವರ್ಗಾವಣೆಯಾಗಿರೋ ಬಗ್ಗೆ ಸಿಎಂ ಸ್ಪಷ್ಟನೆ ಕೊಡಬೇಕು ಎಂದು ಒತ್ತಾಯಿಸಿದರು.

ಒಟ್ಟಿನಲ್ಲಿ ವಾಲ್ಮೀಕಿ ಹಗರಣದ ಜೊತೆಗೆ ನಾಳೆ ಮುಡಾ ಸೈಟ್ ಹಂಚಿಕೆ ಪ್ರಕರಣ ಪ್ರಸ್ತಾಪಿಸಲು ಬಿಜೆಪಿ ಸಜ್ಜಾಗಿದೆ. ಮುಡಾ ಕೇಸ್‌ನಲ್ಲೂ ಸಿಎಂ ರಾಜೀನಾಮೆಗೆ ಬಿಜೆಪಿ ಪಟ್ಟು ಹಿಡಿಯಲಿದೆ. ಅಲ್ಲದೇ ಸದನದಲ್ಲೇ ಅಹೋರಾತ್ರಿ ಧರಣಿ ನಡೆಸುವುದಕ್ಕೂ ಚಿಂತನೆ ನಡೆಸಿದೆ.

ಪಾರ್ವತಿ ಅಮ್ಮನವರಿಗೆ ವಿಳ್ಯೆದೆಲೆ ಅಲಂಕಾರ



ಆಷಾಢ ಮಾಸದ ಅಂಗವಾಗಿ ಮೂಗೂರು ಗ್ರಾಮದ ಶ್ರೀದೇಶೇಶ್ವರ ಸ್ವಾಮಿ ದೇಗುಲದಲ್ಲಿ ಶ್ರೀಪಾರ್ವತಿ ಅಮ್ಮನವರಿಗೆ ವಿಳ್ಯೆದೆಲೆ ಅಲಂಕಾರ ಮಾಡಲಾಗಿತ್ತು. ಸಾವಿರಾರು ಮಂದಿ ಭಕ್ತರು ದೇವರ ದರ್ಶನ ಪಡೆದರು. ಅರ್ಚಕರಾದ ಸುಬ್ರಹ್ಮಣ್ಯ ಮತ್ತು ಅಜೇಯ ಶಾಸ್ತ್ರಿ ಧಾರ್ಮಿಕ ಪೂಜಾ ಕೈಂಕರ್ಯ ನೆರವೇರಿಸಿದರು.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಚುನಾವಣೆ

ಎಸ್‌ಎಂಆರ್ ಪ್ರಕಾಶ್ ನೇತೃತ್ವದ ತಂಡಕ್ಕೆ ಭರ್ಜರಿ ಜಯ

• 13 ಸ್ಥಾನಗಳ ಪೈಕಿ 11ರಲ್ಲಿ ಗೆಲುವು • ಕೇವಲ 2 ಸ್ಥಾನ ಗೆದ್ದ ಬಿ.ವೀರಭದ್ರಪ್ಪ ತಂಡ

ತಿ.ನರಸೀಪುರ, ಜು.22– ತಾಲೂಕು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಕಾರ್ಯಕಾರಿ ಸಮಿತಿಗೆ ಭಾನುವಾರ ನಡೆದ ಚುನಾವಣೆಯಲ್ಲಿ ಎಸ್‌ಎಂಆರ್ ಪ್ರಕಾಶ್ ನೇತೃತ್ವದ ತಂಡ ಭರ್ಜರಿ ಜಯ ಗಳಿಸಿದ್ದು, ಕಾರ್ಯಕಾರಿ ಸಮಿತಿಯ 13 ಸ್ಥಾನಗಳ ಪೈಕಿ 11 ಸ್ಥಾನಗಳನ್ನು ತನ್ನ ತೆಕ್ಕೆಗೆ ತೆಗೆದುಕೊಳ್ಳುವಲ್ಲಿ ಯಶಸ್ವಿಯಾಗಿದೆ. ಎದುರಾಳಿ ಬಿ.ವೀರಭದ್ರಪ್ಪ ತಂಡ ಕೇವಲ 2 ಸ್ಥಾನ ಗೆಲ್ಲುವ ಮೂಲಕ ಸೋಲು ಅನುಭವಿಸಿದೆ.

ಪಟ್ಟಣದ ವಿವೇಕಾನಂದ ನಗರದ ವೀರಶೈವ ವಿದ್ಯಾರ್ಥಿನಿಲಯದಲ್ಲಿ ತೆರೆಯಲಾಗಿದ್ದ ಮತಗಟ್ಟೆಯಲ್ಲಿ ಭಾನುವಾರ ಬೆಳಗ್ಗೆ 8 ರಿಂದ ಸಂಜೆ 5ರವರೆಗೆ ಮತದಾನ ನಡೆಯಿತು. ನಂತರ ಮತ ಎಣಿಕೆ ನಡೆದು ರಾತ್ರಿ 12ಕ್ಕೆ ಫಲಿತಾಂಶ ಘೋಷಣೆ ಮಾಡಲಾಯಿತು.

ಅಧ್ಯಕ್ಷ ಸ್ಥಾನದ ಅಭ್ಯರ್ಥಿಗಳಾದ ಎಸ್‌ಎಂಆರ್ ಪ್ರಕಾಶ್ ಹಾಗೂ ಪಿಎಸಿಎಸ್ ಮಾಜಿ ಅಧ್ಯಕ್ಷ ಬಿ.ವೀರಭದ್ರಪ್ಪ ನಡುವೆ ಹಣಾಹಣಿ ನಡೆದು ಅಂತಿಮವಾಗಿ ಎಸ್‌ಎಂಆರ್ ಪ್ರಕಾಶ್ ತಂಡದ 11 ನಿರ್ದೇಶಕ ಸ್ಥಾನದ ಅಭ್ಯರ್ಥಿಗಳು ಭರ್ಜರಿ ಗೆಲುವು ದಾಖಲಿಸಿದರು. ಬಿ.ವೀರಭದ್ರಪ್ಪ ತಂಡದ ಇಬ್ಬರು ಸದಸ್ಯರು ಮಾತ್ರವೇ ಜಯ ಗಳಿಸಲು ಸಾಧ್ಯವಾಯಿತು.

ಭಾರೀ ನಿರೀಕ್ಷೆಯೊಂದಿಗೆ ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದ್ದ ಬಿ.ವೀರಭದ್ರಪ್ಪ ತಮ್ಮ ಪ್ರತಿಸ್ಪರ್ಧಿ ಎಸ್‌ಎಂಆರ್ ಪ್ರಕಾಶ್ ವಿರುದ್ಧ 250 ಮತ ಪಡೆದು ಸೋಲನುಭವಿಸಿದರು. ಎಸ್‌ಎಂಆರ್ ಪ್ರಕಾಶ್ 449 ಮತ ಪಡೆದು ನೂತನ ಅಧ್ಯಕ್ಷರಾಗಿ ಆಯ್ಕೆಯಾದರು.



ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಚುನಾವಣೆಯಲ್ಲಿ ಜಯ ಸಾಧಿಸಿದ ಎಸ್‌ಎಂಆರ್ ಪ್ರಕಾಶ್ ನೇತೃತ್ವದ ತಂಡ ತಾಲೂಕಿನ ಬೆನಕನಹಳ್ಳಿ ಮಠಕ್ಕೆ ಭೇಟಿ ನೀಡಿ, ಶ್ರೀಗಳ ಆಶೀರ್ವಾದ ಪಡೆಯಿತು.

ಆಶೀರ್ವಾದ ಪಡೆದ ಎಸ್‌ಎಂಆರ್ ಪ್ರಕಾಶ್ ತಂಡ

ಚುನಾವಣೆಯಲ್ಲಿ ಭರ್ಜರಿ ಜಯಗಳಿಸಿದ ಎಸ್‌ಎಂಆರ್ ಪ್ರಕಾಶ್ ನೇತೃತ್ವದ ತಂಡ ಸೋಮವಾರ ತಾಲೂಕಿನ ಬೆನಕನಹಳ್ಳಿ ಮಠದಲ್ಲಿ ಹಮ್ಮಿಕೊಳ್ಳಲಾಗಿದ್ದ ಇಮ್ಮಡಿ ಬಸವಲಿಂಗಸ್ವಾಮಿಗಳ 48ನೇ ದಿನದ ಪಟ್ಟಾಧಿಕಾರ ಕಾರ್ಯಕ್ರಮ ಹಾಗೂ ವಾಟಾಳು ಶ್ರೀಗಳ ಪಾದಪೂಜೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಎಂ.ಎಲ್.ಹುಂಡಿ ಮಠಾಧ್ಯಕ್ಷ ಗೌರಿ ಶಂಕರಸ್ವಾಮೀಜಿ ಹಾಗೂ ಇಮ್ಮಡಿ ಬಸವಲಿಂಗ ಸ್ವಾಮಿಗಳ ಆಶೀರ್ವಾದ ಪಡೆದುಕೊಂಡಿತು.

ತಾಲೂಕು ಕೃಷಿಕ ಸಮಾಜದ ಅಧ್ಯಕ್ಷ ಶಿವಮಲ್ಲಪ್ಪ ಮಾತನಾಡಿ, ಚುನಾವಣೆಯಲ್ಲಿ ತಾಲೂಕಿನ ವೀರಶೈವ ಸಮಾಜ ನಮ್ಮ ತಂಡದ ಮೇಲೆ ವಿಶ್ವಾಸವಿಟ್ಟು ಅಭೂತ ಪೂರ್ವ ಜಯ ತಂದುಕೊಟ್ಟಿದೆ. ನೂತನ ಕಾರ್ಯಕಾರಿ ಸಮಿತಿ ಮುಂದಿನ ದಿನಗಳಲ್ಲಿ ಸಮಾಜದ ಏಳಿಗೆಗಾಗಿ ಉತ್ತಮ ಕಾರ್ಯಕ್ರಮ ಹಮ್ಮಿಕೊಳ್ಳುವ ಮೂಲಕ ಜನತೆ ನಮ್ಮ ಮೇಲಿಟ್ಟಿರುವ ನಂಬಿಕೆ ಉಳಿಸಿಕೊಳ್ಳುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸಬೇಕಿದೆ. ನಮ್ಮ ತಂಡದ ಮೇಲೆ ವಿಶ್ವಾಸ ವಿಟ್ಟು ಜಯ ತಂದುಕೊಟ್ಟ ಸಮಾಜದ ಎಲ್ಲಾ ವರ್ಗದ ಜನರಿಗೆ ಕಾರ್ಯಕಾರಿ ಸಮಿತಿ ಪರವಾಗಿ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಚುನಾವಣೆಯಲ್ಲಿ ಎಸ್‌ಎಂಆರ್ ಪ್ರಕಾಶ್ ತಂಡದ ಅಭ್ಯರ್ಥಿಗಳು ತಾಲೂಕು ಕೃಷಿಕ ಸಮಾಜದ ಅಧ್ಯಕ್ಷ ಬೆನಕನಹಳ್ಳಿ ಶಿವಮಲ್ಲಪ್ಪ ನೇತೃತ್ವದಲ್ಲಿ ಹಾಗೂ ಬಿ.ವೀರಭದ್ರಪ್ಪ ತಂಡದ ಅಭ್ಯರ್ಥಿಗಳು ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಹೆಳವರಹುಂಡಿ ಸಿದ್ದಪ್ಪ ನೇತೃತ್ವದಲ್ಲಿ ಚುನಾವಣೆಗೆ ಸ್ಪರ್ಧಿಸಿದ್ದರು.

ಅಧ್ಯಕ್ಷ ಸ್ಥಾನ ಸೇರಿದಂತೆ 21 ಅಭ್ಯರ್ಥಿಗಳ ಕಾರ್ಯಕಾರಿ ಸಮಿತಿಗೆ ಆಯ್ಕೆ ನಡೆಯಬೇಕಿತ್ತು. 7 ಮಹಿಳಾ ನಿರ್ದೇಶಕರು ಅವಿರೋಧವಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಉಳಿದ 13 ಸ್ಥಾನಕ್ಕೆ ಚುನಾವಣೆ ನಡೆಯಿತು. ಎಸ್‌ಎಂಆರ್ ಪ್ರಕಾಶ್ ತಂಡದಿಂದ ಪುರಸಭೆ ಸದಸ್ಯ ಎಸ್.ಕೆ.ಕಿರಣ್(529), ತೊಟ್ಟವಾಡಿ ಟಿ.ಪಿ.ಶಿವಕುಮಾರ್ (353), ದೊಡ್ಡನಹುಂಡಿ ಜಿ.ನಂಜುಂಡಸ್ವಾಮಿ (429), ಕಾವೇರಿಪುರ ಕೆ.ಎಂ.ಮಲ್ಲು (416), ಶಂಭುದೇವನಪುರ ಎಸ್.ಬಿ.ಸುಗಂಧರಾಜು (491), ಕಟ್ಟೇಪುರ ಓಂಕಾರ ಸ್ವಾಮಿ (439), ಹೊಸೂರುಹುಂಡಿ ತೊಂಟೇಶ್ (474), ಉಕ್ಕಲಗೆರೆ ಎಂ.ಪರಶಿವಮೂರ್ತಿ (413), ಬೆನಕನಹಳ್ಳಿ ಬಿ.ಎಂ.ವಿಜಯ ಕುಮಾರ್ (427), ಹಿರಿಯೂರು ಗುರುಸ್ವಾಮಿ (437), ಕಿರಗಸೂರು ಎಂ.ಸುರೇಶ್ (374) ಮತ ಪಡೆದು ಜಯಗಳಿಸಿದರೆ, ಬಿ.ವೀರಭದ್ರಪ್ಪ ತಂಡದಿಂದ ಬೆನಕನಹಳ್ಳಿ ಚೆನ್ನಮಲ್ಲಿಕಾರ್ಜುನ ಸ್ವಾಮಿ(346) ಹಾಗು ಕುರುಬೂರು ಶಿವು 350 ಮತ ಪಡೆದು ಜಯಗಳಿಸಿದರು.

ಕಾರ್ಯಕಾರಿ ಸಮಿತಿಗೆ ಮಹಿಳಾ ವಿಭಾಗದಿಂದ ಪಿ.ಎಸ್.ಅಂಬಿಕಾ, ಕೊತ್ತೇಗಾಲ ಅಶ್ವಿನಿ, ಬೆನಕನಹಳ್ಳಿ ಜ್ಞಾನೇಶ್ವರಿ, ಶಂಭುದೇವನಪುರ ಮಲ್ಲಿಕಾ, ಕಟ್ಟೆಪುರ ರಾಜಮ್ಮಣ್ಣಿ, ಕೊತ್ತೇಗಾಲ ಸವಿತಾ ಹಾಗೂ ಶಂಭುದೇವನಪುರ ಜಿ.ಎಸ್.ಸುಧಾ ಅವಿರೋಧವಾಗಿ ಆಯ್ಕೆಯಾದರು.

ವೀರಶೈವ ಲಿಂಗಾಯತ ಮಹಾಸಭಾ ಸಮಿತಿಗೆ ಚುನಾವಣೆ ನಡೆಸದೇ ಅವಿರೋಧವಾಗಿ ಆಯ್ಕೆ ಮಾಡುವ ಪದ್ಧತಿ ಇತ್ತು. ಆದರೆ ಈ ಬಾರಿ ಆಕಾಂಕ್ಷಿಗಳಲ್ಲಿ ಒಮ್ಮತದ ಅಭಿಪ್ರಾಯ ಮೂಡದ ಹಿನ್ನೆಲೆಯಲ್ಲಿ ಚುನಾವಣೆ ಮೂಲಕ ಕಾರ್ಯಕಾರಿ ಸಮಿತಿ ಆಯ್ಕೆ ಮಾಡಲಾಯಿತು.

ಈ ವೇಳೆ ತಾಲೂಕು ಕೃಷಿಕ ಸಮಾಜದ ಅಧ್ಯಕ್ಷ ಬೆನಕನಹಳ್ಳಿ ಶಿವಮಲ್ಲಪ್ಪ, ಉಪ ನ್ಯಾಸಕ ಮೂಗೂರು ಕುಮಾರ ಸ್ವಾಮಿ, ಹಿರಿಯೂರು ನವೀನ್, ಪ್ರಕಾಶ್, ಭತ್ತದ ಶೇಖರಪ್ಪ, ಜಾಲಹಳ್ಳಿ ಸುರೇಶ್, ಡೈರಿ ಕಾರ್ಯದರ್ಶಿ ನಂಜುಂಡಸ್ವಾಮಿ, ಪಿಎಸಿಎಸ್ ಮಾಜಿ ಅಧ್ಯಕ್ಷ ನಟರಾಜು, ದಣಾಯಕನಪುರ ಮಲ್ಲಣ್ಣ, ಜ್ಞಾನೇಂದ್ರ ಮೂರ್ತಿ, ಡೈರಿ ಗುರುಮೂರ್ತಿ, ಅಕ್ಕಿ ನಾಗಪ್ಪ, ಕೆಇಬಿ ಸಿದ್ದಲಿಂಗಸ್ವಾಮಿ, ಆದಿ ಬೆಟ್ಟಳ್ಳಿ ಕುಮಾರ, ಕರೋಹಟ್ಟಿ ರಾಜಶೇಖರ ಮತ್ತಿತರಿದ್ದರು.

ಬ್ಯಾಂಕ್ ಆಫ್ ಬರೋಡಾ ಸಂಸ್ಥಾಪನಾ ದಿನಾಚರಣೆ



ಹಂಪಾಪುರದಲ್ಲಿ ಬ್ಯಾಂಕ್ ಆಫ್ ಬರೋಡಾ ಸಂಸ್ಥಾಪನಾ ದಿನ ಆಚರಿಸಲಾಯಿತು.

ಹಂಪಾಪುರ, ಜು.22– ಹೆಚ್.ಡಿ.ಕೋಟೆ ತಾಲೂಕಿನ ಹಂಪಾಪುರ ಹೋಬಳಿ ಹೊಮ್ಮರಗಳ್ಳಿ ಶಾಖೆಯ ಬ್ಯಾಂಕ್ ಆಫ್ ಬರೋಡಾ ಬ್ಯಾಂಕ್‌ನಲ್ಲಿ 117ನೇ ಸಂಸ್ಥಾಪನಾ ದಿನ ಆಚರಿಸಲಾಯಿತು.

ಇದೇ ವೇಳೆ ಕಚೇರಿಯಲ್ಲಿ ಬ್ಯಾಂಕ್ ಸಂಸ್ಥಾಪಕರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಗ್ರಾಹಕರಿಂದ ಕೇಕ್ ಕತ್ತರಿಸಿ ಸಂಭ್ರಮಿಸಲಾಯಿತು. ಬ್ಯಾಂಕ್ ವ್ಯವಸ್ಥಾಪಕ ವೈಕುಂಠ ಮಾತನಾಡಿ, 117 ವಸಂತಗಳಲ್ಲಿ ಬ್ಯಾಂಕ್ ಜನಸ್ನೇಹಿಯಾಗಿ ಕರ್ತವ್ಯ ನಿರ್ವಹಿಸಿಕೊಂಡು ಬಂದಿದೆ. ಗ್ರಾಹಕರ ಸೇವೆಯೇ ನಮ್ಮ ಮೂಲ ಮಂತ್ರವಾಗಿದ್ದು, ಗ್ರಾಹಕರ ಅಗತ್ಯತೆಗೆ ತಕ್ಕಂತೆ ಪ್ರಾದೇಶಿಕ ಅವಶ್ಯಕತೆಗಳನ್ನು ಮನಗಂಡು ಕಾರ್ಯ ನಿರ್ವಹಿಸುತ್ತಿದ್ದೇವೆ ಇದೀಗ ಗ್ರಾಹಕರೊಂದಿಗೆ ಒಡಗೂಡಿ ಸಂಸ್ಥಾಪನಾ ದಿನ ಆಚರಿಸುತ್ತಿದ್ದೇವೆ ಎಂದರು. ಕಾರ್ಯಕ್ರಮದಲ್ಲಿ ಸಹಾಯಕ ವ್ಯವಸ್ಥಾಪಕ ಸಂತೋಷ್, ಸರ್ಕಾರಿ ಕಾಲೇಜಿನ ಉಪನ್ಯಾಸಕಿ ಆಶಾ, ಗ್ರಾಹಕರಾದ ಪಿ.ಕೆ.ಶಿವರಾಜು, ನವೀನ್, ಗಂಗಾಧರ್, ವ್ಯಾಪಾರಿ ಭಾವರ್ಲಾಲ್ ಇತರರಿದ್ದರು.

ಬಿತ್ತನೆ ಬೀಜ, ರಸಗೊಬ್ಬರಕ್ಕೆ ತೊಂದರೆಯಾಗದಂತೆ ಕ್ರಮವಹಿಸಿ

ಕೃಷಿ ಅಧಿಕಾರಿಗಳಿಗೆ ಶಾಸಕ ದರ್ಶನ್ ಸೂಚನೆ



ಭತ್ತದ ಬಿತ್ತನೆ ಬೀಜ ವಿತರಣೆಗೆ ಶಾಸಕ ದರ್ಶನ್ ಚಾಲನೆ ನೀಡಿದರು.

ನಂಜನಗೂಡು, ಜು.22– ಮುಂಗಾರು ಹಂಗಾಮಿನಲ್ಲಿ ಉತ್ತಮ ಮಳೆಯಾಗಿರುವುದರಿಂದ ರೈತರಿಗೆ ಬಿತ್ತನೆ ಭತ್ತ, ಬಿತ್ತನೆ ಬೀಜ, ರಸಗೊಬ್ಬರ ಕೊರತೆಯಾಗದಂತೆ ಕೃಷಿ ಅಧಿಕಾರಿಗಳಿಗೆ ಕ್ರಮ ವಹಿಸ ಬೇಕು ಎಂದು ಶಾಸಕ ದರ್ಶನ್ ಸೂಚಿಸಿದರು.

ನಗರದ ಟಿಎಪಿಸಿಎಂಎಸ್ ಆವರಣದಲ್ಲಿ ರೈತರಿಗೆ ಭತ್ತದ ಬಿತ್ತನೆ ಬೀಜ ವಿತರಣೆಗೆ ಚಾಲನೆ ನೀಡಿ ಮಾತನಾಡಿದ ಅವರು, ಸಾಮಾನ್ಯ ರೈತರಿಗೆ ಶೇ.50, ಎಸ್ಸಿ, ಎಸ್ಟಿ ಶೇ.75ರಷ್ಟು ಸಹಾಯಧನದ ಯೋಜನೆಯಲ್ಲಿ ಗರಿಷ್ಠ 5 ಎಕರೆವರೆಗೆ ಭತ್ತದ ಬಿತ್ತನೆ ಬೀಜ ವಿತರಣೆ ಮಾಡಲಾಗುತ್ತದೆ. ರೈತರು ನಿಮ್ಮ ಆಧಾರ್ ಕಾರ್ಡ್, ಆರ್‌ಟಿಸಿ ನೀಡಿ ಪಡೆಯಬಹುದಾಗಿದ್ದು, ರೈತರು ಇದರ ಸದುಪಯೋಗ ಪಡೆದುಕೊಂಡು ಉತ್ತಮ ಬೆಳೆ ಬೆಳೆಯುವಂತಾಗಲಿ ಎಂದರು.

ಕೃಷಿ ಸಹಾಯಕ ನಿರ್ದೇಶಕ ರವಿ ಮಾತನಾಡಿ, ಜ್ಯೋತಿ, ಐಆರ್ ಎಂಟಿಯು 1001, ಎಂಟಿಯು 1010, ಆರ್.ಎನ್.ಆರ್ 15048 ತಳಿಯ ಭತ್ತಗಳ ಬಿತ್ತನೆ ಬೀಜಗಳನ್ನು ವಿತರಿಸಲಾಗುತ್ತಿದೆ. ನಗರದ ಟಿಎಪಿಸಿಎಂಎಸ್, ಹುಲ್ಲಹಳ್ಳಿ ರೈತ ಸಂಪರ್ಕ ಕೇಂದ್ರ, ಬಿಳಿಗೆರೆ ರೈತ ಸಂಪರ್ಕ ಕೇಂದ್ರ ಹಾಗೂ ನಗರ್ಲೆ ಪಿಎಸಿಎಸ್, ಚಿಕ್ಕಯ್ಯನ ಛತ್ರ ಹೋಬಳಿಯಲ್ಲಿ ಹದಿನಾರು, ಹೊಸಕೋಟೆ, ತಾಂಡವಪುರ, ಏಚಗಳ್ಳಿಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಕೇಂದ್ರಗಳಲ್ಲಿ ಬಿತ್ತನೆ ಬೀಜವನ್ನು ವಿತರಿಸಲಾಗುತ್ತಿದೆ. ತಾಲೂಕಿನಾದ್ಯಂತ 1800 ಕ್ವಿಂಟಾಲ್ ಭತ್ತದ ಬಿತ್ತನೆ ಬೀಜ ದಾಸ್ತಾನಿದ್ದು ರೈತರಿಗೆ ಬಿತ್ತನೆ ಬೀಜಕ್ಕೆ ಯಾವುದೇ ಕೊರತೆ ಉಂಟಾಗುವುದಿಲ್ಲ. ರೈತರ ಬೇಡಿಕೆಗೆ ಅನುಗುಣವಾಗಿ ವಿತರಣೆ ಮಾಡಲಾಗುವುದು ಎಂದರು.


ಈ ವೇಳೆ ಮಾಜಿ ಶಾಸಕ ಕೇಶವ ಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿ.ಎಂ.ಶಂಕರ್, ಜಿಪಂ ಮಾಜಿ ಸದಸ್ಯ ಕೆ.ಮಾರುತಿ, ಟಿಎಪಿಸಿಎಂಎಸ್ ಉಪಾಧ್ಯಕ್ಷ ರಾಜು, ನಿರ್ದೇಶಕ ಮಂಜುನಾಥ್, ವಿಜಯ್ ಕುಮಾರ್, ಮುಖಂಡರಾದ ಹುಲ್ಲಹಳ್ಳಿ ಬಸವರಾಜು, ಮುರುಳಿ ಇತರರಿದ್ದರು.

ಹುಲ್ಲಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಸರಣಿ ಕಳ್ಳತನ

ನಂಜನಗೂಡು, ಜು.22– ತಾಲೂಕಿನ ಹುಲ್ಲಹಳ್ಳಿ ಕೃಷಿ ಇಲಾಖೆ ರೈತ ಸಂಪರ್ಕ ಕೇಂದ್ರ ಮತ್ತು ಪ್ರಥಮ ದರ್ಜೆ ಕಾಲೇಜಿನ ಬೀಗ ಮುರಿದು ಸರಣಿ ಕಳ್ಳತನ ನಡೆಸಿ ಲಕ್ಷಾಂತರ ರೂ. ಬೆಲೆ ಬಾಳುವ ಯುಪಿಎಸ್ ಬ್ಯಾಟರಿ ಮತ್ತು ನಗದನ್ನು ದೋಚಿ ಪರಾರಿಯಾಗಿರುವ ಘಟನೆ ಭಾನುವಾರ ರಾತ್ರಿ ನಡೆದಿದೆ.

ಹುಲ್ಲಹಳ್ಳಿ ಪ್ರಥಮ ದರ್ಜೆ ಕಾಲೇಜಿನಲ್ಲಿ 98 ಸಾವಿರ ಮೌಲ್ಯದ 5 ಕೆವಿ ಸಾಮರ್ಥ್ಯದ 9 ಬ್ಯಾಟರಿ, 20 ಸಾವಿರ ಮೌಲ್ಯದ ಒಂದು ಡಿವಿಆರ್, 4 ಸಾವಿರ ಮೌಲ್ಯದ ಸ್ವಿಚ್ ಪೋರ್ಟ್, 15 ಸಾವಿರ ಮೌಲ್ಯದ 1 ಕೆವಿ ಯುಪಿಎಸ್ ಬ್ಯಾಟರಿ ಸೇರಿದಂತೆ ಒಟ್ಟು 1 ಲಕ್ಷ 37 ಸಾವಿರ ಮೌಲ್ಯದ ಪದಾರ್ಥಗಳನ್ನು ಕದ್ದು ಪರಾರಿಯಾಗಿದ್ದಾರೆ ಎಂದು ಕಾಲೇಜಿನ ಪ್ರಾಂಶುಪಾಲ ಬಿ.ಎಂ.ನಾಗರಾಜು ಹುಲ್ಲಳ್ಳಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಕೃಷಿ ಇಲಾಖೆ ರೈತ ಸಂಪರ್ಕ ಕೇಂದ್ರದ ಬೀಗ ಮುರಿದು 15 ಸಾವಿರ ಮೌಲ್ಯದ ಒಂದು ಗೇಟ್ ವೇ ಲ್ಯಾಪ್‌ಟಾಪ್, 5 ಸಾವಿರ ಮೌಲ್ಯದ ನೀರೆತ್ತುವ ಸ್ಟಾರ್ಟರ್, 36 ಸಾವಿರ ಮೌಲ್ಯದ ಒಂದು ಕೆವಿ ಯುಪಿಎಸ್‌ನ 12 ಬ್ಯಾಟರಿಗಳು ಹಾಗೂ 12 ಸಾವಿರ ಮೌಲ್ಯದ ಎಕ್ಸೈಡ್ ಯುಪಿಎಸ್ ಬ್ಯಾಟರಿ ಹಾಗೂ 5500 ರೂ ಒಟ್ಟು 74 ಮೌಲ್ಯದ ವಸ್ತುಗಳನ್ನು ದೋಚಿ ಪರಾರಿಯಾಗಿದ್ದಾರೆ. ಸೋಮವಾರ ಹುಲ್ಲಹಳ್ಳಿ ಕೃಷಿ ರೈತ ಸಂಪರ್ಕ ಕೇಂದ್ರದ ಅಧಿಕಾರಿ ವಿರೂಪಾಕ್ಷ ಬೆಳಗ್ಗೆ ಕೆಲಸಕ್ಕೆ ಬಂದ ವೇಳೆ ಪ್ರಕರಣ ಬೆಳಕಿಗೆ ಬಂದಿದೆ. ಮತ್ತೊಂದು ಪ್ರಕರಣದಲ್ಲಿ ತಾಲೂಕಿನ ಕಣೇನೂರು ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಎರಡು ಇಂಡಿಯನ್ ಕಂಪನಿಯ ಸಿಲಿಂಡರ್‌ಗಳು, ಐದು ಕೆಜಿ ಸಕ್ಕರೆ, 5 ಕೆಜಿ ಹಾಲಿನ ಪೌಡರ್ ಅನ್ನು ಕದ್ದು ಪರಾರಿಯಾಗಿದ್ದಾರೆ. ಈ ಸಂಬಂಧ ಹುಲ್ಲಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರತ್ಯೇಕ ಪ್ರಕರಣಗಳು ದಾಖಲಾಗಿವೆ.

ಮನೆ ಕಳೆದುಕೊಂಡ ಸಂತ್ರಸ್ತರಿಗೆ ಸಾಂತ್ವನ



ಸರಗೂರಲ್ಲಿ ಮನೆ ಕಳೆದುಕೊಂಡ ಸಂತ್ರಸ್ತರಿಗೆ ಚಂದನ್‌ಗೌಡ ಸಾಂತ್ವನ ಹೇಳಿದರು.

ಸರಗೂರು, ಜು.22– ಇತ್ತೀಚೆಗೆ ಭಾರಿ ಮಳೆಯಿಂದ ಮನೆ ಕಳೆದುಕೊಂಡ ತಾಲೂಕಿನ ಬೋರೆದೇವರಮಂಟಿ ಗ್ರಾಮದ ಸಂತ್ರಸ್ತರಿಗೆ ರೈತ ಕಲ್ಯಾಣ ರಾಜ್ಯಾಧ್ಯಕ್ಷ ಭೂಮಿಪುತ್ರ ಚಂದನ್‌ಗೌಡ ಸಾಂತ್ವನ ಹೇಳಿದರು.

ಗ್ರಾಮಕ್ಕೆ ಭೇಟಿ ನೀಡಿ ಮಳೆಯಿಂದ ಮನೆ ಕುಸಿತಕ್ಕೊಳಗಾದ ಸಂತ್ರಸ್ತರಿಗೆ ಸಾಂತ್ವನ ಹೇಳಿ ತಹಸೀಲ್ದಾರ್‌ಗೆ ಕರೆ ಮಾಡಿ ಮಾತನಾಡಿದ ಅವರು, ಕೂಡಲೇ ರಾಜ್ಯ ವಿಪತ್ತು ಪರಿಹಾರ ನಿಧಿಯಿಂದ ಮನೆ ಕಳೆದುಕೊಂಡ ಸಂತ್ರಸ್ತರಿಗೆ ಪರಿಹಾರ ಒದಗಿಸಬೇಕೆಂದು ಮನವಿ ಮಾಡಿದರು. ಇದಕ್ಕೆ ಸ್ಪಂದಿಸಿದ ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ಪರಿಹಾರ ನೀಡುವ ಬಗ್ಗೆ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಈ ವೇಳೆ ರೈತ ಕಲ್ಯಾಣ ರಾಜ್ಯ, ಜಿಲ್ಲಾ, ತಾಲೂಕು ಹಾಗೂ ಗ್ರಾಮ ಘಟಕದ ಸರಗೂರು ಹಾಗೂ ಹೆಚ್.ಡಿ. ಕೋಟೆ ತಾಲೂಕಿನ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಮೆರಿಟ್ ಆಧಾರದಲ್ಲಿ ವಿವಿಧ ವೃತ್ತಿ ಕೋರ್ಸ್‌ಗಳಿಗೆ ಪ್ರವೇಶ

ಮೈಸೂರು, ಜು.22– ಎನ್.ಆರ್. ಮೊಹಲ್ಲಾದಲ್ಲಿರುವ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಖಾಲಿ ಇರುವ ವಿವಿಧ ವೃತ್ತಿಗಳ 203 ಸ್ಥಾನಗಳಿಗೆ 8ನೇ ತರಗತಿ ಪಾಸಾದ (ವೆಲ್ಡರ್ ವೃತ್ತಿಗೆ ಮಾತ್ರ) ಹಾಗೂ ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾದ ಅಭ್ಯರ್ಥಿ ಗಳಿಗೆ ಮೆರಿಟ್ ಆಧಾರದಲ್ಲಿ ಪ್ರಾಚಾರ್ಯರ ಹಂತದಲ್ಲಿಯೇ ಪ್ರವೇಶ ನಡೆಯಲಿದೆ. ಆಸಕ್ತ ಅಭ್ಯರ್ಥಿಗಳು ಐಟಿಐಗೆ ತಮ್ಮ ಮೂಲದಾಖಲಾತಿಗಳೊಡನೆ ನೇರವಾಗಿ ಭೇಟಿ ನೀಡಿ ಪ್ರವೇಶ ಪಡೆಯಬಹುದಾಗಿದೆ. ಮಾಹಿತಿಗಾಗಿ ಎನ್.ಆರ್.ಮೊಹಲ್ಲಾದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ದೂ.ಸಂ:0821–2498456 ನ್ನು ಸಂಪರ್ಕಿಸಬಹುದು ಎಂದು ಎನ್.ಆರ್. ಮೊಹಲ್ಲಾದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದಲಿತರಿಗೆ ನಿವೇಶನ ಹಂಚದಿದ್ದರೆ ಸಿಎಂ ನಿವಾಸದ ಎದುರು ಧರಣಿ: ಎಚ್ಚರಿಕೆ



ವಿಧಾನಪರಿಷತ್ ಮಾಜಿ ಸದಸ್ಯ ಸಿ.ರಮೇಶ್ ಮಾತನಾಡಿದರು.

ತಿ.ನರಸೀಪುರ, ಜು.22– ಬಾಬು ಜಗಜೀವನ್ ರಾಂ ಸಮುದಾಯ ಭವನದ ಹಿಂಭಾಗದ ನಿವೇಶನವನ್ನು ಸರ್ಕಾರ ಗೋಪಾಲಪುರ ಬಡಾವಣೆ ದಲಿತರಿಗೆ ಹಂಚಿಕೆ ಮಾಡದಿದ್ದರೆ ಮುಖ್ಯಮಂತ್ರಿಗಳ ನಿವಾಸದ ಮುಂದೆ ಪ್ರತಿಭಟನಾ ಧರಣಿ ನಡೆಸುವುದಾಗಿ ವಿಧಾನಪರಿಷತ್ ಮಾಜಿ ಸದಸ್ಯ ಸಿ.ರಮೇಶ್ ಎಚ್ಚರಿಕೆ ನೀಡಿದರು.

ಪಟ್ಟಣದ ಗೋಪಾಲಪುರದಲ್ಲಿ ಹಂಚಿಕೆಯಾಗದಿರುವ ನಿವೇಶನದಲ್ಲಿ ನಿವಾಸಿಗಳೊಂದಿಗೆ ಮಾತನಾಡಿದ ಅವರು, ನಿವೇಶನಕ್ಕಾಗಿ ಆರೇಳು ದಶಕಗಳಿಂದ ಜಾತಕ ಪಕ್ಷಿಯಂತೆ ಕಾಯುತ್ತಿರುವ ಮಾದಿಗ ಸಮುದಾಯಕ್ಕೆ ನಿವೇಶನ ಹಂಚಿಕೆ ಮಾಡದಿರುವುದು ಆಡಳಿತ ನಡೆಸಿದ ಸರ್ಕಾರ ಮತ್ತು ಜನಪ್ರತಿನಿಧಿಗಳ ಮಹಾ ಪಾಪದ ಕೃತ್ಯವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸರ್ಕಾರಕ್ಕೆ ಗೋಪಾಲಪುರ ಬಡಾವಣೆ ನಿವಾಸಿಗಳು ನಾಗರಿಕರಲ್ಲವ, ರಾಜ್ಯದ ಪ್ರಜೆಗಳಲ್ಲವ ಎಂದು ಪ್ರಶ್ನಿಸಿದರಲ್ಲದೆ ತಮಗಾಗಿ ಮೀಸಲಿರುವ ನಿವೇಶನ ಪಡೆಯೋಕೆ ಇನ್ನೆಷ್ಟು ವರ್ಷಗಳು ಕಾಯಬೇಕು. ನಮ್ಮ ತಾಳ್ಮೆಗೂ ಇತಿಮಿತಿ ಇದೆಯಲ್ಲವೇ. ಹಾಗಾಗಿ ಸಿಎಂ ಮನೆ ಎದುರು ನಿವೇಶನಕ್ಕಾಗಿ ಧರಣಿ ಕುಳಿತುಕೊಳ್ಳುತ್ತೇವೆ. ಅದಕ್ಕೂ ಸ್ಪಂದಿಸದಿದ್ದರೆ ಬೇಡಿಕೆ ಈಡೇರುವವರೆಗೂ ಉಪವಾಸ ಸತ್ಯಾಗ್ರಹ ಆರಂಭಿಸುತ್ತೇವೆ. ಯಾವುದೇ ಕಾರಣಕ್ಕೂ ಹೋರಾಟದಿಂದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ ಎಂದು ಸ್ಪಷ್ಟಪಡಿಸಿದರು.

ಈ ವೇಳೆ ಜೈರಾಮ್, ನರಸಿಂಹ ಮೂರ್ತಿ, ಮಲ್ಲೇಶ್, ರಾಜಪ್ಪ, ನಾಗಣ್ಣ, ಶ್ರೀಧರ್, ರಾಜೀವ್, ಚಿಕ್ಕ ರಾಜ, ಶ್ರೀನಿವಾಸ್, ಶಿವಪ್ರಸಾದು, ವಿಶ್ವ, ಸಂದೀಪ್, ಮನು, ನಿತಿನ್, ಆನಂದ್, ಧನು, ಮನೋಜ್ ಮಹಿಳೆಯರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಶಿರಮಳ್ಳಿಯಲ್ಲಿ ಡೆಂಗ್ಯೂ ಜಾಗೃತಿ ಜಾಥಾ



ಶಿರಮಳ್ಳಿಯಲ್ಲಿ ಡೆಂಗ್ಯೂ ಜಾಗೃತಿ ಜಾಥಾ ನಡೆಯಿತು.

ಹೆಚ್.ಡಿ.ಕೋಟೆ, ಜು.22– ರೋಟರಿ ಕ್ಲಬ್ ಹೆಚ್.ಡಿ.ಕೋಟೆ, ಶಿರಮಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ತಾಲೂಕು ಆರೋಗ್ಯ ಇಲಾಖೆ ವತಿಯಿಂದ ಶಿರಮಳ್ಳಿ ಗ್ರಾಮದಲ್ಲಿ ಡೆಂಗ್ಯೂ ಜಾಗೃತಿ ಜಾಥಾ ನಡೆಯಿತು. ರೋಟರಿ ಕ್ಲಬ್ ಅಧ್ಯಕ್ಷ ನಿರಂಜನ್ ಮಾತನಾಡಿ, ಡೆಂಗ್ಯೂ ಜ್ವರ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಮುಂಜಾಗ್ರತೆ ವಹಿಸುವಂತೆ ಶಿರಮಳ್ಳಿ ಗ್ರಾಮದ ಜನರಿಗೆ ಅರಿವು ಮೂಡಿಸಲು ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿದೆ ಎಂದರು.

ಗ್ರಾಮದ ಪ್ರತಿಯೊಬ್ಬರೂ ನಿಮ್ಮ ಮನೆ ಬಳಿ ಹಾಗೂ ಗ್ರಾಮದಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ಅಲ್ಲದೆ ನಿಮ್ಮ ಮನೆ ಸುತ್ತ ಹಾಗೂ ಶಾಲೆ ಆವರಣದಲ್ಲಿ ಸ್ವಚ್ಛತೆ ಕಾಪಾಡಿಕೊಳ್ಳಬೇಕು ಎಂದರು.

ಇದೆ ವೇಳೆ ಶಾಲಾ ಮಕ್ಕಳು ಜಾಥಾ ಮೂಲಕ ಡೆಂಗ್ಯೂ ಬಗ್ಗೆ ಅರಿವು ಮೂಡಿಸಿದರು. ರೋಟರಿ ಕ್ಲಬ್ ಕಾರ್ಯದರ್ಶಿ ಬಿ.ಎನ್. ಶಿವಣ್ಣ, ಶಾಲೆಯ ಮುಖ್ಯೋಪಾಧ್ಯಾಯ ಪುಟ್ಟರಾಜು, ಚಿಕ್ಕದೇವಯ್ಯ, ಶ್ರೀದೇವಿ, ಗೌರಮ್ಮ, ಬೀರೇಗೌಡ, ಈರೇಗೌಡ ಇತರರಿದ್ದರು.

ಕಾಂತರಾಜು ಹೆಗ್ಗಡಹಳ್ಳಿ ಗ್ರಾಪಂ ನೂತನ ಅಧ್ಯಕ್ಷ



ಹೆಗ್ಗಡಹಳ್ಳಿ ಗ್ರಾಪಂ ಅಧ್ಯಕ್ಷರಾಗಿ ಕಾಂತರಾಜು ಆಯ್ಕೆಯಾದರು.

ನಂಜನಗೂಡು/ಮಲ್ಲುಂಡಿ, ಜು.22– ತಾಲೂಕಿನ ಹೆಗ್ಗಡಹಳ್ಳಿ ಗ್ರಾಪಂ ನೂತನ ಅಧ್ಯಕ್ಷರಾಗಿ ಬಿಜೆಪಿ ಬೆಂಬಲಿತ ಹರತಲೆ ಕಾಂತರಾಜು ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ.

19 ಸದಸ್ಯ ಬಲದ ಹೆಗ್ಗಡಹಳ್ಳಿ ಗ್ರಾಪಂ ಅಧ್ಯಕ್ಷ ಸ್ಥಾನ ಸಾಮಾನ್ಯ ವರ್ಗಕ್ಕೆ ಮೀಸಲಾಗಿತ್ತು. ಆಂತರಿಕ ಒಪ್ಪಂದದಂತೆ ಈ ಹಿಂದಿನ ಅಧ್ಯಕ್ಷ ಮನೋಜ್ ಅವರ ರಾಜೀನಾಮೆಯಿಂದ ತೆರವಾದ ಸ್ಥಾನಕ್ಕೆ ಗ್ರಾಪಂ ಆವರಣದಲ್ಲಿ ಸೋಮವಾರ ಚುನಾವಣೆ ನಡೆಯಿತು. ಬಿಜೆಪಿ ಬೆಂಬಲಿತ ಅಭ್ಯರ್ಥಿಯಾಗಿ ಕಾಂತರಾಜು, ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಯಾಗಿ ಬಸವರಾಜು ನಾಮಪತ್ರ ಸಲ್ಲಿಸಿದರು. ನಂತರ ನಡೆದ ಚುನಾವಣೆಯಲ್ಲಿ ಕಾಂತರಾಜು 10 ಮತಗಳನ್ನು ಪಡೆದು ಅಧ್ಯಕ್ಷರಾಗಿ ಆಯ್ಕೆಯಾದರೇ, ಬಸವರಾಜು 8 ಮತಗಳನ್ನು ಪಡೆದು ಪರಾಭವಗೊಂಡರು. ಚುನಾವಣಾಧಿಕಾರಿ ತೋಟಗಾರಿಕಾ ಇಲಾಖೆ ಸಹಾಯಕ ನಿರ್ದೇಶಕ ಚಂದ್ರು ನೂತನ ಅಧ್ಯಕ್ಷರ ಆಯ್ಕೆಯನ್ನು ಘೋಷಿಸಿದರು. ಈ ವೇಳೆ ಬಿಜೆಪಿ ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚಿ, ಜೈಕಾರ ಕೂಗಿ ಹರ್ಷ ವ್ಯಕ್ತಪಡಿಸಿದರು.

ಜಿಪಂ ಮಾಜಿ ಸದಸ್ಯ ಸಿ.ಚಿಕ್ಕರಂಗನಾಯಕ ಮಾತನಾಡಿ, ಹೆಗ್ಗಡಹಳ್ಳಿ ಗ್ರಾಪಂನಲ್ಲಿ ಕಳೆದ 30 ವರ್ಷಗಳಿಂದ ಎಲ್ಲಾ ವರ್ಗಕ್ಕೂ ಅಧಿಕಾರ ಸಿಗುವಂತೆ ಸದಸ್ಯರು ಒಪ್ಪಂದ ಮಾಡಿಕೊಂಡು ಸಾಮರಸ್ಯ ಮೆರೆಯುತ್ತಿದ್ದಾರೆ. ಈ ಬಾರಿಯೂ ಸಹ ಅಧ್ಯಕ್ಷ ಸ್ಥಾನ ಸಾಮಾನ್ಯ ವರ್ಗಕ್ಕೆ ಮೀಸಲಾಗಿತ್ತು. ಮೊದಲ ಅವಧಿಗೆ ಲಿಂಗಾಯತ ಸಮುದಾಯದ ಮನೋಜ್ ಅಧ್ಯಕ್ಷರಾಗಿದ್ದರು. 2ನೇ ಅವಧಿಗೆ ಸಣ್ಣ ಸಮುದಾಯವಾದ ಬಣಜಿಗ ಸಮುದಾಯದ ಕಾಂತರಾಜು ಅವರನ್ನು ಅಧ್ಯಕ್ಷರನ್ನಾಗಿ ಆಯ್ಕೆಗೊಳಿಸಿ ಸಾಮಾಜಿಕ ನ್ಯಾಯ ಒದಗಿಸಲಾಗಿದೆ. ಅವರ ಆಯ್ಕೆಗೆ ಸಹಕರಿಸಿದ ಗ್ರಾಪಂ ಎಲ್ಲಾ ಸದಸ್ಯರಿಗೂ, ಮುಖ್ಯವಾಗಿ ಮಾಜಿ ಶಾಸಕ ಬಿ.ಹರ್ಷವರ್ಧನ್ ಅವರಿಗೂ ಧನ್ಯವಾದ ಅರ್ಪಿಸುತ್ತೇನೆ. ಇದೇ ರೀತಿ ಸಾಮರಸ್ಯದಿಂದ ಸದಸ್ಯರು ಒಂದಾಗಿ ಅಭಿವೃದ್ಧಿ ಕೆಲಸ ಮಾಡುವ ಮೂಲಕ ಗ್ರಾಪಂ ಉನ್ನತಿಗಾಗಿ ಶ್ರಮಿಸಿ ಎಂದು ಶುಭ ಹಾರೈಸಿದರು.

ನೂತನ ಅಧ್ಯಕ್ಷ ಕಾಂತರಾಜು ಮಾತನಾಡಿ, ಸಣ್ಣ ಸಮುದಾಯದವರಿಗೆ ರಾಜಕೀಯ ಅಧಿಕಾರ ಸಿಗುವುದು ಕಡಿಮೆ. ಆದರೆ ಸಣ್ಣ ಸಮುದಾಯದ ನನ್ನನ್ನು 3 ಬಾರಿ ಗೆಲ್ಲಿಸುವುದರೊಂದಿಗೆ ಅಧ್ಯಕ್ಷ ಸ್ಥಾನಕ್ಕೆ ಆಯ್ಕೆಗೊಳಿಸುವ ಮೂಲಕ ಸಾಮಾಜಿಕ ನ್ಯಾಯ ಒದಗಿಸಲು ಶ್ರಮಿಸಿದ ಮಾಜಿ ಶಾಸಕ ಬಿ.ಹರ್ಷವರ್ಧನ್, ಹಾಗೂ ಜಿಪಂ ಮಾಜಿ ಸದಸ್ಯ ಸಿ.ಚಿಕ್ಕರಂಗನಾಯಕ ಅವರಿಗೆ ಕೃತಜ್ಞತೆ ಸಲ್ಲಿಸುತ್ತೇನೆ. ಅದೇ ರೀತಿ ಗ್ರಾಪಂ ಎಲ್ಲಾ ಸದಸ್ಯರಿಗೂ ಕೃತಜ್ಞನಾಗಿದ್ದೇನೆ. ಎಲ್ಲರ ಸಹಕಾರ ಪಡೆದು ಸರ್ಕಾರದ ಅನುದಾನ ಸದ್ಬಳಕೆ ಮಾಡಿಕೊಂಡು ಗ್ರಾಪಂ ವ್ಯಾಪ್ತಿಯ ಗ್ರಾಮಗಳನ್ನು ಅಭಿವೃದ್ಧಿ ಪಡಿಸಿ ಗ್ರಾಮ ಸ್ವರಾಜ್ಯದ ಕನಸನ್ನು ನನಸು ಮಾಡಲು ಶ್ರಮಿಸುತ್ತೇನೆ ಎಂದರು.

ಇದೇ ವೇಳೆ ಗ್ರಾಪಂ ಮಾಜಿ ಅಧ್ಯಕ್ಷ ಮನೋಜ್, ಸದಸ್ಯರಾದ ಗೋವಿಂದ ರಾಜು, ನಾಗರಾಜು, ಮಹಾಲಕ್ಷ್ಮಿ, ಸವಿತಾ, ರತ್ನಮ್ಮ, ದೊಡ್ಡತಾಯಮ್ಮ, ಎನ್.ಎಂ. ಮಂಜುನಾಥ್, ರಾಣಿ, ಪ್ರಕಾಶ್, ಪಿಡಿಓ ನಾಗರಾಜು, ತಾಪಂ ಮಾಜಿ ಸದಸ್ಯ ಬಸವರಾಜು, ಮುಖಂಡರಾದ ದೊಡ್ಡಂಕಶೆಟ್ಟಿ, ವೆಂಕಟೇಶ್, ಶಿವಬಸಪ್ಪ, ಮರಿಗಂಡ ನಾಯಕ, ಚಿಕ್ಕಣ್ಣ ಸೇರಿದಂತೆ ಇತರರಿದ್ದರು.

ಯಾಚೇನಹಳ್ಳಿ ಪಿಎಸಿಎಸ್‌ನಲ್ಲಿ ಬಿತ್ತನೆ ಬೀಜ ವಿತರಣೆಗೆ ಚಾಲನೆ



ಯಾಚೇನಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಆವರಣದಲ್ಲಿ ವೈ.ಎನ್.ಶಂಕರೇಗೌಡ ರೈತರಿಗೆ ಬಿತ್ತನೆ ಬೀಜ ವಿತರಿಸಿದರು.

ಬನ್ನೂರು, ಜು.22– ಸಮೀಪದ ಯಾಚೇನಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಆವರಣದಲ್ಲಿ ಸೋಮವಾರ ರೈತರಿಗೆ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ವಿತರಿಸುವ ಕಾರ್ಯಕ್ಕೆ ಸಂಘದ ಅಧ್ಯಕ್ಷ ವೈ.ಎನ್.ಶಂಕರೇಗೌಡ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಕಳೆದ 20 ದಿನಗಳಿಂದ ವ್ಯಾಪಕ ಮಳೆಯಾಗುತ್ತಿದ್ದು, ರೈತರು ಬಿತ್ತನೆ ಕಾರ್ಯದತ್ತ ಮುಖ ಮಾಡಿದ್ದಾರೆ. ರೈತರಿಗೆ ಸಕಾಲದಲ್ಲಿ ಬಿತ್ತನೆ ಬೀಜ ಒದಗಿಸಿದರೆ ಉತ್ತಮ ಬೆಳೆ ಬೆಳೆಯಲು ಅನುಕೂಲವಾಗುತ್ತದೆ. ಹೀಗಾಗಿ ಕೃಷಿ ಇಲಾಖೆ ಸಹಕಾರದೊಂದಿಗೆ ಬಿತ್ತನೆ ಬೀಜ ವಿತರಿಸಲಾಗುತ್ತಿದೆ ಎಂದರು.

ಜ್ಯೋತಿ, ಐಆರ್ 64, ಎಂಟಿಯು 1001 ತಳಿ ಭತ್ತದ ಬಿತ್ತನೆ ಬೀಜ ವಿತರಿಸಲಾಗುತ್ತಿದ್ದು, ರೈತರು ಇದರ ಸದುಪಯೋಗಪಡೆಯಬೇಕು. ಅಲ್ಲದೇ ಉತ್ತಮ ಮಳೆಯಿಂದಾಗಿ ರಾಜ್ಯದ ಆಲಮಟ್ಟಿ, ನಾರಾಯಣಪುರ, ಲಿಂಗನಮಕ್ಕಿ, ಕೆಆರ್‌ಎಸ್ ಸೇರಿದಂತೆ ಬಹುತೇಕ ಅಣೆಕಟ್ಟು ಭರ್ತಿಯಾಗುತ್ತಿದ್ದು, ವರ್ಷವಿಡೀ ಈ ಬಾರಿ ನೀರು ದೊರೆಯುವ ವಿಶ್ವಾಸ ವ್ಯಕ್ತಪಡಿಸಿದ ಅವರು ಇದರಿಂದ ಕೃಷಿಯ ಜಿಡಿಪಿಯು ಹೆಚ್ಚಲಿದೆ. ರೈತರ ಅಭಿವೃದ್ಧಿಗಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರ ವಿವಿಧ ಯೋಜನೆಗಳನ್ನು ಜಾರಿಗೊಳಿಸುತ್ತಿದ್ದು ಅವುಗಳನ್ನು ರೈತರು ಸದುಪಯೋಗ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕೃಷಿ ಪತ್ತಿನ ಸಹಕಾರ ಸಂಘದ ಉಪಾಧ್ಯಕ್ಷ ವೈ.ಎಂ.ಚಂದ್ರು, ವೈ.ಕೆ.ಬೋರೇಗೌಡ, ವೈ.ಜಿ.ಮಹೇಂದ್ರ, ವೈ.ಎಂ.ಮಲ್ಲೇಶ್, ವೈ.ಎಸ್.ಶಿವ ಕುಮಾರ್, ವೈ.ಎಸ್.ಶೇಖರ್, ಎನ್.ಎಸ್. ಶೇಖರ್, ವೈ.ಎಲ್.ಸಣ್ಣಮರೀಗೌಡ, ವೈ.ಎಸ್. ರಾಘವೇಂದ್ರ, ವೈ.ಕೆ.ಪುಟ್ಟಪ್ಪ, ನಂಜುಂಡೇಗೌಡ, ತಮ್ಮಯ್ಯ, ಸಿದ್ದೇಗೌಡ, ಕಾರ್ಯ ನಿರ್ವಹಣಾಧಿಕಾರಿ ವೈ.ಕೆ.ಕ್ಯಾತೇಗೌಡ, ಯೋಗೇಶ್ ಸೇರಿದಂತೆ ಗ್ರಾಮಸ್ಥರು, ಮುಖಂಡರು ಇದ್ದರು.

ಸುರೇಶ್ ನಿಧನ



ತಿ.ನರಸೀಪುರ, ಜು.22– ತಾಲೂಕಿನ ಸೋಮನಾಥಪುರ ಗ್ರಾಪಂ ಮಾಜಿ ಉಪಾಧ್ಯಕ್ಷ ಹಾಗೂ ಜೆಡಿಎಸ್ ಮುಖಂಡ ಸುರೇಶ್(58) ಸೋಮವಾರ ಸಂಜೆ ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಜು.23ರಂದು ಮಧ್ಯಾಹ್ನ 3 ಗಂಟೆಗೆ ಸ್ವಗ್ರಾಮ ಸೋಮನಾಥಪುರದಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ಮೃತರ ನಿಧನಕ್ಕೆ ಮಾಜಿ ಶಾಸಕ ಎಂ.ಅಶ್ವಿನ್ ಕುಮಾರ್, ಪಿಕಾರ್ಡ್ ಬ್ಯಾಂಕ್ ಮಾಜಿ ಅಧ್ಯಕ್ಷ ಕೆ.ವಜ್ರೇಗೌಡ, ಪ್ರಥಮ ದರ್ಜೆ ಗುತ್ತಿಗೆದಾರ ಕೆ.ಎಂ.ಮಧುಕುಮಾರ್ ಸಂತಾಪ ಸೂಚಿಸಿದ್ದಾರೆ.

ಮೈಸೂರು ಮಿತ್ರ ಮಂಗಳವಾರ 23 ಜುಲೈ 2024

ಬೆರಗುಗೊಳಿಸಿದ ವಿಶೇಷಚೇತನ ಮಕ್ಕಳ ನೃತ್ಯ, ಪ್ರತಿಭೆ ಪ್ರದರ್ಶನ

ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದಿಂದ ವಿಶೇಷಚೇತನರಿಗೆ ವೇದಿಕೆ





ಮೈಸೂರಿನ ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದಲ್ಲಿ ಕಿರಿಯ ಶ್ರೀಗಳಾದ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿಯವರ 21ನೇ ಚಾತುರ್ಮಾಸ್ಯ ವ್ರತ ದೀಕ್ಷೆ ಪ್ರಯುಕ್ತ ವಿಶೇಷಚೇತನ ಮಕ್ಕಳಿಂದ ಅನಘಾ ವ್ರತ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ವಿಶೇಷಚೇತನ ಮಕ್ಕಳು ನೃತ್ಯ ಪ್ರದರ್ಶನ ನೀಡಿದರು. ಮತ್ತೊಂದು ಚಿತ್ರದಲ್ಲಿ ಬ್ಯಾಗ್ ಹಾಗೂ ಇನ್ನಿತರೆ ಪರಿಕರಗಳನ್ನು ಶ್ರೀಗಳು ವಿತರಿಸುತ್ತಿರುವುದನ್ನು ಕಾಣಬಹುದು.

ಮೈಸೂರು, ಜು.22(ಎಂಕೆ)– ಮೈಸೂರಿನ ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದಲ್ಲಿ ವಿಶೇಷಚೇತನ ಮಕ್ಕಳ ನೃತ್ಯ ಪ್ರದರ್ಶನ ನೋಡುಗರ ಮನಸೂರೆಗೊಂಡಿತು.

ಅವಧೂತ ದತ್ತಪೀಠದ ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿಯವರ 21ನೇ ಚಾತುರ್ಮಾಸ್ಯ ವ್ರತ ದೀಕ್ಷೆ ಪ್ರಯುಕ್ತ ಆಯೋಜಿಸಿದ್ದ ವಿಶೇಷಚೇತನ ಮಕ್ಕಳಿಂದ ಅನಘಾ ವ್ರತ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಕ್ತಿ ಹಾಗೂ ಜಾನಪದ ಗೀತೆಗಳಿಗೆ ಅಮೋಘವಾಗಿ ನೃತ್ಯ ಪ್ರದರ್ಶನ ನೀಡುವ ಮೂಲಕ ಅಪಾರ ಮೆಚ್ಚುಗೆ ಪಡೆದರು.

ಮೇಟಗಳ್ಳಿಯ ರಂಗರಾವ್ ಮೆಮೋರಿಯಲ್ ಶಾಲೆಯ ವಿಶೇಷಚೇತನ ಮಕ್ಕಳು ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ರಚಿಸಿರುವ ಹಲವು ಭಜನೆಗಳನ್ನು ಹಾಡುವ ಮೂಲಕ ಎಲ್ಲರ ಮನಸೂರೆಗೊಂಡರೆ, ಮಾತೃಮಂಡಳಿ ಶಾಲೆ ವಿದ್ಯಾರ್ಥಿಗಳು 'ಬೆಳ್ಳಿ ಮೂಡಿತೊ... ಕೋಳಿ ಕೂಗಿತೋ' ಹಾಡಿಗೆ ಆಕರ್ಷಕ ನೃತ್ಯಪ್ರದರ್ಶಿಸಿ ಸೈ ಎನಿಸಿಕೊಂಡರು. ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆಯ ಚಿರಂತನ್, 'ಭಗವದ್ಗೀತೆ ಶ್ಲೋಕ' ಹಾಗೂ 'ಕ್ಯಾಸಿನೊ' ನುಡಿಸಿ ಗಮನ ಸೆಳೆದರೆ, ಪುಟ್ಟವೀರಮ್ಮ ಶ್ರವಣ ದೋಷವುಳ್ಳ ಹೆಣ್ಣು ಮಕ್ಕಳ ಶಾಲೆ ಮಕ್ಕಳು 'ಕಟೀಲು ದುರ್ಗಾಪರಮೇಶ್ವರಿ' ನೃತ್ಯ ರೂಪಕ ಮಾಡಿ ನೆರೆದಿದ್ದವರ ಮನಸೂರೆಗೊಂಡರು.

ಉಚಿತ ವಸತಿ ಶಾಲೆ ಮಕ್ಕಳು 'ಶಿವ–ನಂದಿ' ನೃತ್ಯ ಮಾಡಿದರೆ, ಶ್ರೀ ಸಾಯಿ ಸಂಸ್ಥೆಯ ಮಕ್ಕಳು 'ವಾಲಿ–ಹನುಮನ್' ನೃತ್ಯ ಪ್ರದರ್ಶನ ನೀಡಿದರು. ಎಸ್‌ಜಿಎಸ್ ಶಾಲೆ ಮಕ್ಕಳು 'ರಾಧಾ ಕೃಷ್ಣ' ನೃತ್ಯ ಮಾಡಿದರೆ, ಕೆ.ಚಿದಾನಂದ ಎಂಬ ಬಾಲಕ ಸನ್ನೆ ಭಾಷೆಯ ಮೂಲಕ ಅನಘಾ ವ್ರತ ಕಥೆಯನ್ನು ಮನಮುಟ್ಟುವಂತೆ ತಿಳಿಸುವ ಮೂಲಕ ಎಲ್ಲರನ್ನೂ ಮಂತ್ರಮುಗ್ಧವಾಗಿಸಿತು.

ಆಶ್ರಮದ ಸ್ವಯಂಸೇವಕ ಸತೀಶ್ ಮತ್ತು ಪುಷ್ಪಲತಾ ಅವರ ವಿಶೇಷಚೇತನ ಪುತ್ರಿ ಅನಘಾ ಕನ್ನಡದಲ್ಲಿ ಎಂಎ ಪದವಿಯಲ್ಲಿ ಗೋಲ್ಡ್ ಮೆಡಲ್ ಪಡೆದಿದ್ದು, ಪಿಹೆಚ್.ಡಿ ಮಾಡುತ್ತಿರುವುದನ್ನು ಶ್ಲಾಘಿಸಲಾಯಿತು. ಚೆನ್ನೈನ ಡಾ.ಶಿವ ಎಂಬುವರು ಕನ್ನಡಕವನ್ನು ನೀಡುವ ಮೂಲಕ ಪ್ರೋತ್ಸಾಹಿಸಿದರು. ಬ್ಯಂಗೇಶ್ ಎಂಬ ಯುವಕ ಟ್ರೈನ್ ಆಕ್ಸಿಡೆಂಟ್‌ನಲ್ಲಿ ತನ್ನ ಎರಡೂ ಕೈಗಳು ಮತ್ತು ಒಂದು ಕಾಲು ಕಳೆದುಕೊಂಡಿದ್ದು, ಆಶ್ರಮದ ನೆರವಿನಿಂದ ನಡೆಯುತ್ತಿರುವ ಅನುಭವ ಹಂಚಿಕೊಂಡರು.

ಬಹಳ ಚೇತನವುಳ್ಳವರು: ವಿಶೇಷ ಚೇತನ ಮಕ್ಕಳ ನೃತ್ಯ ಪ್ರದರ್ಶನ ಹಾಗೂ ಅವರ ಸಾಧನೆಯನ್ನು ಶ್ಲಾಘಿಸಿದ ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿ, ವಿಶೇಷಚೇತನ ಮಕ್ಕಳೆಲ್ಲರೂ ಬಹಳ ಚೇತನವುಳ್ಳವರು. ಅವರಲ್ಲಿರುವ ಚೇತನ ಸಾಮಾನ್ಯ ಜನರಲ್ಲೂ ಇಲ್ಲವೆನ್ನಿಸುತ್ತಿದೆ. ಈ ಮಕ್ಕಳ ಜೀವನ ಸುಗಮವಾಗಿರಲಿ, ಗುರು ಕೃಪೆ ನಿಮ್ಮೆಲ್ಲರ ಮೇಲಿರಲಿ ಎಂದು ಮಕ್ಕಳಿಗೆ ಶುಭಹಾರೈಸಿದರು. ಸುಮಾರು 800ಕ್ಕೂ ಹೆಚ್ಚು ಮಕ್ಕಳಿಗೆ ಬ್ಯಾಗ್ ಹಾಗೂ ಇನ್ನಿತರ ಅಧ್ಯಯನ ಪರಿಕರಗಳನ್ನು ವಿತರಿಸಲಾಯಿತು. ತೆಲಂಗಾಣದ ಬಾನೂರಿನಲ್ಲಿರುವ ಅನಘದತ್ತ ಕೇಂದ್ರದ ಮಂಜುಳ ಹಾಗೂ ಟ್ರಸ್ಟಿ ಕಾಮೇಶ್ವರ್ ಉಪಸ್ಥಿತರಿದ್ದರು.

ಪ್ರವಚನ ಆರಂಭ ಸಂಜೆ ವೇಳೆ ಬ್ರಹ್ಮಾಂಡ ಪುರಾಣದ ಪ್ರವಚನ ಪ್ರಾರಂಭವಾಯಿತು. ಭಕ್ತರು ಆಶ್ರಮಕ್ಕೆ ಆಗಮಿಸಲು ನಗರದ ಪ್ರಮುಖ ಭಾಗಗಳಿಂದ ಉಚಿತ ಬಸ್ ವ್ಯವಸ್ಥೆ ಮಾಡಲಾಗಿದ್ದು, ಚಾತುರ್ಮಾಸ್ಯ ವ್ರತ ಮುಗಿಯುವವರೆಗೂ ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿಯವರಿಂದ ಪ್ರತಿನಿತ್ಯ ಸಂಜೆ ಪ್ರವಚನ ಇರಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಪ್ರವಾಹ ಪೀಡಿತ ಗ್ರಾಮಗಳಿಗೆ ಎಂಎಲ್‌ಸಿ ಡಾ.ಯತೀಂದ್ರ ಭೇಟಿ



ನಂಜನಗೂಡು ತಾಲೂಕಿನ ನೆರಪೀಡಿತರ ಕಾಳಜಿ ಕೇಂದ್ರಕ್ಕೆ ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ಭೇಟಿ ನೀಡಿ, ಪರಿಶೀಲಿಸಿದರು.

ಮೈಸೂರು, ಜು.22(ಎಂಟಿವೈ)– ನೆರೆಯಿಂದ ನಿರಾಶ್ರಿತರಾಗಿರುವ ಬೊಕ್ಕಳ್ಳಿ ಗ್ರಾಮಸ್ಥರಿಗೆ ಅಧಿಕಾರಿಗಳು ಎಲ್ಲಾ ಸೌಲಭ್ಯಗಳನ್ನು ಒದಗಿಸಿಕೊಡಬೇಕೆಂದು ವಿಧಾನಪರಿಷತ್ ಸದಸ್ಯ ಡಾ. ಯತೀಂದ್ರ ಸಿದ್ದರಾಮಯ್ಯ ಸೂಚಿಸಿದರು.

ನಂಜನಗೂಡು ತಾಲೂಕು ಹೆಜ್ಜಿಗೆ, ತೊರೆಮಾವು, ಬೊಕ್ಕಳ್ಳಿ ಗ್ರಾಮಗಳಿಗೆ ಭೇಟಿ ನೀಡಿ ಕಬಿನಿ ನೀರಿನಿಂದ ಮುಳುಗಡೆಯಾಗಿರುವ ಪ್ರದೇಶಗಳನ್ನು ಪರಿಶೀಲಿಸಿ ಮಾತನಾಡಿದ ಅವರು, ಬೊಕ್ಕಳ್ಳಿ ಗ್ರಾಮದಲ್ಲಿ ಹಲವು ಮನೆಗಳಿಗೆ ನೀರು ನುಗ್ಗಿ ತೊಂದರೆಯಾಗಿದೆ. ಅವರೆಲ್ಲರನ್ನು ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಲಾಗಿದೆ. ನೆರೆ ಬಂದಾಗ ಪ್ರತಿಬಾರಿಯೂ ಇಲ್ಲಿ ತೊಂದರೆಯಾಗುತ್ತಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಗಮನಕ್ಕೆ ತಂದು 2 ಎಕರೆ ಜಾಗದಲ್ಲಿ ಮುಳುಗಡೆಯಾಗುತ್ತಿರುವ ಕುಟುಂಬದವರಿಗೆ ನಿವೇಶನ ನೀಡಿ ಸ್ಥಳಾಂತರಿಸಲಾಗುವುದು. ಆರೋಗ್ಯ ಇಲಾಖೆಯ ಅಧಿಕಾರಿಗಳು ಜನರನ್ನು ತಪಾಸಣೆ ನಡೆಸಿ ಸಾಂಕ್ರಾಮಿಕ ರೋಗಗಳು ಹರಡದಂತೆ ಮುನ್ನೆಚ್ಚರಿಕೆ ವಹಿಸಬೇಕು. ಜಾನುವಾರುಗಳಿಗೆ ಮೇವು, ಲಸಿಕೆ ನೀಡಬೇಕು. ಕುಡಿಯುವ ನೀರಿಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದ ಅವರು, ಕಾಳಜಿ ಕೇಂದ್ರದಲ್ಲಿರುವ ಕುಟುಂಬದವರಿಗೆ ಪ್ರತಿ ಮನೆಗೆ 3 ಸಾವಿರ ರೂಗಳನ್ನು ವೈಯಕ್ತಿಕವಾಗಿ ನೀಡಿದ ಅವರು ಸಿದ್ದರಾಮಯ್ಯನವರು ಮುಖ್ಯಮಂತ್ರಿಯಾದ ಮೇಲೆ ರಾಜ್ಯದಲ್ಲಿ ಉತ್ತಮ ಮಳೆಯಾಗುತ್ತಿದ್ದು ಎಲ್ಲಾ ಡ್ಯಾಂಗಳು ತುಂಬಿ ತುಳುಕುತ್ತಿವೆ. ಇದರಿಂದ ಜನರು ನೆಮ್ಮದಿಯಾಗಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ರಕ್ಷಿತ್, ಮುಖ್ಯಮಂತ್ರಿಗಳ ವಿಶೇಷಾಧಿಕಾರಿ ಕೆ.ಎನ್.ವಿಜಯ್, ಪಶು ಸಂಗೋಪನಾ ಇಲಾಖೆಯ ಉಪ ನಿರ್ದೇಶಕ ಡಾ. ನಾಗರಾಜ್, ತಹಸೀಲ್ದಾರ್ ಶಿವಕುಮಾರ್, ಇ.ಓ. ರಾಜೇಶ್, ರಾಜ್ಯ ವಾಲ್ಮೀಕಿ ನಿಗಮದ ಮಾಜಿ ಅಧ್ಯಕ್ಷ ಎಸ್.ಸಿ. ಬಸವರಾಜು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಂಗಸ್ವಾಮಿ, ದೊರೆಸ್ವಾಮಿ, ಮಂಜುಳಾ ಮಂಜುನಾಥ್, ಛಾಯಾ, ಕನಕಮೂರ್ತಿ, ಆಪ್ತ ಸಹಾಯಕರಾದ ಶಿವಸ್ವಾಮಿ, ಪ್ರದೀಪ್‌ಕುಮಾರ್, ನಾಗರಾಜು ಉಪಸ್ಥಿತರಿದ್ದರು.

ನಾಳೆ ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು, ಜು.22– ವಿ.ವಿ ಮೊಹಲ್ಲಾ ಉಪವಿಭಾಗ ವ್ಯಾಪ್ತಿ ತುರ್ತು ನಿರ್ವಹಣಾ ಕೆಲಸದ ನಿಮಿತ್ತ ಜುಲೈ 24 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಯಾದವಗಿರಿ, ಮಂಜುನಾಥಪುರಂ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗುವುದು ಎಂದು ಸೆಸ್ಕ್ ಪ್ರಕಟಣೆ ತಿಳಿಸಿದೆ.

ಇಂದಿನಿಂದ ಕಬಿನಿ ಜಲಾಶಯದಿಂದ ನಾಲೆಗಳಿಗೆ ನೀರು



ಬೆಂಗಳೂರಿನ ಕಾವೇರಿ ನೀರಾವರಿ ನಿಗಮದ ಕಚೇರಿಯಲ್ಲಿ ಸೋಮವಾರ ಸಚಿವ ಹೆಚ್.ಸಿ. ಮಹದೇವಪ್ಪ ಅಧ್ಯಕ್ಷತೆಯಲ್ಲಿ ಕಬಿನಿ ಜಲಾಶಯ ನೀರಾವರಿ ಸಲಹಾ ಸಮಿತಿ ಸಭೆ ನಡೆಯಿತು.

ಮೈಸೂರು, ಜು.22(ಎಸ್‌ಬಿಡಿ)– ಕಬಿನಿ ಜಲಾಶಯ ಅಚ್ಚುಕಟ್ಟು ಪ್ರದೇಶದ ನಾಲೆಗಳಿಗೆ ಮಂಗಳವಾರದಿಂದಲೇ ನೀರು ಹರಿಸಲಾಗುತ್ತದೆ.

ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರೂ ಆದ ಕಬಿನಿ ಜಲಾಶಯ ನೀರಾವರಿ ಸಲಹಾ ಸಮಿತಿಯ ಅಧ್ಯಕ್ಷ ಡಾ.ಹೆಚ್.ಸಿ. ಮಹದೇವಪ್ಪ ಅಧ್ಯಕ್ಷತೆಯಲ್ಲಿ ಬೆಂಗಳೂರಿನ ಕಾವೇರಿ ನೀರಾವರಿ ನಿಗಮದ ಕಚೇರಿಯಲ್ಲಿ ಸೋಮವಾರ ನಡೆದ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ.

ಕಬಿನಿ ಜಲಾಶಯ ಭರ್ತಿಯಾಗಿರುವ ಹಿನ್ನೆಲೆಯಲ್ಲಿ ಕೃಷಿ ಚಟುವಟಿಕೆಗೆ ಅನುಕೂಲವಾಗುವ ನಿಟ್ಟಿನಲ್ಲಿ ಕಬಿನಿ, ರಾಂಪುರ, ಹುಲ್ಲಹಳ್ಳಿ ಮತ್ತು ನುಗು ಅಚ್ಚುಕಟ್ಟು ಪ್ರದೇಶದ ನಾಲೆಗಳಿಗೆ ಮಂಗಳವಾರದಿಂದಲೇ ನೀರು ಹರಿಸಲು ನಿರ್ಣಯಿಸಲಾಗಿದೆ.

ಸಭೆಯಲ್ಲಿ ಶಾಸಕರಾದ ಕೊಳ್ಳೇಗಾಲದ ಎ.ಆರ್.ಕೃಷ್ಣಮೂರ್ತಿ, ನಂಜನಗೂಡಿನ ದರ್ಶನ್ ಧ್ರುವನಾರಾಯಣ, ಗುಂಡ್ಲುಪೇಟೆಯ ಹೆಚ್.ಎಂ.ಗಣೇಶ್ ಪ್ರಸಾದ್ ಹಾಗೂ ಹನೂರಿನ ಮಂಜುನಾಥ್, ಕಾಡಾ ಅಧ್ಯಕ್ಷ ಮರಿಸ್ವಾಮಿ, ಚಾಮರಾಜನಗರ ಜಿಲ್ಲಾಧಿಕಾರಿ ಶಿಲ್ಪಾನಾಗ್, ಮೈಸೂರು ಜಿಲ್ಲಾಧಿಕಾರಿ ಲಕ್ಷ್ಮೀಕಾಂತ್ ರೆಡ್ಡಿ, ನಿಗಮದ ವ್ಯವಸ್ಥಾಪಕ ನಿರ್ದೇಶಕರು, ಸಲಹಾ ಸಮಿತಿಯ ಸದಸ್ಯರು ಭಾಗವಹಿಸಿದ್ದರು.

ವಿವಿಧ ಸೌಲಭ್ಯಗಳಿಗೆ ಆಗ್ರಹಿಸಿ ಕಟ್ಟಡ ಕಾರ್ಮಿಕರಿಂದ ಪ್ರತಿಭಟನೆ



ಎಐಯುಟಿಯುಸಿ ಸಂಯೋಜಿತ ಕರ್ನಾಟಕ ರಾಜ್ಯ ಸಂಯುಕ್ತ ಕಟ್ಟಡ ಕಾರ್ಮಿಕರ ಸಂಘದ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಜು.22(ಎಂಕೆ)– ವಿವಿಧ ಸೌಲಭ್ಯಗಳಿಗೆ ಒತ್ತಾಯಿಸಿ ಎಐಯುಟಿಯುಸಿ ಸಂಯೋಜಿತ ಕರ್ನಾಟಕ ರಾಜ್ಯ ಸಂಯುಕ್ತ ಕಟ್ಟಡ ಕಾರ್ಮಿಕರ ಸಂಘದ ವತಿಯಿಂದ ಸೋಮವಾರ ಪ್ರತಿಭಟನೆ ನಡೆಸಲಾಯಿತು.

ನಗರದ ಹೊಸ ಜಿಲ್ಲಾಧಿಕಾರಿ ಕಚೇರಿ ಎದುರು ಜಮಾಯಿಸಿದ ಕಟ್ಟಡ ಕಾರ್ಮಿಕರು, ತಮ್ಮ ಮಕ್ಕಳಿಗೆ ವಿದ್ಯಾರ್ಥಿ ವೇತನ ಕಡಿತಗೊಳಿಸಿರುವುದನ್ನು ಖಂಡಿಸಿದರಲ್ಲದೆ ತಂತ್ರಾಂಶದಲ್ಲಾಗುತ್ತಿರುವ ತೊಂದರೆಗಳನ್ನು ಸರಿಪಡಿಸುವಂತೆ ಆಗ್ರಹಿಸಿದರು.

ಸಂಘದ ಜಿಲ್ಲಾಧ್ಯಕ್ಷ ಎಸ್.ಹೆಚ್.ಹರೀಶ್ ಮಾತನಾಡಿ, ಮೊದಲಿನಿಂದಲೂ ನೀಡುತ್ತಿದ್ದ ವಿದ್ಯಾರ್ಥಿವೇತನ ಮೊತ್ತದ ಶೇ.80 ರಷ್ಟು ಕಡಿತಗೊಳಿಸಲಾಗಿದೆ. ಅಲ್ಲದೆ ಎರಡು ವರ್ಷಗಳಿಂದ ವಿದ್ಯಾರ್ಥಿವೇತನ ನೀಡದಿರುವುದರಿಂದ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ತೀವ್ರ ತೊಂದರೆಯಾಗುತ್ತಿದೆ. ಈಗಾಗಲೇ ಹಲವು ವಿದ್ಯಾರ್ಥಿಗಳು ವಿದ್ಯಾಭ್ಯಾಸವನ್ನೇ ತೊರೆದಿದ್ದಾರೆ. ಇದಕ್ಕೆ ಸರ್ಕಾರವೇ ನೇರ ಹೊಣೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ವಿದ್ಯಾರ್ಥಿವೇತನ ಅರ್ಜಿ ಸಲ್ಲಿಸುವ ತಂತ್ರಾಂಶದಲ್ಲಿ ಕಳೆದ ಎರಡು ವರ್ಷಗಳಿಂದಲೂ ದೋಷವಿದೆ. ಆಗಾಗ ತಂತ್ರಾಂಶದ ತೊಂದರೆ ಎದುರಾಗುತ್ತಿದೆ. ಕಟ್ಟಡ ಕಾರ್ಮಿಕರು ಅನಾರೋಗ್ಯದಿಂದ ಬಳಲುತ್ತಿದ್ದರೂ ಆರ್ಥಿಕವಾಗಿ ನೆರವಾಗುವ ಯಾವುದೇ ಸೌಲಭ್ಯಗಳನ್ನು ಪಡೆದುಕೊಳ್ಳಲು ಸಾಧ್ಯವಾಗುತ್ತಿಲ್ಲ. ಕಟ್ಟಡ ಕಾರ್ಮಿಕರ ಮಂಡಳಿಯಲ್ಲಿ ದಿನದಿಂದ ದಿನಕ್ಕೆ ಹೊಸ ಹೊಸ ನೀತಿಗಳು ಬರುತ್ತಿವೆ ಆದರೆ ಯಾವುದೂ ಕಟ್ಟಡ ಕಾರ್ಮಿಕರ ಸಂಕಷ್ಟದ ಪರಿಸ್ಥಿತಿಯನ್ನು ನಿಭಾಯಿಸುವಂತಿಲ್ಲ. ಈ ಕುರಿತು ರಾಜ್ಯವ್ಯಾಪ್ತಿ ಸಾಕಷ್ಟು ಸಭೆಗಳು, ಚರ್ಚೆಗಳು ನಡೆದಿದ್ದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಕಿಡಿಕಾರಿದರು.

ಜಿಲ್ಲಾ ಕಾರ್ಯದರ್ಶಿ ಸಿದ್ದಯ್ಯ ಹುಲ್ಲಹಳ್ಳಿ, ಉಪಾಧ್ಯಕ್ಷ ರಾಜು ಪಿ ದೊಡ್ಡಹಾನ್ಯ ಮಾರ್ಬಳ್ಳಿ ರಾಜಶೇಖರ್, ಬಸಪ್ಪನಾಯಕ ಸಾಲುಂಡಿ, ಮಹೇಶ್, ಬಸವರಾಜ್ ದೊಡ್ಡಕಾನ್ಯ, ಚಿನ್ನಸ್ವಾಮಿ ಹುಲ್ಲಹಳ್ಳಿ ಮತ್ತಿತರರಿದ್ದರು.

ನಮ್ಮ ಅವಧಿಯಲ್ಲೇ ಬಸವ ಭವನ ನಿರ್ಮಾಣ ಪೂರ್ಣ

ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾ ಜಿಲ್ಲಾ ಘಟಕದ ನೂತನ ಅಧ್ಯಕ್ಷ ಹಿನಕಲ್ ಬಸವರಾಜು ವಿಶ್ವಾಸ



ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾ ಜಿಲ್ಲಾ ಘಟಕದ ನೂತನ ಅಧ್ಯಕ್ಷ ಹಿನಕಲ್ ಬಸವರಾಜು ನೇತೃತ್ವದ ತಂಡದ ಪದಾಧಿಕಾರಿಗಳು, ನಿರ್ದೇಶಕರು ಗೆಲುವಿನ ನಗೆ ಬೀರಿದರು.

ಮೈಸೂರು, ಜು.22(ಎಂಕೆ)– ಮೈಸೂರಲ್ಲಿ 'ಬಸವ ಭವನ' ನಿರ್ಮಾಣಕ್ಕೆ ಪ್ರಾಮಾಣಿಕ ಪ್ರಯತ್ನ ನಡೆಸುವುದರ ಜೊತೆಗೆ ನೀಡಿರುವ ಅಧಿಕಾರದ ಅವಧಿಯಲ್ಲೇ ಮುಕ್ತಾಯಗೊಳಿಸಲಾಗುವುದು ಎಂದು ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾ ಜಿಲ್ಲಾ ಘಟಕದ ನೂತನ ಅಧ್ಯಕ್ಷ ಹೆಚ್.ವಿ.ಬಸವರಾಜು (ಹಿನಕಲ್ ಬಸವರಾಜು) ಹೇಳಿದರು.

ಮೈಸೂರಿನ ಜೆಎಸ್‌ಎಸ್ ಮಹಾವಿದ್ಯಾಪೀಠದ ಸಮೀಪದಲ್ಲಿರುವ ಬಸವೇಶ್ವರ ಪ್ರತಿಮೆಯ ನೆಲಮಹಡಿಯಲ್ಲಿರುವ ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾ ಮೈಸೂರು ಘಟಕದ ಕಚೇರಿಯಲ್ಲಿ ಸೋಮವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮೈಸೂರು ನಗರ ಮತ್ತು ಜಿಲ್ಲೆಯಲ್ಲಿ ಎರಡ್ಮೂರು ಲಕ್ಷ ವೀರಶೈವ–ಲಿಂಗಾಯತರಿದ್ದಾರೆ ಎಂದು ಹೇಳಲಾಗುತ್ತಿದ್ದು, ಎಲ್ಲರ ಆಶಯದಂತೆ 'ಬಸವ ಭವನ' ನಿರ್ಮಾಣಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇವೆ. ನಮ್ಮ ತಂಡ ಒಗ್ಗಟ್ಟಿನಿಂದ ನೀಡಿರುವ ಅವಧಿಯಲ್ಲಿಯೇ ಬಸವ ಭವನ ನಿರ್ಮಿಸಲಿದೆ ಎಂದು ಭರವಸೆ ನೀಡಿದರು.

ಜಿಲ್ಲೆಯಲ್ಲಿ ವೀರಶೈವ–ಲಿಂಗಾಯತ ಸಮಾಜವನ್ನು ಇನ್ನಷ್ಟು ಗಟ್ಟಿಯಾಗಿ ಸಂಘಟಿಸಲಾಗುವುದು. ಹಾಗೆಯೇ ಸಮುದಾಯದಲ್ಲಿ ಆರ್ಥಿಕವಾಗಿ ಹಿಂದುಳಿದವರನ್ನು ಮೇಲೆತ್ತುವ ನಿಟ್ಟಿನಲ್ಲಿ ಕಾರ್ಯಕ್ರಮ ರೂಪಿಸಲಾಗುವುದು ಎಂದರಲ್ಲದೆ ನಿರೀಕ್ಷೆಯಂತೆ ಚುನಾವಣೆಯಲ್ಲಿ ಗೆದ್ದಿದ್ದು, ನಮ್ಮ ತಂಡಕ್ಕೆ ಮತ ನೀಡಿದ ಎಲ್ಲಾ ಸದಸ್ಯ ಮತದಾರರಿಗೆ ಧನ್ಯವಾದ ಅರ್ಪಿಸುತ್ತೇನೆ ಎಂದರು.

ಆಕ್ಷೇಪವಿಲ್ಲ: ನಿನ್ನೆ ನಡೆದ ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾ ಜಿಲ್ಲಾ ಘಟಕದ ಚುನಾವಣೆ ಯಾವುದೇ ಲೋಪದೋಷವಿಲ್ಲದೆ ನಿಯೋಜಿತ ಉಪ ಚುನಾವಣಾಧಿಕಾರಿಗಳ ಸಮ್ಮುಖದಲ್ಲಿ ನಡೆದಿದೆ. ಮತದಾನ ವೇಳೆ ನೂಕುನುಗ್ಗಲಾಗಿರುವುದು ಬಿಟ್ಟರೆ ಮತ್ಯಾವ ಅಹಿತಕರ ಘಟನೆಗಳು ನಡೆದಿಲ್ಲ. ಸದಸ್ಯರು ಬಂದು ಮತದಾನ ಮಾಡಿದ್ದಾರೆ. ಹೆಚ್ಚು ಮತಗಳನ್ನು ನೀಡಿ ನಮ್ಮ ತಂಡಕ್ಕೆ ಆಶೀರ್ವಾದ ಮಾಡಿದ್ದಾರೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮರು ಮತ ಎಣಿಕೆಗೆ ಅವಕಾಶವಿದ್ದು, ಪರಾಜಿತ ಅಭ್ಯರ್ಥಿಗಳು ಮರು ಮತ ಎಣಿಕೆ ನಡೆಸಲು ಮುಂದಾದರೆ ಯಾವುದೇ ಆಕ್ಷೇಪವಿಲ್ಲ ಎಂದು ಸ್ಪಷ್ಟಪಡಿಸಿದರು. ಇದಕ್ಕೂ ಮುನ್ನ ಬಸವೇಶ್ವರ ಪ್ರತಿಮೆಗೆ ಮಾಲಾರ್ಪಣೆ ಮಾಡಲಾಯಿತು.

ವಿಜೇತ ಅಭ್ಯರ್ಥಿಗಳಾದ ಎನ್.ಜಿ.ಗಿರೀಶ್, ಎಸ್.ಗಿರೀಶ್, ಕೆ.ಗೀರಿಕುಮಾರ್, ಎಲ್.ಪಿ. ಮಂಜುನಾಥ್, ದಕ್ಷಿಣಾಮೂರ್ತಿ, ಕೆ.ನಾಗರಾಜು, ಎಂ.ಬಸವರಾಜು, ಬಿ.ವಿ.ಬಸವರಾಜು, ಕೆ.ಎಂ.ಮಾದಪ್ಪ, ಡಾ.ಎಂ.ಎಂ.ಮಹದೇವಪ್ಪ, ಎಂ.ಎಸ್. ರೇಚಣ್ಣ, ದೂರ ಕೆ. ಶಿವಕುಮಾರ್, ಎಂ.ಷಡಕ್ಷರಿ, ಮಹಿಳಾ ನಿರ್ದೇಶಕ ಸ್ಥಾನಕ್ಕೆ ಆಯ್ಕೆಯಾದ ಅನಸೂಯ ಗಣೇಶ್, ದಾಕ್ಷಾಯಿಣಿ ಲಿಂಗರಾಜು, ಎಂ.ದಾಕ್ಷಾಯಿಣಿ, ಎನ್.ಬಿ.ಭಾಗ್ಯ, ರಾಜೇಶ್ವರಿ ಮಹೇಶ್, ರೂಪ ಸತೀಶ್, ಹೆಚ್.ಎನ್.ಸರ್ವಮಂಗಳ, ಸೌಭಾಗ್ಯ ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಇಂಡಿಯನ್ 2 (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಮಹಾರಾಜ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಕಿಲ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ನಾಟ್‌ಔಟ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಕಲ್ಕಿ (ಕ)	4 ಪ್ರದರ್ಶನಗಳು
ರಾಜಕಮಲ್	
ಟ್ವಿಸ್ಟರ್ (ಇಂ)	4 ಪ್ರದರ್ಶನಗಳು
ಸಂಗಂ	
ಹೆಜ್ಜಾರು (ಕ)	2 ಪ್ರದರ್ಶನಗಳು
ಇಂಡಿಯನ್ 2 (ತ)	2 ಪ್ರದರ್ಶನಗಳು
ಲಿಡೋ	
ಶಾಸ್ತ್ರಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಇಂಡಿಯನ್ 2 (ತ)	4 ಪ್ರದರ್ಶನಗಳು
ಪ್ರಭಾ	
ನಾಟ್‌ಔಟ್ (ಕ)	2 ಪ್ರದರ್ಶನಗಳು
ಹಿರಣ್ಯ (ಕ)	2 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10.10ಕ್ಕೆ, ಮ.1ಕ್ಕೆ, ಆಕ್ಸಿಡೆಂಡ್ ಆರ್ ಕಾನ್ಸ್ಪಿರೆಸಿ ಗೋದ್ರಾ (ಹಿಂ): ಮ.3.45ಕ್ಕೆ, ಸಂ.4.35ಕ್ಕೆ, ಕಲ್ಕಿ 2898 ಎಡಿ (ಕ): ಸಂ.6.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.10ಕ್ಕೆ
ಸ್ಕ್ರೀನ್ 2	ಟ್ವಿಸ್ಟರ್ಸ್ (ಇಂ): ಬೆ.10.30ಕ್ಕೆ, ಹೆಜ್ಜಾರು (ಕ): ಮ.1.10ಕ್ಕೆ, ಕಲ್ಕಿ 2898 ಎಡಿ(3ಡಿ) (ತೆ): ಮ.3.40ಕ್ಕೆ, ಆಕ್ಸಿಡೆಂಡ್ ಆರ್ ಕಾನ್ಸ್ಪಿರೆಸಿ ಗೋದ್ರಾ (ಹಿಂ): ರಾ.7.05ಕ್ಕೆ, ಕಲ್ಕಿ 2898 ಎಡಿ(3ಡಿ) (ಹಿಂ): ರಾ.10.05ಕ್ಕೆ
ಸ್ಕ್ರೀನ್ 3	ನಾಟ್‌ಔಟ್ 2024 (ಕ): ಬೆ.10.15ಕ್ಕೆ, ಕಲ್ಕಿ 2898 ಎಡಿ (ಕ): ಮ.1ಕ್ಕೆ, ಬ್ಯಾಡ್ ನ್ಯೂಸ್ (ಹಿಂ): ಸಂ.4.30ಕ್ಕೆ, ಟ್ವಿಸ್ಟರ್ಸ್ (ಇಂ): ರಾ.7.25ಕ್ಕೆ, ರಾ.10ಕ್ಕೆ.
ಸ್ಕ್ರೀನ್ 4	ಇನ್‌ಸೈಡ್ ಔಟ್ 2 (3ಡಿ) (ಇಂ): ಬೆ.10.55ಕ್ಕೆ, ಬ್ಯಾಕ್ ಬೆಂಚರ್ಸ್ (ಕ): ಮ.1ಕ್ಕೆ, ಇಂಡಿಯನ್ 2 (ತ): ಮ.3.30ಕ್ಕೆ, ಬ್ಯಾಡ್ ನ್ಯೂಸ್ (ಹಿಂ): ರಾ.7ಕ್ಕೆ, ರಾ.9.55ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಕಲ್ಕಿ 2898 ಎಡಿ (ಕ): ಬೆ.10.30ಕ್ಕೆ, ಸಂ.6ಕ್ಕೆ, ಲವ್ ಲಿ (ಕ): ಮ.1.55ಕ್ಕೆ.
ಸ್ಕ್ರೀನ್ 2	ಇಂಡಿಯನ್ 2 (ತ): ಮ.1ಕ್ಕೆ, ಸಂ.4.25ಕ್ಕೆ, ರಾ.7.50ಕ್ಕೆ.
ಸ್ಕ್ರೀನ್ 3	ಕಲ್ಕಿ 2898 ಎಡಿ (3ಡಿ)(ತೆ): ಬೆ.11.10ಕ್ಕೆ, ಮ.2.40ಕ್ಕೆ, ಇಂಡಿಯನ್ 2 (ತ): ಸಂ.6.05ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಇಂಡಿಯನ್ 2 (ತ): ಬೆ.10ಕ್ಕೆ, ಕಲ್ಕಿ 2898 ಎಡಿ (ಕ): ಮ.1.25ಕ್ಕೆ, ರಾ.7.45ಕ್ಕೆ, ಖಾಲಿ ಕುಡುಕರು (ಕ): ಸಂ.4.50ಕ್ಕೆ

ಪಿವಿಆರ್ ಸಿನಿಮಾಸ್

PVR CINEMAS

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಸಾರ್ವಜನಿಕ ಸ್ಥಳಗಳಲ್ಲಿ ಬಿಡಾಡಿ ದನಗಳನ್ನು ಬಿಡದಂತೆ ಎಚ್ಚರಿಕೆ



ಮೈಸೂರು, ಜು.22– ಮಹಾನಗರ ಪಾಲಿಕೆ ವ್ಯಾಪ್ತಿ ಹಾಗೂ ನಗರದ ಹೊರವಲಯದಲ್ಲಿ ಬಿಡಾಡಿ ದನಗಳನ್ನು ಸಾಕುತ್ತಿರುವ ಸಾಕಾಣಿಕೆದಾರರು ನಗರದ ರಸ್ತೆಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಬಿಡಾಡಿ ದನಗಳನ್ನು ಬಿಡುವುದರಿಂದ ಸಾರ್ವಜನಿಕರ ವಾಹನ ಸಂಚಾರ ಅಡಚಣೆ ಆಗುತ್ತಿದ್ದು, ಬಿಡಾಡಿ ದನಗಳು ಕಸದ ತೊಟ್ಟಿಗಳಲ್ಲಿ ಆಹಾರ ಸೇವಿಸುವುದಕ್ಕಾಗಿ ತೊಟ್ಟಿಯಲ್ಲಿರುವ ಕಸವನ್ನೆಲ್ಲ ಚೆಲ್ಲಾಡುವುದರಿಂದ ಪರಿಸರ ಮಾಲಿನ್ಯಕ್ಕೆ ಕಾರಣವಾಗುತ್ತಿದೆ.

ಈಗಾಗಲೇ ಮೌಖಿಕವಾಗಿ ಅನೇಕ ಬಾರಿ ಎಚ್ಚರಿಕೆ ನೀಡಿದ್ದರೂ ಸಹ ಸಾರ್ವಜನಿಕ ಸ್ಥಳಗಳಲ್ಲಿ ಬಿಡಾಡಿ ದನಗಳನ್ನು ಬಿಡುತ್ತಿರುವುದು ಕಂಡು ಬಂದಿರುತ್ತದೆ. ಈ ಸಂಬಂಧ ಸಾರ್ವಜನಿಕರಿಂದ ಅನೇಕ ದೂರುಗಳು ಬರುತ್ತಿದ್ದು, ನಗರದ ಜನತೆಯ ಹಿತದೃಷ್ಟಿಯಿಂದ ಹಾಗೂ ಸ್ವಚ್ಛತೆ ನಿರ್ವಹಣೆಗಾಗಿ ಇನ್ನು ಮುಂದೆ ಬಿಡಾಡಿ ದನಗಳ ಸಾಕಾಣಿಕೆದಾರರು ನಗರದ ರಸ್ತೆಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಬಿಡಾಡಿ ದನಗಳನ್ನು ಬಿಟ್ಟರೆ ಹಿಡಿದು ದಂಡ ವಿಧಿಸಲಾಗುವುದು ಹಾಗೂ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಮೈಸೂರು ಮಹಾ ನಗರ ಪಾಲಿಕೆ ಆಯುಕ್ತ ಅಸಾದ್ ಉರ್ ರೆಹಮಾನ್ ಶರೀಫ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೆಆರ್‌ಎಸ್ ನೀರಿನ ಮಟ್ಟ



ಗರಿಷ್ಠ ಮಟ್ಟ	124.80 ಅಡಿ
ಸೋಮವಾರ	123.20 ಅಡಿ
ಒಳಹರಿವು	60016 ಕ್ಯೂಸೆಕ್
ಹೊರಹರಿವು	52020 ಕ್ಯೂಸೆಕ್

ಕಬಿನಿ ನೀರಿನ ಮಟ್ಟ



ಗರಿಷ್ಠ ಮಟ್ಟ	2284 ಅಡಿ
ಸೋಮವಾರ	2283.25 ಅಡಿ
ಒಳಹರಿವು	19963 ಕ್ಯೂಸೆಕ್
ಹೊರಹರಿವು	10000 ಕ್ಯೂಸೆಕ್

ಹಾರಂಗಿ ನೀರಿನ ಮಟ್ಟ



ಗರಿಷ್ಠ ಮಟ್ಟ	2859 ಅಡಿ
ಸೋಮವಾರ	2855.25 ಅಡಿ
ಒಳಹರಿವು	7281 ಕ್ಯೂಸೆಕ್
ಹೊರಹರಿವು	4000 ಕ್ಯೂಸೆಕ್

ಹಸಿರು ನಮ್ಮ ಉಸಿರು

ಪಂಚೆ ಧರಿಸಿದ ರೈತನಿಗೆ ಪ್ರವೇಶ ನಿರಾಕರಣೆ ಹಿನ್ನೆಲೆ

ಸರ್ಕಾರದಿಂದ ಮಾಲ್‌ಗಳಿಗೆ ಮಾರ್ಗಸೂಚಿ

ಬೆಂಗಳೂರು: ಬೆಂಗಳೂರಿನ ಜಿಟಿ ಮಾಲ್‌ನಲ್ಲಿ ಪಂಚೆ ಧರಿಸಿ ಬಂದಿದ್ದ ರೈತನ ಪ್ರವೇಶ ನಿರಾಕರಿಸಿದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ರಾಜ್ಯದ ಎಲ್ಲಾ ಮಾಲ್‌ಗಳು ಮತ್ತು ಇತರ ಸಂಸ್ಥೆಗಳಿಗೆ ಈ ಸಂಬಂಧ ಮಾರ್ಗಸೂಚಿಗಳನ್ನು ನೀಡಲಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೋಮವಾರ ಹೇಳಿದ್ದಾರೆ.

ಈ ಘಟನೆಯ ನಂತರ ಜುಲೈ 18 ರಂದು ರಾಜ್ಯ ಸರ್ಕಾರ ಜಿ ಟಿ ವರ್ಲ್ಡ್ ಮಾಲ್ ಅನ್ನು ಏಳು ದಿನಗಳ ಕಾಲ ಬಂದ್ ಮಾಡಿತ್ತು. ಮಾಲ್‌ನಲ್ಲಿ ರೈತರೊಬ್ಬರಿಗೆ ಪ್ರವೇಶ ನಿರಾಕರಿಸಿದ ಘಟನೆ ಸದನದಲ್ಲಿ ಚರ್ಚೆಯಾಗಿದೆ. ಪಂಚೆ ಉಟ್ಟುಕೊಂಡು ಬಂದವರಿಗೆ ಯಾವುದೇ ಮಾಲ್‌ಗಳಲ್ಲಿ ಪ್ರವೇಶ ನಿರಾಕರಣೆ ಮಾಡಬಾರದು. ರೈತರಿಗೆ ಪ್ರವೇಶ ನೀಡದ ಮಾಲ್‌ಗೆ ನೋಟೀಸ್ ನೀಡಲಾಗಿತ್ತು. ಆ ಮಾಲ್‌ನವರು ಕ್ಷಮೆ ಯಾಚಿಸಿದ್ದಾರೆ. ಇಂತಹ ಘಟನೆ ಮರುಕಳಿಸದಂತೆ ಮುನ್ನೆಚ್ಚರಿಕೆ ವಹಿಸುವುದಾಗಿಯೂ ಹೇಳಿದ್ದಾರೆ. ಜತೆಗೆ ಮಾಲ್‌ನ ತೆರಿಗೆ ಬಾಕಿ ಇತ್ತು. ಆ ಬಾಕಿ ಪಾವತಿಗೆ ಚೆಕ್ ಪಡೆದು ಮಾಲ್ ತೆರೆಯಲು ಅನುಮತಿ ನೀಡಲಾಗಿದೆ ಎಂದರು.

ಪಂಚೆ (ಧೋತಿ) ಇದು ನಮ್ಮ ಸಾಂಸ್ಕೃತಿಕ ಉಡುಗೆಯಾಗಿದೆ. ಈ ಘಟನೆಯ ನಂತರ, ಮಾಲ್ ಅಥವಾ ಇನ್ನಾವುದೇ ಸ್ಥಳವಾಗಿರಲಿ ಅದು ನಮ್ಮ ಸಂಸ್ಕೃತಿಯ ಭಾಗವೇ ಆಗಿರಲಿ. ಈ ನಿಟ್ಟಿನಲ್ಲಿ ಮಾರ್ಗಸೂಚಿಗಳನ್ನು ನೀಡಲು ನಾವು ನಿರ್ಧರಿಸಿದ್ದೇವೆ ಎಂದು ಡಿಸಿಎಂ ವಿಧಾನಸಭೆಗೆ ತಿಳಿಸಿದರು.



ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್ ಬಾಬು ಮಧ್ಯಪ್ರವೇಶಿಸಿ ಕ್ಲಬ್‌ಗಳಿಗೂ ಮಾರ್ಗಸೂಚಿ ತನ್ನಿ, ಬಟ್ಟೆಯಿಂದ ವ್ಯಕ್ತಿಯನ್ನು ಅಳೆಯಬಾರದು ಎಂದರು. ಇದೆ ವೇಳೆ ಕಾನೂನು ಸಚಿವ ಹೆಚ್.ಕೆ. ಪಾಟೀಲ್ ಮಾತನಾಡಿ, ಕ್ಲಬ್ ವಿಚಾರವನ್ನು ಮಾಲ್‌ಗಳೊಂದಿಗೆ ಮಿಶ್ರ ಮಾಡುವುದು ಬೇಡ ಎಂದರು. ಪ್ರತಿಪಕ್ಷದ ನಾಯಕ ಆರ್. ಅಶೋಕ್ ಮಾತನಾಡಿ, ಮಾಲ್‌ಗೆ ಒಂದು ವಾರ ಬೀಗ ಹಾಕಿಸುತ್ತೇವೆ ಎಂದು ನಗರಾಭಿವೃದ್ಧಿ ಸಚಿವರು ಹೇಳಿದ್ದರು. ಬೀಗ ಹಾಕಿಸಿದ್ದಾರಾ ಎಂದು ಪ್ರಶ್ನಿಸಿದರು.

ಆಗ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಮಾತನಾಡಿ, ಮಾಲ್‌ಗೆ ಬೀಗ ಹಾಕಿಸಲಾಗಿತ್ತು ಎಂದರು. ಮತ್ತೆ ಅಶೋಕ್, ಮಾಲ್‌ಗಳಿಗೆ ಪರವಾನಗಿ ಕೊಡುವಾಗಲೇ ಗ್ರಾಮೀಣ ಭಾಗದ ಉಡುಪು ಧರಿಸಿದವರಿಗೆ ಅವಕಾಶ ನಿರಾಕರಿಸಬಾರದು ಎಂಬ ಷರತ್ತು ವಿಧಿಸಬೇಕು. ಸರ್ಕಾರ ಜಮೀನು ಕೊಡುತ್ತದೆ. ಅನುಮತಿ ಕೊಟ್ಟಿರುವ ಕ್ಲಬ್‌ಗಳಿಗೂ ಇದು ಅನ್ವಯವಾಗಬೇಕು. ಈ ಸಂಬಂಧ ಎನ್. ಎ. ಹ್ಯಾರಿಸ್ ಮತ್ತು ಮಂಜು ಅಧ್ಯಕ್ಷತೆ ಸದನ ಸಮಿತಿಯ ವರದಿಗಳಿವೆ. ಆ ವರದಿಗಳ ಶಿಫಾರಸನ್ನು ಅನುಷ್ಠಾನಕ್ಕೆ ತನ್ನಿ ಎಂದು ಒತ್ತಾಯಿಸಿದರು.

ಮೈಸೂರು ಎನ್.ಆರ್.ಮೊಹಲ್ಲಾದಲ್ಲಿ ಮಹಾಲಕ್ಷ್ಮೀ ಸ್ವೀಟ್ಸ್‌ನ 45ನೇ ಮಳಿಗೆ ಆರಂಭ



ಮೈಸೂರಿನ ಹೆಸರಾಂತ ಮಹಾಲಕ್ಷ್ಮೀ ಸ್ವೀಟ್ಸ್ ಹಳೇ ಮೈಸೂರು ಭಾಗದಲ್ಲಿ ಹೆಸರುವಾಸಿಯಾಗಿದ್ದು, ಇದರ 45ನೇ ಮಳಿಗೆ ಜು.19ರಂದು ಮೈಸೂರಿನ ಎನ್.ಆರ್.ಮೊಹಲ್ಲಾದಲ್ಲಿ ಉದ್ಘಾಟನೆಯಾಯಿತು. ಮಹಾಲಕ್ಷ್ಮೀ ಸ್ವೀಟ್ಸ್‌ನ ಅಧ್ಯಕ್ಷರಾದ ಶಿವಕುಮಾರ್ ಸಾಂಪ್ರದಾಯಿಕ ಪೂಜೆ ನೆರವೇರಿಸಿ, ಉದ್ಘಾಟಿಸಿದರು. ಈ ವೇಳೆ ಮ್ಯಾನೇಜಿಂಗ್ ಡೈರೆಕ್ಟರ್ ನಿತಿನ್ ಶಿವಕುಮಾರ್ ಇತರರು ಉಪಸ್ಥಿತರಿದ್ದರು.

ಹಿರಿಯ ಪತ್ರಕರ್ತ ಶಶಿಧರ್ ಭಟ್ ಅವರ ಚಿಕಿತ್ಸಾ ವೆಚ್ಚ ಸರ್ಕಾರವೇ ಭರಿಸಲಿದೆ

ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ

ಬೆಂಗಳೂರು: ಕಿಡ್ನಿ ವೈಫಲ್ಯದಿಂದ ಅನಾರೋಗ್ಯಕ್ಕೀಡಾಗಿರುವ ಹಿರಿಯ ಪತ್ರಕರ್ತ ಶಶಿಧರ್ ಭಟ್ ಅವರ ಚಿಕಿತ್ಸಾ ವೆಚ್ಚ ಸರ್ಕಾರವೇ ಭರಿಸಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ ಮಾಡಿದ್ದಾರೆ



ಸಿಎಂ ಸಿದ್ದರಾಮಯ್ಯ, ಅನಾರೋಗ್ಯದ ಹಿನ್ನೆಲೆಯಲ್ಲಿ ಮೈಸೂರಿನ ಗೋಪಾಲಗೌಡ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಹಿರಿಯ ಪತ್ರಕರ್ತರಾದ ಶಶಿಧರ್ ಭಟ್ ಅವರಿಗೆ ಕರೆಮಾಡಿ ಆರೋಗ್ಯ ವಿಚಾರಿಸಿ, ಶೀಘ್ರ ಗುಣಮುಖರಾಗುವಂತೆ ಹಾರೈಸಿದ್ದಾರೆ.

ಶಶಿಧರ ಭಟ್ ಅವರ ಚಿಕಿತ್ಸಾ ವೆಚ್ಚವನ್ನು ಸರ್ಕಾರವೇ ಭರಿಸಲಿದೆ, ಆಸ್ಪತ್ರೆಯ ವೈದ್ಯರ ಜೊತೆಗೂ ಮಾತನಾಡಿ, ಅವರ ಆರೋಗ್ಯದ ಬಗ್ಗೆ ಮಾಹಿತಿ ಪಡೆದು, ಮುತುವರ್ಜಿಯಿಂದ ಅವರ ಆರೈಕೆ ಮಾಡುವಂತೆ ತಿಳಿಸಿದ್ದೇನೆ. ಸಮಾಜದ ಒಳಿತಿಗಾಗಿ ನಿರ್ಭೀತ ಧ್ವನಿಯಾಗಿದ್ದ ಶಶಿಧರ್ ಭಟ್ಟರು ಆದಷ್ಟು ಬೇಗ ಗುಣಮುಖರಾಗಿ ಬರಲಿ ಎಂದು ಹಾರೈಸುತ್ತೇನೆ ಎಂದು ಟ್ವೀಟ್ ಮಾಡಿದ್ದಾರೆ.

ನನ್ನ ಪರವಾಗಿ ಯಾರೂ ಇಲ್ಲ: ಇನ್ನು ಅನಾರೋಗ್ಯಕ್ಕೆ ತುತ್ತಾಗಿರುವ ಪತ್ರಕರ್ತ ಶಶಿಧರ್ ಭಟ್, ಆಸ್ಪತ್ರೆಯ ಬೆಡ್ ಮೇಲಿಂದಲೇ ಸೋಶಿಯಲ್ ಮೀಡಿಯಾದಲ್ಲಿ ಪೋಸ್ಟ್ ಒಂದನ್ನು ಹಾಕಿ, 'ನಾನು ಆಸ್ಪತ್ರೆಯ ತೀವ್ರ ನಿಗಾಘಟಕದಲ್ಲಿದ್ದೇನೆ. ಅನಾರೋಗ್ಯ ಸಮಸ್ಯೆ ಈಗ ನನ್ನ ಕಣ್ಣು ತೆರೆಸಿದೆ. ಆಸ್ಪತ್ರೆಯ ಜಗತ್ತು ಎಷ್ಟು ಕ್ರೂರವಾದದ್ದು ಎಂಬುದು ಅರಿವಿಗೆ ಬಂದಿದೆ. ಹಾಗೆಯೇ ನಮ್ಮ ಸುತ್ತ ಇರುವವರು ಈ ಘಳಿಗೆಯಲ್ಲಿ ಯಾರೂ ನನ್ನವರಲ್ಲ ಎಂಬುದು ಅರ್ಥವಾಗುತ್ತಿದೆ. ಪ್ರೀತಿ, ನಂಬಿಕೆ, ಸಂಬಂಧ ಎಲ್ಲ ಸುಳ್ಳು ಎಂಬುದು ಅರ್ಥವಾಗಿದೆ, ಧನ್ಯವಾದಗಳು' ಎಂದು ನೋವಿನಿಂದ ಹೇಳಿದ್ದರು. ಶಶಿಧರ್ ಭಟ್ ಅವರ ಈ ಪೋಸ್ಟ್‌ಗೆ ಸಾವಿರಾರು ಅಭಿಮಾನಿಗಳು, ಪತ್ರಕರ್ತರು ಕಾಮೆಂಟ್ ಮೂಲಕ ಬೆಂಬಲ ನೀಡಿದ್ದರು. ಪರಸ್ಪರ ಅವರ ಪೋಸ್ಟ್ ಅನ್ನು ಶೇರ್ ಮಾಡಿದ್ದರು. ನಿಮ್ಮ ಜೊತೆ ನಾವೂ ಇದ್ದೇವೆ ಎಂಬ ಧೈರ್ಯ ತುಂಬುವ ಕೆಲಸ ಮಾಡಿದ್ದರು. ಈ ಪೋಸ್ಟ್ ವೈರಲ್ ಆಗುತ್ತಲೇ ಸ್ವತಃ ಸಿಎಂ ಸಿದ್ದರಾಮಯ್ಯ ಸ್ಪಂದಿಸಿದ್ದಾರೆ.

ಐಎಎಸ್ ಅಧಿಕಾರಿ ಪೂಜಾ ಖೇಡ್ಕರ್ ತಾಯಿ ಜೈಲು ಪಾಲು

14 ದಿನ ನ್ಯಾಯಾಂಗ ಬಂಧನ

ಪುಣೆ: ಜಮೀನು ವಿವಾದಕ್ಕೆ ಸಂಬಂಧಿಸಿದಂತೆ ಕೆಲವು ವ್ಯಕ್ತಿಗಳಿಗೆ ಬಂದೂಕು ತೋರಿಸಿ ಬೆದರಿಕೆ ಹಾಕಿದ ಆರೋಪದ ಮೇಲೆ ಬಂಧಿತರಾಗಿರುವ ಪ್ರೊಬೇಷನರಿ ಐಎಎಸ್ ಅಧಿಕಾರಿ ಪೂಜಾ ಖೇಡ್ಕರ್ ಅವರ ತಾಯಿ ಮನೋರಮಾ ಖೇಡ್ಕರ್ ಅವರನ್ನು ಮ್ಯಾಜಿಸ್ಟ್ರೇಟ್ ಕೋರ್ಟ್ ಸೋಮವಾರ 14 ದಿನ ನ್ಯಾಯಾಂಗ ಬಂಧನಕ್ಕೆ ಆದೇಶಿಸಿದೆ.



ಮನೋರಮಾ ಖೇಡ್ಕರ್ ಅವರ ಪೊಲೀಸ್ ಕಸ್ಟಡಿ ಅಂತ್ಯಗೊಂಡ ಹಿನ್ನೆಲೆಯಲ್ಲಿ ಇಂದು ಮ್ಯಾಜಿಸ್ಟ್ರೇಟ್ ನ್ಯಾಯಾಲಯಕ್ಕೆ ಹಾಜರುಪಡಿಸಲಾಯಿತು. ಆರೋಪಿಯ ವಿಚಾರಣೆ ನಡೆಸಿದ ಕೋರ್ಟ್, 14 ದಿನಗಳ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ.

ಗ್ರಾಮಸ್ಥರಿಗೆ ಬಂದೂಕು ತೋರಿಸಿ ಬೆದರಿಕೆ ಹಾಕುವ ಮೂಲಕ ಪರವಾನಗಿ ಪಡೆದ ಗನ್ ದುರ್ಬಳಕೆ ಮಾಡಿಕೊಂಡಿದ್ದಾರೆ ಎಂಬ ಆರೋಪದ ಮೇಲೆ ಪುಣೆ ಪೊಲೀಸರು ಪೂಜಾ ಖೇಡ್ಕರ್ ಅವರ ತಾಯಿ ಮನೋರಮಾ ಖೇಡ್ಕರ್ ಅವರ ವಿರುದ್ಧ ಎಫ್ಐಆರ್ ದಾಖಲಿಸಿದ್ದರು.

ಪುಣೆ ಜಿಲ್ಲೆಯ ಮುಲ್ಶಿ ತಹಸಿಲ್‌ನಲ್ಲಿ ಮಹಾರಾಷ್ಟ್ರದ ನಿವೃತ್ತ ಸರ್ಕಾರಿ ಅಧಿಕಾರಿಯಾಗಿರುವ ಪೂಜಾ ಅವರ ತಂದೆ ದಿಲೀಪ್ ಖೇಡ್ಕರ್ ಅವರು ಖರೀದಿಸಿದ ಜಮೀನಿನ ವಿಚಾರಕ್ಕೆ ಸಂಬಂಧಿಸಿದಂತೆ ವಾಗ್ವಾದ ನಡೆದಿದ್ದು, ಈ ವೇಳೆ ಪೂಜಾ ಖೇಡ್ಕರ್ ಅವರ ತಾಯಿ ಮನೋರಮಾ ಖೇಡ್ಕರ್ ಅವರು ರೈತರಿಗೆ ಬಂದೂಕು ತೋರಿಸಿ ಬೆದರಿಕೆ ಹಾಕಿದ್ದಾರೆ.

ತರಬೇತಿ ಭತ್ಯೆಗಾಗಿ ಅರ್ಜಿ ಆಹ್ವಾನ

ಮೈಸೂರು, ಜು.22– ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ 2024–25ನೇ ಸಾಲಿಗೆ ಅಲ್ಪಸಂಖ್ಯಾತರ ವರ್ಗಕ್ಕೆ ಸೇರಿದ ಅಭ್ಯರ್ಥಿಗಳ ಕಾನೂನು ಪದವೀಧರರಿಂದ ನ್ಯಾಯಾಂಗ ಆಡಳಿತದಲ್ಲಿ ತರಬೇತಿ ಪಡೆಯುವ ಅಭ್ಯರ್ಥಿಗಳಿಗೆ ತರಬೇತಿ ಭತ್ಯೆ ನೀಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳ ಕಾರ್ಯಾಲಯದಲ್ಲಿ ಪಡೆದು, ಆಗಸ್ಟ್ 23 ರೊಳಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳ ಕಚೇರಿಯ ದೂ.ಸಂ:0821–2422088 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸರ್ಕಾರಿ ನೌಕರರು ಸಂಘ ಪರಿವಾರದ ಚಟುವಟಿಕೆಗಳಲ್ಲಿ ಭಾಗವಹಿಸಲು ಅವಕಾಶ

ಕೇಂದ್ರದ ನಿರ್ಧಾರ ಶ್ಲಾಘಿಸಿದ ಆರ್‌ಎಸ್‌ಎಸ್

ನವದೆಹಲಿ: ರಾಷ್ಟ್ರೀಯ ಸ್ವಯಂಸೇವಕ ಸಂಘ(ಆರ್‌ಎಸ್‌ಎಸ್)ದ ಚಟುವಟಿಕೆಗಳಲ್ಲಿ ಭಾಗವಹಿಸದಂತೆ ಸರ್ಕಾರಿ ನೌಕರರ ಮೇಲಿದ್ದ ನಿರ್ಬಂಧವನ್ನು ಮೋದಿ ಸರ್ಕಾರ ತೆಗೆದು ಹಾಕಿದ್ದು, ಕೇಂದ್ರದ ಈ ಕ್ರಮವನ್ನು ಆರ್‌ಎಸ್‌ಎಸ್ ಸೋಮವಾರ ಶ್ಲಾಘಿಸಿದೆ. ಕೇಂದ್ರ ಸರ್ಕಾರದ ಈ ನಿರ್ಧಾರವು ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುತ್ತದೆ ಎಂದು ಆರ್‌ಎಸ್‌ಎಸ್ ಹೇಳಿದೆ.

ಈ ಹಿಂದಿನ ಸರ್ಕಾರಗಳು ಸರ್ಕಾರಿ ನೌಕರರ ಮೇಲೆ ನಿಷೇಧ ಹೇರುವ ಮೂಲಕ ತಮ್ಮ ರಾಜಕೀಯ ಹಿತಾಸಕ್ತಿಗಳನ್ನು ಹೆಚ್ಚಿಸಿಕೊಂಡಿವೆ ಎಂದು ಸಂಘ ಆರೋಪಿಸಿದೆ. ಈ ಹಿಂದೆಯೂ ಸರ್ಕಾರ, ತನ್ನ ನೌಕರರು ಆರ್‌ಎಸ್‌ಎಸ್ ಸಹವಾಸ ಮಾಡುವುದನ್ನು ನಿರ್ಬಂಧಿಸಿದ ಹಲವು ನಿದರ್ಶನಗಳಿವೆ.

ಸರ್ಕಾರ ನೌಕರರ ಮೇಲಿದ್ದ ನಿರ್ಬಂಧವನ್ನು ಹಿಂತೆಗೆದುಕೊಳ್ಳುವ ಬಗ್ಗೆ ಕೇಂದ್ರ ಸರ್ಕಾರ ಅಧಿಕೃತವಾಗಿ ಆದೇಶ ಪ್ರಕಟಿಸಿದ ಒಂದು ದಿನದ ನಂತರ ಆರ್‌ಎಸ್‌ಎಸ್ ಇದನ್ನು ಸ್ವಾಗತಿಸಿದೆ. ಆದರೆ ಹಲವು ವಿರೋಧ ಪಕ್ಷದ ನಾಯಕರು ಈ ಕ್ರಮವನ್ನು ಟೀಕಿಸಿದ್ದಾರೆ.

RSS ವಕ್ತಾರ ಸುನೀಲ್ ಅಂಬೇಕರ್ ಅವರು, 'ಸರ್ಕಾರದ ಪ್ರಸ್ತುತ ನಿರ್ಧಾರವು ಸೂಕ್ತವಾಗಿದೆ ಮತ್ತು ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುತ್ತದೆ. ರಾಷ್ಟ್ರೀಯ ಸ್ವಯಂಸೇವಕ ಸಂಘವು ಕಳೆದ 99 ವರ್ಷಗಳಿಂದ ರಾಷ್ಟ್ರದ ಪುನರ್ನಿರ್ಮಾಣ ಮತ್ತು ಸಮಾಜ ಸೇವೆಯಲ್ಲಿ ನಿರಂತರವಾಗಿ ತೊಡಗಿಸಿಕೊಂಡಿದೆ' ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಕಾಶ್ ಜ್ಯೂಯಲರ್ಸ್‌ನಲ್ಲಿ ಆಷಾಢದ ಅತಿ ದೊಡ್ಡ ರಿಯಾಯ್ತಿ!




ಮೈಸೂರು, ಜು.22– ಆಷಾಢ ಪ್ರಯುಕ್ತ ಪ್ರಕಾಶ್ ಜ್ಯೂಯಲರ್ಸ್‌ನಲ್ಲಿ ಜುಲೈ 22 ರಿಂದ 26ರವರೆಗೆ ಪ್ರತಿ ಗ್ರಾಂಗೆ ರೂ.350 ಆಕರ್ಷಕ ರಿಯಾಯ್ತಿ ಮಾರಾಟವಿದೆ.

ವಿವಿಧ ವಿನ್ಯಾಸದ ಬಂಗಾರದ ಆಭರಣಗಳು, ಕ್ಲಾಸಿಕ್ ಬಳೆಗಳಿಂದ ಹಿಡಿದು, ಆಕರ್ಷಕ ಹಾರಗಳವರೆಗೆ, ಎಲ್ಲಾ ಶೈಲಿಯ ಹಾಗೂ ಅವಶ್ಯಕತೆಗೆ ತಕ್ಕಂತಹ ಆಭರಣಗಳು ಲಭ್ಯವಿದೆ.

ಹೆಚ್ಚಿನ ಮಾಹಿತಿಗಾಗಿ ದೂ.ಸಂ.:0821–2421844ನ್ನು ಸಂಪರ್ಕಿಸಬಹುದು. ಈ ಆಫರ್ ರೆಡಿ ಸ್ಟಾಕ್‌ಗಳಿಗೆ ಮಾತ್ರ ಅನ್ವಯಿಸುತ್ತದೆ. ಮಾರಾಟವಾದ ಸರಕುಗಳನ್ನು ಹಿಂತಿರುಗಿಸುವುದಿಲ್ಲ. ವಿನಿಮಯಕ್ಕೆ ಅವಕಾಶವಿಲ್ಲ. ವ್ಯವಸ್ಥಾಪಕರು ಯಾವುದೇ ಪೂರ್ವ ನೋಟೀಸ್ ನೀಡದೇ ಆಫರ್ ರದ್ದುಗೊಳಿಸುವ ಹಕ್ಕನ್ನು ಹೊಂದಿದ್ದಾರೆ.

ಫ್ರಾಂಕ್ ಲಿಯೋ ನಿಧನ



ಮೈಸೂರು, ಜು.22– ಮೈಸೂರಿನ ಉದಯಗಿರಿಯ ಕೆಇಬಿ ಕಾಲೋನಿ ನಿವಾಸಿ ಫ್ರಾಂಕ್ ಲಿಯೋ (80) ನಿನ್ನೆ ನಿಧನರಾದರು. ಇವರು ಮೈಸೂರು ಕೆಸಿಎ ಪ್ರಧಾನ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ್ದರು. ಮೃತರು ಪತ್ನಿ ರೋಜಿ ರಿಡ್ರಿಗೋಸ್, ಮಕ್ಕಳಾದ ವಿಲಾಸ್ ಮತ್ತು ವಿಕಾಸ್ ಫ್ರಾಂಕ್ ಸೇರಿದಂತೆ ಅಪಾರ ಬಂಧು–ಮಿತ್ರರನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ನಾಳೆ (ಜು.23) ಬೆಳಗ್ಗೆ 10 ಗಂಟೆಗೆ ಸೆಂಟ್ ಮದರ್ ಥೆರೆಸಾ ಚರ್ಚ್‌ನಲ್ಲಿ ಪ್ರಾರ್ಥನೆ ನಂತರ ರಮ್ಮನಹಳ್ಳಿ ರೋಮನ್ ಕ್ಯಾಥೋಲಿಕ್ ಸಿಮೆಟ್ರಿಯಲ್ಲಿ ಅಂತ್ಯಕ್ರಿಯೆ ನೆರವೇರಲಿದೆ.